KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೧, ೨೦೧೦ (ಚೈತ್ರ ೧೧, ಶಕವರ್ಷ ೧೯೩೨)	ಸಂಚಿಕೆ ೧೩

ವಿಷಯಸೂಚಿ

ವಿಶೇಷ ರಾಜ್ಯಪತ್ರಗಳು

ವಿ.ರಾ. ಸಂಖ್ಯೆ	ಪ್ರಕಟಣೆ ದಿನಾಂಕ	ಅಧಿಸೂಚನೆ ಸಂಖ್ಯೆ, ದಿನಾಂಕ ಮತ್ತು ವಿವರ
287	22.3.2010	No. KLA/LGA/60/Bill/2010, Dt. 19.3.2010 – THE KARNATAKA LAND REFORMS (AMENDMENT) BILL, 2010
288	23.3.2010	ಸಂ. ಸಿಐ 154 ಎಸ್‌ಪಿಕ್ಯೂ 2010, ದಿ. 23.3.2010 – ಕ.ಕೈ.ಪ್ರ.ಕಾ. ವಿಧಿ 28(4)ರಡಿ ಮೈಸೂರು ಜಿಲ್ಲೆಯ ಕಲ್ಲಹಳ್ಳಿ ಗ್ರಾಮಕ್ಕೆ ಸಂಬಂಧಿಸಿದ ಅಧಿಸೂಚನೆ.
289	23.3.2010	ಸಂ. ಸಿಐ 76 ಎಸ್‌ಪಿಕ್ಯೂ 2010, ದಿ. 23.3.2010 – 1897ರ ಜನರಲ್ ಕ್ಲಾಸಸ್ ಕಾಯ್ದೆ ಕಲಂ 21ರನ್ವಯ ಉಡುಪಿ ಜಿಲ್ಲೆಗೆ ಸಂಬಂಧಿಸಿದ ಅಧಿಸೂಚನೆ.
290	24.3.2010	No. FD 50 CSL 2010, Dt. 24.3.2010 – Under Sub-section (3) of Section 5 of the Karnataka Sales Tax Act, 1957.
291	24.3.2010	ಸಂ. ನಅಇ 46 ಎಂಎಲ್‌ಆರ್ 2010(1), ದಿ. 24.3.2010 – ದಾವಣಗೆರೆ ಮಹಾನಗರ ಪಾಲಿಕೆಯ ಮಹಾಪೌರ ಮತ್ತು ಉಪ ಮಹಾಪೌರರ ಚುನಾವಣಾ ಫಲಿತಾಂಶ ಪ್ರಕಟಣೆ.
292	24.3.2010	ಸಂ. ನಅಇ 46 ಎಂಎಲ್‌ಆರ್ 2010(2), ದಿ. 24.3.2010 – ಗುಲ್ಬರ್ಗಾ ಮಹಾನಗರ ಪಾಲಿಕೆಯ ಮಹಾಪೌರ ಮತ್ತು ಉಪ ಮಹಾಪೌರರ ಚುನಾವಣಾ ಫಲಿತಾಂಶ ಪ್ರಕಟಣೆ.
293	24.3.2010	ಸಂ. ನಅಇ 46 ಎಂಎಲ್‌ಆರ್ 2010(3), ದಿ. 24.3.2010 – ಮಂಗಳೂರು ಮಹಾನಗರ ಪಾಲಿಕೆಯ ಮಹಾಪೌರ ಮತ್ತು ಉಪ ಮಹಾಪೌರರ ಚುನಾವಣಾ ಫಲಿತಾಂಶ ಪ್ರಕಟಣೆ.
294	24.3.2010	ಸಂ. ಲೋಇ 40 ಇಎಪಿ 2010, ದಿ. 23.3.2010 – ಕ.ರಾ.ಹೆ.ಸಂ. 1 ಮತ್ತು 69 (ಲಿಂಕ್ ನಂ. ಎಂ–7ಡಿ) ಹಾನಗಲ್–ತಡಸರಸ್ತೆ ಅಭಿವೃದ್ಧಿಪಡಿಸಲು ಬೇಕಾಗಿರುವ ಜಮೀನುಗಳಿಗೆ ಸಂಬಂಧಿಸಿದ ಭೂಸ್ವಾಧೀನ ಅಧಿಸೂಚನೆ.
295	25.3.2010	No. AHD 64 AUM 2009, Dt. 24.3.2010 - Extension of 2006 Revised UGC/ICAR pay scales to Teachers, Librarians and equivalent cadres in Agricultural & Horticultural Universities in Karnataka.
296	25.3.2010	ಸಂ. ಸಿಐ 147 ಎಸ್‌ಪಿಕ್ಯೂ 2010, ದಿ. 25.3.2010 – ಕ.ಕೈ.ಪ್ರ.ಕಾಯ್ದೆ 28(4)ರಡಿ ದ.ಕನ್ನಡ ಜಿಲ್ಲೆಯ ಕುಳಾಯಿ ಗ್ರಾಮಕ್ಕೆ ಸಂಬಂಧಿಸಿದ ಭೂಸ್ವಾಧೀನ ಅಧಿಸೂಚನೆ.
297	25.3.2010	ಸಂ. ರಾಚುಆ 157 ಇಯುಬಿ 2010, ದಿ. 24.3.2010 – ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಾರ್ವತ್ರಿಕ ಚುನಾವಣೆ–2010 ಚುನಾವಣಾ ಸಾರ್ವಜನಿಕ ಸಭೆ ಹಾಗೂ ಇತರ ಪ್ರಚಾರಗಳನ್ನು ಮುಕ್ತಾಯಗೊಳಿಸುವ ಕುರಿತು.
298	25.3.2010	No. FD 9 PES 2009 Dt. 25.3.2010 - Karnataka Excise (Lease of the Right of Retail Vend of Beer) (Amendment) Rules, 2009.
299	27.3.2010	ಸಂ. ಚುನಾ/ಗ್ರಾ.ಪಂ./ಸಿಆರ್–54/09–10, ದಿ.26.3.2010 – ಗ್ರಾಮ ಪಂಚಾಯತಿಗೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ – ಬೆಂಗಳೂರು ದಕ್ಷಿಣ ತಾಲ್ಲೂಕು.
300	27.3.2010	ಸಂ. ಚುನಾ/ಗ್ರಾ.ಪಂ./ಸಿಆರ್–54/09–10, ದಿ.26.3.2010 – ಗ್ರಾಮ ಪಂಚಾಯತಿಗೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ – ಬೆಂಗಳೂರು ಉತ್ತರ ತಾಲ್ಲೂಕು.
301	27.3.2010	ಸಂ. ಚುನಾ/ಗ್ರಾ.ಪಂ./ಸಿಆರ್–54/09–10, ದಿ.26.3.2010 – ಗ್ರಾಮ ಪಂಚಾಯತಿಗೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ – ಬೆಂಗಳೂರು ಪೂರ್ವ ತಾಲ್ಲೂಕು.
302	27.3.2010	ಸಂ. ಚುನಾ/ಗ್ರಾ.ಪಂ./ಸಿಆರ್–54/09–10, ದಿ.26.3.2010 – ಗ್ರಾಮ ಪಂಚಾಯತಿಗೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ – ಬೆಂಗಳೂರು ಆನೇಕಲ್ ತಾಲ್ಲೂಕು.

ವಾರದ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು
http//www.Kar.nic.in/gazette.

ಕರ್ನಾಟಕ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು.
http//www.Kar.nic.in/gazette.

೨೦೧೦-೨೦೧೧ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪರಿಷ್ಕೃತ ಚಂದಾ ದರ

ಕ್ರಮ ಸಂಖ್ಯೆ	ರಾಜ್ಯಪತ್ರದ ಭಾಗಗಳು	ಪ್ರತಿ ಒಂದಕ್ಕೆ ರೂ. ಪೈ.	ವಾರ್ಷಿಕ ಚಂದಾ ದರ ರೂ. ಪೈ.
1.	ಭಾಗ - 1	22-00	880-00
2.	ಭಾಗ - 2	6-00	244-00
3.	ಭಾಗ - 3	26-00	1061-00
4.	ಭಾಗ - 4	4-00	175-00
5.	ಭಾಗ - 4ಎ	5-00	220-00
6.	ಭಾಗ - 5	22-00	879-00
7.	ಭಾಗ - 6 (ಬೆಂಗಳೂರು)........	9-00	357-00
8.	ಭಾಗ - 6ಎ (ಮೈಸೂರು)........	32-00	1300-00
9.	ಭಾಗ - 6ಬಿ (ಧಾರವಾಡ)	45-00	1790-00
10.	ಭಾಗ - 6ಸಿ (ಗುಲ್ಬರ್ಗ)	30-00	1194-00
11.	ಸಂಪೂರ್ಣ ಕರ್ನಾಟಕ ರಾಜ್ಯಪತ್ರ ಕ್ರ.ಸ. 1 ರಿಂದ 7 .... (ಭಾಗ-1 ರಿಂದ 6) ವಿಶೇಷ ರಾಜ್ಯಪತ್ರವನ್ನು ಹೊರತುಪಡಿಸಿ	94-00	3816-00
12.	ವಿಶೇಷ ರಾಜ್ಯಪತ್ರಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆಯಿರಿ ಮತ್ತು ಸರ್ಕಾರಿ ಪುಸ್ತಕ ಮಳಿಗೆಗಳಲ್ಲಿ ಮಾರಾಟಕ್ಕೆ ಲಭ್ಯವಿರುತ್ತವೆ.		

೨೦೧೦-೨೦೧೧ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪ್ರಕಟಣೆ ದರ

ಕ್ರಮ ಸಂಖ್ಯೆ	ಪ್ರಕಟಣೆ ದರಗಳು		ಮೊತ್ತ ರೂ. ಪೈ.
1.	ಸ್ಥಳೀಯ / ಸ್ಥಾನಿಕ ಸಂಸ್ಥೆ ಮತ್ತು ಸರ್ಕಾರದ ಇಲಾಖೆ ಎ-4 ಅಳತೆಯ ಪ್ರತಿ ಪುಟಕ್ಕೆ	...	500-00
2.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	11-00
3.	ಖಾಸಗಿ ಸಂಸ್ಥೆ ಮತ್ತು ವಾಣಿಜ್ಯಕ್ಕೆ ಸಂಬಂಧಿಸಿದಂತೆ (ಕೆಪಿಟಿಸಿಎಲ್, ಕೆಎಸ್ಆರ್‌ಟಿಸಿ ತರಹ ಇತ್ಯಾದಿ ಪ್ರತಿ ಪುಟಕ್ಕೆ)	...	750-00
4.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	16-50
5.	ಅರ್ಧ ಪುಟಕ್ಕೆ ಅಥವಾ ಕಾಲು ಪುಟಕ್ಕೆ ಬರುವ ವಿಷಯ	...	½ ಅಥವಾ ¼ ಪುಟಕ್ಕೆ ದರ ನಿಗಧಿ
6.	ಕಾಲು ಪುಟಕ್ಕಿಂತ ಕಡಿಮೆ ಇರುವ ವಿಷಯಕ್ಕೆ	...	ಕ್ರಮ ಸಂಖ್ಯೆ 1 ಮತ್ತು 3 ಕ್ರಮ ಸಂಖ್ಯೆ 2 ಮತ್ತು 4ರಲ್ಲಿ ನಮೂದಿಸಿರುವಂತೆ ಪ್ರತಿ ಸಾಲಿಗೆ ದರ ನಿಗದಿಪಡಿಸಿರುವುದು
7.	ಹೆಚ್ಚಾಗಿ ಬೇಕಾಗಿರುವ ಪ್ರತಿ ಹಾಳೆಯ ಬೆಲೆ (ಮುದ್ರಿಸಿರುವ ಹಾಳೆಯ ಅಳತೆಯನ್ನು ನಿರೂಪಿಸಿ)	...	1-00

ಸೂಚನೆ :- 1. ಚಂದಾ ಹಣದ / ಪ್ರಕಟಣಾ ವೆಚ್ಚದ ಮೊತ್ತವನ್ನು **"0058 ಲೇಖನ ಸಾಮಗ್ರಿ ಮತ್ತು ಮುದ್ರಣ (1) ರಾಜ್ಯಪತ್ರ ಮತ್ತು ಇತರ ಪ್ರಕಟಣಾ ವೆಚ್ಚಗಳು"** ಖಜಾನೆಗೆ ಸಲ್ಲಿಸಿ, ಮೂಲ ಚಲನನ್ನು ಮುಂದಿನ ಕ್ರಮಕ್ಕಾಗಿ ಈ ಕಛೇರಿಗೆ ಕಳುಹಿಸಬೇಕು.

2. ಭಾಗ VI-ಎ, VI-ಬಿ, VI-ಸಿ ಗಳನ್ನು ಅನುಕ್ರಮವಾಗಿ ಮೈಸೂರು, ಧಾರವಾಡ ಮತ್ತು ಗುಲ್ಬರ್ಗಾದ ಶಾಖಾ ಮುದ್ರಣಾಲಯಗಳಿಂದ ಪಡೆಯಬಹುದು.

3. ಕರ್ನಾಟಕ ರಾಜ್ಯಪತ್ರಕ್ಕಾಗಿ ಈ ಕೆಳಕಂಡ ವಿಳಾಸದಲ್ಲಿ ಪತ್ರ ವ್ಯವಹರಿಸತಕ್ಕದ್ದು.

ಸಂಕಲನಾಧಿಕಾರಿಗಳು,
ಕರ್ನಾಟಕ ರಾಜ್ಯಪತ್ರ,
ಸರ್ಕಾರಿ ಹೊರವಲಯ ಮುದ್ರಣಾಲಯ,
ಮೈಸೂರು ರಸ್ತೆ, ಬೆಂಗಳೂರು-59

ಮುದ್ರಕರು :-ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು-59

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೧, ೨೦೧೦ (ಚೈತ್ರ ೧೧, ಶಕ ವರ್ಷ ೧೯೩೨)	ಸಂಚಿಕೆ ೧೩

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಧಿಕಾರಿ ಅಪರ ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ದಾಖಲಾದ ದಾಳಿ ಪ್ರಕರಣ ಮತ್ತು ಅವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ.

ಓದಲಾಗಿದೆ : ಅಪರ ಪೋಲಿಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂ. ಲೋಕ್/ಐಎನ್‌ವಿ(ಟಿ)/ಜಿ–66, ಸಿ.ಆರ್. 25/2009, ರಾಯಚೂರು, ದಿನಾಂಕ 11–12–2009

ಪ್ರಸ್ತಾವನೆ :

ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಧಿಕಾರಿ ಅಪರ ಜಿಲ್ಲಾಧಿಕಾರಿ, ಚಾಮರಾಜನಗರ ಜಿಲ್ಲೆ ಇವರು ತಮ್ಮ ಬಲ್ಲ ಮೂಲಗಳಿಗಿಂತ ಅಪಾರ ಪ್ರಮಾಣದ ಅಧಿಕ ಆಸ್ತಿಯನ್ನು ಹೊಂದಿದ್ದಾರೆಂದು ತಿಳಿದು ಬಂದ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೋಲಿಸರು ಇವರ ವಿರುದ್ಧ ರಾಯಚೂರು ಕರ್ನಾಟಕ ಲೋಕಾಯುಕ್ತ ಪೋಲಿಸ್ ಠಾಣೆಯಲ್ಲಿ ಮೊಕದ್ದಮೆ ಸಂ. 25/2009 ಅನ್ನು ದಾಖಲಿಸಿಕೊಂಡು ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ 1988ರ ಕಲಂ 13(1)(ಇ) ಹಾಗೂ 13(2)ರಡಿ ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. ಇವರ ಮನೆ ಮತ್ತು ಕಛೇರಿಗಳ ಮೇಲೆ ದಿನಾಂಕ 1–12–2009ರಂದು ದಾಳಿ ನಡೆಸಿ ಇವರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವುದಾಗಿ ಮೇಲೆ ಓದಲಾದ ಕ್ರಮ ಸಂ./(1)ರ ಪತ್ರದಲ್ಲಿ ಅಪರ ಪೋಲಿಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ರವರು ವರದಿ ಮಾಡಿರುತ್ತಾರೆ. ಸದರಿ ವರದಿಯಲ್ಲಿ ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. ಇವರು ತಮ್ಮ ಬಲ್ಲ ಮೂಲಗಳಿಗಿಂತ ಸುಮಾರು ರೂ. 1,18,26,370/– ಗಳಷ್ಟು ಅಧಿಕ ಮೊತ್ತದ ಆಸ್ತಿ ಪಾಸ್ತಿ ಗಳಿಸಿ ಸುಮಾರು ಶೇಕಡ 151.60ರಷ್ಟು ಅಧಿಕ ಆದಾಯವನ್ನು ಹೊಂದಿರುತ್ತಾರೆ ಎಂದು ವರದಿ ಮಾಡಿರುತ್ತಾರೆ. ಇದರಿಂದಾಗಿ ಸದರಿಯವರ ಮೇಲೆ ಕಲಂ 13(1)(ಇ) ಜೊತೆಗೆ 13(2) ಪಿ.ಸಿ. ಕಾಯ್ದೆ 1988ರಂತೆ ಮೊಕದ್ದಮೆ ದಾಖಲು ಮಾಡಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೂ ನಿವೇದಿಸಿರುವುದಾಗಿ ತಿಳಿಸಿರುತ್ತಾರೆ ಇದರಿಂದಾಗಿ ಸದರಿಯವರು ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ಕಲಂ 13(1)(ಇ) ಜೊತೆಗೆ 13(2) ರಡಿ ಶಿಕ್ಷಾರ್ಹ ಅಪರಾಧವೆಸಗಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗಿ ಕಂಡುಬರುತ್ತದೆ. ಈ ಹಿನ್ನೆಲೆಯಲ್ಲಿ ಆಪಾದಿತ ಅಧಿಕಾರಿ ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. ಇವರು ಅವರ ಸ್ಥಾನದಲ್ಲಿಯೇ ಮುಂದುವರೆದರೆ ತಮ್ಮ ಪ್ರಭಾವವನ್ನು ಬೀರುವುದರ ಮೂಲಕ ಸಾಕ್ಷ್ಯಾಧಾರಗಳನ್ನು ನಾಶಪಡಿಸಿ ತನಿಖೆಗೆ ಅಡ್ಡಿ ಅಡಚಣೆ ಉಂಟು ಮಾಡುವ ಸಾಧ್ಯತೆಗಳಿರುವುದರಿಂದ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಅವರ ಸ್ಥಾನವನ್ನು ಪಲ್ಲಟಗೊಳಿಸಲು ಅಪರ ಪೋಲಿಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಕರ್ನಾಟಕ ಲೋಕಾಯುಕ್ತದ, ಅಪರ ಪೋಲಿಸ್ ಮಹಾನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಕರ್ನಾಟಕ ಲೋಕಾಯುಕ್ತದ ಅಪರ ಪೋಲಿಸ್ ಮಹಾನಿರ್ದೇಶಕರು ವರದಿ ಮಾಡಿರುವ ಹಿನ್ನೆಲೆಯಲ್ಲಿ

ಆಪಾದಿತ ಅಧಿಕಾರಿಯು ತಮ್ಮ ಬಲ್ಲ ಮೂಲಗಳಿಗಿಂತ ಅಪಾರ ಪ್ರಮಾಣದ ಅಧಿಕ ಆಸ್ತಿಯನ್ನು ಹೊಂದಿದ್ದಾರೆಂದು ಹಾಗೂ ಆಪಾದಿತರ ಭ್ರಷ್ಟಾಚಾರವು ಮೇಲ್ನೋಟಕ್ಕೆ ಸಾಬೀತು ಪಡುವುದರಿಂದಲೂ ಪ್ರಕರಣದ ಸುಗಮ ತನಿಖೆಗೆ ಅವಕಾಶ ಕಲ್ಪಿಸುವ ಅವಶ್ಯಕತೆಯನ್ನು ಮನಗಂಡು ಸರ್ಕಾರವು ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಧಿಕಾರಿ ಅವರನ್ನು ಮುಂದಿನ ತನಿಖೆ/ವಿಚಾರಣೆಯನ್ನು ಕಾಯ್ದಿರಿಸಿ ಅಮಾನತ್ತಿನಲ್ಲಿರಿಸಲು ನಿರ್ಣಯಿಸಿ ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಸಂ/ಸಿಆಸುಇ 49 ಕೆಇವಿ 2009, ದಿನಾಂಕ 23ನೇ ಜನವರಿ 2010

ಕರ್ನಾಟಕ ನಾಗರೀಕ ಸೇವಾ ವರ್ಗೀಕರಣ, (ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 10(1) (aa) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಧಿಕಾರಿ ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ/ವಿಚಾರಣೆಯನ್ನು ಕಾಯ್ದಿಟ್ಟು ಕೂಡಲೆ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಮೂಲಕ ಸೇವೆಯಿಂದ ಅಮಾನತ್ತಿನಲ್ಲಿಡುತ್ತದೆ.

ಅಮಾನತ್ತಿನ ಅವಧಿಯಲ್ಲಿ ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. ಅಧಿಕಾರಿರವರು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 96ರ ನಿಯಮದನ್ವಯ ಜೀವನಾಧಾರದ ಭತ್ಯೆಯನ್ನು ಪಡೆಯುತ್ತಾರೆ.

ಅಮಾನತ್ತಿನ ಅವಧಿಯಲ್ಲಿ ಶ್ರೀ ಸಿರಸಗಿ ನಾಗಪ್ಪ, ಕೆ.ಎ.ಎಸ್. ರವರು ಸಕ್ಷಮ ಪ್ರಾಧಿಕಾರದ ಅನುಮತಿಯನ್ನು ಪಡೆಯದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಚ್. ಆರ್. ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಸೇವೆಗಳು-2)

ಪಿಆರ್-305

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕು, ಡೊಂಕುಮಡು ಗ್ರಾಮದ ಹತ್ತಿರ ಬಾಂದಾರ ನಿರ್ಮಾಣ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಕುರಿತು.

ಓದಲಾಗಿದೆ :
1) ಸರ್ಕಾರದ ಆದೇಶ ಸಂಖ್ಯೆ / ಸನೀಇ 15, ಮಸಾವಿ 2009(3), ದಿನಾಂಕ 02-03-09
2) ಪತ್ರ ಸಂಖ್ಯೆ/ಮುಇಂ/ಸನೀ(ಉ)ವ/ಬಿಜೆಪಿ/ಪಿಬಿ-9/ಡೊಂಕುಮಡು ಬಾಂದಾರ/2009-10/7518, ದಿನಾಂಕ 16-12-09.
3) ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ರವರ ಪತ್ರ ಸಂಖ್ಯೆ /ಮುಸದ/ಆಪ್ತಶಾಖೆ/ಟೆಂಡರ್/09-10/134, ದಿನಾಂಕ 13-01-10.

ಪ್ರಸ್ತಾವನೆ :

ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕು, ಡೊಂಕುಮಡು ಗ್ರಾಮದ ಹತ್ತಿರ ಬಾಂದಾರ ನಿರ್ಮಾಣ ಮಾಡುವ ಕಾಮಗಾರಿಯ 260.00 ಲಕ್ಷ ರೂ.ಗಳ ಅಂದಾಜು ಪಟ್ಟಿಗೆ ಮೇಲೆ (1)ರಲ್ಲಿ ಓದಲಾದ ದಿನಾಂಕ 02-03-09ರ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ದ್ವಿಲಕೋಟೆ ಪದ್ಧತಿಯಲ್ಲಿ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

1	ರಾಜ್ಯ ಟೆಂಡರ್ ಬುಲೆಟಿನ್	ದಿನಾಂಕ : 16-09-09
2	ಪ್ರಜಾವಾಣಿ ಕನ್ನಡ ದಿನಪತ್ರಿಕೆ ಹಾಗೂ ಟೈಮ್ಸ್ ಆಫ್ ಇಂಡಿಯಾ ಆಂಗ್ಲ ಪತ್ರಿಕೆ	ದಿನಾಂಕ : 24-09-09
3	ವಿಜಯ ಕರ್ನಾಟಕ ದಿನಪತ್ರಿಕೆ	ದಿನಾಂಕ : 25-09-09
4	ಕರ್ನಾಟಕ ರಾಜ್ಯಪತ್ರ	ದಿನಾಂಕ : 01-10-09

ಈ ಟೆಂಡರ್ ಕರೆಗೆ ಪ್ರತಿಕ್ರಯಿಸಿ ಖಾಲಿ ಟೆಂಡರ್ ಫಾರಂ ಪಡೆದ 17 ಜನ ಗುತ್ತಿಗೆದಾರರಲ್ಲಿ ನಿಗದಿತ ದಿನದಂದು ಇಬ್ಬರು ಗುತ್ತಿಗೆದಾರರು ಮಾತ್ರ ಭರ್ತಿ ಮಾಡಿದ ಟೆಂಡರ್‌ಗಳನ್ನು ಸಲ್ಲಿಸಿರುತ್ತಾರೆ. ಸ್ವೀಕರಿಸಲಾದ ತಾಂತ್ರಿಕ ಬಿಡ್‌ನ್ನು

ದಿನಾಂಕ 24-11-09 ರಂದು ತೆರೆಯಲಾಗಿ ಈ ಇಬ್ಬರೂ ಗುತ್ತಿಗೆದಾರರು ಅರ್ಹತೆ ಹೊಂದಿದ್ದು. ಇವರ ಆರ್ಥಿಕ ಬಿಡ್‌ನ್ನು ದಿನಾಂಕ 25-11-09ರಂದು ತೆರೆಯಲಾಗಿದೆ. ಆರ್ಥಿಕ ಬಿಡ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳ ತುಲನಾತ್ಮಕ ವಿವರ ಕೆಳಕಂಡಂತಿದೆ :

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 2,55,94,457/-
ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಟೆಂಡರಿಗೆ ಇಡಲಾದ ಮೊತ್ತ	ರೂ. 2,54,11,642/-

ಕ್ರ. ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ	ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡವಾರು ಹೆಚ್ಚಳ
1	*ಶ್ರೀ/ಮೆಸರ್ಸ್ :* ಜಿ. ಮಸ್ತಾನಯ್ಯ 1ನೇ ದರ್ಜೆ ಗುತ್ತಿಗೆದಾರರು	ರೂ. 3,02,17,206/-	18.06 ಹೆಚ್ಚು	18.91 ಹೆಚ್ಚು
2	ಜಿ. ಶಂಕರ 1ನೇ ದರ್ಜೆ ಗುತ್ತಿಗೆದಾರರು	ರೂ. 3,21,07,869/-	25.44 ಹೆಚ್ಚು	26.35 ಹೆಚ್ಚು

ಕಡಿಮೆ ಮೊತ್ತ ಸೂಚಿಸಿರುವ ಮೇಲ್ಕಂಡ ಕ್ರ.ಸಂ. (1) ರಲ್ಲಿರುವ ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 18.91ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 13-01-10ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರದ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 2,54,11,642-00ಗಳ ಮೇಲೆ ಶೇಕಡ 14.50ರಷ್ಟು ಹೆಚ್ಚಿನ ದರಗಳ ಅಂದರೆ ರೂ. 2,90,96,330-00ಗಳಿಗೆ ಕಾಮಗಾರಿಯನ್ನು ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರು, ಬಿಜಾಪುರ ಇವರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 3ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 93 ಅಪಿಬಂ 2009, ಬೆಂಗಳೂರು, ದಿನಾಂಕ 30ನೇ ಜನವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕು, ಡೊಂಕುಮಡು ಗ್ರಾಮದ ಹತ್ತಿರ ಬಾಂದಾರ ನಿರ್ಮಾಣ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿ ಹಾಗೂ ಪ್ರಸಕ್ತ ಸಾಲಿನ ದರಪಟ್ಟಿಯಂತೆ ಪರಿಷ್ಕರಿಸಿದ ಟೆಂಡರಿಗೆ ಇಡಲಾದ ಮೊತ್ತ ರೂ. 2,54,11,642-00 ಗಳ ಮೇಲೆ ಶೇಕಡ 14.50ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 2,90,96,330-00 ಗಳಿಗೆ (ಎರಡು ಕೋಟಿ ತೊಂಭತ್ತು ಲಕ್ಷದ ತೊಂಭತ್ತಾರು ಸಾವಿರದ ಮುನ್ನೂರ ಮುವತ್ತು ರೂ. ಗಳು ಮಾತ್ರ) ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರು, ಬಿಜಾಪುರ ಇವರಿಗೆ ಕಾಮಗಾರಿಯನ್ನು ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ 20-01-2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಕೆ. ಸುಧಾಕರ ಶೆಟ್ಟಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ.ಆರ್. 306

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಗುಲ್ಬರ್ಗಾದಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಕಿಯೋನಿಕ್ಸ್ ಸಂಸ್ಥೆಯಿಂದ ಸ್ಥಾಪಿಸುವ ಬಗ್ಗೆ :–

ಓದಲಾಗಿದೆ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತರವರ ಪತ್ರ ಸಂಖ್ಯೆ ಕೆಎಸ್ಇಡಿಸಿ/ಗುಲ್ಬರ್ಗಾ/ಐಟಿ ಪಾರ್ಕ್/2009–10, ದಿನಾಂಕ 28–10–2009

ಪ್ರಸ್ತಾವನೆ :

2008–09ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಹುಬ್ಬಳ್ಳಿ–ಧಾರವಾಡ, ಬೆಳಗಾಂ, ಗುಲ್ಬರ್ಗಾ, ಶಿವಮೊಗ್ಗ, ದಾವಣಗೆರೆ, ಮಂಗಳೂರು ನಗರಗಳಲ್ಲಿ ಖಾಸಗಿ ಸಹಭಾಗಿತ್ವದ ಮತ್ತು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಜಾಯಿಂಟ್ ವೆಂಚರ್ ಮೂಲಕ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಉದ್ಯಾನಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆಯೆಂದು ಘೋಷಿಸಿದ್ದರು.

ಸದರಿ ಘೋಷಣೆಯನ್ನು ಅನುಸರಿಸಿ ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮವು (ಕಿಯೋನಿಕ್ಸ್) 2 ಮತ್ತು 3ನೇ ದರ್ಜೆಯ ನಗರಗಳಾದ ಶಿವಮೊಗ್ಗ, ಮಂಗಳೂರು ಮತ್ತು ಮೈಸೂರುಗಳಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನಗಳ ಸ್ಥಾಪನೆ ಮತ್ತು ಅಭಿವೃದ್ಧಿಯನ್ನು ಕೈಗೆತ್ತಿಕೊಂಡಿದೆ. 2008–09ನೇ ಸಾಲಿನಲ್ಲಿ ಸರ್ಕಾರವು ರೂ. 5 ಕೋಟಿ ಹಾಗೂ ಪ್ರಸ್ತುತ ಸಾಲಿನಲ್ಲಿ ರೂ. 2.5 ಕೋಟಿ ಈಕ್ವಿಟಿ ಮೊತ್ತವನ್ನು/ಬಂಡವಾಳ ವಂತಿಗೆಯನ್ನು ಕಿಯೋನಿಕ್ಸ್ ಸಂಸ್ಥೆಗೆ ಮೇಲಿನ ಯೋಜನೆಗಳನ್ನು ಅಭಿವೃದ್ಧಿಪಡಿಸಲು ಬಿಡುಗಡೆ ಮಾಡಿದೆ.

ಡಾ॥ ನಂಜುಂಡಪ್ಪ ಸಮಿತಿಯ ವರದಿಯ ಪ್ರಕಾರ, ಗುಲ್ಬರ್ಗಾವು ಹಿಂದುಳಿದ ಪ್ರದೇಶವೆಂದು ಘೋಷಿಸಲ್ಪಟ್ಟಿದೆ. ಅಧ್ಯಕ್ಷರು, ಹೈದರಾಬಾದ್–ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ, ಗುಲ್ಬರ್ಗಾ ಇವರು ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಪ್ರಾದೇಶಿಕ ಅಸಮತೋಲತೆಯನ್ನು ನಿವಾರಿಸಲು ಗುಲ್ಬರ್ಗಾದಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಸ್ಥಾಪಿಸಲು ಕೋರಿರುತ್ತಾರೆ.

2009–10ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯ ಭಾಷಣದಲ್ಲಿ ಗುಲ್ಬರ್ಗಾ ವಿಭಾಗದಲ್ಲಿ ಮಾಹಿತಿ ತಂತ್ರಜ್ಞಾನವನ್ನು ಉನ್ನತೀಕರಿಸಲು ರೂ. 10 ಕೋಟಿಗಳ ಮೊತ್ತವನ್ನು ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಕಿಯೋನಿಕ್ಸ್ ಸಂಸ್ಥೆಯ ಮೂಲಕ ಸ್ಥಾಪಿಸಲು ಒದಗಿಸಲಾಗುವುದೆಂದು ಘೋಷಿಸಿರುತ್ತಾರೆ. ಅದರನ್ವಯ ಕಿಯೋನಿಕ್ಸ್ ಸಂಸ್ಥೆಯು ಗುಲ್ಬರ್ಗಾದಲ್ಲಿ ಕರ್ನಾಟಕ ಹೌಸಿಂಗ್ ಬೋರ್ಡ್ ಲೇಔಟ್‌ನಲ್ಲಿನ ಕಮರ್ಷಿಯಲ್ ಪ್ಲಾಟ್ ಸಂಖ್ಯೆ 5, (ಹೈಕೋರ್ಟ್ ಸರ್ಕ್ಯೂಟ್ ಬೆಂಚ್‌ಗೆ ಎದುರು) ರಲ್ಲಿ 75,097 ಚದರಡಿ (1.72 ಎಕರೆ) ಪ್ರದೇಶದಲ್ಲಿ ಮೂರು ಹಂತಗಳಲ್ಲಿ ತಲಾ 50,000 ಚದರಡಿಯ ಹೈಟೆಕ್ ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಜಾಗದ ಬೇಡಿಕೆಗೆ ಅನುಗುಣವಾಗಿ ಮೂರು ವರ್ಷಗಳ ಅವಧಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

ಮೊದಲ ಹಂತದಲ್ಲಿ ಕಿಯೋನಿಕ್ಸ್ ಸಂಸ್ಥೆಯು ತಲಾ 10,000 ಚದರಡಿಯ ಐದು ಮಹಡಿಗಳ 50,000 ಚದರಡಿಯ ಬ್ಲಾಕ್‌ನ್ನು ರೂ. 998.31 ಲಕ್ಷಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಿದ್ದು, ಅದರ ವಿವರ ಈ ಕೆಳಕಂಡಂತಿದೆ :–

Project Cost (Phase I)

1.	Cost of the Land @ Rs. 300 per sq. ft. for 75097 sq.ft (1.72 acres)	Rs. 225.00 Lakhs
2	Land the development charges @ Rs. 20.00 Lakhs per acre (1.72 acres)	Rs. 34.40 Lakhs
3	Cost of the building-Phase I @ Rs. 1200 per sq. ft. for 50.000 sq.ft.	Rs. 600.00 Lakhs
4	IT infrastructure Development cost Power, Back-up power, High speed Communication connectivity etc, @ Rs. 200/- per sq-ft on (3)	Rs. 100.00 Lakhs
5	incidentals, 15% on (1+2)	Rs. 38.91 Lakhs
	Total Project Cost	**Rs. 998.31 Lakhs**

ಮೇಲೆ ಓದಲಾದ ಕಿಯೋನಿಕ್ಸ್ ಸಂಸ್ಥೆಯ ವ್ಯವಸ್ಥಾಯಕ ನಿರ್ದೇಶಕರು (ಆಪರೇಷನ್ಸ್) ರವರ ಪತ್ರದಲ್ಲಿ ಗುಲ್ಬರ್ಗಾದಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನದ ಯೋಜನೆಯ ಮೊದಲ ಹಂತದ (1st phase of IT Park project) ಕಾಮಗಾರಿಯನ್ನು ರೂ. 9.98 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಹಾಗೂ ಅಂದಾಜು ವೆಚ್ಚದಲ್ಲಿ ಶೇಕಡ 80 ರಷ್ಟು ವೆಚ್ಚವನ್ನು

ಕಿಯೋನಿಕ್ಸ್ ಸಂಸ್ಥೆಯಿಂದ ಭರಿಸಲು ಒಪ್ಪಿದ, ಉಳಿದ ಶೇಕಡ 20ರಷ್ಟನ್ನು ವೆಚ್ಚ ಅಂದರೆ ರೂ. 199.60 ಲಕ್ಷಗಳ ಅನುದಾನವನ್ನು ಸರ್ಕಾರದ ವತಿಯಿಂದ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಮಾತಂಇ 24 ಎಂಡಿಎ 2008, ಬೆಂಗಳೂರು, ದಿನಾಂಕ 01ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಕಿಯೋನಿಕ್ಸ್ ಸಂಸ್ಥೆಯ ವತಿಯಿಂದ ಗುಲ್ಬರ್ಗದಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಈ ಕೆಳಕಂಡಂತೆ ಸ್ಥಾಪಿಸಲು ಅನುಮೋದನೆ ನೀಡಲಾಗಿದೆ :-

I. ಗುಲ್ಬರ್ಗಾದಲ್ಲಿ ಕರ್ನಾಟಕ ಹೌಸಿಂಗ್ ಬೋರ್ಡ್ ಲೇಔಟ್‌ನಲ್ಲಿನ ಕಮರ್ಷಿಯಲ್ ಪ್ಲಾಟ್ ಸಂಖ್ಯೆ 5, (ಹೈಕೋರ್ಟ್ ಸರ್ಕ್ಯೂಟ್ ಬೆಂಚ್‌ಗೆ ಎದುರು) ಇಲ್ಲಿ ಮೂರು ಹಂತಗಳಲ್ಲಿ ರೂ. 2,590 ಲಕ್ಷಗಳ ಅಂದಾಜು ವೆಚ್ಚದಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಸ್ಥಾಪಿಸಲು ;

II. ರೂ. 998.31 ಲಕ್ಷದ ಅಂದಾಜು ವೆಚ್ಚದ ಮಾಹಿತಿ ತಂತ್ರಜ್ಞಾನ ಉದ್ಯಾನದ ಮೊದಲ ಹಂತದ ಅಭಿವೃದ್ಧಿಯನ್ನು ಕೈಗೆತ್ತಿಗೊಳ್ಳಲು ಹಾಗೂ ಸುಮಾರು 50,000 ಚದರಡಿಯ ಐದು ಮಹಡಿಗಳ ಕಟ್ಟಡವನ್ನು ನಿರ್ಮಿಸಲು;

III. ಸರ್ಕಾರದ ಆರ್ಥಿಕ ಬೆಂಬಲವು ಯೋಜನೆಯ ಮೊದಲ ಹಂತದ ಅಂದಾಜು ವೆಚ್ಚದ ಶೇಕಡ 20ರಷ್ಟು ಅಂದರೆ ರೂ. 199.00 ಲಕ್ಷಕ್ಕೆ ಸೀಮಿತವಾಗಿದ್ದು, ಪ್ರಸಕ್ತ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 5465-01-190-1-13 ಹಂತ 2 ನಗರಗಳ ಸಲುವಾಗಿ ಕಿಯೋನಿಕ್ಸ್‌ನಲ್ಲಿ ಸಾಮ್ಯಷೇರು-ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ-059 ಇತರೆ ಖರ್ಚು (ಯೋಜನೆ) ಇದರಡಿ ಲಭ್ಯವಿರುವ ಅನುದಾನದಿಂದ ರೂ. 200.00 ಲಕ್ಷಗಳನ್ನು (ಶೇಕಡ 20 ರಷ್ಟು) ರಾಜ್ಯದ ಪಾಲಿನ ಮೊತ್ತವಾಗಿ ನಿರ್ದೇಶಕರು, ಕರ್ನಾಟಕ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ರವರಿಗೆ ನಿರ್ದೇಶಕರು. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯದ ಮುಖಾಂತರ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ. ಉಳಿದ ವೆಚ್ಚದ ಮೊತ್ತ ರೂ. 798.71 ಲಕ್ಷಗಳನ್ನು ಕಿಯೋನಿಕ್ಸ್ ಸಂಸ್ಥೆಯು ತನ್ನ ಸ್ವಂತ ನಿಧಿಯಿಂದ ಭರಿಸತಕ್ಕದ್ದು.

ಸದರಿ ಅನುದಾನವನ್ನು ಆಡಳಿತಾಧಿಕಾರಿಗಳು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರು ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರ ಮೇಲು ಸಹಿ ಪಡೆದು ಖಜಾನೆಯಿಂದ ಸದರಿ ಅನುದಾನವನ್ನು ಡ್ರಾ ಮಾಡಿ ವಿತರಿಸತಕ್ಕದ್ದು.

ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರು ಸದರಿ ಅನುದಾನದ ಬಳಕೆಯ ಬಗ್ಗೆ ನಿರ್ದೇಶಕರು, ಕರ್ನಾಟಕ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತರವರಿಂದ ಉಪಯೋಗಿತಾ ದೃಢೀಕರಣ ಪತ್ರವನ್ನು ವೆಚ್ಚ ಮಾಡಿದ ಅನುದಾನದ ವಿವರಗಳ ಜೊತೆಗೆ ಪಡೆದು ಈ ಆರ್ಥಿಕ ವರ್ಷದೊಳಗಾಗಿ ಸರ್ಕಾರಕ್ಕೆ ಒದಗಿಸತಕ್ಕದ್ದು.

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ ಆಇ 07 ವೆಚ್ಚ-2/2010, ದಿನಾಂಕ 23-01-2010 ರನ್ವಯ ಆರ್ಥಿಕ ಇಲಾಖೆಯ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಎಂ. ವಿ. ಕೃಷ್ಣಮೂರ್ತಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ಪಿ.ಆರ್. 307

INFORMATION TECHNOLOGY, BIO-TECHNOLOGY AND SCIENCE AND TECHNOLOGY SECRETARIAT

Sub :- Setting up of Network Operating Centre (NOC) and Incubation Facility at the proposed IT Parks in Belgaum, Shimoga and Gulbarga.

Read :- 1. Letter No. STPI/B/Dir/09-10, dated 3-11-2009 from the Director, STPI, Bangalore.

2. Letter No. DIT/NOC/STPI/2009-10/563, dated 17-11-2009 of The Director, Information Technology, Bio-technology, Bangalore.

Preamble:

The State Government intends to promote the Information Technology development in Tier II and Tier III cities of the State. Hence, the department proposes to develop IT parks in places such as Shimoga, Gulbarga and Belgaum through KEONICS, Government of Karnataka undertaking under the

control of Department of Information Technology, Bio Technology and Science & Technology. The development of IT infrastructure includes providing high speed data communication and incubation facility and Network Operating Centre.

Government of India in order to promote and facilitate software experts initiated the scheme of setting up of Software Technology Parks of India [STPI] which is an autonomous society under Ministry of Communication and Information Technology, Government of India which provides incubation facility, high speed data communication to the software companies in Karnataka. As per the STPI norms, State Government will have to provide built up space for setting up of Network Operating Centre (NOC) and an amount of Rs. 1.00 crore per location to develop the Incubation Centre.

The Director, STPI vide their letter read at (1) above, has intimated that the estimated cost of the projects for Belgaum and Shimoga would be Rs. 3.44 crores each including operational cost and Gulbarga Rs. 2.7 crores. Hence, has requested to release an amount of Rs. 1.00 crore to each of the project as Grant-in-aid.

Having examined the proposal, it is considered necessary to release Rs. 150 lakhs @ Rs. 50 lakhs for each location for setting up of Network Operating Centre & Incubation Facility in Belgaum, Shimoga & Gulbarga for the year 2009-10 to be met out of the provision, made under Head of Account **"3451-00-090-2-01 Information Technology-Promotion & Development – 059 Other Expenditure (Plan) " for the year 2009-10.** Hence, the Order.

Government Order No. ITD 35 MDA 2009 Bangalore, dated : 01-02-2010

In the circumstances explained in the preamble, Government are pleased to accord sanction for release of Rs. 150 lakhs (Rupees one hundred and fifty lakhs only) for setting up of Network Operation Centre (NOC) and Incubation Facility at the proposed IT Parks in Belgaum, Shimoga and Gulbarga @ Rs. 50 lakhs for each project for the year 2009-10 to the Director of Information Technology and Bio Technology who shall draw the said amount and disburse the same to the Managing Director, KEONICS, & in turn he will disburse to the Director, Software Technology Parks of India, Bangalore subject to the following conditions :-

(i) The funds released to KEONICS is to be put up under separate account with **title " GOK- Network Operating Centre (NOC) and Incubation Facility at IT Parks in Belgaum, Shimoga and Gulbarga – Project regarding"**

(ii) The funds will be operated only by MD-KEONICS.

(iii) Funds shall not be utilized for any other purpose that intended for.

(iv) As and when clearance is received from STPI, KEONICS will furnish quarterly expenditure statement clearly to the Government regularly.

The expenditure on this account shall be met, out of the budget provision made under the Head of Account **"3451-00-090-2-01 Information Technology-Promotion & Development – 059 Other Expenditure (Plan)"** for the year 2009-10.

The Administrative Officer, Directorate of Information Technology & Bio Technology Department shall draw the said grant from the Treasury duly countersigned by the Director, Information Technology & Biotechnology and disburse the amount.

The Director, Software Technology Parks of India, Bangalore shall submit the Utilization Certificate in the prescribed format through the Managing Director, KEONICS and the Director, Information Technology and Biotechnology, Bangalore.

This Order issues with the concurrence of Finance Department vide their Note in No. FD 08 Exp-2/2010, dated 16-01-2010.

By Order and in the name of the Governor of Karnataka

(M.V. Krishnamurthy)

Under Secretary to Government

Information Technology, Bio Technology

and Science & Technology Department

P.R. 308

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಬೆಂಗಳೂರು ವಿದ್ಯುನ್ಮಾನ ನಗರದ ಜೈವಿಕ ತಂತ್ರಜ್ಞಾನ ಪಾರ್ಕ್‌ನ ಅಭಿವೃದ್ಧಿಗಾಗಿ ಹುಡ್ಕೋ ಸಾಲ – ಅಸಲು ಮತ್ತು ಬಡ್ಡಿಯ ಮರುಪಾವತಿಗಾಗಿ 2010ರ ಮಾರ್ಚ್ ಅಂತ್ಯದ 21ನೇ ಕಂತಿನ ಹಣ ಬಿಡುಗಡೆ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ : ಮಾತಂಇ 22 ಪಿಆರ್‌ಎಂ 2002 ದಿನಾಂಕ : 6–3–2003
2. ಸರ್ಕಾರದ ಆದೇಶ ಸಂಖ್ಯೆ : ಐಟಿಡಿ 07 ಪಿಆರ್‌ಎಂ 2009 ದಿನಾಂಕ : 30–12–2009.
3. ನಿರ್ದೇಶಕರು, ಮಾತಂ ಜೈತಂ ನಿರ್ದೇಶನಾಲಯರವರ ಪತ್ರ ಸಂಖ್ಯೆ ಮಾತಂನಿ/ಕೆಬಿಟ್ಸ್/ಹುಡ್ಕೋ/2009–10, ದಿ : 22–01–10.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶ ದಿನಾಂಕ 6–3–2003ರಲ್ಲಿ ಬೆಂಗಳೂರು ವಿದ್ಯುನ್ಮಾನ ನಗರದ ಜೈವಿಕ ತಂತ್ರಜ್ಞಾನ ಪಾರ್ಕ್‌ನ ಅಭಿವೃದ್ಧಿಗಾಗಿ ಹುಡ್ಕೋ (Housing and Urban Development Corporation) ಸಂಸ್ಥೆಯಿಂದ ರೂ. 20.00 ಕೋಟಿ ಸಾಲವನ್ನು ಎತ್ತುವಳಿ ಮಾಡಲು ಮಂಜೂರಾತಿ ನೀಡಲಾಗಿತ್ತು.

2005ನೇ ವರ್ಷದಿಂದ ಹುಡ್ಕೋ ಸಂಸ್ಥೆಯ ಅಸಲು, ಬಡ್ಡಿಯನ್ನು ಮರುಪಾವತಿಸಲು ಕೆಬಿಟ್ಸ್ ಸಂಸ್ಥೆಗೆ ತ್ರೈಮಾಸಿಕ ಅನುದಾನಗಳನ್ನು ಸರ್ಕಾರವು ಆಗಿಂದಾಗ್ಗೆ ಬಿಡುಗಡೆ ಮಾಡುತ್ತಲಿದೆ.

2009–10ನೇ ಸಾಲಿನ ಆಯವ್ಯಯದಲ್ಲಿ ಸದರಿ ಸಾಲವನ್ನು ಮರುಪಾವತಿಸಲು ಲೆಕ್ಕಶೀರ್ಷಿಕೆ '5465–01–190–1–08 (ಯೋಜನೇತರ) ಮಾಹಿತಿ ಬಾಂಡುಗಳು 240 ಸಾಲ ಮೇಲುಸ್ತುವಾರಿ' ಇದರ ಅಡಿಯಲ್ಲಿ ರೂ. 360.00 ಲಕ್ಷ ಒದಗಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಹುಡ್ಕೋ ಸಾಲದ ಬಾಬ್ತು ಹುಡ್ಕೋ ಸಂಸ್ಥೆಗೆ ಅಸಲು ಮತ್ತು ಬಡ್ಡಿಯ ಬಾಬ್ತು ಪಾವತಿಸಲು ದಿನಾಂಕ 30–12–2009ರ ಅಂತ್ಯದ 20ನೇ ತ್ರೈಮಾಸಿಕ ಕಂತಿನ ಹಣ ರೂ. 80,51,860/–ಗಳ ಅನುದಾನವನ್ನು ಕೆಬಿಟ್ಸ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ.

ಮೇಲೆ (3)ರಲ್ಲಿ ಓದಲಾದ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯದ ಪತ್ರದಲ್ಲಿ ಹುಡ್ಕೋ ಸಂಸ್ಥೆಗೆ 2010ರ ಮಾರ್ಚ್ ಅಂತ್ಯದ ಕಂತಿನ ಮೊತ್ತ ರೂ. 80,71,756/–ಗಳನ್ನು (ಅಸಲು ರೂ. 62,50,000 + ಬಡ್ಡಿ ರೂ. 18,21,756) 2010ರ ಮಾರ್ಚ್ ಅಂತ್ಯದೊಳಗಾಗಿ ಪಾವತಿ ಮಾಡಬೇಕಾಗಿರುತ್ತದೆಂದು ತಿಳಿಸುತ್ತಾ, ಸದರಿ ಮೊತ್ತವನ್ನು ಬಿಡುಗಡೆ ಮಾಡಲು ಕೋರಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಐಟಿಡಿ 07 ಪಿಆರ್‌ಎಂ 2009, ಬೆಂಗಳೂರು, ದಿನಾಂಕ: 1ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಹುಡ್ಕೋ ಸಂಸ್ಥೆಗೆ ಅಸಲು ಮತ್ತು ಬಡ್ಡಿಯ ಬಾಬ್ತು ಪಾವತಿಸಲು ದಿನಾಂಕ 31–03–2010ರ ಅಂತ್ಯದ 21ನೇ ತ್ರೈಮಾಸಿಕ ಕಂತಿನ ಹಣ ರೂ. 80,71,756/–ಗಳ (ಎಂಬತ್ತು ಲಕ್ಷದ ಎಪ್ಪತ್ತೊಂದು ಸಾವಿರದ ಏಳನೂರಾ ಐವತ್ತಾರು ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಸದರಿ ಅನುದಾನವನ್ನು ಆಡಳಿತಾಧಿಕಾರಿಗಳು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರು, ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರ ಮೇಲು ಸಹಿ ಪಡೆದು ಖಜಾನೆಯಿಂದ ಸದರಿ ಅನುದಾನವನ್ನು ಡ್ರಾ ಮಾಡಿ ಅಪರ ವ್ಯವಸ್ಥಾಪಕ ನಿರ್ದೇಶಕರು, ಕೆಬಿಟ್ಸ್ ಸಂಸ್ಥೆ ಇವರಿಗೆ ವಿತರಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ **'5465–01–190–1–08 (ಯೋಜನೇತರ) ಮಾಹಿತಿ ಬಾಂಡುಗಳು 240 ಸಾಲ ಮೇಲುಸ್ತುವಾರಿ'** ಇದರ ಅಡಿಯಲ್ಲಿ ಒದಗಣೆ ಮಾಡಲಾದ ಅನುದಾನದಿಂದ ಭರಿಸತಕ್ಕದ್ದು.

ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಇವರು ಸದರಿ ಅನುದಾನದ ಬಳಕೆಯ ಬಗ್ಗೆ ಕೆಬಿಟ್ಸ್ ಸಂಸ್ಥೆಯ ಅಪರ ವ್ಯವಸ್ಥಾಪಕ ನಿರ್ದೇಶಕರವರಿಂದ ಉಪಯೋಗಿತಾ ದೃಢೀಕರಣ ಪತ್ರವನ್ನು ಪಡೆದು ಸರ್ಕಾರಕ್ಕೆ ಒದಗಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16–5–2008 ಇದರನ್ವಯ ಆರ್ಥಿಕ ಇಲಾಖೆಯ ಸಹಮತಿಯನ್ನು ಪರಿಭಾವಿಸಿ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಎಂ. ವಿ. ಕೃಷ್ಣಮೂರ್ತಿ)

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 309 ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ.

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಹುಬ್ಬಳ್ಳಿಯಲ್ಲಿ ಆರ್ಯಭಟ್ಟ ಮಾಹಿತಿ ತಂತ್ರಜ್ಞಾನ ಉದ್ಯಾನದ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ :–

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ ಐಟಿಡಿ 25 ಎಂಡಿಎ 2008, ದಿನಾಂಕ 06–09–2008

2) ಸರ್ಕಾರಿ ಅದೇಶ ಸಂಖ್ಯೆ ಐಟಿಡಿ 25 ಎಂಡಿಎ 2008, ದಿನಾಂಕ 10–08–2009

3) ಆಯುಕ್ತರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆರವರ ಪತ್ರ ಸಂಖ್ಯೆ ಹೆಚ್‌ಡಿಎಂಸಿ/100/02/469/09, ದಿನಾಂಕ 13–01–2010

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ 6–9–2008ರ ಸರ್ಕಾರಿ ಆದೇಶದಲ್ಲಿ ಆಯುಕ್ತರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆರವರಿಗೆ ಹುಬ್ಬಳ್ಳಿಯಲ್ಲಿ ಆರ್ಯಭಟ್ಟ ಮಾಹಿತಿ ತಂತ್ರಜ್ಞಾನ ಉದ್ಯಾನದ ಅಭಿವೃದ್ಧಿ ಯೋಜನೆಗೆ ರೂ. 1.00 ಕೋಟಿ ಅನುದಾನವನ್ನು ಪ್ರಥಮ ಕಂತಾಗಿ ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ 10–08–2009ರ ಸರ್ಕಾರಿ ಆದೇಶದಲ್ಲಿ ಆಯುಕ್ತರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆರವರಿಗೆ ಹುಬ್ಬಳ್ಳಿಯಲ್ಲಿ ಆರ್ಯಭಟ್ಟ ಮಾಹಿತಿ ತಂತ್ರಜ್ಞಾನ ಉದ್ಯಾನದ ಅಭಿವೃದ್ಧಿ ಯೋಜನೆಗೆ ರೂ. 1.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ (3)ರಲ್ಲಿ ಓದಲಾದ ಆಯುಕ್ತರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆರವರ ಪತ್ರದಲ್ಲಿ ಸರ್ಕಾರದ ವತಿಯಿಂದ ಬಿಡುಗಡೆ ಮಾಡಲಾದ ರೂ. 200.00 ಲಕ್ಷಗಳಲ್ಲಿ ರಸ್ತೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಉಳಿದಂತೆ ಆರ್ಯಭಟ ಐಟಿ ಪಾರ್ಕ್ ಅಭಿವೃದ್ಧಿಗೆ ಅಂದರೆ Land Scaping, LAN. WAN, Broad Band ಹಾಗೂ ಪಾರ್ಕ್‌ನಲ್ಲಿಯ ವಿದ್ಯುತ್ತೀಕರಣಕ್ಕಾಗಿ ರೂ. 286.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆರ್ಯಭಟ ಮಾಹಿತಿ ತಂತ್ರಜ್ಞಾನ ಉದ್ಯಾನಕ್ಕೆ 2009–10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ. 2.00 ಕೋಟಿಗಳ ಅನುದಾನದಲ್ಲಿ ಉಳಿದ ರೂ. 100 ಕೋಟಿ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಮಾತಂಇ 25 ಎಂಡಿಎ 2008, ಬೆಂಗಳೂರು, ದಿನಾಂಕ 1ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಆರ್ಯಭಟ ಮಾಹಿತಿ ತಂತ್ರಜ್ಞಾನ ಉದ್ಯಾನದ ಅಭಿವೃದ್ಧಿಗಾಗಿ 2009–10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ. 2.00 ಕೋಟಿಗಳ ಅನುದಾನದಲ್ಲಿ ಉಳಿದ ರೂ. 1.00 ಕೋಟಿ ಅನುದಾನವನ್ನು (ಒಂದು ಕೋಟಿ ರೂಪಾಯಿಗಳು ಮಾತ್ರ) ಆಯುಕ್ತರು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆರವರಿಗೆ ಹಂಚಿಕೆ ಮಾಡುವ ಸಲುವಾಗಿ ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

ಸದರಿ ಅನುದಾನವನ್ನು ಆಡಳಿತಾಧಿಕಾರಿಗಳು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರು, ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರ ಮೇಲು ಸಹಿ ಪಡೆದು ಖಜಾನೆಯಿಂದ ಸದರಿ ಅನುದಾನವನ್ನು ಡ್ರಾ ಮಾಡಿ ಆಯುಕ್ತರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯವರಿಗೆ ವಿತರಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ "5465–01–190–1–12 ಹುಬ್ಬಳ್ಳಿ ಆರ್ಯಭಟ ಮಾಹಿತಿ ತಂತ್ರಜ್ಞಾನ ಪಾರ್ಕ್ (ಯೋಜನೆ)" ಅಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು. ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಇವರು ಅನುದಾನದ ಬಳಕೆಯ ಬಗ್ಗೆ ಆಯುಕ್ತರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯವರಿಂದ ಉಪಯೋಗಿತಾ ದೃಢೀಕರಣ ಪತ್ರವನ್ನು ವೆಚ್ಚ ಮಾಡಿದ ಅನುದಾನದ ವಿವರಗಳ ಜೊತೆಗೆ ಪಡೆದು ಈ ಆರ್ಥಿಕ ವರ್ಷದೊಳಗಾಗಿ ಸರ್ಕಾರಕ್ಕೆ ಒದಗಿಸತಕ್ಕದ್ದು.

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ ಆಇ 23 ವೆಚ್ಚ–2/2010, ದಿನಾಂಕ 29–1–2010ರಲ್ಲಿನ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಎಂ. ವಿ. ಕೃಷ್ಣಮೂರ್ತಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ.

ಪಿ.ಆರ್. 310

ಇಂಧನ ಸಚಿವಾಲಯ

ವಿಷಯ : ಮೆ॥ ದೊಡ್ಡನವರ್ ಬ್ರದರ್ಸ್, ಇವರಿಗೆ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಬಗ್ಗೆ.

ಓದಲಾಗಿದೆ : 1. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ ಕೆ.ಆರ್.ಇ.ಡಿ./08/ಡಿಬಿ/2009/929, ದಿನಾಂಕ 18/21-2-2009.

2. ದಿನಾಂಕ 23-10-2009 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ॥ ದೊಡ್ಡನವರ್ ಬ್ರದರ್ಸ್ ಇವರಿಗೆ ಬೆಳಗಾಂ ಜಿಲ್ಲೆಯಲ್ಲಿ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ॥ ದೊಡ್ಡನವರ್ ಬ್ರದರ್ಸ್, ಇವರಿಗೆ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ.-

ಸರ್ಕಾರದ ಆದೇಶ ಸಂಖ್ಯೆ ಇಎನ್ 93 ಎನ್‌ಸಿಇ 2009, ಬೆಂಗಳೂರು, ದಿನಾಂಕ 4ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೆ॥ ದೊಡ್ಡನವರ್ ಬ್ರದರ್ಸ್ ಇವರಿಗೆ ಬೆಳಗಾಂ ಜಿಲ್ಲೆಯಲ್ಲಿ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗೆ ವಿವರಿಸಿರುವಂತೆ ಈ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ :-

Topo sheet No.	Proposed capacity MW	Near by villages of the proposed area and district	Geographical ea description of the project
47L/11	6MW	Thoranahalli and Karosi Belgaum District	The proposed location is a combination of plain and non plain located on the S-W of Chikkodi Town at about 6 kms. It appears to be non-forest land and completely open type. The elevation of the site very from 700 to 720 mtrs. The area is held in the following Geographical co-ordinates. **Latitude :** 16°22'49" - 16°23'49"N **Longitude :** 74°31'49" - 74°34'29"E **Ridge peaks :** Elevation varies from 700 to 720 mtrs Amsl

1. ಸದರಿ ಯೋಜನೆಯನ್ನು financial closure ಸಾಧಿಸಿದ 24 ತಿಂಗಳುಗಳ ಒಳಗಾಗಿ ಪ್ರಾರಂಭ ಮಾಡತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳೊಳಗಾಗಿ ಯೋಜನಾಭಿವೃದ್ಧಿದಾರರು ರೂ.400ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.
3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ

ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ	5 ಮೆಗಾವ್ಯಾಟ್ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ	ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ)
➢ 200 ಕಿ.ವ್ಯಾ. ನಿಂದ 300 ಕಿ.ವ್ಯಾ.	18	1
➢ 300 ಕಿ.ವ್ಯಾ. ನಿಂದ 500 ಕಿ.ವ್ಯಾ.	15	1
➢ 500 ಕಿ.ವ್ಯಾ. ನಿಂದ 750 ಕಿ.ವ್ಯಾ.	12	1
➢ 750 ಕಿ.ವ್ಯಾ. ನಿಂದ 1000 ಕಿ.ವ್ಯಾ.	8 ರಿಂದ 10	1

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂತಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

8. ಕಾಲಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.401

ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : M/s. OM Shakthi Power Producers ಇವರಿಗೆ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ : 1. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ ಕೆ.ಆರ್.ಇ.ಡಿ./06/ಓಂ ಶಕ್ತಿ/09/2014, ದಿನಾಂಕ 19/22-6-2009.

2. ದಿನಾಂಕ 23-10-2009 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s. OM Shakthi Power. Producers ಇವರಿಗೆ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಭೀಮನ್‌ಕಲ್ ಗ್ರಾಮದ ಬೆಟ್ಟಕುಮಾರಿ ಹೊಳೆಗೆ ಅಡ್ಡಲಾಗಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ನಡವಳಿಯ ಪ್ರಕಾರ ದಿನಾಂಕ 23-10-2009 ರಂದು ಜರುಗಿದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s. OM Shakthi Power Producers ಇವರಿಗೆ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯ ನಿರ್ಣಯದ ಉದ್ಧೃತ ಭಾಗವನ್ನು ಈ ಕೆಳಗೆ ನೀಡಲಾಗಿದೆ :-

a) Energy Department had directed KREDL to have a detailed Survey and investigation conducted on the proposal of M/s. Om Shakthi for the 5 MW project in Bhimankal village, Sakleshpur Taluk to find out whether this proposal `overlaps', `conflicts' or `clashes' with KPCL Bettakumari Dam.

b) The Allotment Committee considered the report prepared by KPCL bearing No.CEITA/MHS, 1366 dated 23-10-2009 from the Managing Director, KPCL to KREDL with a copy to Principal Secretary to Government, Energy Department. The Report, following an inspection of the proposed location, provides details of the latitude and longitude of the location along with other particulars relating to the location of the weir by M/s. Om Shakthi Power Private Limited and the proposed Bettakumari Dam. The report mentions :

``the proposal M/s. Om Shakthi Power Private Limited is not overlapping or clashing with the location of KPCL Bettakumari Dam.

c) The Report also indicates that the revised proposal of Om Shakthi Power Project Limited does not overlap or interfere with that of M/s. Trimurthi Power Project Private Limited.

d) The Managing Director, while forwarding the report, indicated that since the proposed project is very close to the Bettakumari Dam, KPCL has objected to it. The report itself clearly established that there is neither overlap or clash nor does it interfere with the KPCL project in any manner.

e) Under the circumstances, the Allotment Committee recommends the 5 MW Project for allotment to M/s. Om Shakthi Power Private Limited at the revised location subject to the following conditions :

i. The weir should be located at a distance of not less than 750 Mtrs. On the downstream of the toe of the proposed KPCL dam across Bettakumari.

ii. The FRL of the crest should be 10 mtrs. Down stream of the toe of the proposed KPCL Dam. The FRL/Crest of the weir should be below EL 360 Mtrs.

iii. On the construction of the Bettakumari Dam by KPCL, the independent catchment area for M/s. Om Shakthi Power Private Limited's Project will be reduced considerably. In such an event,

iv. The company will have no right to claim any compensation from the Government, KPCL or from any aurhority.

v. The minimum tail water level for the Om Shakthi Power Project should be at least one meter above the MWL of the proposed weir on the downstream by M/s Trimurthi Power Private Limited.

vi. M/s. Om Shakthi Power Private Limited should furnish in writing before the commencement of the project that they are aware of the proposed dam across Bettakumari by KPCL, also of its ramifications, including reduced water management for this project.

vii. They shall also give in writing that they will have no claim what so every by KPCL activities.

ಹಂಚಿಕೆ ಸಮಿತಿ ಸಭೆಯ ನಿರ್ಣಯದ ಹಿನ್ನೆಲೆಯಲ್ಲಿ, ಈ ಕೆಳಗಿನಂತೆ ಆದೇಶ ಹೊರಡಿಸಿದೆ :-

ಸರ್ಕಾರದ ಆದೇಶ ಸಂಖ್ಯೆ ಇಎನ್ 143 ಎನ್‌ಸಿಇ 2007, ಬೆಂಗಳೂರು, ದಿನಾಂಕ 5ನೇ ಫೆಬ್ರವರಿ 2010

M/s. OM Shakthi Power Producers ಇವರಿಗೆ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಭೀಮನ್‌ಕಲ್ ಗ್ರಾಮದ ಬೆಟ್ಟಕುಮೇರಿ ನದಿಗೆ ಅಡ್ಡಲಾಗಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು (**Weir Latitude** : 12°46'50" **Longitude** : 75°40'56" Power House - **Latitude** : 12°44'52" **Longitude** : 75°40'56") ಈ ಕೆಳಗಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಲಾಗಿದೆ :-

1 (ಅ) ಸದರಿ ಯೋಜನೆಯಿಂದ ಕೆಳತೊರೆ ಮತ್ತು ಮೇಲ್ತೊರೆ ಯೋಜನೆಗಳಿಗೆ ಯಾವುದೇ ಹಾನಿಯಾಗಬಾರದು.

(ಆ) ಹಂಚಿಕೆದಾರರು ಈ ಆದೇಶ ಹೊರಡಿಸಿದ 45 ದಿನಗಳ ಒಳಗಾಗಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆ ತಂತಾನೇ ರದ್ದಾಗುವುದು. ನಂತರ, ಕಂಪನಿಯು ಹಂಚಿಕೆಗೊಸ್ಕರ ಪುನಃ ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು. ಯಾವ ಕಾರಣಕ್ಕೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಸ್ವೀಕರಿಸಿದ ಅರ್ಜಿ ಪರಿಷ್ಕರಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.

(ಇ) ಒಡಂಬಡಿಕೆಯನ್ನು ರೂ.400.00 ರ ಛಾಪಾ ಕಾಗದದ ಮೇಲೆ ಮಾಡಿಕೊಂಡು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದವರಿಗೆ ಕಳುಹಿಸಿ ಪ್ರಮಾಣೀಕರಿಸಿ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು.

(ಈ) ಈ ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್.) ಪರಿಷ್ಕರಿಸಲು ಮೆಗಾವಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣ ಶುಲ್ಕವನ್ನು ತುಂಬುವುದು.

2 (ಅ) ಯೋಜನಾ ಅಭಿವೃದ್ಧಿದಾರರು ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಂದಲೂ ಅಂದರೆ ಜಲಸಂಪನ್ಮೂಲ ಇಲಾಖೆ, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಕಂದಾಯ ಇಲಾಖೆಗಳಿಂದ ಕ್ಲಿಯರೆನ್ಸ್‌ಗಾಗಿ ಅರ್ಜಿ ಸಲ್ಲಿಸತಕ್ಕದ್ದು. ಒಡಂಬಡಿಕೆ ಮಾಡಿಕೊಂಡ ಒಂದು ವರ್ಷದೊಳಗಾಗಿ ವಿವರವಾದ ಯೋಜನಾ ವರದಿಯನ್ನು ಸಲ್ಲಿಸತಕ್ಕದ್ದು.

(ಆ) ಹಂಚಿಕೆದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಠೇವಣಿ ಇಡುವ ಹಣವನ್ನು, ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್.) ಆವಿಷ್ಕರಿಸುವುದಕೋಸ್ಕರ ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

3. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಯೋಜನಾ ವರದಿಗೆ ತಾಂತ್ರಿಕ ಅನುಮೋದನೆ ಕೊಟ್ಟ ಆರು ತಿಂಗಳ ಒಳಗಾಗಿ ಫೈನಾನ್ಸಿಯಲ್ ಕ್ಲೋಷರ್‌ನ್ನು ಸಾಧಿಸತಕ್ಕದ್ದು.

4. ಫೈನಾನ್ಸಿಯಲ್ ಕ್ಲೋಷರ್‌ನ್ನು ಸಾಧಿಸಿದ 24 ತಿಂಗಳ ಒಳಗಾಗಿ ಯೋಜನೆಯನ್ನು ಮುಗಿಸುವ ನಿಟ್ಟಿನಲ್ಲಿ ಹಂಚಿಕೆದಾರರು ಕಾರ್ಯಪ್ರವೃತ್ತರಾಗತಕ್ಕದ್ದು.

5. ಮೇಲೆ ತಿಳಿಸಿದ 2, 3 ಮತ್ತು 4 ಅಂಶಗಳ ಯೋಜನಾ ಅನುಷ್ಠಾನ ಮಾಡಲು ಸಫಲವಾಗದಿದ್ದಲ್ಲಿ ಈ ಹಂಚಿಕೆಯು ತಂತಾನೇ ಯಾವ ಮುನ್ಸೂಚನೆಯನ್ನೂ ನೀಡದೆ ರದ್ದಾಗುವುದೆಂದು ತಿಳಿಯತಕ್ಕದ್ದು.

6. ಯೋಜನಾ ಅಭಿವೃದ್ಧಿದಾರರು ವಿದ್ಯುತ್ತನ್ನು ಮೂರನೆಯವರಿಗೆ ಮಾರಾಟ ಮಾಡುವ ಸಂದರ್ಭದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಮತ್ತು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ವಿದ್ಯುತ್ತನ್ನು ಮಾರಾಟ ಮಾಡುವ ಸಂದರ್ಭದಲ್ಲಿ ವಿದ್ಯುತ್ ಖರೀದಿ ಒದಂಬಡಿಕೆ (ಪಿ.ಪಿ.ಎ.) ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

7. ಈ ವಿಷಯದಲ್ಲಿ ಹಂಚಿಕೆದಾರರು ರಾಜ್ಯ ಮತ್ತು ಜಿಲ್ಲಾ ಮಟ್ಟಕ್ಕೆ ಸಂಬಂಧಿಸಿದ ಅಧಿಕಾರಿಗಳ ಸಹಾಯ/ಸಹಕಾರವನ್ನು ಪಡೆದು ನಿಗದಿತ ಅವಧಿಯೊಳಗೆ ಯೋಜನಾ ಅನುಷ್ಠಾನ ಪೂರ್ಣಗೊಳಿಸತಕ್ಕದ್ದು.

8. ಈ ಕಿರು ಜಲ ವಿದ್ಯುತ್ ಯೋಜನೆಯ ಸ್ಥಳದಲ್ಲಿ ಯಾವುದಾದರೂ ಸರ್ಕಾರಿ ಜಲ ವಿದ್ಯುತ್/ನೀರಾವರಿ ಕುಡಿಯುವ ನೀರಿನ ಯೋಜನೆಗಳು ಬಂದಲ್ಲಿ ಸರ್ಕಾರಿ ಯೋಜನೆಗಳಿಗೆ ಮೊದಲ ಆದ್ಯತೆ ದೊರಕುವುದು ಹಾಗೂ ಈ ಯೋಜನೆಗೆ ಯಾವುದಾದರೂ ಇತರೆ ಯೋಜನೆಗಳಿಂದ ಧಕ್ಕೆಯಾದಲ್ಲಿ ಯಾವುದೇ ಪರಿಹಾರವನ್ನು ಅಭಿವೃದ್ಧಿದಾರರು ನಿರೀಕ್ಷಿಸುವಂತಿಲ್ಲ.
9. ಸ್ಥಳೀಯವಾಗಿ ಉದ್ಭವಿಸುವ ಯಾವುದಾದರೂ ಆಕ್ಷೇಪಣೆಗಳಿಗೆ ಅಭಿವೃದ್ಧಿದಾರರೇ ಸಂಪೂರ್ಣವಾಗಿ ಹೊಣೆಗಾರರಾಗಿರುತ್ತಾರೆ.
10. ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ಯಾವುದೇ ಯೋಜನೆಗಳಿಂದಾಗಿ ಸದರಿ ಯೋಜನೆಯು ಮುಳುಗಡೆಯಾದಲ್ಲಿ, ಒದಗಬಹುದಾದ ಸಂಪೂರ್ಣ ತೊಂದರೆಗಳಿಗೆ ಅಭಿವೃದ್ಧಿದಾರರೇ ಪೂರ್ಣ ಜವಾಬ್ದಾರರಾಗಿರುತ್ತಾರೆ.
11. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.
12. ಡಿ.ಪಿ.ಆರ್. ತಯಾರು ಮಾಡಿದ ಮೇಲೆ ಕ್ರೆಡಲ್ ಸಂಸ್ಥೆಯು ಪರಿಶೀಲಿಸಿದ ನಂತರ ಇತರ ಸಂಬಂಧಿಸಿದ ಇಲಾಖೆಗಳಿಗೆ ಡಿ.ಪಿ.ಆರ್. ಸಲ್ಲಿಸುವುದು ಹಾಗೂ ತದನಂತರ ತಾಂತ್ರಿಕ ಅನುಮೋದನೆಗಾಗಿ ಕ್ರೆಡಲ್‌ಗೆ ಅರ್ಜಿ ಸಲ್ಲಿಸತಕ್ಕದ್ದು.
13. The weir should be located at a distance of not less than 750 Mtrs. On the downstream of the toe of the proposed KPCL dam across Bettakumari.
14. The FRL of the crest should be 10 mtrs.Down stream of the toe of the proposed KPCL Dam. The FRL/Crest of the weir should be below EL 360 Mtrs.
15. On the construction of the Bettakumari Dam by KPCL, the independent catchment area for M/s. Om Shakthi Power Private Limited's Project will be reduced considerably. In such an event, the company will have no right to claim any compensation from the Government, KPCL or from any aurhority.
16. The minimum tall water level for the Om Shakthi Power Project should be at least one meter above the MWL of the proposed weir on the downstream by M/s Trimurthi Power Private Limited.
17. M/s. Om Shakthi Power Private Limited should furnish in writing before the commencement of the project that they are aware of the proposed dam across Bettakumari by KPCL, also of its ramifications, including reduced water management for this project.
18. The Company shall also give in writing that they will have no claim what so ever by KPCL activities.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಪಿ.ಆರ್.402

ಸಮಾಜ ಕಲ್ಯಾಣ ಸಚಿವಾಲಯ

ವಿಷಯ : ಗಂಗಾ ಕಲ್ಯಾಣ ಯೋಜನೆ ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ : ಸಕಇ 48 ಎಸ್‌ಡಿಸಿ 2008, ದಿನಾಂಕ 16-07-2009.
2. ಸರ್ಕಾರಿ ಆದೇಶ ಸಂಖ್ಯೆ : ಸಕಇ 118 ಎಸ್‌ಡಿಸಿ 2009, ದಿನಾಂಕ 18-08-2009.

ಪ್ರಸ್ತಾವನೆ :

ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಟರ್ನ್ ಕೀ ಆಧಾರದ ಮೇಲೆ ಅನುಷ್ಠಾನಗೊಳಿಸಲು ಮೇಲೆ ಓದಲಾದ ಆದೇಶಗಳಲ್ಲಿ ಮಂಜೂರಾತಿ ನೀಡಲಾಗಿದೆ. ಯೋಜನೆಯ ಅನುಷ್ಠಾನದ ವಿವರಗಳು ಸೇರಿದಂತೆ ಉಲ್ಲೇಖಿತ ಯೋಜನೆ ಅಡಿ ಟೆಂಡರ್ ಕರೆಯುವಲ್ಲಿ ತಾಂತ್ರಿಕ ಬಿಡ್ ಹಾಗೂ ಆರ್ಥಿಕ ಬಿಡ್‌ನಲ್ಲಿ ನಮೂದಿಸಬಹುದಾದ ಷರತ್ತುಗಳಲ್ಲದೆ ಟೆಂಡರ್ ಆಹ್ವಾನಿಸುವ ಪ್ರಾಧಿಕಾರ, ಟೆಂಡರ್ ಪರಿಶೀಲಿಸುವ ಪ್ರಾಧಿಕಾರ ಹಾಗೂ ಟೆಂಡರ್ ಅಂಗೀಕರಿಸುವ ಪ್ರಾಧಿಕಾರಗಳನ್ನು ನೇಮಿಸಲಾಗಿತ್ತು. ಆದರೆ ಟರ್ನ್ ಕೀ ಆಧಾರದ ಮೇಲೆ ಟೆಂಡರ್‌ಗಳನ್ನು ಆಹ್ವಾನಿಸಲಾಗಿ ಪ್ರತಿಕ್ರಿಯೆ ನೀರಸವಾಗಿರುತ್ತದೆ. ಆದಕಾರಣ ಸದರಿ ವಿಷಯವನ್ನು ಸರ್ಕಾರವು ಪುನಃ ಪರಿಶೀಲಿಸಿದ ನಂತರ ಗಂಗಾ ಕಲ್ಯಾಣ ಯೋಜನೆಯನ್ನು ಟರ್ನ್ ಕೀ ಆಧಾರದ ಮೇಲೆ ಅನುಷ್ಠಾನಗೊಳಿಸುವ ಬದಲು ಈ ಹಿಂದೆ ಇದ್ದ ಪದ್ಧತಿಯಲ್ಲೇ ಮುಂದುವರೆಸಲು ನಿರ್ಧರಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಕಇ 18 ಎಸ್‌ಡಿಸಿ 2010, ಬೆಂಗಳೂರು, ದಿನಾಂಕ 28ನೇ ಜನವರಿ 2010

ಗಂಗಾ ಕಲ್ಯಾಣ ಯೋಜನೆಯನ್ನು ಟರ್ನ್ ಕೀ ಆಧಾರದ ಮೇಲೆ ಅನುಷ್ಠಾನಗೊಳಿಸಲು ಹೊರಡಿಸಿದ ದಿನಾಂಕ 16.07.2009ರ ಆದೇಶವನ್ನು ಭಾಗತಃ ಮಾರ್ಪಡಿಸಿ ದಿನಾಂಕ 18-08-2009ರ ಆದೇಶ ರದ್ದುಗೊಳಿಸಿ ಉಲ್ಲೇಖಿತ ಯೋಜನೆಯನ್ನು ಈ ಕೆಳಗಿನ ಷರತ್ತುಗಳಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

1) ಗಂಗಾ ಕಲ್ಯಾಣ ಯೋಜನೆಯಡಿ ನಾಲ್ಕು ನಿಗಮಗಳ ಪರವಾಗಿ ರಾಜ್ಯ ಮಟ್ಟದಲ್ಲಿ ಜಿಲ್ಲೇವಾರು ಟೆಂಡರ್‌ಗಳನ್ನು ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಕರೆಯುವುದು.

2) ಈ ಯೋಜನೆಯಡಿ ಕೊಳವೆ ಬಾವಿಗಳನ್ನು "ನೀರಿಲ್ಲದಿದ್ದರೆ ಹಣವಿಲ್ಲ" (no water no money) ಎಂಬುದರ ಆಧಾರದ ಮೇಲೆ ಕೊರೆಯಬೇಕಾಗಿರುತ್ತದೆ.

3) ಅಂತಹ ಟೆಂಡರ್‌ಗಳನ್ನು ಇ-ಟೆಂಡರ್ ಮೂಲಕ ಆಹ್ವಾನಿಸುವುದು.

4) ಒಬ್ಬ ಟೆಂಡರ್‌ದಾರರು ಗರಿಷ್ಠ 3 ಜಿಲ್ಲೆಗಳಿಗೆ ಟೆಂಡರ್ ಸಲ್ಲಿಸಬಹುದಾಗಿರುತ್ತದೆ.

5) ಟೆಂಡರ್‌ದಾರರು 3 ರಿಗ್‌ಗಳನ್ನು ಸ್ವಂತವಾಗಿ ಅಥವಾ ಲೀಜ್ ಆಧಾರದ ಮೇಲೆ ಹೊಂದಿರಬೇಕು.

6) ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ರಿಗ್‌ಗಳ ನೊಂದಣಿ ಸಂಖ್ಯೆಯನ್ನು ನಮೂದಿಸಿ ಟೆಂಡರ್ ಸಲ್ಲಿಸಬೇಕಾಗಿದೆ. ಅಂದರೆ ಟೆಂಡರ್‌ದಾರರು ಒಂದು ಜಿಲ್ಲೆಗಿಂತ ಹೆಚ್ಚಿನ ಜಿಲ್ಲೆಗಳಿಗೆ ಭಾಗವಹಿಸಲು ಇಚ್ಛಿಸಿದಲ್ಲಿ ಒಂದು ಜಿಲ್ಲೆಯಲ್ಲಿ ನಮೂದಿಸಿದ ರಿಗ್‌ಗಳ ನೋಂದಣಿ ಸಂಖ್ಯೆಗಳನ್ನು ಬೇರೆ ಜಿಲ್ಲೆಗಳಲ್ಲಿ ಸಲ್ಲಿಸಿದ ಟೆಂಡರ್‌ನಲ್ಲಿ ನಮೂದಿಸಬಾರದು.

7) ಕಳೆದ ಮೂರು ವರ್ಷಗಳಲ್ಲಿ ಯಾವುದಾದರೂ ಒಂದು ವರ್ಷದಲ್ಲಿ ಟೆಂಡರ್‌ದಾರರ ವಾರ್ಷಿಕ ವಹಿವಾಟು ಕನಿಷ್ಠ ರೂ.50.00 ಲಕ್ಷಗಳು ಇರಬೇಕು. ಇದಕ್ಕೆ ಪೂರಕವಾಗಿ ಚಾರ್ಟರ್ಡ್ ಅಕೌಂಟೆಂಟ್ ಇವರು ದೃಢೀಕರಿಸಿದ balance sheet, profit & loss account ಸಲ್ಲಿಸಬೇಕು.

8) ಟೆಂಡರ್‌ದಾರರು ಇತ್ತೀಚೆಗೆ ಸಲ್ಲಿಸಿದ Income tax returns ಹಾಗೂ Income tax department ನ ಸ್ವೀಕೃತಿಯೊಂದಿಗೆ ಸಲ್ಲಿಸಬೇಕು.

9) ಆಯಾ ನಿಗಮಗಳ ವಿಚಕ್ಷಣಾ ದಳಗಳು, ಒಬ್ಬ ಗುತ್ತಿಗೆದಾರರು ಕೊರೆದ ಒಟ್ಟು ಬಾವಿಗಳಲ್ಲಿ ಶೇ. 10ನ್ನು ರ್‍ಯಾಂಡಮ್ ಆಗಿ ಪರಿಶೀಲನೆ ನಡೆಸಿದಾಗ ಕೊಳವೆಬಾವಿ ಆಳ ಮತ್ತು ಕೇಸಿಂಗ್ ಪೈಪ್‌ನ ಅಳತೆಯಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಪರಿಶೀಲನೆ ನಡೆಸಿದ ಕೊಳವೆ ಬಾವಿಗಳಲ್ಲಿ ಗರಿಷ್ಠ ವ್ಯತ್ಯಾಸ ಬಂದ ಅಳತೆಗಳನ್ನು ಗುತ್ತಿಗೆದಾರರು ಕೊರೆದ ಎಲ್ಲಾ ಬಾವಿಗಳಿಗೆ ಅನ್ವಯಿಸಿ ಹಣ ಕಡಿತ ಮಾಡುವುದು.

10) ಕೊಳವೆಬಾವಿಯನ್ನು ಕೊರೆದ ನಂತರ ನೀರಿನ ಇಳುವರಿ ಪ್ರಮಾಣವನ್ನು ``v-notch" ವಿಧಾನದಿಂದ ನಿಗಮದ ಅಧಿಕಾರಿಗಳು ದೃಢೀಕರಿಸಿ ಬಿಲ್ಲನ್ನು ಸಲ್ಲಿಸಬೇಕು. ಅಂತಹ ಬಿಲ್ಲಿನ ಮೊತ್ತದ ಮೇಲೆ ಶೇ.80 ರಷ್ಟು ಹಣವನ್ನು ಪಾವತಿಸುವುದು.

11) ಕೊರೆದ ಕೊಳವೆಬಾವಿಗಳಿಗೆ ಪಂಪ್‌ಸೆಟ್‌ಗಳನ್ನು ಅಳವಡಿಸುವ ಮುಂಚೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಥವಾ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಭೂವಿಜ್ಞಾನಿಗಳಿಂದ ಏರ್ ಲೈನ್ ವಿಧಾನದಿಂದ ನೀರಿನ ಇಳುವರಿ ಪರೀಕ್ಷೆ ನಡೆಸಿ ಪ್ರಮಾಣಪತ್ರ ಪಡೆದು ಪಂಪ್‌ಸೆಟ್‌ಗಳನ್ನು ಯಶಸ್ವಿಯಾಗಿ ಅಳವಡಿಸಿದ ನಂತರ ಅಥವಾ ಒಂದು ವೇಳೆ "airline" ವಿಧಾನದಲ್ಲಿ ನೀರಿನ ಅಳತೆ ಮಾಡದಿದ್ದಲ್ಲಿ ಪಂಪ್‌ಸೆಟ್‌ಗಳನ್ನು ಅಳವಡಿಸಿ ವಿದ್ಯುದ್ಧೀಕರಣವಾದ ನಂತರ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಥವಾ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಭೂವಿಜ್ಞಾನಿಗಳಿಂದ ಇಳುವರಿ ಪರೀಕ್ಷೆ ಮಾಡಿಸಿ ಪ್ರಮಾಣಪತ್ರ ಸಲ್ಲಿಸಿದ ನಂತರವೇ ಶೇ.10 ರಷ್ಟು ಹಣವನ್ನು ನೀಡತಕ್ಕದ್ದು.

12) ಕೊನೆಯ ಶೇ.10 ರಷ್ಟು ಬಿಲ್ಲಿನ ಮೊತ್ತವನ್ನು ವಿದ್ಯುದ್ಧೀಕರಣಗೊಳಿಸಿದ ದಿನಾಂಕದಿಂದ ಒಂದು ವರ್ಷ ಗ್ಯಾರಂಟಿ ಅವಧಿ ಮುಗಿದ ನಂತರ ಪಾವತಿಸುವುದು ಅಥವಾ ಇಳುವರಿ ಪರೀಕ್ಷೆ ನಡೆಸಿ ಪಂಪ್ ಮೋಟಾರ್

ಯಶಸ್ವಿಯಾಗಿ ಅಳವಡಿಸಿದ ನಂತರ ಅಷ್ಟೇ ಮೊತ್ತಕ್ಕೆ ಬ್ಯಾಂಕ್ ಗ್ಯಾರಂಟಿ ನೀಡಿದಲ್ಲಿ ಗುತ್ತಿಗೆದಾರರಿಗೆ ಹಣ ಪಾವತಿಸುವುದು.

13) ಜಿಲ್ಲಾ ವ್ಯವಸ್ಥಾಪಕರು ಕೊಳವೆಬಾವಿ ಕೊರೆಯಲು ಕಾರ್ಯಾದೇಶ ನೀಡಿದ ದಿನಾಂಕದಿಂದ 30 ದಿನಗಳ ಒಳಗೆ ಕೊರೆಯದೇ ಇದ್ದ ಪಕ್ಷದಲ್ಲಿ, ಒಂದು ವಾರ ತಡವಾದಲ್ಲಿ ಕೊಳವೆಬಾವಿ ಕೊರೆಯಲು ತಗಲುವ ವೆಚ್ಚಕ್ಕೆ ಶೇ.0.5 ರಷ್ಟು ಎರಡು ವಾರಕ್ಕೆ ಶೇ.1.00 ಮೂರು ವಾರಕ್ಕೆ ಶೇ.1.5 ನಾಲ್ಕನೇ ವಾರಕ್ಕೆ ಶೇ.2.00 ರಷ್ಟು ದಂಡವನ್ನು ವಿಧಿಸುವುದು. ಗಡುವಿನ ನಂತರದ 4 ವಾರಗಳು ಕಳೆದರೂ ಕೊಳವೆಬಾವಿಗಳನ್ನು ಕೊರೆಯದೇ ಹೋದಲ್ಲಿ ಇ.ಎಂ.ಡಿ./ಬ್ಯಾಂಕ್ ಗ್ಯಾರಂಟಿಯಲ್ಲಿ ದಂಡದ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳುವುದು.

14) ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿದ ಇಲ್ಲಾ ಕೊಳವೆಬಾವಿಗಳನ್ನು ಯಶಸ್ವಿಯಾಗಿ ಕೊರೆದು ವಿದ್ಯುದ್ದೀಕರಣ ದಿನಾಂಕದಿಂದ ಒಂದು ವರ್ಷ ಗ್ಯಾರಂಟಿ ಅವಧಿ ಮುಗಿದ ನಂತರ ಇ.ಎಂ.ಡಿ. ಮೊತ್ತವನ್ನು ಹಿಂತಿರುಗಿಸುವುದು.

15) ಕಾರ್ಯಾದೇಶ ಪಡೆದ ನಂತರ ಇ.ಎಂ.ಡಿ. ಹಣವನ್ನು ಹಿಂದೆ ಪಡೆಯಲು ಗುತ್ತಿಗೆದಾರರು ಇಚ್ಛಿಸಿದಲ್ಲಿ ಅದಕ್ಕೆ ಸಮಾನ ಮೊತ್ತದ ಬ್ಯಾಂಕ್ ಗ್ಯಾರಂಟಿ ನೀಡಿದಲ್ಲಿ ಇ.ಎಂ.ಡಿ. ಹಿಂದಿರುಗಿಸುವುದು.

16) ಕೊಳವೆಬಾವಿಯ ಕನಿಷ್ಠ, ಇಳುವರಿ ಪ್ರತಿ ಗಂಟೆಗೆ 1000 ಗ್ಯಾಲನ್‌ಗಳಿಗೆ ಗುತ್ತಿಗೆದಾರರು ಗ್ಯಾರಂಟಿ ಕೊಡಬೇಕು. ಒಂದು ವೇಳೆ ಯಾವುದೇ ಹಂತದಲ್ಲಿ ಅಥವಾ ವಿದ್ಯುದ್ದೀಕರಣವಾದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಕಡಿಮೆಯಾದಲ್ಲಿ ಹೊಸ ಕೊಳವೆಬಾವಿಯನ್ನು ಗುತ್ತಿಗೆದಾರರ ಖರ್ಚಿನಲ್ಲಿ ಉಚಿತವಾಗಿ ಕೊರೆದು ಕೊಡಬೇಕು. ತಪ್ಪಿದಲ್ಲಿ ಗುತ್ತಿಗೆದಾರರಿಗೆ ಪಾವತಿಸಲು ಬಾಕಿಯಿರುವ ಹಣದಲ್ಲಿ ಅಥವಾ ಇ.ಎಂ.ಡಿ./ಬ್ಯಾಂಕ್ ಗ್ಯಾರಂಟಿ ಮೊತ್ತದಲ್ಲಿ ಮುಟ್ಟುಗೋಲು ಹಾಕಿಕೊಂಡು ಇತರೆ ಗುತ್ತಿಗೆದಾರರಿಂದ ಹೊಸದಾಗಿ ಕೊಳವೆಬಾವಿಯನ್ನು ಕೊರೆಯಿಸಿ ಕೊಡುವುದು.

17) ಸಬ್‌ಮರ್ಸಿಬಲ್ ಪಂಪ್‌ಸೆಟ್‌ನ್ನು ಸಮರ್ಪಕವಾಗಿ ಅಳವಡಿಸಲು ಸಾಧ್ಯವಾಗದೇ ಇದ್ದಲ್ಲಿ ಅಂತಹ ಕೊಳವೆಬಾವಿಗಳನ್ನು ಪುನಃ ಕೊರೆಯುವ ಯಂತ್ರದಿಂದ ಗುತ್ತಿಗೆದಾರರ ಸ್ವಂತ ಖರ್ಚಿನಲ್ಲಿ ಫ್ಲಷ್ ಮಾಡಿಸಬೇಕು. ತಪ್ಪಿದ್ದಲ್ಲಿ ಬೇರೆ ಗುತ್ತಿಗೆದಾರರಿಂದ ಮಾಡಿಸಿ ತಗಲುವ ವೆಚ್ಚವನ್ನು ಪಾವತಿಸಲು ಬಾಕಿಯಿರುವ ಮೊತ್ತದಿಂದ ಇ.ಎಂ.ಡಿ./ಬ್ಯಾಂಕ್ ಗ್ಯಾರಂಟಿ ಮೊತ್ತದಿಂದ ಕಡಿತಗೊಳಿಸುವುದು.

18) ಕನಿಷ್ಠ 1000 ಜಿ.ಪಿ.ಹೆಚ್. ನೀರಿಲ್ಲದಿದ್ದರೆ ಯಾವುದೇ ಹಣ ನೀಡಲಾಗುವುದಿಲ್ಲ.

19) ಟೆಂಡರ್‌ದಲ್ಲಿ ಅಂಗೀಕರಿಸಿದ ದರಗಳು 12 ತಿಂಗಳುಗಳ ಅವಧಿಗೆ ಅನ್ವಯಿಸುತ್ತದೆ. ನಂತರದ ಅವಧಿಯನ್ನು ವಿಸ್ತರಿಸುವ ಅಧಿಕಾರವನ್ನು ಟೆಂಡರ್ ಅಂಗೀಕರಿಸುವ ಪ್ರಾಧಿಕಾರವು ಹೊಂದಿರುತ್ತದೆ.

20) ಒಂದು ಜಿಲ್ಲೆಗೆ ಅವಶ್ಯಕತೆ ಇದ್ದಲ್ಲಿ ಒಂದಕ್ಕಿಂತ ಹೆಚ್ಚಿನ ಟೆಂಡರ್‌ದಾರರನ್ನು ಎಲ್-1 ದರದಲ್ಲಿ ಅಂಗೀಕರಿಸುವ ಅಧಿಕಾರ ಟೆಂಡರ್ ಅಂಗೀಕರಿಸುವ ಪ್ರಾಧಿಕಾರಕ್ಕೆ ಇರುತ್ತದೆ.

ಸದರಿ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ (1999) ಹಾಗೂ ಅದರ ಅಡಿ ರೂಪಿಸಿರುವ ನಿಯಮಗಳನ್ವಯ ಅನುಷ್ಠಾನಗೊಳಿಸಲು ಈ ಕೆಳಗಿನ ಸಮಿತಿಗಳನ್ನು ರಚಿಸಲಾಗಿದೆ.

ಟೆಂಡರ್ ಆಹ್ವಾನಿಸುವ ಪ್ರಾಧಿಕಾರ/ಅಧಿಕಾರಿ

ಪ್ರಧಾನ ವ್ಯವಸ್ಥಾಪಕರು (ಅಭಿವೃದ್ಧಿ), ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು (ನಾಲ್ಕು ನಿಗಮಗಳ ಪರವಾಗಿ).

ಟೆಂಡರ್ ಪರಿಶೀಲನಾ ಸಮಿತಿ

1)	ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ	ಅಧ್ಯಕ್ಷರು
2)	ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯರು
3)	ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯರು

4)	ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯರು
5)	ಮುಖ್ಯ ಅಭಿಯಂತರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು	ಸದಸ್ಯರು
6)	ಮುಖ್ಯ ಅಭಿಯಂತರರು, ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು	ಸದಸ್ಯರು
7)	ಪ್ರಧಾನ ವ್ಯವಸ್ಥಾಪಕರು (ಅಭಿವೃದ್ಧಿ), ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯ-ಕಾರ್ಯದರ್ಶಿ

ಟೆಂಡರ್ ಅಂಗೀಕರಿಸುವ ಪ್ರಾಧಿಕಾರ

1)	ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ	ಅಧ್ಯಕ್ಷರು
2)	ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯರು
3)	ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯರು
4)	ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯರು
5)	ಮುಖ್ಯ ಅಭಿಯಂತರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು	ಸದಸ್ಯರು
6)	ಮುಖ್ಯ ಅಭಿಯಂತರರು, ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು	ಸದಸ್ಯರು
7)	ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ	ಸದಸ್ಯ-ಕಾರ್ಯದರ್ಶಿ

ಅಂತಹ ಟೆಂಡರ್‌ನಲ್ಲಿ ಭಾಗವಹಿಸಲು ಇರಬೇಕಾದ ಅರ್ಹತೆ ಮತ್ತು ಅದಕ್ಕೆ ಸಂಬಂಧಿಸಿದ ದಾಖಲೆಗಳು, ನಿರ್ವಹಿಸಬೇಕಾದ ಕಾಮಗಾರಿಗಳು ಮತ್ತು ಸಂಬಂಧಿಸಿದ ವಿಶಿಷ್ಟತೆಗಳು, ಹಣ ಪಾವತಿ ವಿಧಾನ, ಟೆಂಡರ್ ನಿಬಂಧನೆ ಮತ್ತು ಷರತ್ತುಗಳನ್ನು ವಿವರಿಸುವ ತಾಂತ್ರಿಕ ಬಿಡ್ (technical bid) ಹಾಗೂ ಆರ್ಥಿಕ ಬಿಡ್ (financial bid) ನ್ನು ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ರೂಪಿಸುವುದು. ಈ ನಿಬಂಧನೆ ಮತ್ತು ಷರತ್ತುಗಳಲ್ಲಿ (ತಾಂತ್ರಿಕ ಬಿಡ್, ಆರ್ಥಿಕ ಬಿಡ್) ಯಾವುದೇ ಬದಲಾವಣೆ ತರಲು "ಟೆಂಡರ್ ಆಹ್ವಾನಿಸುವ ಪ್ರಾಧಿಕಾರ" ಇಚ್ಛಿಸಿದಲ್ಲಿ "ಟೆಂಡರ್ ಅಂಗೀಕರಿಸುವ ಪ್ರಾಧಿಕಾರ"ದ ಅನುಮೋದನೆ ಪಡೆಯಬೇಕಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ.ಎಂ. ಬಾಟೆ,

ಸರ್ಕಾರದ ಅಧೀನ ಕಾರ್ಯದರ್ಶಿ-3,

ಪಿ.ಆರ್.403 ಸಮಾಜ ಕಲ್ಯಾಣ ಇಲಾಖೆ.

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : 'ತುಮಕೂರು ಜಿಲ್ಲೆಯ ಇತಿಹಾಸ ಮತ್ತು ಪುರಾತತ್ವ' ಎಂಬ ಪುಸ್ತಕದ ಮುದ್ರಣ - ಸರ್ಕಾರದ ಮಂಜೂರಾತಿ.

ಓದಲಾಗಿದೆ : ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ, ಮೈಸೂರು ರವರ ಪತ್ರಸಂಖ್ಯೆ ಡಿ.ಎ.ಎಂ./ಪ್ರ.ವಿ.ಮೈಸೂರು -2009-10, ದಿನಾಂಕ 31-12-2009.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 31-12-2009ರ ಪತ್ರದಲ್ಲಿ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿ, 'ತುಮಕೂರು ಜಿಲ್ಲೆಯ ಇತಿಹಾಸ ಮತ್ತು ಪುರಾತತ್ವ' ಎಂಬ ಪುಸ್ತಕವನ್ನು ಮುದ್ರಿಸಲು ಪ್ರಸ್ತಾಪಿಸಿರುತ್ತಾರೆ. 2009-10ನೇ ಆರ್ಥಿಕ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮದಡಿ ಲೆಕ್ಕಶೀರ್ಷಿಕೆ 2205-00-

103-0-01 (ಯೋಜನೆ) 059 ಇತರ ಖರ್ಚುಗಳಡಿ ಸಂಶೋಧನಾ ಪ್ರಕಟಣೆಗಳಿಗಾಗಿ ರೂ.20.00 ಲಕ್ಷಗಳನ್ನು ನಿಗದಿಗೊಳಿಸಲಾಗಿದ್ದು, ಇದರಡಿ ಉದ್ದೇಶಿತ ಪುಸ್ತಕವನ್ನು ಮುದ್ರಣ ಮಾಡಲು, ಪಾರದರ್ಶಕ ನಿಯಮಾನುಸಾರ ಟೆಂಡರ್ ಪ್ರಕಟಣೆಯನ್ನು ಕೈಗೊಂಡು ಅತ್ಯಂತ ಕಡಿಮೆ ದರವನ್ನು ಸಲ್ಲಿಸುವ ಮುದ್ರಣಕಾರರಿಂದ ಮುದ್ರಿಸಲು ಕೋರಿರುವರು, ಸದರಿ ಮುದ್ರಣಕ್ಕಾಗಿ ವೆಚ್ಚವಾಗುವ ರೂ.1,26,700-00 ಲಕ್ಷ ಹಣವನ್ನು ಭರಿಸಲು ಕೋರಿರುವರು.

ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 15 ಕೆಎಂಯು 2010, ಬೆಂಗಳೂರು, ದಿನಾಂಕ 5ನೇ ಫೆಬ್ರವರಿ 2010

'ತುಮಕೂರು ಜಿಲ್ಲೆಯ ಇತಿಹಾಸ ಮತ್ತು ಪುರಾತತ್ವ' ಎಂಬ ಕನ್ನಡ ಆವೃತ್ತಿಯ ಒಟ್ಟು 500 ಪುಸ್ತಕಗಳ ಮುದ್ರಣಕ್ಕಾಗಿ ರೂ.1,26,700-00 (ರೂ. ಒಂದು ಲಕ್ಷ ಇಪ್ಪತ್ತಾರು ಸಾವಿರದ ಏಳುನೂರು ಮಾತ್ರ) ಹಣವನ್ನು ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಗೆ 2009-10ನೇ ಸಾಲಿನಲ್ಲಿ ಮಂಜೂರು ಮಾಡಿ ಆದೇಶಿಸಿದೆ.

ಈ ಸಂಬಂಧ ಉಂಟಾಗುವ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205-00-103-0-01 (ಯೋಜನೆ) 059 ಇತರೆ ಖರ್ಚುಗಳಡಿಯಲ್ಲಿ ಭರಿಸತಕ್ಕದ್ದು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಅನಧಿಕೃತ ಟಿಪ್ಪಣಿ ಸಂಖ್ಯೆ : ಶಿಇ 128 ಐಎಫ್ (ಪಿಎ) 2010 ದಿನಾಂಕ 20-1-2010 ರಲ್ಲಿ ಪಡೆದು ಹಾಗೂ ಇಲಾಖಾ ಕಾರ್ಯದರ್ಶಿಗಳಿಗೆ ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10-7-96 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಕೆ. ಭದ್ರರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.
(ಆಡಳಿತ ಕನ್ನಡ)

ಪಿ.ಆರ್.404

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : Hampi Fabled Capital of Vijayanagara Empire (Splendor that was Hampi) – ಪುಸ್ತಕವನ್ನು ಆಂಗ್ಲ ಆವೃತ್ತಿಯಲ್ಲಿ ಮುದ್ರಣ ಮಾಡುವ ಕುರಿತು – ಮಂಜೂರಾತಿ.

ಓದಲಾಗಿದೆ : ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ, ಮೈಸೂರು ರವರ ಪತ್ರಸಂಖ್ಯೆ ಡಿ.ಎ.ಎಂ./ಪ್ರ.ವಿ.ಮೈಸೂರು-2009-10, ದಿನಾಂಕ 31-12-2009.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 31-12-2009ರ ಪತ್ರದಲ್ಲಿ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿ, Hampi Fabled Capital of Vijayanagara Empire (Splendor that was Hampi) – ಪುಸ್ತಕವನ್ನು ಆಂಗ್ಲ ಆವೃತ್ತಿಯಲ್ಲಿ ಮುದ್ರಣ ಮಾಡುವ ಕುರಿತು ಪ್ರಸ್ತಾಪಿಸಿರುತ್ತಾರೆ. 2009-10 ನೇ ಆರ್ಥಿಕ ಸಾಲಿನ ಮುಂದುವರಿದ ಯೋಜನಾ ಕಾರ್ಯಕ್ರಮದಡಿ ಲೆಕ್ಕಶೀರ್ಷಿಕೆ 2205-00-103-0-01 (ಯೋಜನೆ) 059 ಇತರ ಖರ್ಚುಗಳಡಿ ಸಂಶೋಧನಾ ಪ್ರಕಟಣೆಗಳಿಗಾಗಿ ರೂ.20.00 ಲಕ್ಷಗಳನ್ನು ನಿಗದಿಗೊಳಿಸಲಾಗಿದ್ದು, ಇದರಡಿ ಉದ್ದೇಶಿತ ಪುಸ್ತಕವನ್ನು ಮುದ್ರಣ ಮಾಡಲು, ಪಾರದರ್ಶಕ ನಿಯಮಾನುಸಾರ ಟೆಂಡರ್ ಪ್ರಕಟಣೆಯನ್ನು ಕೈಗೊಂಡು ಅತ್ಯಂತ ಕಡಿಮೆ ದರವನ್ನು ಸಲ್ಲಿಸಿರುವ ಮುದ್ರಣಕಾರರಿಂದ ಕರಾರು ಒಪ್ಪಂದವನ್ನು ಮಾಡಿಕೊಂಡು ಆದೇಶವನ್ನು ನೀಡಲಾಗಿದೆಯೆಂದು ತಿಳಿಸಿರುವರು. ಸದರಿ ಮುದ್ರಣಕ್ಕಾಗಿ ವೆಚ್ಚವಾಗುವ ರೂ.9.38 ಲಕ್ಷ ಹಣವನ್ನು ಭರಿಸಲು ತಾಳೆಪಟ್ಟಿಯೊಂದಿಗೆ ಸಲ್ಲಿಸಿ ಆಡಳಿತಾತ್ಮಕ ಅನುಮೋದನೆ ಕೋರಿರುವರು.

ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 13 ಕೆಎಂಯು 2010, ಬೆಂಗಳೂರು, ದಿನಾಂಕ 5ನೇ ಫೆಬ್ರವರಿ 2010

Hampi Fabled Capital of Vijayanagara Empire (Splendor that was Hampi) – ಪುಸ್ತಕವನ್ನು ಆಂಗ್ಲ ಆವೃತ್ತಿಯಲ್ಲಿ ಮುದ್ರಣ ಮಾಡುವ ಕುರಿತು, , ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆಗೆ 2009-10ನೇ ಸಾಲಿನ ಆಯವ್ಯಯದಲ್ಲಿ ರೂ.9.38 ಲಕ್ಷ ಹಣವನ್ನು ಬಿಡುಗಡೆ ಮಾಡಿ ಮಂಜೂರಾತಿ ಆದೇಶ ನೀಡಿದೆ.

ಈ ಸಂಬಂಧ ಉಂಟಾಗುವ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205-00-103-0-01 (ಯೋಜನೆ) 059 ಇತರೆ ಖರ್ಚುಗಳಡಿಯಲ್ಲಿ ಭರಿಸತಕ್ಕದ್ದು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಅನಧಿಕೃತ ಟಿಪ್ಪಣಿ ಸಂಖ್ಯೆ : ಶಿಇ 125 ಐಎಫ್ (ಬಿಎ) 2010 ದಿನಾಂಕ 20-1-2010 ರಲ್ಲಿ ಪಡೆದು ಹಾಗೂ ಇಲಾಖಾ ಕಾರ್ಯದರ್ಶಿಗಳಿಗೆ ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10-7-96 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ,
ಪಿ.ಆರ್.405 ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.
(ಆಡಳಿತ ಕನ್ನಡ)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆ, ಸಂಸ್ಥೆಯ ಸಂಸ್ಥಾಪಕರಾದ ಪೂಜ್ಯ ಡಿ.ವಿ. ಗುಂಡಪ್ಪನವರ 125ನೇ ಜನ್ಮದಿನೋತ್ಸವ ಸ್ಮರಣೆಯಲ್ಲಿ ಸಂಸ್ಥೆಯ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಡಿ.ವಿ.ಜಿ. ಸ್ಮಾರಕ ಭವನ ನಿರ್ಮಾಣವನ್ನು ಪೂರೈಸಲು ರೂ.1.50 ಕೋಟಿಗಳ ಸಹಾಯಧನ ನೀಡುವ ಬಗ್ಗೆ.

ಓದಲಾಗಿದೆ : ಕಾರ್ಯದರ್ಶಿ, ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆ ಇವರ ಪತ್ರ ಸಂಖ್ಯೆ 5800/08-09, ದಿನಾಂಕ 16-01-2010.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 16-01-2010 ರ ಪತ್ರದಲ್ಲಿ ಕಾರ್ಯದರ್ಶಿ, ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆ ಇವರು ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆಯು ಅನೇಕ ಸಾರ್ವಜನಿಕ ಚಟುವಟಿಕೆಗಳನ್ನು ನಡೆಸಿಕೊಂಡು ಬಂದಿದ್ದು, ಅನೇಕ ಪ್ರಮುಖ ಕಾರ್ಯಕ್ರಮಗಳನ್ನು ಕೈಗೊಂಡಿದೆ. ಆದ್ದರಿಂದ ಈ ಸಂಸ್ಥೆಯ ಸ್ಥಾಪಕರಾದ ಪೂಜ್ಯ ಡಿ.ವಿ. ಗುಂಡಪ್ಪನವರ 125ನೇ ಜನ್ಮ ದಿನೋತ್ಸವ ಅಂಗವಾಗಿ ಸಂಸ್ಥೆಯ ಆವರಣದಲ್ಲಿ ನಿರ್ಮಾಣ ಹಂತದಲ್ಲಿರುವ ಡಿ.ವಿ.ಜಿ. ಸ್ಮಾರಕ ಭವನ ನಿರ್ಮಾಣವನ್ನು ಪೂರೈಸಲು ರೂ.1.50 ಕೋಟಿಗಳನ್ನು 2010-11 ನೇ ಸಾಲಿನ ಆಯವ್ಯಯದಲ್ಲಿ ಅನುಮೋದನೆ ನೀಡಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಹಾಗೂ ಇವರ ಪ್ರಸ್ತಾವನೆಯ ಪತ್ರದ ಮೇಲೆ ಮಾನ್ಯ ಮುಖ್ಯಮಂತ್ರಿಗಳು "2009-10ನೇ ಆಯವ್ಯಯದಲ್ಲಿ 2 ಕಂತುಗಳಲ್ಲಿ ಕೂಡಲೇ 1.50 ಕೋಟಿ ಬಿಡುಗಡೆ ಮಾಡಲು ಆದೇಶಿಸಿರುತ್ತಾರೆ" ಆರ್ಥಿಕ ಇಲಾಖೆ ಮೊದಲನೆಯ ಕಂತಾಗಿ ರೂ.75.00 ಲಕ್ಷ ಬಿಡುಗಡೆ ಮಾಡಲು ಸಹಮತಿಸಿರುತ್ತಾರೆ.

ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 11 ಸ್ಮಾಪ್ರನಿ 2010, ಬೆಂಗಳೂರು, ದಿನಾಂಕ 4ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆಯ ಸ್ಥಾಪಕರಾದ ಪೂಜ್ಯ ಡಿ.ವಿ. ಗುಂಡಪ್ಪನವರ ಹೆಸರಿನಲ್ಲಿ ಸಂಸ್ಥೆಯ ಆವರಣದಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡಲು ಮೊದಲನೇ ಕಂತಾಗಿ ರೂ.75.00 ಲಕ್ಷ (ರೂಪಾಯಿ ಎಪ್ಪತ್ತೈದು ಲಕ್ಷಗಳು ಮಾತ್ರ) ಗಳನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಕಾರ್ಯದರ್ಶಿ, ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಸರ್ಕಾರದ ಮಂಜೂರಾತಿ ನೀಡಿದೆ.

ಷರತ್ತುಗಳು :

1. ಮೊದಲನೇ ಕಂತಿನ ಅನುದಾನ ಉಪಯೋಗಿಸಿದ ಬಗ್ಗೆ ಉಪಯೋಗ ಪ್ರಮಾಣಪತ್ರವನ್ನು ಒದಗಿಸುವುದು.
2. ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡಲು ಸೂಕ್ತ ಪ್ರಸ್ತಾವನೆ ಸಲ್ಲಿಸುವುದು ಅದಕ್ಕೂ ಮುಂಚೆ ಬಿಡುಗಡೆ ಮಾಡಿರುವ ಹಣಕ್ಕೆ ಉಪಯುಕ್ತತಾ ಪತ್ರ ನೀಡುವುದು.

ಈ ಮೊತ್ತವನ್ನು 2009-10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205-00-102-4-31-059 (ಕನ್ನಡ ಮತ್ತು ಸಂಸ್ಕೃತಿಗೆ ಉತ್ತೇಜನ) (ಯೋಜನೆ) ಇದರಡಿ ಒದಗಿಸಿರುವ ರೂ.3000.00 ಲಕ್ಷಗಳಲ್ಲಿ ಬಾಕಿ ಉಳಿದ ರೂ.1031.30 ಲಕ್ಷಗಳಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ 03-01-2010 ರ ಟಿಪ್ಪಣಿ ಸಂಖ್ಯೆ : ಆಇ 120 ವೆಚ್ಚ-7 2010 ರಲ್ಲಿ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.
(ಆಡಳಿತ ಕನ್ನಡ)

ಪಿ.ಆರ್.406

ಇಂಧನ ಸಚಿವಾಲಯ

ವಿಷಯ : M/s Shriram Leitwind Limited ಇವರಿಗೆ 50.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಬಗ್ಗೆ :-

ಓದಲಾಗಿದೆ :

1) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/08/ಎಸ್‌ಎಲ್‌ಎಲ್/2009/923(ಎ) ದಿನಾಂಕ 18/21-2-2009.

2) ದಿನಾಂಕ 23-10-2009ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Shriram Leitwind Limited ಇವರಿಗೆ ಗದಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಒಟ್ಟು 50.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s Shriram Leitwind Limited ಇವರಿಗೆ 50.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರದ ಆದೇಶ ಸಂಖ್ಯೆ : ಇನ್ 87 ಎನ್‌ಸಿಇ 2009, ಬೆಂಗಳೂರು, ದಿನಾಂಕ 08-02-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ M/s Shriram Leitwind Limited ಇವರಿಗೆ ಗದಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಒಟ್ಟು 50.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗೆ ವಿವರಿಸಿರುವಂತೆ ಈ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ :-

Sl. No .	Toposhe et No.	Proposed capacity in MW	Near by Villages of the proposed area and district	Geographical area description of the project
1.	48M/14	15 MW	Sudi, Kalkapur, Sankapur, Itagi, Bevianakatti Gadag District	The identified area is a plain terrain, has presence of stream and scattered vegetation. Further, the area has moderate elevation variation varying from 580 to 600 mtrs. The major portion of the area is situated in SE and South of Sudi Village. The area is held in the following Geographical Co-ordinates : **Latitude :** 15°40'0"- 15°40'0" N **Longitude :** 75°50'0"- 75°55'0"E **Ridge peaks:** 572, 590, 593, 585, 598, 589, 596, 579 & 586m amsl
2.	48M/14	15 MW	Bandehal, Thondehal Gadag District	It is ground level plain, spreads around Bandehal and Thondehal. It appears to be agricultural land and has scattered plantation and moderate elevation varying from 620 to 640 mtr.The area is held in the following Geographical co-ordinates : **Latitude :** 15°30'0"- 13°11'16" N **Longitude :** 75°51'42"- 75°55'56"E **Ridge peaks:** 637, 615, 617, 622, & 625m Amsl
3.	48O/14	10 MW	Narsipura, Karaganagahatta, Kardipura, Mekhanahalli, Sokke, Attimogge, Hosur, Chikkamagalur District	The identified area consists of small independent hillocks including the allotted one. The part of the area is described as dense scrub. It has presence of water bodies, rocky knobs and platation. The entire area is situated on N-E of Mekanahalli. The elevation of the area varying from 760 to 780 mtrs. The area is held in the following Geographical co-ordinates : : **Latitude :** 13°42'37"- 13°45'0" N **Longitude :** 75°55'33"- 76°0'0"E **Ridge peaks:** 783, 777, 773 & 758m Amsl
4.	48O/14	10 MW	Lakshmisagar, Miralenahalli, Amruthpur, Basavanahalli, Chikkamagalur District	The proposed area is located on the N-E of Tharikere and is a ground level plain consisting of waterbodies and scattered platation. The elevation of the area varies from 680 to 720 mtrs. The area is held in the following Geographical co-ordinates : **Latitude :** 13°42'21"- 13°45'0" N **Longitude :** 75°49'27"- 75°51'40"E **Ridge peaks:** 682, 692, 668 & 683m Amsl
	Total	50 MW		

1. ಸದರಿ ಯೋಜನೆಯನ್ನು financial closure ಸಾಧಿಸಿದ 24 ತಿಂಗಳುಗಳ ಒಳಗಾಗಿ ಪ್ರಾರಂಭ ಮಾಡತಕ್ಕದ್ದು

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳೊಳಗಾಗಿ ಯೋಜನಾಭಿವೃದ್ಧಿದಾರರು ರೂ. 400 ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೋ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್ ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಠಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ	5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ	ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ)
➢ 200 ಕಿ. ವ್ಯಾ. ನಿಂದ 300 ಕಿ. ವ್ಯಾ.	18	1
➢ 300 ಕಿ. ವ್ಯಾ. ನಿಂದ 500 ಕಿ. ವ್ಯಾ.	15	1
➢ 500 ಕಿ. ವ್ಯಾ. ನಿಂದ 750 ಕಿ. ವ್ಯಾ.	12	1
➢ 750 ಕಿ. ವ್ಯಾ. ನಿಂದ 1000 ಕಿ. ವ್ಯಾ.	8 ರಿಂದ 10	1

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ/ಕಂದಾಯ/ವಾಣಿಜ್ಯ ಮತು ಕೈಗಾರಿಕೆ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

8. ಕಾಲ ಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

12. The Company shall note that there is restriction for using 250 KW WTG's

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಎಸ್. ಜಿ. ಸಂಪತ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 426 ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : M/s Sree Kandiamman Industries ಇವರಿಗೆ 43.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಬಗ್ಗೆ :-

ಓದಲಾಗಿದೆ : 1) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ : ಕೆಆರ್ಇಡಿ/08/ಎಸ್‌ಕೆಐ/2009/918, ದಿನಾಂಕ 18/21-2-2009 ಮತ್ತು ಸಂಖ್ಯೆ : ಕೆಆರ್ಇಡಿ/08/ಎಸ್‌ಕೆಐ/2009/2080, ದಿನಾಂಕ 19-5-2009/2-7-2009.

2) ದಿನಾಂಕ 23-10-2009ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Sree Kandiamman Industries ಇವರಿಗೆ ಧಾರವಾಡ ಜಿಲ್ಲೆಯಲ್ಲಿ ಒಟ್ಟು 43.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s Sree Kandiammam Industries ಇವರಿಗೆ 43.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರದ ಆದೇಶ ಸಂಖ್ಯೆ : ಇಎನ್ 88 ಎನ್‌ಸಿಇ 2009, ಬೆಂಗಳೂರು, ದಿನಾಂಕ 08-02-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ M/s Sree Kandiamman Industries ಇವರಿಗೆ ಧಾರವಾಡ ಜಿಲ್ಲೆಯಲ್ಲಿ ಒಟ್ಟು 43.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗೆ ವಿವರಿಸಿರುವಂತೆ ಈ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ :-

Sl. No.	Toposheet No.	Proposed capacity in MW	Near by Villages of the proposed area and district	Geographical area description of the project
1.	48M/2	10 MW	Tirlapur, Alagavadi, Yamnur Dharwad District.	The proposed area is a ground level plain located on NW-West and SW of Tirlapur. It has presence of Railway track, part of the area is having agricultural activity and it has moderate elevation varying from 600 to 620 mtrs. The area is held in the following Geographical co-ordinates : **Latitude :** 15°30'0"- 15°35'0" N **Longitude :** 75°12'7"- 75°15'0"E **Ridge peaks:** 606, 638, 619 & 626m amsl

2.	48M/15	30 MW	Hirehanchehal; Thimmapura, Haralapura, Kanginchal, Dharwad District	The proposed area is a ground level plain situated on NE and North of Haralapura. The area has presence of Kanehala and railway track and scattered. Further, it has moderate elevation varying from 640 to 660 mtrs. The area is held in the following Geographical co-ordinates : **Latitude :** 15°25'0"- 15°30'0" N **Longitude :** 75°45'0"- 75°15'0"E **Ridge peaks:** 641, 645, 634, 648, 644 & 624m amsl
3.	48M/8	3 MW	Sigli, Shyabal, Hesrur, Ulhatti Dharwad District	The proposed area is situated on SE of Sigali village. It has high raised plateau, consistinf of power line, boulders, stony waste and scattered plantation. The elevation of the area varying from 580 to 600 mtrs. The area is held in the following Geographical co-ordinates : **Latitude :** 15°1'6"- 15°3'57" N **Longitude :** 75°28'20"- 75°30'0"E **Ridge peaks:** 604, 636, 579m amsl
	Total	43 MW		

1. ಸದರಿ ಯೋಜನೆಯನ್ನು financial closure ಸಾಧಿಸಿದ 24 ತಿಂಗಳುಗಳ ಒಳಗಾಗಿ ಪ್ರಾರಂಭ ಮಾಡತಕ್ಕದ್ದು
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳೊಳಗಾಗಿ ಯೋಜನಾಭಿವೃದ್ಧಿದಾರರು ರೂ. 400 ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.
3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೋ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್ ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ	5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ	ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ
➤ 200 ಕಿ. ವ್ಯಾ. ನಿಂದ 300 ಕಿ. ವ್ಯಾ.	18	1
➤ 300 ಕಿ. ವ್ಯಾ. ನಿಂದ 500 ಕಿ. ವ್ಯಾ.	15	1
➤ 500 ಕಿ. ವ್ಯಾ. ನಿಂದ 750 ಕಿ. ವ್ಯಾ.	12	1
➤ 750 ಕಿ. ವ್ಯಾ. ನಿಂದ 1000 ಕಿ. ವ್ಯಾ.	8 ರಿಂದ 10	1

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

8. ಕಾಲ ಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

12. The Company shall note that there is restriction for using 250 KW WTG's

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಎಸ್. ಜಿ. ಸಂಪತ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ

ಪಿ.ಆರ್. 427

ಇಂಧನ ಸಚಿವಾಲಯ

ವಿಷಯ : M/s Regen Powertech Pvt. Ltd. ಇವರಿಗೆ 27.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಬಗ್ಗೆ :-

ಓದಲಾಗಿದೆ :

1) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ : ಕೆಆರ್ಇಡಿ/08/ಆರ್‌ಪಿಟಿಪಿಎಲ್/2008/506, ದಿನಾಂಕ 25/28-3-2008

2) ದಿನಾಂಕ 23-10-2009ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Regen Powertech Pvt. Ltd. ಇವರಿಗೆ ಮೈಸೂರು ಜಿಲ್ಲೆಯಲ್ಲಿ 27.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s Regen Powertech Pvt. Ltd. ಇವರಿಗೆ 27.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರದ ಆದೇಶ ಸಂಖ್ಯೆ : ಇಎನ್ 401 ಎನ್‌ಸಿಇ 2008, ಬೆಂಗಳೂರು, ದಿನಾಂಕ 08-02-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ M/s Regen Powertech Pvt. Ltd. ಇವರಿಗೆ ಮೈಸೂರು ಜಿಲ್ಲೆಯಲ್ಲಿ ಒಟ್ಟು 27.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗೆ ವಿವರಿಸಿರುವಂತೆ ಈ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ :-

Sl. No.	Toposheet No.	Proposed capacity in MW	Near by Villages of the proposed area and district	Geographical area description of the project
1.	48P15 & 57 D/3	27 MW	Channakal Betta, Niluvadi, Sulingi Betta, Chikka Betta, Doddegauenna & Bettadpur Betta Mysore District	The proposed area of the project consists of Four Independent locations 3 of the 4 location are having mostly NS orientation and are non-contiguous ridges and are also having open scrub and dense scrub features and are mostly in forest areas. The other one location is of high plain with no significant orientation. These 4 locations are identified as Area-A, Area-B, Area-C & Area-D. These locations are surrounded by several villages as named in Column (4). Further, the ridge peaks of these 4 locations along with their geographical co-ordinates are detailed as below : **Area A :** **Latitude :** 12°28'0"- 12°30'0" N **Longitude :** 75°58'36"- 76°0'33"E **Ridge peaks:** 943, 1002m amsl **Area B :** **Latitude :** 12°26'44"- 12°28'23" N **Longitude :** 76°1'11"- 76°2'43"E **Ridge peaks:** 1059m Amsl **Area C :** **Latitude :** 12°27'10"- 12°29'4" N **Longitude :** 76°4'43"- 76°5'59"E **Ride peaks:** 916, 974 & 985m Amsl **Area D :** **Latitude :** 12°26'29"- 12°29'43"N **Longitude :** 76°06'23"- 12°7'25"E **Ridge peaks:** 1056, 1336m Amsl

1. ಸದರಿ ಯೋಜನೆಯನ್ನು financial closure ಸಾಧಿಸಿದ 24 ತಿಂಗಳುಗಳ ಒಳಗಾಗಿ ಪ್ರಾರಂಭ ಮಾಡತಕ್ಕದ್ದು

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳೊಳಗಾಗಿ ಯೋಜನಾಭಿವೃದ್ಧಿದಾರರು ರೂ. 400 ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೋ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್

ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ	5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ	ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ
➢ 200 ಕಿ. ವ್ಯಾ. ನಿಂದ 300 ಕಿ. ವ್ಯಾ.	18	1
➢ 300 ಕಿ. ವ್ಯಾ. ನಿಂದ 500 ಕಿ. ವ್ಯಾ.	15	1
➢ 500 ಕಿ. ವ್ಯಾ. ನಿಂದ 750 ಕಿ. ವ್ಯಾ.	12	1
➢ 750 ಕಿ. ವ್ಯಾ. ನಿಂದ 1000 ಕಿ. ವ್ಯಾ.	8 ರಿಂದ 10	1

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.
7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.
8. ಕಾಲ ಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.
9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
11. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಎಸ್. ಜಿ. ಸಂಪತ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 428

ಇಂಧನ ಸಚಿವಾಲಯ

ವಿಷಯ : M/s Chauhan Wind Energy ಇವರಿಗೆ 38.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಬಗ್ಗೆ :-

ಓದಲಾಗಿದೆ : 1) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/08/ಸಿಡಬ್ಲ್ಯುಇ/2009/914, ದಿನಾಂಕ 18/21-2-2009

2) ದಿನಾಂಕ 23-10-2009ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Chauhan Wind Energy ಇವರಿಗೆ ಮೈಸೂರು, ಚಾಮರಾಜನಗರ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಒಟ್ಟು 38.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s Chauhan Wind Energy ಇವರಿಗೆ 38.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರದ ಆದೇಶ ಸಂಖ್ಯೆ : ಇಎನ್ 77 ಎನ್‌ಸಿಇ 2009, ಬೆಂಗಳೂರು, ದಿನಾಂಕ 08-02-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ M/s Chauhan Wind Energy ಇವರಿಗೆ ಮೈಸೂರು, ಚಾಮರಾಜನಗರ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಒಟ್ಟು 38.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗೆ ವಿವರಿಸಿರುವಂತೆ ಈ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ :-

Sl. No.	Toposheet No.	Proposed capacity in MW	Near by Villages of the proposed area and district	Geographical area description of the project
1.	58A/5	5 MW	Kalegaudanahundi, Haleyur, Hegguddlu **Mysore District** Halsur, Mullurbetta, Hosa Heggudlu, Chamalapura **Mysore District**	The proposed area of the project consists of Area-1 and Area-II **Area I :** is an independent hill hock has N-S orientation and described as fairly dense scrub. The area is held in the following Geographical co-ordinates. **Latitude :** $11^0$57'29"- $11^0$58'55" N **Longitude :** $76^0$25'0"- $76^0$25'46"E **Ridge peaks:** 792m Amsl **Area II :** it is a mixture of complex and non complex area, consisting of independent non-contiguous hillocks. The area is held in the following Geographical co-ordinates. **Latitude :** $11^0$57'16"- $12^0$0'0" N **Longitude :** $76^0$26'16"- $76^0$28'7"E **Ridge peaks:** 959 & 738m Amsl
2	57H/4	10MW	Putanibetta, Hebbalarayabetta, Kumbaranagudda, Talahamanagudda, Chamarajnagar District	The proposed area is a open mixed jungle type consisting of no. of independent, non contiguous hillo and have varied orientations. The entire area comes under Beligiriranganabetta Reserve Forest. The area is covered in the following Geographical co-ordinates : **Latitude :** $12^0$0'0"- $12^0$3'6" N **Longitude :** $77^0$5'0"- $77^0$9'28"E **Ridge peaks:** 842, 812, 914, 1017, 1002 & 913m Amsl

3	57H/4	5MW	Karadibetta, Doddagumpubetta Hebbalarayabetta, Arepalya, Chamarajanagar District	The potential area has predominant orientation in NW-SE direction and is described has fairly dense scrub and appears to be complex. The ridges is called as Doddageumpabetta and is located on the East of Maddur village. The area proposed in the following Geographical co-ordinates : **Latitude :** 12°3'4"- 12°5'16" N **Longitude :** 77°5'33"- 77°9'4"E **Ridge peaks:** 732, 853, 890, 781, 896 & 766m Amsl
4	57H/4	5MW	Mudu Malai, Timmarajapura, Kempanapalys, Bestipura, Buditittu Chamarajnagar District	The identified area is a hilly terrain has predominant NS orientation with varied elevation and described as open scrub and the ridge is called as Madumalai. The place is located on the South of Kollegal town at about 5 Kms. The area is held in the following Geographical co-ordinates : **Latitude :** 12°4'27"- 12°7'44" N **Longitude :** 77°5'57"- 77°7'28"E **Ridge peaks:** 909 & 913m Amsl
5	57C/5	13MW	Hosadurga, Honnaenahalli, Marugandanadibba, Chitradurga District	The potential area is located on North and South of Hosadurga Town. It consists of independent non-contiguous ridges & described as open scrub, further it consists of rocky knobs and eucalyptus plantation and boulders. From the topo map, it appears as forest land. The area is held in the following Geographical co-ordinates. **Latitude :** 13°45'0"- 13°51'0" N **Longitude :** 76°15'0"- 76°18'4"E **Ridge peaks:** 1097, 982 & 895m Amsl
	Total	38MW		

1. ಸದರಿ ಯೋಜನೆಯನ್ನು financial closure ಸಾಧಿಸಿದ 24 ತಿಂಗಳುಗಳ ಒಳಗಾಗಿ ಪ್ರಾರಂಭ ಮಾಡತಕ್ಕದ್ದು
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳೊಳಗಾಗಿ ಯೋಜನಾಭಿವೃದ್ಧಿದಾರರು ರೂ. 400 ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.
3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್ ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ	5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ	ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ)
➤ 200 ಕಿ. ವ್ಯಾ. ನಿಂದ 300 ಕಿ. ವ್ಯಾ.	18	1
➤ 300 ಕಿ. ವ್ಯಾ. ನಿಂದ 500 ಕಿ. ವ್ಯಾ.	15	1
➤ 500 ಕಿ. ವ್ಯಾ. ನಿಂದ 750 ಕಿ. ವ್ಯಾ.	12	1
➤ 750 ಕಿ. ವ್ಯಾ. ನಿಂದ 1000 ಕಿ. ವ್ಯಾ.	8 ರಿಂದ 10	1

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

8. ಕಾಲ ಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ. ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಎಸ್. ಜೆ. ಸಂಪತ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ

ಪಿ.ಆರ್. 429

ಇಂಧನ ಸಚಿವಾಲಯ

ವಿಷಯ : ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ 2010-11ರ ಹಣಕಾಸು ವರ್ಷದಲ್ಲಿ ನಾಲ್ಕನೇ ಕಂತಿನ ಸಹಾಯಾನುದಾನ ಬಿಡುಗಡೆ ಕುರಿತು.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ : ಇಎನ್ 39 ಪಿಎಸ್‌ಆರ್ 2009, ದಿನಾಂಕ 08-05-2009

2) ಸರ್ಕಾರಿ ಆದೇಶ ಸಂಖ್ಯೆ : ಇಎನ್ 39 ಪಿಎಸ್‌ಆರ್ 2009, ದಿನಾಂಕ 31-08-2009

3) ಸರ್ಕಾರಿ ಆದೇಶ ಸಂಖ್ಯೆ : ಇಎನ್ 39 ಪಿಎಸ್‌ಆರ್ 2009, ದಿನಾಂಕ 29-12-2009

ಪ್ರಸ್ತಾವನೆ :

1. 2009-10ನೇ ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳು (ಸಂಪುಟ-7) ರಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಸಹಾಯಾನುದಾನ ರೂಪದಲ್ಲಿ ರೂ. 190.00 ಲಕ್ಷಗಳ ಅವಕಾಶವನ್ನು ಕಲ್ಪಿಸಲಾಗಿದೆ.

ಸದರಿ ಸಹಾಯಾನುದಾನವನ್ನು 4 ಕಂತುಗಳಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಬಿಡುಗಡೆ ಮಾಡಲು ಉದ್ದೇಶಿಸಲಾಗಿರುತ್ತದೆ.

2. ಮೇಲೆ ಓದಲಾದ ಕ್ರಮಾಂಕ-1ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ 2009-10ರ ಮೊದಲನೇ ತ್ರೈಮಾಸಿಕ ಅವಧಿಗೆ ಸಹಾಯನುದಾನ 48 ಲಕ್ಷ ರೂ. ಗಳನ್ನು ಬಿಡುಗಡೆ ಮಾಡಲಾಗಿದೆ.
3. ಮೇಲೆ ಓದಲಾದ ಕ್ರಮಾಂಕ-2ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣಕ್ಕೆ ಆಯೋಗಕ್ಕೆ 2009-10ರ ಎರಡನೇ ತ್ರೈಮಾಸಿಕ ಅವಧಿಗೆ ಸಹಾಯಾನುದಾನ 45,63,252/- ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ.
4. ಮೇಲೆ ಓದಲಾದ ಕ್ರಮಾಂಕ-3ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣಕ್ಕೆ ಆಯೋಗಕ್ಕೆ 2009-10ರ ಮೂರನೇ ತ್ರೈಮಾಸಿಕ ಅವಧಿಗೆ ಸಹಾಯಾನುದಾನ 48 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ.
5. ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಸಿಬ್ಬಂದಿ ಮತ್ತು ಸಾಮಾನ್ಯ ವೆಚ್ಚ ಸಲುವಾಗಿ 2009-10ನೇ ಸಾಲಿಗೆ ನಾಲ್ಕನೇ ತ್ರೈಮಾಸಿಕ ಅವಧಿಗೆ ಸಹಾಯಾನುದಾನ ರೂ. 46,00,000/-ನ್ನು ಕರ್ನಾಟಕ ವಿದ್ಯುತ್ ನಿಯಂತ್ರಣಕ್ಕೆ ಆಯೋಗಕ್ಕೆ ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 39 ಪಿಎಸ್‌ಆರ್ 2009, ಬೆಂಗಳೂರು, ದಿನಾಂಕ 08-02-2010

2009-10ನೇ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕ ಅವಧಿಗೆ "2801-80-101-1-07 (Grant-in-aid) (Non Plan) ರಲ್ಲಿ ಸಹಾಯಾನುದಾನ" ಲೆಕ್ಕ ಶೀರ್ಷಿಕೆಯಡಿ ಸಿಬ್ಬಂದಿ ಮತ್ತು ಸಾಮಾನ್ಯ ವೆಚ್ಚ ಸಲುವಾಗಿ ರೂ. 46,00,000/- (ನಲವತ್ತಾರು ಲಕ್ಷ ರೂಪಾಯಿಗಳು ಮಾತ್ರ) ನ್ನು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ ಬಿಡುಗಡೆ ಮಾಡಿದೆ.

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆಯ ಇವರ ಮೇಲು ರುಜುವನ್ನು "Payees Receipt" ನಲ್ಲಿ ಪಡೆದು ಹಣವನ್ನು ಪಡೆಯತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 21 ಟಿಎಫ್‌ಪಿ 2006, ದಿನಾಂಕ 02-09-2006 ಮತ್ತು ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16-05-2008ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
(ಎಸ್. ಜೆ. ಸಂಪತ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 430

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಶ್ರೀ ಡಿ.ಬಿ. ನಾಯಕ್, ಕೆ.ಎ.ಎಸ್. (ಸೂಪರ್ ಟೈಂ ಸ್ಕೇಲ್) ಅಧಿಕಾರಿ ಹಿಂದಿನ ಆಯುಕ್ತರು, ಬೆಳಗಾಂ ನಗರಾಭಿವೃದ್ಧಿ ಪ್ರಾಧಿಕಾರ, ಹಾಲಿ ಅಪರ ಆಯುಕ್ತರು, ಪ್ರಾದೇಶಿಕ ಆಯುಕ್ತರ ಕಛೇರಿ, ಗುಲ್ಬರ್ಗಾ ಇವರ ವಿರುದ್ಧ ಇಲಾಖಾ ವಿಚಾರಣೆ-ಮಂಡನಾಧಿಕಾರಿಯನ್ನು ಬದಲಾಯಿಸಿ ನೇಮಕ ಮಾಡಲು ಪರಿಷ್ಕೃತ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 113/ಕೆಇಪಿ 2007, ದಿನಾಂಕ : 8-12-09.
2) ಆಯುಕ್ತರು, ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರರವರ ಪತ್ರ ಸಂ: ಬೆನಪ್ರಾ/ಸಿಬ್ಬಂದಿ/ಇಲಾಖಾ ವಿಚಾರಣೆ/2009-10, 3620, ದಿನಾಂಕ : 23-12-2009.

ಪ್ರಸ್ತಾವನೆ :

ಶ್ರೀ ಡಿ.ಬಿ. ನಾಯಕ್, ಕೆ.ಎ.ಎಸ್. (ಸೂಪರ್ ಟೈಂ ಸ್ಕೇಲ್) ಅಧಿಕಾರಿ ರವರು, ಬೆಳಗಾಂ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಜೇಷ್ಠತೆಯನ್ನು ಅನುಸರಿಸದೇ ನಿರಾಕ್ಷೇಪಣಾ ಪತ್ರವನ್ನು ನೀಡಿರುವ, ನಿವೇಶನ ಹಂಚಿಕೆದಾರರಿಗೆ ಖರೀದಿ ಪತ್ರ ನೀಡುವಲ್ಲಿ ವಿಳಂಬ ಮಾಡಿರುವ, ನಗರ ಯೋಜನಾ ಸದಸ್ಯರ ತಾಂತ್ರಿಕ ಅಭಿಪ್ರಾಯ ಧಿಕ್ಕರಿಸಿ ಉಪ ವಿಭಜನೆ ಪ್ರಕರಣಗಳನ್ನು ತಿರಸ್ಕರಿಸಿರುವ ಕಟ್ಟಡ ಮುಕ್ತಾಯ ಪ್ರಮಾಣ ಪತ್ರ ನೀಡುವ ಸಂಕಲನ ನಿರ್ವಹಿಸದೇ ಪ್ರಕರಣಗಳನ್ನು ಇತ್ಯರ್ಥಪಡಿಸಿ ವಿಳಂಬ ಎಸಗಿರುವ, ಬಿನ್ ಶೇತ್ಕಿ ಆದೇಶ ನಿರ್ಬಂಧನೆ ಉಲ್ಲಂಘಿಸಿ ತುಂಡತುಂಡಾಗಿ ಏಕ ನಿವೇಶನಕ್ಕೆ ಅನುಮೋದನೆ ನೀಡಿರುವ ಇತ್ಯಾದಿ ಆರೋಪಗಳ ಕುರಿತು ಎಸಗಿರುವ ಕರ್ತವ್ಯ ಲೋಪ ಹಾಗೂ ದುರ್ನಡತೆಗೆ ಸಂಬಂಧ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ : 8-12-09 ರ ಸರ್ಕಾರಿ ಆದೇಶದಲ್ಲಿ ಇವರ ವಿರುದ್ಧದ

ಇಲಾಖಾ ವಿಚಾರಣೆಯಲ್ಲಿ ಶಿಸ್ತು ಪ್ರಾಧಿಕಾರದ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕಾರ್ಯದರ್ಶಿ, ಬೆಳಗಾಂ ನಗರಾಭಿವೃದ್ಧಿ ಪ್ರಾಧಿಕಾರ ಬೆಳಗಾಂ ರವರನ್ನು ಮಂಡನಾಧಿಕಾರಿಯಾಗಿ ನೇಮಿಸಲಾಗಿತ್ತು.

ಆಯುಕ್ತರು, ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ, ಬೆಳಗಾವಿರವರು ಮೇಲೆ ಕ್ರಮ ಸಂ : (2)ರಲ್ಲಿ ಓದಲಾದ ಪತ್ರದಲ್ಲಿ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯದರ್ಶಿ ಹುದ್ದೆಯು ಇರುವುದಿಲ್ಲವಾದ ಕಾರಣ ಈ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಗರ ಯೋಜಕ ಸದಸ್ಯ (ಉಪ ನಿರ್ದೇಶಕರು, ನಗರ ಯೋಜನೆ) ಅಥವಾ ವಿಶೇಷ ಭೂಸ್ವಾಧೀನಾಧಿಕಾರಿ ಹುದ್ದೆಗಳು ಇದ್ದು ಇವರೆಡರಲ್ಲಿ ಒಬ್ಬರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಸೂಕ್ತ ಆದೇಶ ಹೊರಡಿಸುವಂತೆ ಕೋರಿದ್ದಾರೆ. ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ನಗರ ಯೋಜಕ ಸದಸ್ಯ (ಉಪ ನಿರ್ದೇಶಕರು, ನಗರ ಯೋಜನೆ) ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ :

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 113 ಕೆಇವಿ 2007, ಬೆಂಗಳೂರು, ದಿನಾಂಕ : 4ನೇ ಫೆಬ್ರವರಿ, 2010

ಪ್ರಸ್ತಾವನೆಯಲ್ಲಿ ವಿವರಿಸಲ್ಪಟ್ಟ ಕಾರಣಗಳಿಂದಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11 (5)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಡಿ.ಬಿ. ನಾಯಕ್, ಕೆ.ಎ.ಎಸ್. (ಸೂಪರ್ ಟೈಂ ಸ್ಕೇಲ್) ಅಧಿಕಾರಿ ಇವರ ವಿರುದ್ಧ ಮಾಡಲಾದ ಆರೋಪಗಳ ಕುರಿತು ಶಿಸ್ತು ಪ್ರಾಧಿಕಾರದ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಗಳ ಮುಂದೆ ಮಂಡಿಸಲು ನಗರ ಯೋಜಕ ಸದಸ್ಯ (ಉಪ ನಿರ್ದೇಶಕರು ನಗರ ಯೋಜನೆ) ರವರನ್ನು ಮಂಡನಾಧಿಕಾರಿಯನ್ನಾಗಿ ಈ ಮೂಲಕ ನೇಮಿಸಲಾಗಿದೆ. ಮಂಡನಾಧಿಕಾರಿಗಳು ವಿಚಾರಣಾಧಿಕಾರಿಗಳೊಂದಿಗೆ ಸಹಕರಿಸಿ ವಿಚಾರಣಾ ವರದಿಯನ್ನು ಸಲ್ಲಿಸಲು ಕ್ರಮ ಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. ಸಂಖ್ಯೆ :436

(ಹೆಚ್.ಆರ್. ನಾಗೇಂದ್ರ)

ಸರ್ಕಾರದ ಅಧೀನ ಕಾರ್ಯದರ್ಶಿ

ಸಿಆಸುಇ (ಸೇವೆಗಳು-2)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಶ್ರೀ ಬಿ. ಶ್ರೀನಿವಾಸರಾವ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು- ಇವರಿಗೆ ವಿಚಾರಣಾ ವರದಿ ಸಲ್ಲಿಸಿದ್ದಕ್ಕಾಗಿ ಗೌರವ ಧನ ಹಾಗೂ ಪ್ರಯಾಣ ಭತ್ಯೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ :
1) ದಿನಾಂಕ : 29-1-04, ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 067 ಎಸ್ಇಎನ್ 97,
2) ವಿಚಾರಣಾಧಿಕಾರಿಯವರ ವರದಿ ದಿನಾಂಕ : 15-12-08
3) ವಿಚಾರಣಾಧಿಕಾರಿಯವರ ಮನವಿ ದಿನಾಂಕ : 15-12-08.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಎನ್.ಎಂ. ನೀಲಕಂಠ, ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿ ಇವರು ಈ ಹಿಂದೆ ಪುನರ್ವಸತಿ ಅಧಿಕಾರಿ, ಕೃಷ್ಣ ಮೆಲ್ದಂಡೆ ಯೋಜನೆ, ನಾರಾಯಣಪುರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ, ಪರಿಹಾರಧನ ವಿತರಿಸುವಲ್ಲಿ ಪೋಟೋ ಪ್ರತಿಗಳ ಆಧಾರದ ಮೇಲೆ ಸಂತ್ರಸ್ತರಿಗೆ ಮನೆ ಕಟ್ಟಿಕೊಳ್ಳಲು ಪರಿಹಾರ ವಿತರಿಸಿರುವುದು, ಮೃತಪಟ್ಟ ಸಂತ್ರಸ್ಥರ ಅನರ್ಹ ವಾರಸುದಾರರಿಗೆ ಅನುಕಂಪ ಪರಿಹಾರ ಭತ್ಯೆ ವಿತರಿಸಿರುವುದು ಪರಿಹಾರ ವಿತರಿಸಿದ ವಿವರಗಳನ್ನು ಕಛೇರಿಯ ವಹಿಯಲ್ಲಿ ನಮೂದಿಸದಿರುವುದು, ಸಂತ್ರಸ್ಥರೊಬ್ಬರಿಗೆ ಎರಡು ಸಲ ಪರಿಹಾರ ವಿತರಿಸಿರುವುದು, ಎರಡನೇ ಬಾರಿ ವಿತರಿಸಿದ ಮೊತ್ತವನ್ನು ವಾಪಸ್ಸು ಪಡೆದು ಬ್ಯಾಂಕಿಗೆ ಜಮಾ ಮಾಡುವ ಮೂಲಕ ಸರ್ಕಾರಿ ಹಣವನ್ನು ತಾತ್ಕಾಲಿಕವಾಗಿ ದುರುಪಯೋಗ ಮಾಡಿರುವುದು ಸಂತ್ರಸ್ಥರ ಪ್ರವರ್ಗವನ್ನು ನಿಗಧಿಪಡಿಸುವಲ್ಲಿ ಕರ್ತವ್ಯಚ್ಯುತಿ ಎಸಗಿರುವುದು ಸಂತ್ರಸ್ಥರ ಮಕ್ಕಳು ಅನರ್ಹರಾಗಿದ್ದರೂ ಅನುಕಂಪ ಭತ್ಯೆ ಪಾವತಿಸಿರುವುದು, ಮಧ್ಯವರ್ತಿಗಳ ಮೂಲಕ ಪರಿಹಾರ ಚೆಕ್ಕನ್ನು ವಿತರಿಸಿರುವುದು ಇತ್ಯಾದಿಗಳ ಮೂಲಕ ಅಧಿಕಾರ ದುರುಪಯೋಗ ಮತ್ತು ದುರ್ನಡತೆ ಆರೋಪದಲ್ಲಿನ ಸತ್ಯಾಸತ್ಯತೆಯನ್ನು ವಿಚಾರಣೆಯ ಮೂಲಕ ತಿಳಿಯುವ ಸಲುವಾಗಿ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ, 1957 ರ ನಿಯಮ 11 (2) ರಲ್ಲಿ ಪ್ರದತ್ತವಾದ

ಅಧಿಕಾರವನ್ನು ಚಲಾಯಿಸಿ ಆರೋಪದ ಬಗ್ಗೆ ವಿಚಾರಣೆ ನಡೆಸಿ ವರದಿ ಸಲ್ಲಿಸಲು ಶ್ರೀ ಬಿ. ಶ್ರೀನಿವಾಸರಾವ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿನ ಮನವಿಯಲ್ಲಿ ವಿಚಾರಣಾಧಿಕಾರಿಯವರು ಗೌರವ ಧನ ಹಾಗೂ ಪ್ರಯಾಣ ಭತ್ಯೆ ಮಂಜೂರು ಮಾಡುವಂತೆ ಕೋರಿರುತ್ತಾರೆ. ಈ ಸಂಬಂಧ ಇವರಿಗೆ ಗೌರವ ಧನ ಹಾಗೂ ಪ್ರಯಾಣ ಭತ್ಯೆ ಮಂಜೂರು ಮಾಡಬೇಕಾಗಿದೆ. ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 010 ಕೆಇವಿ 07, ಬೆಂಗಳೂರು, ದಿನಾಂಕ : 5ನೇ ಫೆಬ್ರವರಿ, 2010

ಪ್ರಸ್ತಾವನೆಯಲ್ಲಿ ವಿವರಿಸಲ್ಪಟ್ಟ ಕಾರಣಗಳಿಂದಾಗಿ ಸರ್ಕಾರದ ಶ್ರೀ ಬಿ. ಶ್ರೀನಿವಾಸ ರಾವ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರು ಇಲಾಖಾ ವಿಚಾರಣೆ ನಡೆಸಿ ಸಲ್ಲಿಸಿದ ವಿಚಾರಣಾ ವರದಿಯನ್ನು ಭಾಗಶಃ ಅಂಗೀಕರಿಸಿದೆ ಹಾಗೂ ಇದನ್ನು ಸಲ್ಲಿಸಿದ್ದಕ್ಕಾಗಿ ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 003 ಸೇಇವಿ 96, ದಿನಾಂಕ : 24-4-98 ರನ್ವಯ ರೂ. 5000-00 (ಐದು ಸಾವಿರ ರೂಪಾಯಿಗಳು ಮಾತ್ರ) ಗೌರವಧನವನ್ನು ಹಾಗೂ ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 045 ಸೇಇವಿ 01, ದಿನಾಂಕ : 4-3-02 ರನ್ವಯ ರೂ. 1000-00 (ಒಂದು ಸಾವಿರ ರೂಪಾಯಿಗಳು ಮಾತ್ರ)ಗಳ ಪ್ರಯಾಣ ಭತ್ಯೆಯನ್ನು ಶ್ರೀ ಬಿ. ಶ್ರೀನಿವಾಸರಾವ್ ರವರಿಗೆ ಪಾವತಿಸಲು ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ '2052-ಸಚಿವಾಲಯ-ಸಾಮಾನ್ಯ ಸೇವೆಗಳು-090-ಸಚಿವಾಲಯ-01, ಕರ್ನಾಟಕ ಸರ್ಕಾರ ಸಚಿವಾಲಯ-051-ಸಾಮಾನ್ಯ ವೆಚ್ಚಗಳು' ರಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. ಸಂಖ್ಯೆ :437

(ಹೆಚ್.ಆರ್. ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಸೇವೆಗಳು-2)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಶ್ರೀಎಂ.ಎ.ಖಾಲಿದ್, ಕೆ.ಎ.ಎಸ್. (ಆಯ್ಕೆ ಶ್ರೇಣಿ) ಅಧಿಕಾರಿ ಹಿಂದಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಹಾಲಿ ರಿಜಿಸ್ಟ್ರಾರ್ National Institute of Fashion Technology ಇವರ ವಿರುದ್ಧ ಇಲಾಖಾ ವಿಚಾರಣೆ-ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯವರನ್ನು ನೇಮಿಸುವ ಬಗ್ಗೆ.

ಓದಲಾಗಿದೆ : 1) ನೋಟೀಸ್ ಸಂಖ್ಯೆ : ಸಿಆಸುಇ 16 ಕೆಇವಿ 09, ದಿನಾಂಕ : 7-7-2009

2) ಶ್ರೀ ಎಂ.ಎ. ಖಾಲಿದ್, ಕೆ.ಎ.ಎಸ್. (ಆಯ್ಕೆ ಶ್ರೇಣಿ) ಅಧಿಕಾರಿ ಹಿಂದಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ದಿನಾಂಕ : 21-8-09 ರ ಉತ್ತರ

3) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಭಿಪ್ರಾಯ ದಿನಾಂಕ : 2-1-2010

ಪ್ರಸ್ತಾವನೆ :

ಶ್ರೀ ಎಂ.ಎ. ಖಾಲಿದ್, ಕೆ.ಎ.ಎಸ್. (ಆಯ್ಕೆ ಶ್ರೇಣಿ) ಅಧಿಕಾರಿ ರವರು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಬೆಂಗಳೂರಿನ ಅಣ್ಣಿಪುರ ಗ್ರಾಮದ 2 ಎಕರೆ 3 ಗುಂಟೆ ವಕ್ಫ್ ಮಂಡಳಿಯ ಜಾಗವನ್ನು ಖಾಸಗಿಯವರಿಗೆ ಪರಭಾರೆ ಮಾಡಿರುವ ಆರೋಪ, ಬೆಂಗಳೂರು ಮರ್ಕಂಟೈಲ್ ಕೋ-ಆಪರೇಟಿವ್ ಬ್ಯಾಂಕ್‌ನಲ್ಲಿ ಠೇವಣಿ ಇಟ್ಟಿರುವ ವಕ್ಫ್ ಮಂಡಳಿಯ ಹಣವನ್ನು ದುರುಪಯೋಗಪಡಿಸಿಕೊಂಡು ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿ ಕರ್ತವ್ಯ ಎಸಗಿರುಸಿ ಇತ್ಯಾದಿ ಕರ್ತವ್ಯ ಲೋಪ ಹಾಗೂ ದುರ್ನಡತೆಗೆ ಸಂಬಂಧಿಸಿದಂತೆ ಅವರಿಗೆ ಮೇಲೆ ಕ್ರಮ ಸಂ : (1)ರಲ್ಲಿ ಓದಲಾದ ದಿನಾಂಕ : 7-7-09 ರಲ್ಲಿ ನೋಟೀಸನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11 ಮತ್ತು 11-ಎ ರನ್ವಯ ಜಾರಿ ಮಾಡಿ ಸಮಜಾಯಿಷಿ ಕೇಳುವ ಮೂಲಕ ಅವರ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸಲಾಯಿತು. ನೋಟೀಸಿಗೆ ಸದರಿ ಅಧಿಕಾರಿಯು ಮೇಲೆ ಕ್ರಮ ಸಂ (2)ರಲ್ಲಿ ಓದಲಾದ ದಿನಾಂಕ 21-8-2009ರ ಪತ್ರದಲ್ಲಿ ಉತ್ತರ ಸಲ್ಲಿಸಿ ತಮ್ಮ ಮೇಲೆ

ಹೊರಿಸಲಾದ ಆರೋಪಗಳನ್ನು ನಿರಾಕಸಿರುತ್ತಾರೆ. ಸದರಿ ಅಧಿಕಾರಿಗಳು ನೀಡಿದ ಉತ್ತರವನ್ನು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಗೆ ಕಳುಹಿಸಿ ಸೂಕ್ತ ಅಭಿಪ್ರಾಯವನ್ನು ಸ್ಪಷ್ಟೀಕರಣದೊಂದಿಗೆ ನೀಡುವಂತೆ ಕೋರಲಾಗಿತ್ತು. ಅದರಂತೆ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಅಭಿಪ್ರಾಯ ನೀಡಿ ಅಧಿಕಾರಿ ನೀಡಿರುವ ಸಮಜಾಯಿಷಿಯಲ್ಲಿ ಯಾವುದೇ ಸತ್ಯಾಂಶ ಹಾಗೂ ಹುರುಳಿಲ್ಲವೆಂದು ಹಾಗೂ ಬಾಧಿತ ಅಧಿಕಾರಿಯು ಕರ್ನಾಟಕ ರಾಜ್ಯ ವಕ್ಫ್ ಕಾಯ್ದೆಯನ್ನು ಉಲ್ಲಂಘಿಸಿ ಕರ್ತವ್ಯ ಲೋಪ ಹಾಗೂ ದುರ್ನಡತೆ ಎಸಗಿರುವುದಾಗಿ ತಿಳಿಸಿರುತ್ತದೆ. ಆದ್ದರಿಂದ ಅವರ ಮೇಲೆ ಹೊರಿಸಲಾದ ಆರೋಪಗಳಲ್ಲಿನ ಸತ್ಯಾಸತ್ಯತೆಯನ್ನು ವಿಚಾರಣೆ ಮೂಲಕ ತಿಳಿಯುವ ದೃಷ್ಟಿಯಿಂದ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 16 ಕೆಇವಿ 2009, ಬೆಂಗಳೂರು, ದಿನಾಂಕ : 8ನೇ ಫೆಬ್ರವರಿ, 2010

ಪ್ರಸ್ತಾವನೆಯಲ್ಲಿ ವಿವರಿಸಲ್ಪಟ್ಟ ಕಾರಣಗಳಿಂದಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 (2) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಎಂ.ಎ. ಖಾಲಿದ್ ಕೆ.ಎ.ಎಸ್. (ಆಯ್ಕೆ ಶ್ರೇಣಿ) ಅಧಿಕಾರಿ ಹಿಂದಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಹಾಲಿ ರಿಜಿಸ್ಟ್ರಾರ್, National Institute of Fashion Technology ಇವರ ವಿರುದ್ಧ ಮಾಡಲಾದ ಆರೋಪಗಳ ಕುರಿತು ವಿಚಾರಣೆ ನಡೆಸಲು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 (5) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧೀನ ಕಾರ್ಯದರ್ಶಿ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ ರವರನ್ನು ಮಂಡನಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ. ವಿಚಾರಣೆಯನ್ನು ಅತಿ ಶೀಘ್ರವಾಗಿ ಮುಕ್ತಾಯಗೊಳಿಸಿ ವರದಿ ಸಲ್ಲಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. ಸಂಖ್ಯೆ :438

(ಹೆಚ್.ಆರ್. ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಸೇವೆಗಳು-2)

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಕಿಯೋನಿಕ್ಸ್ ವತಿಯಿಂದ ಇ-ವೇಸ್ಟ್, ಗ್ರೀನ್-ಐ.ಟಿ, ಹಾಗೂ ಅನಿಮೇಷನ್ ಅಂಡ್ ಗೇಮಿಂಗ್ ಬಗ್ಗೆ ಸಮಾವೇಶ ನಡೆಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಪ್ರಸ್ತಾವನೆ :

ಕಿಯೋನಿಕ್ಸ್ ವತಿಯಿಂದ ಇ-ವೇಸ್ಟ್, ಗ್ರೀನ್-ಐ.ಟಿ, ಹಾಗೂ ಅನಿಮೇಷನ್ ಅಂಡ್ ಗೇಮಿಂಗ್ ಬಗ್ಗೆ ಮಾರ್ಚ್ ಅಂತ್ಯದ ಒಳಗಾಗಿ State/National Level ಸಮಾವೇಶ ನಡೆಸಲು ನಿರ್ಧರಿಸಲಾಗಿದ್ದು, ಇದಕ್ಕಾಗಿ ಸರ್ಕಾರದ ವತಿಯಿಂದ ರೂ. 20.35 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಮಾತಂಇ 15 ಎಂಐಎಸ್ 2010, ಬೆಂಗಳೂರು, ದಿನಾಂಕ : 15-2-2010

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಕಿಯೋನಿಕ್ಸ್ ವತಿಯಿಂದ ಇ-ವೇಸ್ಟ್, ಗ್ರೀನ್-ಐ.ಟಿ, ಹಾಗೂ ಅನಿಮೇಷನ್ ಅಂಡ್ ಗೇಮಿಂಗ್ ಬಗ್ಗೆ ಮಾರ್ಚ್ ಅಂತ್ಯದ ಒಳಗಾಗಿ State/National Level ಸಮಾವೇಶ ನಡೆಸುವ ಸಲುವಾಗಿ 2009-10ನೇ ಸಾಲಿನ ಲೆಕ್ಕ ಶೀರ್ಷಿಕೆ "3451-00-090-2-01 ಮಾಹಿತಿ ತಂತ್ರಜ್ಞಾನ ಉನ್ನತೀಕರಣ ಮತ್ತು ಅಭಿವೃದ್ಧಿ-059-ಇತರೆ ಖರ್ಚು (ಯೋಜನೆ)" ಇದರಡಿಯಲ್ಲಿ ಒದಗಿಸಿರುವ ಅನುದಾನಗಲ್ಲಿ ರೂ. 20.35 ಲಕ್ಷಗಳನ್ನು (ರೂ. ಇಪ್ಪತ್ತು ಲಕ್ಷದ ಮುವ್ವತ್ತೈದು ಸಾವಿರ ರೂಪಾಯಿಗಳು ಮಾತ್ರ) ಕಿಯೋನಿಕ್ಸ್ ಸಂಸ್ಥೆಗೆ ಪಾವತಿಸಲು ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಇವರಿಗೆ ಬಿಡುಗಡೆ ಮಾಡಲು ಸರ್ಕಾರ ಮಂಜೂರಾತಿ ನೀಡಿದೆ.

ಸದರಿ ಅನುದಾನವನ್ನು ಆಡಳಿತಾಧಿಕಾರಿಗಳು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರು ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರ ಮೇಲು ಸಹಿ ಪಡೆದು ಖಜಾನೆಯಿಂದ ಸದರಿ ಅನುದಾನವನ್ನು ಡ್ರಾ ಮಾಡಿ ವ್ಯವಸ್ಥಾಪಕ ನಿರ್ದೇಶಕರು, ಕೆಬಿಟ್ಸ್ ಇವರಿಗೆ ವಿತರಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ " 3451-00-090-2-01 ಮಾಹಿತಿ ತಂತ್ರಜ್ಞಾನ ಉನ್ನತೀಕರಣ ಮತ್ತು ಅಭಿವೃದ್ಧಿ-059-ಇತರೆ ಖರ್ಚು (ಯೋಜನೆ)" ಅಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಇವರು ಅನುದಾನದ ಬಳಕೆಯ ಬಗ್ಗೆ ವ್ಯವಸ್ಥಾಪಕ ನಿರ್ದೇಶಕರು ಕೆಬಿಟ್ಸ್‌ರವರಿಂದ ಉಪಯೋಗಿತಾ ದೃಢೀಕರಣ ಪತ್ರವನ್ನು ವೆಚ್ಚ ಮಾಡಿದ ಅನುದಾನದ ವಿವರಗಳ ಜೊತೆಗೆ ಪಡೆದು ಈ ಆರ್ಥಿಕ ವರ್ಷದೊಳಗಾಗಿ ಸರ್ಕಾರಕ್ಕೆ ಒದಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 28 ವೆಚ್ಚ-2/2010, ದಿನಾಂಕ 30-1-2010 ಇದರನ್ವಯ ಸಹಮತಿಯನ್ನು ಪರಿಭಾವಿಸಿ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. ಸಂಖ್ಯೆ :439

(ಎಂ.ವಿ. ಕೃಷ್ಣಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : 2009-10ನೇ ಸಾಲಿಗೆ ಕೆಬಿಟ್ಸ್ ಸಂಸ್ಥೆಯ ಆಡಳಿತ ನಿರ್ವಹಣೆಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಓದಲಾಗಿದೆ :
1) ಸರ್ಕಾರಿ ಆದೇಶ ಸಂಖ್ಯೆ : ಮಾತಂಇ 30 ಆಡವಿ 2009, ದಿನಾಂಕ : 12-5-2009
2) ಸರ್ಕಾರಿ ಆದೇಶ ಸಂಖ್ಯೆ : ಮಾತಂಇ 37 ಆಡವಿ 2009, ದಿನಾಂಕ : 30-5-2009
3) ಪ್ರಧಾನ ವ್ಯವಸ್ಥಾಪಕರು, ಕರ್ನಾಟಕ ಜೈವಿಕ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಸೇವೆಗಳು ಇವರ ಪತ್ರ ಸಂಖ್ಯೆ : ಕೆಬಿಟ್ಸ್/ಎಸಿಟಿ/2009-10, ದಿನಾಂಕ : 2-1-2010

ಪ್ರಸ್ತಾವನೆ :

2009-10ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ **"3451-00-090-2-01 ಮಾಹಿತಿ ತಂತ್ರಜ್ಞಾನ-ಉನ್ನತೀಕರಣ ಮತ್ತು ಅಭಿವೃದ್ಧಿ 059 ಇತರೆ ಖರ್ಚು (ಯೋಜನೆ)"** ರಡಿಯಲ್ಲಿ ರೂ. 920.00 ಲಕ್ಷಗಳ ಅನುದಾನವು ಒದಗಣೆಯಾಗಿದ್ದು, ಅದರಲ್ಲಿ ಕರ್ನಾಟಕ ಜೈವಿಕ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಸೇವೆಗಳು (ಕೆಬಿಟ್ಸ್) ಸಂಸ್ಥೆಯ ಆಡಳಿತ ನಿರ್ವಹಣೆಗಾಗಿ ರೂ. 80.00 ಲಕ್ಷ (ರೂ. ಎಂಬತ್ತು ಲಕ್ಷಗಳು ಮಾತ್ರ) ಗಳ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಹಂಚಿಕೆ ಮಾಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ 30-5-2009ರ ಸರ್ಕಾರಿ ಆದೇಶದಲ್ಲಿ ಕೆಬಿಟ್ಸ್ ಸಂಸ್ಥೆಯ ಆಡಳಿತಾತ್ಮಕ ವೆಚ್ಚಕ್ಕಾಗಿ ರೂ. 40.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಪ್ರಧಾನ ವ್ಯವಸ್ಥಾಪಕರು, ಕರ್ನಾಟಕ ಜೈವಿಕ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಸೇವೆಗಳು ಇವರು ಮೇಲೆ (2)ರಲ್ಲಿನ ಪತ್ರದಲ್ಲಿ ದಿನಾಕ 30-11-09ರ ವರೆಗೆ ಈಗಾಗಲೇ ರೂ. 69.91 ಲಕ್ಷಗಳನ್ನು ಖರ್ಚುಮಾಡಿದ್ದು, ವರ್ಷದ ಅಂತ್ಯದವರೆಗೆ ಆಡಳಿತಾತ್ಮಕ ವೆಚ್ಚಕ್ಕಾಗಿ ರೂ. 67.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರೂ. 40.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಮಾತಂಇ 37 ಆಡವಿ 2009 (ಪಿ), ಬೆಂಗಳೂರು, ದಿನಾಂಕ : 11-2-2010

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಕೆಬಿಟ್ಸ್ ಸಂಸ್ಥೆಯ ಆಡಳಿತಾತ್ಮಕ ವೆಚ್ಚಕ್ಕಾಗಿ ರೂ. 40.00 ಲಕ್ಷಗಳನ್ನು (ನಲವತ್ತು ಲಕ್ಷಗಳು ರೂಪಾಯಿಗಳು ಮಾತ್ರ) ಅನುದಾನವನ್ನು 2009-10ನೇ ಸಾಲಿನಲ್ಲಿ ಕರ್ನಾಟಕ ಜೈವಿಕ

ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಸೇವೆಗಳು (ಕೆಬಿಟ್ಸ್) ಸಂಸ್ಥೆಗೆ ನೀಡಲು ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಇವರಿಗೆ ಬಿಡುಗಡೆ ಮಾಡಲು ಸರ್ಕಾರವು ಮಂಜೂರಾತಿ ನೀಡಿದೆ.

ಸದರಿ ಅನುದಾನವನ್ನು ಆಡಳಿತಾಧಿಕಾರಿಗಳು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರು ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶನಾಲಯ ಇವರ ಮೇಲು ಸಹಿ ಪಡೆದು ಖಜಾನೆಯಿಂದ ಸದರಿ ಅನುದಾನವನ್ನು ಡ್ರಾ ಮಾಡಿ ವಿತರಿಸತಕ್ಕದ್ದು.

ಈ ವೆಚ್ಚವನ್ನು 2009-10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ " 3451-00-090-2-01 ಮಾಹಿತಿ ತಂತ್ರಜ್ಞಾನದ ಉನ್ನತೀಕರಣ ಮತ್ತು ಅಭಿವೃದ್ಧಿ-059-ಇತರೆ ವೆಚ್ಚ (ಯೋಜನೆ)" ಇದರ ಅಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಇವರು ಅನುದಾನದ ಬಳಕೆಯ ಬಗ್ಗೆ ಕರ್ನಾಟಕ ಜೈವಿಕ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಸೇವೆಗಳು (ಕೆಬಿಟ್ಸ್) ಸಂಸ್ಥೆಯ ಪ್ರಧಾನ ವ್ಯವಸ್ಥಾಪಕರವರಿಂದ ಉಪಯೋಗಿತಾ ದೃಢೀಕರಣ ಪತ್ರವನ್ನು ವೆಚ್ಚ ಮಾಡಿದ ಅನುದಾನದ ವಿವರಗಳ ಜೊತೆಗೆ ಪಡೆದು ಈ ಆರ್ಥಿಕ ವರ್ಷದೊಳಗಾಗಿ ಸರ್ಕಾರಕ್ಕೆ ಒದಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 28 ವೆಚ್ಚ-2/2010, ದಿನಾಂಕ 30-1-2010 ರನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. ಸಂಖ್ಯೆ :440

(ಎಂ.ವಿ. ಕೃಷ್ಣಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ತಾಲ್ಲೂಕು, ಖಾಜಾಕೋಟನೂರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 27-10-2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009-10/6328.

ಪ್ರಸ್ತಾವನೆ :

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ರವರ ಪತ್ರದಲ್ಲಿ ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ತಾಲ್ಲೂಕು, ಖಾಜಾಕೋಟನೂರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಕರ್ನಾಟಕ ಉಚ್ಚ ನ್ಯಾಯಾಲಯವು ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.7,49,350-00ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 30-06-1994.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 05-10-1996.

1.	312/07	223/07 Item No.1	Suzuki Samurai KA-03-X-6498	905F314531	71905H363374
2.	312/07	223/07 Item No.2	Suzuki Fiero Not Known	M1006F010704	M1006M011677
3.	30/09	09/09	Yamaha RX 100 KA-04-K-7850	ILI0056384	ILI0056384
4.	35/09	10/09 Item No.2	Kinetic Marvel KA-04-S-6741	PG003332	IEPG003341
5.	35/09	10/09 Item No.8	Hero Honda Splender KA-04-ET-1204	01K20F18559	01K18E16384
6.	169/09	39/09	Bajaj Pulsar KA-16-K-5608	DHVBJK12846	DHGBJK12859
7.	364/09	71/09 Item No.1	Honda Activa KL-08-AH-6790	NE4JF082068218161	JF08E8396985
8.	364/09	71/09 Item No.2	CBZ KA-04-X-3434	000C4SC00037	00B40M05193
9.	365/09	72/09 Item No.1	CD-Dawn KA-03-L-7212	04F27F27887	04F27E31939
10.	365/09	72/09 Item No.2	Bajaj Chetak CKK-8546	06C018730	W06E018896
11.	369/09	74/09 Item No.1	Hero Honda Splender+ AP-02-Q-4342	07A16F05668	07A15E25833

Sl. No.	Cr.Misc No.	P.F.No.	Type of Vehicle & Registration No.	Chassis No.	Engine No.
12.	369/09	74/09 Item No.2	Suzuki Samurai Not Known	1101F286787	1101M293396
13.	374/09	75/09	Maruthi 800 Car KA-02-P-6422	SB308IN532311	F8BIN787187
14.	375/09	76/09 Item No.1	Yamaha Crux KA-01-X-9553	05A5KA464088	05A5A464088
15.	375/09	76/09 Item No.2	Hero Honda Passion KA-03-EN-4800	04F09C095866	04F08M09271
16.	474/09	89/09	Bajaj Discovery KA-07-L-2567/TR/08	M02DSJNZZPCK20115	JNGBPK24563
17.	668/09	89/09 Item No.02	TVS XL KA-03-EK-4974	5291500030	E30CK051047
18.	668/09	89/09 Item No.03	TVS Scooty KA-05-EB-855	Not known	JJ99JM310330
19.	670/09	131/09 Item No.01	Kinetic Marvel KA-03-ED-1677	KIFTE059274	060096KIETE
20.	670/09	131/09 Item No.02	Yamaha RX-100 KA-37-E-5788	ILI396916	ILI396916
21.	674/09	133/09 Item No.01	TVS Champ KA-07-H-5892	713F150380	Not known
22.	674/09	133/09 Item No.02	Yamaha RX-100 KL-09-E-5315	IL5179054	IL5179054

XI Addl. Chief Metropolitan Magistrate
PR-448 Court, Mayohall, Bangalore City.

ಕಂದಾಯ ಇಲಾಖೆ

ದಕ್ಷಿಣ ಕನ್ನಡ ಜಿಲ್ಲಾಧಿಕಾರಿಯವರ ಕಾರ್ಯಾಲಯ, ಮಂಗಳೂರು

ಅಧಿಸೂಚನೆ

ಸಂಖ್ಯೆ: ಸಿಇಎನ್:ಸಿಆರ್:5/09-10 (ಎ-8), ದಿನಾಂಕ:11ನೇ ಮಾರ್ಚ್, 2010

ನಿರ್ದೇಶಕರು, ಜನಗಣತಿ ನಿರ್ದೇಶನಾಲಯ, ಬೆಂಗಳೂರು ಇವರು ತಮ್ಮ ಪತ್ರ ಸಂಖ್ಯೆ: ಸಿ ಅಂಡ್ ಟಿ/7/ಒಆರ್‌ಜಿ/2009 ದಿನಾಂಕ:24.02.2010 ರಲ್ಲಿ ಜನಗಣತಿ ಕಾರ್ಯಗಳಲ್ಲಿ ಮಾಸ್ಟರ್ ಟ್ರೈನರ್, ಸೂಪರ್ ವೈಸರ್, ಮತ್ತು ಗಣತಿದಾರರಾಗಿ ಶಿಕ್ಷಣ ಇಲಾಖಾ ಸಿಬ್ಬಂದಿಯನ್ನು ನೇಮಕ ಮಾಡಲಾಗುವುದರಿಂದ ಶಿಕ್ಷಣ ಇಲಾಖೆಯ ಪಾತ್ರವು ನಿಯೋಜನೆ,

ತರಬೇತಿ, ಜನಗಣತಿ ಕೆಲಸದ ಉಸ್ತುವಾರಿಯಲ್ಲಿ ಬಹು ಮುಖ್ಯವಾಗಿರುವುದನ್ನು ಗಮನಿಸಿ, ಶಿಕ್ಷಣ ಇಲಾಖೆಯ ಉಪ ನಿರ್ದೇಶಕರನ್ನು ಸಹಾಯಕ ಜಿಲ್ಲಾ ಸೆನ್ಸಸ್ ಅಧಿಕಾರಿಯಾಗಿ ನೇಮಕ ಮಾಡಿ ಆದೇಶ ಹೊರಡಿಸಲು ಕೋರಿರುತ್ತಾರೆ.

ಅದರಂತೆ. ವಿ ಪೊನ್ನುರಾಜ್, ಐ.ಎ.ಎಸ್. ಜಿಲ್ಲಾಧಿಕಾರಿ ಹಾಗೂ ಪ್ರಧಾನ ಸೆನ್ಸಸ್ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆಯಾದ ನಾನು ಸೆನ್ಸಸ್ ಅಧಿನಿಯಮ, 1948 ರ ಕಲಂ 4ರ ಉಪ ಕಲಂ(2)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸಹಾಯಕ ಜಿಲ್ಲಾ ಜನಗಣತಿ ಅಧಿಕಾರಿಯಾಗಿ ನೇಮಕ ಮಾಡಿ ಆದೇಶಿಸುತ್ತೇನೆ.

ಮಂಗಳೂರು
ದಿನಾಂಕ:11.03.2010
ಪಿ.ಆರ್-453

ಪ್ರಧಾನ ಜನಗಣತಿ ಅಧಿಕಾರಿ ಮತ್ತು ಜಿಲ್ಲಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಕರ್ನಾಟಕ ರಾಜ್ಯ ಚುನಾವಣಾ ಆಯೋಗದ ನಡವಳಿಗಳು

ವಿಷಯ: ಶ್ರೀ ಕೆ. ಕೃಷ್ಣ ಬಿನ್ ಲೇ: ಕಾಳೇಗೌಡ ರವರು ಮಂಡ್ಯ ಜಿಲ್ಲೆ, ಮಳವಳ್ಳಿ ತಾಲ್ಲೂಕು ಪಂಚಾಯತಿ ಉಪ ಚುನಾವಣೆ-2008ರಲ್ಲಿ ಚಿಕ್ಕಮುಲಗೂಡು ತಾಲ್ಲೂಕು ಪಂಚಾಯತಿ ಚುನಾವಣಾ ಕ್ಷೇತ್ರದಿಂದ ಸ್ಪರ್ಧಿಸಿ ಚುನಾವಣಾ ವೆಚ್ಚದ ಲೆಕ್ಕ ವಿವರಗಳನ್ನು ಸಲ್ಲಿಸದಿರುವುದರಿಂದ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 308-ಸಿ ಪ್ರಕಾರ ಅನರ್ಹಗೊಳಿಸುವ ಬಗ್ಗೆ.

ಉಲ್ಲೇಖ:1) ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರ ಪತ್ರ ಸಂಖ್ಯೆ: ಇಎಲ್ಎನ್ (2)145/2008-09, ದಿನಾಂಕ:09.03.2009.

2) ಆಯೋಗದ ನೋಟೀಸು ಸಂಖ್ಯೆ: ರಾಚುಆ/05/ಟಿಜೆಡ್‌ಪಿ/2008(ಪಿ), ದಿನಾಂಕ:30.03.2009.

3) ಜಿಲ್ಲಾಧಿಕಾರಿಗಳು ಮಂಡ್ಯ ಜಿಲ್ಲೆ ರವರ ಪತ್ರ ಸಂಖ್ಯೆ: ಇಎಲ್ಎನ್(2)1/ 2009-10, ದಿನಾಂಕ:29.12.2009.

ಪ್ರಸ್ತಾವನೆ

ಮಂಡ್ಯ ಜಿಲ್ಲೆ, ಮಳವಳ್ಳಿ ತಾಲ್ಲೂಕು ಪಂಚಾಯತಿ ಸದಸ್ಯ ಸ್ಥಾನಕ್ಕೆ ಚಿಕ್ಕಮುಲಗೂಡು ತಾಲ್ಲೂಕು ಪಂಚಾಯತಿ ಚುನಾವಣಾ ಕ್ಷೇತ್ರದಿಂದ ಉಪ ಚುನಾವಣೆ 2008ರಲ್ಲಿ ಸ್ಪರ್ಧಿಸಿದ್ದ (ಪ್ರಪತ್ರ-10ರಂತೆ) ಶ್ರೀ ಕೆ.ಕೃಷ್ಣ ಬಿನ್ ಲೇ: ಕಾಳೇಗೌಡ ರವರು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 308-ಬಿ ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳ ವೆಚ್ಚ ಮಿತಿ) ನಿಯಮಗಳು 2005ರ ನಿಯಮ 2 ಮತ್ತು ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಚುನಾವಣೆಗಳಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ವೆಚ್ಚ ಮಿತಿ) ಆದೇಶ 2005ರ ಖಂಡ 3 ರ ಪ್ರಕಾರ, ಚುನಾವಣಾ ವೆಚ್ಚಗಳ ಲೆಕ್ಕ ಪತ್ರವನ್ನು ನಿಗದಿತ ನಮೂನೆಯಲ್ಲಿ ಚುನಾವಣಾ ಫಲಿತಾಂಶ ಘೋಷಿತವಾದ 30 ದಿನಗಳೊಳಗೆ ಸಲ್ಲಿಸಿರುವುದಿಲ್ಲವೆಂದು ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳು ಉಲ್ಲೇಖ (1)ರ ಪತ್ರದಲ್ಲಿ ವರದಿ ಮಾಡಿರುತ್ತಾರೆ.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 308-ಸಿ ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಚುನಾವಣೆಗಳಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ವೆಚ್ಚ ಮಿತಿ) ಆದೇಶ 2005ರ ಖಂಡ 6ರ ಉಪಖಂಡ 5ರನ್ವಯ ಆಯೋಗದಿಂದ ಉಲ್ಲೇಖ (2)ರಂತೆ ದಿನಾಂಕ:30.03.2009ರ ನೋಟೀಸನ್ನು ಅಭ್ಯರ್ಥಿಗೆ ನೀಡಿ ಅವರನ್ನು ಏಕೆ ಅನರ್ಹಗೊಳಿಸಬಾರದು ಎಂಬುದಕ್ಕೆ ನೋಟೀಸು ತಲುಪಿದ 20 ದಿನಗಳೊಳಗಾಗಿ ರಾಜ್ಯ ಚುನಾವಣಾ ಆಯೋಗಕ್ಕೆ ಕಾರಣಗಳನ್ನು ಸಲ್ಲಿಸತಕ್ಕದೆಂದು ತಿಳಿಸಲಾಗಿತ್ತು.

ಮೇಲ್ಕಂಡ ನೋಟೀಸನ್ನು ಜಾರಿ ಮಾಡಿಸಿ ಜಿಲ್ಲಾಧಿಕಾರಿಗಳು ಜಾರಿಯಾದ ಪ್ರತಿಯನ್ನು ಆಯೋಗಕ್ಕೆ ಕಳುಹಿಸಿರುತ್ತಾರೆ ಆದಾಗ್ಯೂ ಅಭ್ಯರ್ಥಿಯು ಆಯೋಗಕ್ಕೆ ಯಾವುದೇ ಉತ್ತರವನ್ನು ನೀಡಿರುವುದಿಲ್ಲ. ಹಾಗೂ ಉಲ್ಲೇಖ (3)ರ ಜಿಲ್ಲಾಧಿಕಾರಿಗಳ ವರದಿಗಳಲ್ಲಿಯೂ ಸಹ ಸದರಿ ಅಭ್ಯರ್ಥಿಯು ಚುನಾವಣಾ ವೆಚ್ಚದ ಲೆಕ್ಕ ವಿವರಗಳನ್ನು ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ ಅಭ್ಯರ್ಥಿಯು ಚುನಾವಣಾ ವೆಚ್ಚದ ಲೆಕ್ಕ ಪತ್ರಗಳನ್ನು ಸಲ್ಲಿಸದೇ ಇರುವುದಕ್ಕೆ ಸರಿಯಾದ ಕಾರಣ ಅಥವಾ ಸಮರ್ಥನೆಗಳು ಇರುವುದಿಲ್ಲವೆಂದು ದೃಢಪಟ್ಟಿರುತ್ತದೆ. ಕಾರಣ ಈ ಕೆಳಕಂಡಂತೆ ಆದೇಶ.

ಆದೇಶ ಸಂಖ್ಯೆ: ರಾಚುಆ/02/ಟಿಜಡ್‌ಪಿ/2010, ಬೆಂಗಳೂರು, ದಿನಾಂಕ:23ನೇ ಮಾರ್ಚ್, 2010

ಮೇಲೆ ವಿವರಿಸಿರುವಂತೆ ಮಂಡ್ಯ ಜಿಲ್ಲೆ, ಮಳವಳ್ಳಿ ತಾಲ್ಲೂಕು ಪಂಚಾಯತಿ ಸದಸ್ಯ ಸ್ಥಾನಕ್ಕೆ ಚಿಕ್ಕಮುಲಗೂಡು ತಾಲ್ಲೂಕು ಪಂಚಾಯತಿ ಚುನಾವಣಾ ಕ್ಷೇತ್ರದಿಂದ ಉಪ ಚುನಾವಣೆ 2008ರಲ್ಲಿ ಸ್ಪರ್ಧಿಸಿದ್ದ ಶ್ರೀ ಕೆ. ಕೃಷ್ಣ ಬಿನ್ ಲೇ: ಕಾಳೇಗೌಡ ಇವರು, ಚುನಾವಣಾ ವೆಚ್ಚದ ಲೆಕ್ಕ ಪತ್ರಗಳನ್ನು ಸಲ್ಲಿಸದೇ ಇರುವುದಕ್ಕೆ ಸರಿಯಾದ ಕಾರಣ ಅಥವಾ ಸಮರ್ಥನೆ ಇಲ್ಲವೆಂದು ದೃಢಪಟ್ಟಿರುವುದರಿಂದ ರಾಜ್ಯ ಚುನಾವಣಾ ಆಯೋಗವು ಅವರನ್ನು ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1993ರ ಪ್ರಕರಣ 308-ಸಿ ಅನುಸಾರ ಈ ಆದೇಶದ ದಿನಾಂಕದಿಂದ ಆರು ವರ್ಷಗಳ ಅವಧಿಗೆ ಅನರ್ಹರೆಂದು ಘೋಷಿಸಿರುತ್ತದೆ.

ಆಯುಕ್ತರು,

ಪಿ.ಆರ್-449 ರಾಜ್ಯ ಚುನಾವಣಾ ಆಯೋಗ.

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:405/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಅಬಕಾರಿ ಉಪ ನಿರೀಕ್ಷಕರು, ನಂಜನಗೂಡು ವಲಯ		ಸಿದ್ದಪ್ಪ ಬಿನ್ ಲೇಟ್ ಮಲ್ಲಯ್ಯ ದೇವರಸನಹಳ್ಳಿ ಗ್ರಾಮ, ನಂಜನಗೂಡು.

ಪ್ರಕರಣದ ಮುಖ್ಯಾಂಶಗಳು

ದಿನಾಂಕ: 16.02.2009ರಂದು ಸಂಜೆ 4.30 ಗಂಟೆ ಸಮಯದಲ್ಲಿ ಅಬಕಾರಿ ಉಪ ನಿರೀಕ್ಷಕರು, ನಂಜನಗೂಡು ವಲಯ ಇವರು ನಂಜನಗೂಡು ತಾಲ್ಲೂಕು, ಕಸಬಾ ಹೋಬಳಿ, ದೇವರಸನಹಳ್ಳಿ ಗ್ರಾಮದ ಹತ್ತಿರ, ಕೆಎ-05/ಇಎಫ್-2462 ನೋಂದಣಿ ಸಂಖ್ಯೆಯ ಟಿ.ವಿ.ಎಸ್. ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 40 ಲೀ. ಸೇಂದಿಯನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಸೇಂದಿಯನ್ನು ಜಪ್ತುಪಡಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:01/2008-09 ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 13(ಎ) (ಸಿ), 14, 15ರ ರೀತ್ಯಾ, ಕರ್ನಾಟಕ ಅಬಕಾರಿ (ಮರಗಳ ಉತಾರು ಮಾಡುವುದು) ನಿಯಮ 1991ರ ಕಲಂ 22, 23ರ ಪ್ರಕಾರ ಅಪರಾಧವಾಗಿದ್ದು, ಕಲಂ 32, 38(ಎ) ಮತ್ತು 43ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಸಿದ್ದಪ್ಪ ಬಿನ್ ಲೇಟ್ ಮಲ್ಲಯ್ಯ ಎಂಬ ಆರೋಪಿಯನ್ನು ದಸ್ತಗಿರಿ ಮಾಡಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಪ್ರಕರಣದಲ್ಲಿ ಮಾದರಿ ತೆಗೆಯಲಾದ ಮಾದಕ ದ್ರವ್ಯಗಳನ್ನು ಬೆಂಗಳೂರು ಕೇಂದ್ರ ರಾಸಾಯನಿಕ ಪ್ರಯೋಗಾಲಯಕ್ಕೆ ಒಳಪಡಿಸಿ, ವರದಿ ಪಡೆಯಲಾಗಿ ಈಥೈಲ್ ಆಲ್ಕೋಹಾಲ್ ಅಂಶ ಪತ್ತೆಯಾಗಿದ್ದು, ಅವು ಮಾನವನ ಸೇವನೆಗೆ ಯೋಗ್ಯವಾಗಿರುತ್ತವೆಂದು ದಿನಾಂಕ:22.05.2009ರ ರಾಸಾಯನಿಕ ತಜ್ಞರ ವರದಿಯಲ್ಲಿ ದೃಢಪಟ್ಟಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯ ಪ್ರತಿಯನ್ನು ಕೋರಿ, ಬೆಂಗಳೂರು ದಕ್ಷಿಣ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:25.03.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಅಂತೆಯೇ ದಿನಾಂಕ:25.05.2009ರಂದು 'ಬಿ' ವಹಿಯ ಪ್ರತಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ಅದನ್ನು ಪರಿಶೀಲಿಸಲಾಗಿ ಶ್ರೀಮತಿ ಎಸ್. ಕಾತ್ಯಾಯಿನಿ ಕೋಂ ಜಯಸಿಂಹ ಎಸ್. ಸಂ.597/21, 3ನೇ ಕ್ರಾಸ್, 5ನೇ ಮೈನ್, ಗೋಪಾಲಕೃಷ್ಣ ಅಡಿಗ ರಸ್ತೆ, ಹನುಮಂತನಗರ, ಬೆಂಗಳೂರು ಇವರ ಒಡೆತನದಲ್ಲಿರುವುದು ಕಂಡುಬಂದಿರುತ್ತದೆ. ಶ್ರೀಮತಿ ಕಾತ್ಯಾಯಿನಿ ಮತ್ತು ಶ್ರೀ ಸಿದ್ದಪ್ಪ ಬಿನ್ ಲೇಟ್ ಮಲ್ಲಯ್ಯ ಇವರಿಗೆ ಸದರಿಯವರಿಗೆ ಈ ಪ್ರಾಧಿಕಾರದಿಂದ ದಿನಾಂಕ:12.03.2009 ಮತ್ತು 28.05.2009 ರಂದು ಕಲಂ 43(ಬಿ) ರ ಅಡಿಯಲ್ಲಿ ಕಾರಣ ಕೇಳಿ ನೋಟೀಸನ್ನು ನೀಡಲಾಗಿದ್ದು, ಸದರಿ ನೋಟೀಸ್ 15.06.2009ರಂದು ಜಾರಿಯಾಗಿ ಸ್ವೀಕೃತಿ ಈ ಪ್ರಾಧಿಕಾರಕ್ಕೆ ಸ್ವೀಕೃತಗೊಂಡಿರುತ್ತದೆ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:16.02.2009ರಂದು ನಂಜನಗೂಡು ತಾಲ್ಲೂಕು, ಕಸಬಾ ಹೋಬಳಿ, ದೇವರಸನಹಳ್ಳಿ ಗ್ರಾಮದ ಹತ್ತಿರ, ಕೆಎ-05/ಇಎಫ್-2462 ನೋಂದಣಿ ಸಂಖ್ಯೆಯ ಟಿ.ವಿ.ಎಸ್. ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 40 ಲೀ. ಸೇಂದಿಯನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದದ್ದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 38(ಎ) 43ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು ಹಾಗೂ ವಾಹನ ಮಾಲೀಕರಾದ ಶ್ರೀಮತಿ ಕಾತ್ಯಾಯಿನಿ ರವರಿಗೆ ಕಲಂ 43(ಬಿ)ರ ಅಡಿಯಲ್ಲಿ ನೋಟೀಸ್ ನೀಡಲಾಗಿದ್ದರೂ ಸಹ ಈ ಬಗ್ಗೆ

ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯ ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (7) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಫ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೇ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:405/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ನಿರೀಕ್ಷಕರು, ನಂಜನಗೂಡು ವಲಯ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:01/2008-09, ದಿನಾಂಕ:16.02.2009ರಂದು ವಶಪಡಿಸಿಕೊಂಡ ಕೆಎ-05/ಇಎಫ್-2462 ನೋಂದಣಿ ಸಂಖ್ಯೆಯ ಟಿ.ವಿ.ಎಸ್.ಎಕ್ಸೆಲ್ ವಾಹನವನ್ನು (40 ಲೀ. ಸೇಂದಿಯನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್-1227

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್:435(ಪೊಲೀಸ್)/2008-09, ದಿನಾಂಕ:24ನೇ ಸೆಪ್ಟೆಂಬರ್, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು ತಾ:		ಚಂದ್ರ ಮತ್ತು ಇತರರು, ನಂಜನಗೂಡು.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:05.02.2009ರಂದು ಬೆಳಿಗ್ಗೆ 8.30 ಗಂಟೆ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ ಇವರು ನಂಜನಗೂಡು ತಾಲ್ಲೂಕು, ನಂಜನಗೂಡು-ಗುಂಡ್ಲುಪೇಟೆ ರಸ್ತೆ, ವಡ್ಡರಪಾಳ್ಯ ಗೇಟ್ ಬಳಿ ಕೆಎ-02/ಯು-3015 'ನೋಂದಣಿ ಸಂಖ್ಯೆಯ ಸುಜುಕಿ ಸಮುರಾಯ್ ವಾಹನದಲ್ಲಿ ಅಕ್ರಮವಾಗಿ 5.400 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ, ಚಂದನ್ ಮತ್ತು ಬಸವನಾಯ್ಕ ಬಿನ್ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ:35/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 14, 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು

ಮುಂದಿನ ಕ್ರಮಕ್ಕೆ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:15.02.2009ರಂದು ಈ ಪ್ರಾಧಿಕಾರದ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:19.02.2009ರಂದು ನಂಜನಗೂಡು ವಲಯದ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರಿನ ಪಶ್ಚಿಮ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:18.03.2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಅಂತೆಯೇ ದಿನಾಂಕ:06.04.2009ರಂದು 'ಬಿ' ವಹಿಯ ಪ್ರತಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ಅದನ್ನು ಪರಿಶೀಲಿಸಲಾಗಿ ರವಿಶಂಕರ್ ಜಿ. ಬಿನ್ ದೊಡ್ಡಸ್ವಾಮಿಗೌಡ, ಸಂ.8, ಸುಬ್ಬಣ್ಣ ಗಾರ್ಡನ್, ವಿಜಯನಗರ, ಬೆಂಗಳೂರು ಇವರ ಒಡೆತನದಲ್ಲಿರುವುದು ಕಂಡು ಬಂದಿರುತ್ತದೆ. ಸದರಿಯವರಿಗೆ ಈ ಪ್ರಾಧಿಕಾರದಿಂದ ದಿನಾಂಕ:14.05.2009ರಂದು ಕಲಂ 43(ಬಿ) ರ ಅಡಿಯಲ್ಲಿ ಕಾರಣ ಕೇಳಿ ನೋಟೀಸನ್ನು ನೀಡಲಾಗಿದ್ದು ಸದರಿ ನೋಟೀಸ್ 06.06.2009ರಂದು ಜಾರಿಯಾಗಿ ಸ್ವೀಕೃತಿಯು ಈ ಪ್ರಾಧಿಕಾರಕ್ಕೆ ಸ್ವೀಕೃತಗೊಂಡಿರುತ್ತದೆ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:05.02.2009ರಂದು ನಂಜನಗೂಡು ತಾಲ್ಲೂಕು, ನಂಜನಗೂಡು–ಗುಂಡ್ಲುಪೇಟೆ ರಸ್ತೆ, ವಡ್ಡರಪಾಳ್ಯ ಗೇಟ್ ಬಳಿ ಕೆಎ–02/ಯು–3015 ನೋಂದಣಿ ಸಂಖ್ಯೆಯ ಸುಜುಕಿ ಸಮುರಾಯ್ ವಾಹನದಲ್ಲಿ ಅಕ್ರಮವಾಗಿ 5.400 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (7) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್:435/2008–09, ದಿನಾಂಕ:24ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ, ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ:35/2009, ದಿನಾಂಕ:05.02.2009ರಂದು ವಶಪಡಿಸಿಕೊಂಡ ಕೆಎ–02/ಯು–3015 ನೋಂದಣಿ ಸಂಖ್ಯೆಯ ಸುಜುಕಿ ಸಮುರಾಯ್ ವಾಹನವನ್ನು (5.400 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟೆಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು)

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಗೆ ಬರುವುದು.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಜ್
ಹಾಗೂ ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್–1213

ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಕಾವೇರಿ ಭವನ, ಬೆಂಗಳೂರು

ಭೂ ಸ್ವಾಧೀನ ಕಾಯ್ದೆ ಕಲಂ 4(1) ಅಧಿಸೂಚನೆ

ಕ್ರಮಾಂಕ ಭೂ ಕಗೃಮಂ/ಭೂ.ಸ್ವಾ.ವಿ/130/09-10, ದಿನಾಂಕ:24ನೇ ಮಾರ್ಚ್, 2010

ಈ ಅಧಿಸೂಚನೆಯಲ್ಲಿ ನಮೂದಿಸಿರುವ ಜಮೀನುಗಳು ಸಾರ್ವಜನಿಕ ಉದ್ದೇಶಕ್ಕೆ ಅಂದರೆ ಗೃಹ ಮಂಡಳಿಯ ಯೋಜನೆಗೆ ಬೇಕಾಗುವುದೆಂದು ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಕಾವೇರಿ ಭವನ, ಬೆಂಗಳೂರು ರವರಿಗೆ ಕಂಡುಬಂದಿದೆ.

1991ನೇ ಸಾಲಿನ ಕರ್ನಾಟಕ ಭೂಸ್ವಾಧೀನ ಅಧಿನಿಯಮ 33ರಲ್ಲಿ ತಿದ್ದುಪಡಿಯಾದ 1894 ನೇ ಸಾಲಿನ ಭೂಸ್ವಾಧೀನ ಅಧಿನಿಯಮ 4(2)ನೆಯ ಪ್ರಕರಣದಲ್ಲಿ ವಿಹಿತವಾದ ಅಧಿಕಾರವನ್ನು ಉಪಯೋಗಿಸಲು ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಕಾವೇರಿ ಭವನ, ಬೆಂಗಳೂರು ಇವರಿಗೆ ಮತ್ತು ಸಿಬ್ಬಂದಿ ವರ್ಗದವರಿಗೆ ಅಧಿಕಾರ ನೀಡಿರುತ್ತದೆ.

ಸದರಿ ಜಮೀನಿನಲ್ಲಿ ಆಸಕ್ತಿಯುಳ್ಳ ಯಾವೊಬ್ಬ ವ್ಯಕ್ತಿಯೂ ಭೂಸ್ವಾಧೀನದ ಬಗ್ಗೆ ಆಕ್ಷೇಪಣೆಗಳನ್ನು ಮಾಡುವುದಿದ್ದಲ್ಲಿ, ಅಂತಹ ಆಕ್ಷೇಪಣೆಗಳನ್ನು ಈ ಅಧಿಸೂಚನೆಯು ಪ್ರಕಟಗೊಂಡ ತಾರೀಖಿನಿಂದ 30 ದಿನಗಳೊಳಗಾಗಿ 1991ನೇ ಇಸವಿ ಕರ್ನಾಟಕ ಭೂಸ್ವಾಧೀನ ಅಧಿನಿಯಮ ಕಾಯ್ದೆ 33ರಲ್ಲಿ ತಿದ್ದುಪಡಿಯಾದ 1894ನೇ ಸಾಲಿನ ಭೂ ಸಂಗ್ರಹಣ ಅಧಿನಿಯಮದ 3(ಸಿ)ರ ಪ್ರಕರಣದ ಮೇರೆಗೆ ಗೃಹ ಆಯುಕ್ತರು ಪ್ರಶಾಸನ ಕಾರ್ಯಗಳನ್ನು ನಿರ್ವಹಿಸಲು, ನೇಮಕ ಮಾಡಲಾದ ವಿಶೇಷ ಭೂ ಸ್ವಾಧೀನಾಧಿಕಾರಿಗಳು, ಕರ್ನಾಟಕ ಗೃಹ ಮಂಡಳಿ, ಕಾವೇರಿ ಭವನ, ಬೆಂಗಳೂರುರವರಿಗೆ ಲಿಖಿತ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಸದರಿ ಜಮೀನಿನ ಅಧಿಕೃತ ಸಂಗ್ರಹಣೆಗಾಗಿ ನಿಯೋಜಿಸಲ್ಪಟ್ಟ ಯಾವೊಬ್ಬ ಮೋಜಣಿದಾರರು ಅಥವಾ ಬೇರೆ ಯಾವುದೇ ಅಧಿಕಾರಿಗೆ ಅಡಚಣೆಯನ್ನುಂಟು ಮಾಡುವುದಾಗಲೀ ಅಥವಾ ಅತಿಕ್ರಮಿಸುವುದಾಗಲೀ ಮಾಡಬಾರದೆಂದು ಸದರಿ ಜಮೀನಿನಲ್ಲಿ ಆಸಕ್ತಿಯುಳ್ಳ ಎಲ್ಲರಿಗೂ ಈ ಮೂಲಕ ಎಚ್ಚರಿಕೆ ಕೊಡಲಾಗಿದೆ. ಸದರಿ ಜಮೀನಿನ ವಿಲೇವಾರಿಗಾಗಿ ಮಾರಾಟ ಗುತ್ತಿಗೆ, ಅಡಮಾನ, ಹಸ್ತಾಂತರ, ವಿನಿಮಯ ಇನ್ನಾವುದೇ ರೀತಿಯ ಒಪ್ಪಂದಗಳನ್ನು ಅಥವಾ ಯಾವೊಂದು ವೆಚ್ಚ ಯಾ ಅಭಿವೃದ್ಧಿಗಳನ್ನು ಈ ಅಧಿಸೂಚನೆ ಪ್ರಕಟವಾದ ನಂತರ ಗೃಹ ಆಯುಕ್ತರವರ ಮಂಜೂರಾತಿಯನ್ನು ಪಡೆಯದೆ ಮಾಡಿದ ಪಕ್ಷದಲ್ಲಿ ಅಂತಿಮವಾಗಿ ಅಧಿಕೃತ ಸಂಗ್ರಹಣ ಮಾಡಲಾಗುವ ಸದರಿ ಜಮೀನಿನ ಅಂತಹ ಭೂ ಪರಭಾರೆಯ ಪರಿಹಾರವನ್ನು ನಿರ್ಧರಿಸುವ ಅಧಿಕಾರಿಯಿಂದ ಸದರಿ ಅಧಿನಿಯಮ 24ನೇ ಪ್ರಕರಣ ಮೇರೆಗೆ ಉಪೇಕ್ಷಿಸಲಾಗುವುದು.

ಸದರಿ ಜಮೀನಿನ ಒಂದು ನಕ್ಷೆಯನ್ನು ವಿಶೇಷ ಭೂಸ್ವಾಧೀನ ಅಧಿಕಾರಿಗಳು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ಇವರ ಕಾರ್ಯಾಲಯದಲ್ಲಿ ಪರಿಶೀಲನೆಗಾಗಿ ಇಡಲಾಗಿದೆ.

ಪರಿಶಿಷ್ಟ

ಜಿಲ್ಲೆ: ಮೈಸೂರು ತಾಲ್ಲೂಕು: ಪಿರಿಯಾಪಟ್ಟಣ ಹೋಬಳಿ: ಹಾರನಹಳ್ಳಿ ಗ್ರಾಮ: ಕೊಪ್ಪ

ಕ್ರ. ಸಂ.	ಖಾತೆದಾರರ ಹೆಸರು	ಅನುಭವದಾರರ ಹೆಸರು	ಸರ್ವೆ ನಂ.	ತರಹೆ	ಚಕ್ಕುಬಂದಿ				ಒಟ್ಟು ವಿಸ್ತೀರ್ಣ	ಆಕಾರ ರೂ. ಪೈ.
					ಪೂರ್ವ ಸ.ನಂ.	ಪಶ್ಚಿಮ ಸ.ನಂ.	ಉತ್ತರ ಸ.ನಂ.	ದಕ್ಷಿಣ ಸ.ನಂ.		
1	2	3	4	5	6	7	8	9	10	11
1.	ಎಂ.ಪಿ. ಮುತ್ತಣ್ಣ	ಎಂ.ಪಿ. ಮುತ್ತಣ್ಣ	29	ಖುಷ್ಕಿ	30	28	27	32	6-13	10.57
	ಕೆ. ನಿರ್ಮಲ ಕುಶಾಲಪ್ಪ ಕೋಂ ಕೆ.ಸಿ. ಕುಶಾಲಪ್ಪ	ಕೆ.ನಿರ್ಮಲ ಕುಶಾಲಪ್ಪ ಕೋಂ ಕೆ.ಸಿ. ಕುಶಾಲಪ್ಪ							0-05 6-18	

ಕ್ರ. ಸಂ.	ಖಾತೆದಾರರ ಹೆಸರು	ಅನುಭವದಾರರ ಹೆಸರು	ಸರ್ವೆ ನಂ.	ತರಹೆ	ಚಕ್ಕುಬಂದಿ				ಒಟ್ಟು ವಿಸ್ತೀರ್ಣ	ಆಕಾರ ರೂ. ಪೈ.
					ಪೂರ್ವ ಸ.ನಂ.	ಪಶ್ಚಿಮ ಸ.ನಂ.	ಉತ್ತರ ಸ.ನಂ.	ದಕ್ಷಿಣ ಸ.ನಂ.		
1	2	3	4	5	6	7	8	9	10	11
2.	ಎಂ.ಪಿ. ಮುತ್ತಣ್ಣ	ಎಂ.ಪಿ. ಮುತ್ತಣ್ಣ	31/1	ಖುಷ್ಕಿ	30	29	30	32	4–26	7.43
3.	ಎಂ.ಪಿ. ಬೋಪಯ್ಯ	ಎಂ.ಪಿ. ಬೋಪಯ್ಯ	31/2	ಖುಷ್ಕಿ	30	31/1	30	33	3–09	5.23
4.	ಎಂ.ಪಿ. ಮುತ್ತಣ್ಣ	ಎಂ.ಪಿ. ಮುತ್ತಣ್ಣ	32/1	ಖುಷ್ಕಿ	31	28	29	41	7–37	12.08
5.	ವಾಣಿ ಬೋಪಯ್ಯ ಕೋಂ ಎಂ.ಪಿ. ಬೋಪಯ್ಯ	ವಾಣಿ ಬೋಪಯ್ಯ	32/2	ಖುಷ್ಕಿ	33	32/1	31	41	4–02	6.12
6.	ವಾಣಿ ಬೋಪಯ್ಯ ಕೋಂ ಎಂ.ಪಿ.ಬೋಪಯ್ಯ	ವಾಣಿ ಬೋಪಯ್ಯ	33/1	ಖುಷ್ಕಿ	ಊರಗಡಿ	32	31, 30	ರಸ್ತೆ	6–20	11.10
7.	ವಾಣಿ ಬೋಪಯ್ಯ ಕೋಂ ಎಂ.ಪಿ.ಬೋಪಯ್ಯ	ವಾಣಿ ಬೋಪಯ್ಯ	33/2	ಖುಷ್ಕಿ	ಊರಗಡಿ	32	31,30	ರಸ್ತೆ	1–20	2.65
8.	ಎಂ.ಪಿ. ಮುತ್ತಣ್ಣ	ಎಂ.ಪಿ. ಮುತ್ತಣ್ಣ	41	ಖುಷ್ಕಿ	32	42	32	ರಸ್ತೆ	0–36	1.29

ಘೋಪ್ವಾರೆ

ಗ್ರಾಮ: ಕೊಪ್ಪ

ತರಹೆ	ವಿಸ್ತೀರ್ಣ ಎ–ಗುಂ
ಖುಷ್ಕಿ	35–08
ಖರಾಬ್	– –
ಒಟ್ಟು	**35–08**

ಗೃಹ ಆಯುಕ್ತರು,
ಕರ್ನಾಟಕ ಗೃಹ ಮಂಡಳಿ, ಬೆಂಗಳೂರು.

ಪಿ.ಡಿ.57

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೧, ೨೦೧೦ (ಚೈತ್ರ ೧೧, ಶಕ ವರ್ಷ ೧೯೩೨)	ಸಂಚಿಕೆ ೧೩

ಭಾಗ – ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಒ 3 ಸಿಎಸ್‌ಎಸ್ 2010, ಬೆಂಗಳೂರು, ದಿನಾಂಕ: 5ನೇ ಮಾರ್ಚ್, 2010

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ 11)ರ ಪ್ರಕರಣ 29ರ ಉಪ ಪ್ರಕರಣ (1) ರ ಮೇರೆಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ವ್ಯಕ್ತಿಗಳನ್ನು ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನ ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ ನಿ., ಮೂಡಿಗೆರೆ ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ನಾಮನಿರ್ದೇಶನ ಮಾಡುತ್ತದೆ. ಹೀಗೆ ನಾಮನಿರ್ದೇಶನಗೊಂಡ ಸದಸ್ಯರ ಪದಾವಧಿಯು ಚುನಾಯಿತ ಸಮಿತಿಯ ಪದಾವಧಿಯು ಮುಕ್ತಾಯವಾಗುವವರೆಗೆ ಅಥವಾ ಸರ್ಕಾರದ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಜಾರಿಯಲ್ಲಿರುತ್ತದೆ.

1. ಶ್ರೀ ಹೆಚ್.ಬಿ. ಶಿವಣ್ಣ ಬಿನ್ ಬೈರೇಗೌಡ ಹೆಚ್.ಜಿ. ಹಳಸೆ ಎಸ್ಟೇಟ್, ಹಳಸೆ ಅಂಚೆ, ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
2. ಶ್ರೀ ಶಂಕರ ಬಿನ್ ಕಾಳಯ್ಯ, ಹೊರಟ್ಟೆ ಜಕಲಿ ಅಂಚೆ, ಮೂಡಿಗೆರೆ ತಾಲ್ಲೂಕು ಚಿಕ್ಕಮಗಳೂರು ಜಿಲ್ಲೆ
3. ಶ್ರೀಮತಿ ಸರೋಜ ಗಂಡ ಸುಬ್ರಮಣ್ಯ, ತರುವೆ ಕೊಟ್ಟಗೆಹಾರ, ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 173

ಆರ್.ಎಸ್. ಹುಚ್ಚಾಚಾರಿ

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ

ಸಹಕಾರ ಇಲಾಖೆ

ಅಧಿಸೂಚನೆ

ಸಂಖ್ಯೆ: ಸಿಒ 4 ಸಿಎಸ್‌ಎಸ್ 2010, ಬೆಂಗಳೂರು, ದಿನಾಂಕ: 5ನೇ ಮಾರ್ಚ್, 2010

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ 11)ರ ಪ್ರಕರಣ 29ರ ಉಪ ಪ್ರಕರಣ (1) ರ ಮೇರೆಗೆ ದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ವ್ಯಕ್ತಿಗಳನ್ನು ಕಲ್ಬುರ್ಗಿ ಜಿಲ್ಲೆ ಮತ್ತು ತಾಲ್ಲೂಕಿನ ಕೃಷಿ ಉತ್ಪನ್ನ ಮಾರಾಟ ಸಹಕಾರ ಸಂಘ ನಿ. ಕಲ್ಬುರ್ಗಿ ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ನಾಮನಿರ್ದೇಶನ ಮಾಡುತ್ತದೆ. ಹೀಗೆ ನಾಮನಿರ್ದೇಶನಗೊಂಡ ಸದಸ್ಯರ ಪದಾವಧಿಯು ಚುನಾಯಿತ ಸಮಿತಿಯ ಪದಾವಧಿಯು ಮುಕ್ತಾಯವಾಗುವವರೆಗೆ ಅಥವಾ ಸರ್ಕಾರದ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಜಾರಿಯಲ್ಲಿರುತ್ತದೆ.

1. ಶ್ರೀ ಕೌಡಪ್ಪ ಸುಭಾಷ್ ಪಾಟೀಲ್, ಬಬಲಾದ್ ಗ್ರಾಮ, ಕಲ್ಬುರ್ಗಿ ತಾಲ್ಲೂಕು ಮತ್ತು ಜಿಲ್ಲೆ
2. ಶ್ರೀಮತಿ ಶಿವಕಾಂತಮ್ಮ ಕೋಂ ಹೊನ್ನಪ್ಪ, ನಾಗನಹಳ್ಳಿ, ಕಲ್ಬುರ್ಗಿ ತಾಲ್ಲೂಕು ಮತ್ತು ಜಿಲ್ಲೆ
3. ಶ್ರೀ ಪ್ರಭು ವಿಠಲ್ ಸಿಲ್ಡ್ ನಾಗನಹಳ್ಳಿ ಗ್ರಾಮ, ಕಲ್ಬುರ್ಗಿ ತಾಲ್ಲೂಕು ಮತ್ತು ಜಿಲ್ಲೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 174

ಆರ್.ಎಸ್. ಹುಚ್ಚಾಚಾರಿ
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಸಹಕಾರ ಇಲಾಖೆ

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಒಇ 432 ಪಿಎಂಎಸ್ 2008, ಬೆಂಗಳೂರು, ದಿನಾಂಕ: 6ನೇ ಮಾರ್ಚ್, 2010

1872ರ ಇಂಡಿಯನ್ ಕ್ರಿಶ್ಚಿಯನ್ ಮ್ಯಾರೇಜ್ ಕಾಯಿದೆಯ 9ನೇ ಕಲಂನಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಇಂಡಿಯನ್ ಕ್ರಿಶ್ಚಿಯನ್ ಮ್ಯಾರೇಜ್ (ಕರ್ನಾಟಕ) ನಿಯಮಗಳು 1961 ರಂತೆ ಕಾರ್ಯನಿರ್ವಹಿಸಲು ಪಾಸ್ಟರ್ ಜೆ. ಯೋಹಾನನ್, ಇಂಟರ್ ನ್ಯಾಷನಲ್ ಡಿವೈನ್ ಲವ್ ಮಿನಿಸ್ಟ್ರೀಸ್, ನಂ 139, 3ನೇ ಕ್ರಾಸ್, ಮುನಿನಂಜಪ್ಪ, ಗಾರ್ಡನ್, ಕೆ.ಬಿ. ಸಂದ್ರ, ಆರ್.ಟಿ. ನಗರ ಅಂಚೆ, ಬೆಂಗಳೂರು-560032 ಇವರಿಗೆ ಮೇಲಿನ ಕಾಯ್ದೆಯಡಿಯಲ್ಲಿ ಬೆಂಗಳೂರು ಜಿಲ್ಲೆ ಆಡಳಿತ ವ್ಯಾಪ್ತಿಗೆ ಮಾತ್ರ ಸೀಮಿತಗೊಳಿಸಿ, ವಿವಾಹ ವಿಧಿಯನ್ನು ನೆರವೇರಿಸಲು ಸದರಿ ಕಾಯ್ದೆಯಡಿಯಲ್ಲಿ ಸೂಚಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿಗೊಳಪಟ್ಟು ಅನುಮತಿಯನ್ನು ಈ ಮೂಲಕ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 175

ಆಲಿಸ್ ಗೊನ್ಸಾಲ್ವಿಸ್
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ
(ರಹದಾರಿ ಮತ್ತು ವಿದೇಶಿಯರು)

ಕಂದಾಯ ಸಚಿವಾಲಯ

ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಕಂಇ 60 ಎಲ್‌ಆರ್‌ಎಂ 2009, ಬೆಂಗಳೂರು, ದಿನಾಂಕ: 11ನೇ ಫೆಬ್ರವರಿ, 2010

ಬಸವಕಲ್ಯಾಣ ಎಜುಕೇಷನ್ ಟ್ರಸ್ಟ್, ಬಸವಕಲ್ಯಾಣ, ಬೀದರ್ ಜಿಲ್ಲೆ, ಇವರಿಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರಲ್ಲಿ ಬಸವಕಲ್ಯಾಣ ತಾಲ್ಲೂಕಿನ ನಾರಾಯಣಪುರ ಗ್ರಾಮದ ವಿವಿಧ ಸರ್ವೆ ನಂಬರುಗಳಲ್ಲಿ ಶೈಕ್ಷಣಿಕ ಉದ್ದೇಶಕ್ಕಾಗಿ ಜಮೀನು ಖರೀದಿಸಲು ಅನುಮತಿ ನೀಡಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 29 ಎಲ್‌ಆರ್‌ಎಂ 1999 ದಿನಾಂಕ:26.3.1999 ರಲ್ಲಿಯ 3ನೇ ಸಾಲಿನಲ್ಲಿ "473/ಕ ರಲ್ಲಿ 4 ಎಕರೆ" ಎಂಬುದರ ಬದಲಾಗಿ "472/1ರಲ್ಲಿ 3 ಎಕರೆ 18 ಗುಂಟೆ" ಎಂದು ತಿದ್ದಿಕೊಂಡು ಓದಿಕೊಳ್ಳತಕ್ಕದ್ದು ಹಾಗೂ ಉದ್ದೇಶ ಪೂರೈಸಿಕೊಳ್ಳಲು ಕಾಲಾವಕಾಶವನ್ನು ಕೂಡ ವಿಸ್ತರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 176

ಟಿ.ಎನ್. ನಾರಾಯಣ ಗೌಡ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂ ಸುಧಾರಣೆ)

ಅಧಿಸೂಚನೆ

ಸಂಖ್ಯೆ:ಕಂಇ 81 ಎಲ್ಆರ್ಎಂ 2009, ಬೆಂಗಳೂರು, ದಿನಾಂಕ:03ನೇ ಮಾರ್ಚ್, 2010.

ಮೈಸೂರು ವಿಶ್ವವಿದ್ಯಾಲಯ ಉದ್ಯೋಗಿಗಳ ಗೃಹ ನಿರ್ಮಾಣ ಸಹಕಾರ ಸಂಘ (ನಿ), ಮೈಸೂರು, ರವರು ಮೈಸೂರು ತಾಲ್ಲೂಕು, ದಟ್ಟಗಳ್ಳಿ, ಗ್ರಾಮದ ಸರ್ವೆ ನಂ.88/2 ಹಾಗೂ ಇತರೆಗಳಲ್ಲಿ 2 ಎಕರೆ 16 ಗುಂಟೆ ಜಮೀನನ್ನು ಖರೀದಿಸಿದ್ದು ಈ ಬಗ್ಗೆ ನಮೂನೆ 15-ಎ ಮತ್ತು ನಮೂನೆ 15-ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಇವರ ಪತ್ರ ಸಂಖ್ಯೆ:ಎಲ್ಆರ್ಎಫ್:ಎಸ್‌ಪಿಎಲ್.01/09-10 ದಿನಾಂಕ:26-05-2009 ರಲ್ಲಿ ಪ್ರಸ್ತಾಪಿತ ಮೇಲ್ಕಂಡ ಜಮೀನನ್ನು **ವಸತಿ ಉದ್ದೇಶಕ್ಕಾಗಿ** ಕರ್ನಾಟಕ ಭೂ ಸುಧಾರಣೆ ಕಾಯ್ದೆ (ತಿದ್ದುಪಡಿ) ಕಲಂ 109 ರಡಿ ಅನುಮತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆಯು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38-ಬಿ ಮತ್ತು 38-ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಮೈಸೂರು ವಿಶ್ವವಿದ್ಯಾಲಯ ಉದ್ಯೋಗಿಗಳ ಗೃಹ ನಿರ್ಮಾಣ ಸಹಕಾರ ಸಂಘ (ನಿ), ಮೈಸೂರು, ರವರು ಮೈಸೂರು ತಾಲ್ಲೂಕು, ದಟ್ಟಗಳ್ಳಿ, ಗ್ರಾಮದ ಸರ್ವೆ ನಂ.88/2 ಹಾಗೂ ಇತರೆಗಳಲ್ಲಿ 2 ಎಕರೆ 16 ಗುಂಟೆ ಜಮೀನನ್ನು **ವಸತಿ ಉದ್ದೇಶಕ್ಕಾಗಿ** ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109 ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:-

1 ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2 ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಒಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3 ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಒಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

4 ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

5 ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

6 ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

7 ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು

8 ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

9 ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 178

ಟಿ.ಎನ್. ನಾರಾಯಣ ಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ಅಧಿಸೂಚನೆ

ಸಂಖ್ಯೆ:ಕಂಇ 83 ಎಲ್ಆರ್ಎಂ 2009, ಬೆಂಗಳೂರು, ದಿನಾಂಕ:1ನೇ ಮಾರ್ಚ್ 2010

ಅಂಜುಮನ್–ಎ–ಇಸ್ಲಾಂ. ಕಲ್ಲಾಪುರ, ಇವರು ಹಾವೇರಿ ಜಿಲ್ಲೆ, ಹಾನಗಲ್ ತಾಲ್ಲೂಕು, ಕಲ್ಲಾಪುರ ಗ್ರಾಮದ ಸ.ನಂ.68 ರಲ್ಲಿ 2 ಎಕರೆ 30 ಗುಂಟೆ ಜಮೀನನ್ನು ಮುಸ್ಲಿಂ ಸಮಾಜದ **ಖಬರಸ್ಥಾನ ಸ್ಥಾಪಿಸುವ** ಉದ್ದೇಶಕ್ಕಾಗಿ ನಮೂನೆ 15–ಎ ಮತ್ತು ನಮೂನೆ 15–ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಇವರ ಪತ್ರ ಸಂಖ್ಯೆ:ಭೂಸು (109) ಸಿಆರ್–12ಎ/2007–08 ದಿನಾಂಕ: 27–08–2009 ರಲ್ಲಿ ಪ್ರಸ್ತಾಪಿತ ಮೇಲ್ಕಂಡ 2 ಎಕರೆ 30 ಗುಂಟೆ ಜಮೀನನ್ನು ಖರೀದಿಸಲು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರಡಿ ಅನುಮೋದನೆ/ವಿನಾಯಿತಿ ನೀಡುವ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38–ಬಿ ಮತ್ತು 38–ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಅಂಜುಮನ್–ಎ–ಇಸ್ಲಾಂ. ಇವರು ಹಾವೇರಿ ಜಿಲ್ಲೆ, ಹಾನಗಲ್ ತಾಲ್ಲೂಕು, ಕಲ್ಲಾಪುರ ಗ್ರಾಮದ ಸ.ನಂ.68 ರಲ್ಲಿ 2 ಎಕರೆ 30 ಗುಂಟೆ ಜಮೀನನ್ನು ಮುಸ್ಲಿಂ ಸಮಾಜದ **ಖಬರಸ್ಥಾನ ಸ್ಥಾಪಿಸುವ** ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:–

1 ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2 ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3 ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4 ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5 ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6 ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7 ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8 ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 179

ಟಿ.ಎನ್. ನಾರಾಯಣ ಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ಅಧಿಸೂಚನೆ

ಸಂಖ್ಯೆ:ಕಂಇ 68 ಎಲ್ಆರ್ಎಂ 2009, ಬೆಂಗಳೂರು, ದಿನಾಂಕ:03ನೇ ಮಾರ್ಚ್, 2010

ಕಾಂಗ್ರಿಗೇಷನ್ ಆಫ್ ದಿ ಸಿಸ್ಟರ್ಸ್ ಆಫ್ ಸೆಂಟ್ ಜೋಸೆಫ್ ಆಫ್ ಕ್ಲಾನಿ ಬೆಂಗಳೂರು. ಇವರು ಮೈಸೂರು ಜಿಲ್ಲೆ, ಹೆಚ್.ಡಿ.ಕೋಟೆ ತಾಲ್ಲೂಕು, ಹೆಚ್.ಡಿ.ಕೋಟೆ ಗ್ರಾಮದ ಸರ್ವೆ ನಂ.165/1ಪಿ2, 351, 359 ರಲ್ಲಿ 8 ಎಕರೆ 20 ಗುಂಟೆ ಜಮೀನನ್ನು **ವೃದ್ಧಾಶ್ರಮ ಹಾಗೂ ಕನ್ಯಾಸ್ತ್ರೀಯರ ಆಶ್ರಮ ಸ್ಥಾಪಿಸುವ** ಉದ್ದೇಶಕ್ಕಾಗಿ ನಮೂನೆ 15-ಎ ಮತ್ತು ನಮೂನೆ 15-ಎಎ. ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಇವರ ಪತ್ರ ಸಂಖ್ಯೆ:ಎಲ್ಆರ್ಎಫ್.ಎಸ್.ಪಿ.ಎಲ್-27/2008-09 ದಿನಾಂಕ:23-06-2009 ರಲ್ಲಿ ಪ್ರಸ್ತಾಪಿತ ಮೇಲ್ಕಂಡ 8 ಎಕರೆ 20 ಗುಂಟೆ ಜಮೀನನ್ನು ಖರೀದಿಸಲು ಕರ್ನಾಟಕ ಭೂ ಸುಧಾರಣೆ ಅಧಿನಿಯಮ, 1961ರ ಕಲಂ 109 ರಡಿ ಅನುಮೋದನೆ/ವಿನಾಯಿತಿ ನೀಡುವ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38–ಬಿ ಮತ್ತು 38–ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಕಾಂಗ್ರಿಗೇಷನ್ ಆಫ್ ದಿ ಸಿಸ್ಟರ್ಸ್ ಆಫ್ ಸೆಂಟ್ ಜೋಸೆಫ್ ಆಫ್ ಕ್ಲಾನಿ ಬೆಂಗಳೂರು. ಇವರು ಮೈಸೂರು ಜಿಲ್ಲೆ, ಹೆಚ್.ಡಿ.ಕೋಟೆ ತಾಲ್ಲೂಕು, ಹೆಚ್.ಡಿ.ಕೋಟೆ ಗ್ರಾಮದ ಸ.ನಂ.165/1ಪಿ2, 351, 359 ರಲ್ಲಿ 8 ಎಕರೆ 20 ಗುಂಟೆ ಜಮೀನನ್ನು **ವೃದ್ಧಾಶ್ರಮ ಹಾಗೂ ಕನ್ಯಾಸ್ತ್ರೀಯರ ಆಶ್ರಮ ಸ್ಥಾಪಿಸುವ** ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:–

1 ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2 ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3 ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4 ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5 ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6 ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7 ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8 ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 177

ಟಿ.ಎನ್. ನಾರಾಯಣ ಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಇ 38 ರರವಿ 2009, ಬೆಂಗಳೂರು, ದಿನಾಂಕ:02ನೇ ಮೇ, 2009


ಕರ್ನಾಟಕ ಸರ್ಕಾರದ ಸಚಿವಾಲಯದ ಸಹಕಾರ ಇಲಾಖೆಯು ಡಾ: ಅಂಬೇಡ್ಕರ್ ವೀಧಿಯ ಬಹುಮಹಡಿ ಕಟ್ಟಡದ 2ನೇ ಹಂತ, 2ನೇ ಗೇಟ್, ಬೆಂಗಳೂರು–560001 ಇಲ್ಲಿ ನೆಲಗೊಂಡಿದೆ. ಭಾರತ ಸರ್ಕಾರದ ಮಾಹಿತಿ ಹಕ್ಕು ಕಾಯಿದೆ 2005 ರ ಕಲಂ 4(1)ಬಿ ಅನುಸಾರ ಸಹಕಾರ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡ ಮಾಹಿತಿಗಳನ್ನು ಪ್ರಕಟಿಸಲಾಗಿದೆ.

ಕರ್ನಾಟಕ ಸರ್ಕಾರದಲ್ಲಿ ಸಹಕಾರ ಇಲಾಖೆಯು ಪ್ರಮುಖ ಇಲಾಖೆಗಳಲ್ಲಿ ಒಂದಾಗಿದೆ. ಈ ಇಲಾಖೆಯು ಸಾಮಾಜಿಕ ಮತ್ತು ಆರ್ಥಿಕ ಯೋಜನೆಗಳನ್ನು ಜಾರಿಗೊಳಿಸುತ್ತಿರುವ ವಿವಿಧ ಇತರೆ ಇಲಾಖೆಗಳ ಸಂಪೂರ್ಣ ಸಹಕಾರ ಹಾಗೂ ಸಹಯೋಗದೊಂದಿಗೆ ಕಾರ್ಯನಿರ್ವಹಿಸುತ್ತಿದೆ.

ಸಹಕಾರ ಇಲಾಖೆಯ ಪ್ರಮುಖ ಉದ್ದೇಶವೆಂದರೆ, ಕರ್ನಾಟಕದಲ್ಲಿ ಸಮರ್ಥ ಮತ್ತು ಪರಿಣಾಮಕಾರಿ ಸಹಕಾರಿ ವಲಯವನ್ನು ಸೃಷ್ಟಿಸುವುದಾಗಿದೆ. ಕರ್ನಾಟಕ ಸರ್ಕಾರದ ಸಚಿವಾಲಯದ ವ್ಯಾಪ್ತಿಯಲ್ಲಿ ಸಹಕಾರ ಇಲಾಖೆಯ ಸಂಘಟನಾ ರಚನೆಯು ಈ ಕೆಳಕಂಡಂತೆ ಇದೆ

ಸೆಕ್ಷನ್ 4 ಬಿ(1) ಸಂಘಟನಾ ತ:ಖ್ತೆ:

ಸಹಕಾರ ಇಲಾಖೆಯ ಸಂಘಟನೆಯ ನಕ್ಷೆ



ಈ ಇಲಾಖೆಯ ವಿವಿಧ ಶಾಖೆಗಳಲ್ಲಿ ಈ ಕೆಳಕಂಡ ಕೆಲಸ ಕಾರ್ಯಗಳನ್ನು ನಿರ್ವಹಿಸಬೇಕಾಗುತ್ತದೆ.

ಸಹಕಾರ-ಎ ಶಾಖೆ:-

1. ಸಹಕಾರ ಸಂಘಗಳ ನಿಬಂಧಕರ ಇಲಾಖೆಗೆ ಸಂಬಂಧಪಟ್ಟ ಸಿಬ್ಬಂದಿ/ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು
2. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳ ಎಲ್ಲಾ ಸೇವಾ ವಿಷಯಗಳು
3. ಶಾಖೆಗೆ ಸಂಬಂಧಪಟ್ಟಂತೆ ವಿಧಾನ ಮಂಡಲದ ಪ್ರಶ್ನೆಗಳು ಹಾಗೂ ವಿಷಯಗಳ ಬಗ್ಗೆ.

ಸಹಕಾರ-ಬಿ ಶಾಖೆ:-

1. ಕೃಷಿ ಮಾರಾಟ ಇಲಾಖೆಯ ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದ ವಿಷಯಗಳು.
2. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
3. ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ 1968 ಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು
4. ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ / ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು
5. ಕೃಷಿ ಮಾರಾಟ ಇಲಾಖೆಯ / ಮಂಡಳಿಯ ಸೇವಾ ವಿಷಯಗಳು
6. ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ / ಹೊಣೆಗಾರಿಕೆ ಪಟ್ಟಿ ವಿಷಯಗಳು.
7. ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ / ಹೊಣೆಗಾರಿಕೆ ಪಟ್ಟಿ ವಿಷಯಗಳು.
8. ಶಾಖೆಗೆ ಸಂಬಂಧಪಟ್ಟಂತೆ ವಿಧಾನ ಮಂಡಲದ ಪ್ರಶ್ನೆಗಳು ಹಾಗೂ ವಿಷಯಗಳ ಬಗ್ಗೆ.

ಸಹಕಾರ-ಸಿ ಶಾಖೆ:-

1. ಸ್ವೀಕೃತಿ ಮತ್ತು ರವಾನೆಗೆ ಸಂಬಂಧಿಸಿದ ಎಲ್ಲ ವಿಷಯಗಳು
2. ಸಚಿವಾಲಯ ಕೈಪಿಡಿಯಲ್ಲಿ ನಿಗದಿಪಡಿಸಿದ ಕ್ರೋಢಿಕರಣ ವಿಷಯಗಳು
3. ಸಚಿವಾಲಯದ ಮಟ್ಟದ ಅಂತರ್ ಶಾಖೆ ಕ್ರೋಢಿಕರಣಕ್ಕೆ ಸಂಬಂಧಿಸಿದ ವಿಷಯಗಳು
4. ಸಮನ್ವಯ ವಿಷಯಗಳು
5. ಸಂಘಟನೆ ಮತ್ತು ವ್ಯವಸ್ಥಾಪನಾ (O&M) ವಿಷಯಗಳು
6. ಶಾಖೆಗೆ ಸಂಬಂಧಪಟ್ಟಂತೆ ವಿಧಾನ ಮಂಡಲದ ಪ್ರಶ್ನೆಗಳು ಹಾಗೂ ವಿಷಯಗಳ ಬಗ್ಗೆ.

ಸಹಕಾರ-ಡಿ ಶಾಖೆ:-

1. ಬಳಕೆದಾರರ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
2. ಕರ್ನಾಟಕ ಸಹಕಾರ ಗ್ರಾಹಕರ ಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
3. ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್)ಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
4. ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
5. ಎನ್.ಸಿ.ಡಿ.ಸಿ 3ನೇ ಯೋಜನೆಗೆ ಸಂಬಂಧಿಸಿದ ವಿಷಯಗಳು.
6. ಗ್ರಾಮೀಣ ಗೋದಾಮು, ಮಾರುಕಟ್ಟೆ ಗೋದಾಮುಗಳನ್ನು ನಿರ್ಮಿಸಲು ಸಹಕಾರ ಸಂಘಗಳಿಗೆ ಆರ್ಥಿಕ ಸಹಾಯ.
7. ಸಂಸ್ಕರಣ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
4. ಗ್ರಾಮೀಣ ವಿದ್ಯುತ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ವಿಷಯಗಳು.
9. ಕರ್ನಾಟಕ ರಾಜ್ಯ ಉಗ್ರಾಣ ನಿಗಮಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
10. ಮಹಿಳಾ ವಿವಿದೋದ್ದೇಶ ಸಹಕಾರ ಸಂಘಗಳಿಗೆ ಮತ್ತು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
11. ಶಾಖೆಗೆ ಸಂಬಂಧಪಟ್ಟಂತೆ ವಿಧಾನ ಮಂಡಲದ ಪ್ರಶ್ನೆಗಳು ಹಾಗೂ ವಿಷಯಗಳ ಬಗ್ಗೆ.
12. ಕರ್ನಾಟಕ ರಾಜ್ಯ ಸಹಕಾರಿ ಮಹಾಮಂಡಳಕ್ಕೆ ಸಂಬಂಧಿಸಿದ ವಿಷಯ ಮತ್ತು ಸಹಕಾರ ತರಬೇತಿ ಕೇಂದ್ರಗಳ ವಿಷಯಗಳು, ಜಿಲ್ಲಾ ಸಹಕಾರ ಯೂನಿಯನ್ನಿಗೆ ಸಂಬಂಧಿಸಿದ ವಿಷಯಗಳು.
13. ಕರ್ನಾಟಕ ರಾಜ್ಯ ಕೈಗಾರಿಕಾ ಸಹಕಾರ ಬ್ಯಾಂಕ್‌ಗಳಿಗೆ: ಕೈಗಾರಿಕಾ ಸಹಕಾರಿ ಸಂಘಗಳು ಸಂಬಂಧಿಸಿದ ವಿಷಯಗಳು
14. ಗ್ರಾಮೀಣ ವಿದ್ಯುತ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ವಿಷಯಗಳು

15. ಮಹಿಳಾ ಕೈಗಾರಿಕಾ ಸಹಕಾರ ಸಂಘಗಳ ವಿಷಯಗಳು

16. ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಕ್ಕೆ ಸಂಬಂಧಿಸಿದ ವಿಷಯಗಳು.

ಸಹಕಾರ-ಎಫ್ ಶಾಖೆ:-

1. ಕೇಂದ್ರ ಪುರಸ್ಕೃತ ಯೋಜನೆಗಳು ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟೀಸ್ / ಬ್ಯಾಂಕ್
2. ಕೋಆಪರೇಟಿವ್ ರೂರಲ್ ಕ್ರೆಡಿಟ್ ಸೊಸೈಟೀಸ್ / ಬ್ಯಾಂಕ್
3. ಕಾಸ್ಕಾರ್ಡ್ ಬ್ಯಾಂಕ್ / ಅಪೆಕ್ಸ್ ಬ್ಯಾಂಕ್ /ಡಿ ಸಿ ಸಿ ಬ್ಯಾಂಕ್‌ಗಳ ವಿಷಯಗಳು
4. ವ್ಯವಸಾಯ ಸೇವಾ ಸಹಕಾರ ಸಂಘಗಳು / ಕ್ರೆಡಿಟ್ ಸಹಕಾರ ಸಂಘಗಳ ವಿಷಯಗಳು / ಹಾಲು ಉತ್ಪನ್ನಗಳ ಸಹಕಾರ ಸಂಘಗಳು.
5. ಕೆಎಂಎಫ್/ ಎನ್‌ಡಿಡಿಬಿ ವಿಷಯಗಳು, ನಬಾರ್ಡ್ ವಿಷಯಗಳು
6. ಸಹಕಾರ ಇಲಾಖೆಯ ಮುಂದುವರಿದ ಯೋಜನೆಗಳ ವಿಷಯಗಳು
7. ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿ ಮತ್ತು ಪುನರ್ ಪರಿಶೀಲನಾ ಅರ್ಜಿಗಳು.
8. ಶಾಖೆಗೆ ಸಂಬಂಧಪಟ್ಟಂತೆ ವಿಧಾನ ಮಂಡಲದ ಪ್ರಶ್ನೆಗಳು ಹಾಗೂ ವಿಷಯಗಳ ಬಗ್ಗೆ

ಸಹಕಾರ-ಜಿ ಶಾಖೆ:-

1. ಚಿಟ್ ಫಂಡ್ ಆಕ್ಟ್ / ಮನಿಲೆಂಡರ್ ಆಕ್ಟ್ / ಪಾನ್‌ಬ್ರೋಕರ್ ಆಕ್ಟ್ / ರೂಲ್ಸ್
2. ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
3. ಕರ್ನಾಟಕ ಸಹಕಾರ ಸಂಘಗಳ ಕಾಯಿದೆ / ನಿಯಮಗಳು/ ತಿದ್ದುಪಡಿ ವಿಷಯಗಳು
4. ಸಹಕಾರ ಸಂಘಗಳ ನಾಮ ನಿರ್ದೇಶನಗಳು
5. ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
6. ಪಟ್ಟಣ ಬ್ಯಾಂಕ್‌ಗಳ ಮಹಾ ಮಂಡಳ / ಪಟ್ಟಣ ಬ್ಯಾಂಕುಗಳ ವಿಷಯಗಳು
7. ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ನಿಯಮಿತ ವಿಷಯಗಳು
8. ವಸತಿ ಮಹಾ ಮಂಡಳ
9. ಸಹಕಾರ ಕುರಿ ಉತ್ಪಾದನೆ ಮಂಡಳಿ
10. ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿಗಳು ಮತ್ತು ಪುನರ್ ಪರಿಶೀಲನಾ ಅರ್ಜಿಗಳು
11. ಪಾನ್‌ಬ್ರೋಕರ್ ಆಕ್ಟ್ / ರೂಲ್ಸ್, ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು.
12. ಶಾಖೆಗೆ ಸಂಬಂಧಪಟ್ಟಂತೆ ವಿಧಾನ ಮಂಡಲದ ಪ್ರಶ್ನೆಗಳು ಹಾಗೂ ವಿಷಯಗಳ ಬಗ್ಗೆ

ಕಲಂ 4ಬಿ(ii):-

ಸರ್ಕಾರದ ಕಾರ್ಯದರ್ಶಿಗಳು ಸಹಕಾರ ಇಲಾಖೆ:-

ಇವರು ಇಲಾಖೆಯ ಅಧಿಕೃತ ಮುಖ್ಯಸ್ಥರು, ವಿವಿಧ ಸಹಕಾರ ಸಂಘಗಳು, ರಾಜ್ಯ ಮಟ್ಟದ ಸಹಕಾರಿ ಫೆಡರೇಷನ್ ಸಂಸ್ಥೆಗಳು, ಸಹಕಾರಿ ಬ್ಯಾಂಕುಗಳು, ಕ್ರೆಡಿಟ್ ಸಹಕಾರ ಸಂಘಗಳು, ಕಾಸ್ಕಾರ್ಡ್ ಬ್ಯಾಂಕ್, ಡಿ ಸಿ ಸಿ ಬ್ಯಾಂಕ್, ಅಪೆಕ್ಸ್ ಬ್ಯಾಂಕ್ ವಿಷಯಗಳು.

ಕರ್ನಾಟಕ ಸಹಕಾರ ಸಂಘಗಳ ಕಾಯಿದೆ ನಿಯಮ ತಿದ್ದುಪಡಿ ವಿಷಯಗಳು, ಚಿಟ್ ಫಂಡ್ ಕಾಯಿದೆ ವಿಷಯಗಳು, ಮನಿಲೆಂಡರ್ ಕಾಯಿದೆ ವಿಷಯಗಳು, ರಾಜ್ಯ ಸೌಹಾರ್ದ ಸಹಕಾರಿ ಕಾಯಿದೆ ವಿಷಯಗಳು, ಪಾನ್ ಬ್ರೋಕರ್ ಕಾಯಿದೆಗೆ ಸಂಬಂಧಪಟ್ಟ ವಿಷಯಗಳು, ಕೃಷಿ ಮಾರಾಟ ಇಲಾಖೆಯ ವಿವಿಧ ಯೋಜನೆಗಳಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯಿದೆ, 1966 ಮತ್ತು ನಿಯಮಾವಳಿ 1968 ಕ್ಕೆ ಸಂಬಂಧಿಸಿದ ವಿಷಯಗಳು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಕರ್ನಾಟಕ ರಾಜ್ಯ ಉಗ್ರಾಣ ನಿಗಮ, ಸಹಕಾರ ವಲಯದಲ್ಲಿರುವ ಸಕ್ಕರೆ ಕಾರ್ಖಾನೆಗಳು ಹಾಗೂ ನೂಲಿನ ಗಿರಣಿಗಳು ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ವ್ಯವಹಾರ ನಿಯಮಗಳಿಗೆ ಒಳಪಟ್ಟು ಮತ್ತು ಇಲಾಖೆಯ ಪ್ರಭಾರ ಹೊಂದಿರುವ ಮಾನ್ಯ ಸಚಿವರುಗಳ ಸಾಮಾನ್ಯ ಅಥವಾ ವಿಷಯಕ್ಕೆ ನಿರ್ದೇಶನಗಳನ್ನಾಯ ಎಲ್ಲಾ ವ್ಯವಹಾರದ ವಿಲೇಯ ಜವಾಬ್ದಾರಿಯನ್ನು

ನಿರ್ವಹಿಸುತ್ತಾರೆ. ಅಲ್ಲದೇ ತನ್ನ ಅಧೀನ ಸಿಬ್ಬಂದಿಯು ಅವರಿಗೆ ನಿರ್ವಹಿಸಿದ ಕೆಲಸಗಳನ್ನು ಸಮರ್ಥವಾಗಿ ಹಾಗೂ ತ್ವರಿತವಾಗಿ ನಿರ್ವಹಿಸುವಂತೆ ನೋಡಿಕೊಳ್ಳುತ್ತಾರೆ.

ಪತ್ರಾಂಕಿತ ಆಪ್ತ ಕಾರ್ಯದರ್ಶಿಗಳು / ಆಪ್ತ ಸಹಾಯಕರು:-

ಇವರು ಕಾರ್ಯದರ್ಶಿಯವರ ನಿರ್ದೇಶನಗಳಿಗೆ ಒಳಪಟ್ಟು ಕಾರ್ಯನಿರ್ವಹಿಸುತ್ತಾರೆ. ದೂರವಾಣಿ ಕರೆಗಳನ್ನು ಹಾಗೂ ಸಂದರ್ಶಕರನ್ನು ಜಾಣ್ಮೆಯಿಂದ ನಿರ್ವಹಿಸುವುದು. ಅಧಿಕಾರಿಯ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ಸಕಾಲದಲ್ಲಿ ನೆನಪು ಮಾಡಿಕೊಡುವುದು. ಅಧಿಕಾರಿ ನೀಡಿದ ಉಕ್ತ ಲೇಖನಗಳ ಚೊಕ್ಕ ಪ್ರತಿಗಳನ್ನು ತಯಾರಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ವಾಹನ ಚಾಲಕರು:-

ವಾಹನವನ್ನು ಸುಸ್ಥಿತಿಯಲ್ಲಿಟ್ಟು ವಾಹನ ಚಾಲನೆಯ ಕಾರ್ಯ ನಿರ್ವಹಿಸುತ್ತಾರೆ.

ಗ್ರೂಪ್ -ಡಿ:-

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ/ ಶಾಖೆಗೆ ಕಡತಗಳನ್ನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಸರ್ಕಾರದ ಜಂಟಿ ಕಾರ್ಯದರ್ಶಿಗಳು:-

ಇವರು ಇಲಾಖೆಗೆ ಸಂಬಂಧಿಸಿದಂತೆ ಕೃಷಿ ಮಾರಾಟ ಇಲಾಖೆಯ ಯೋಜನೆಯ ವಿಷಯಕ್ಕೆ ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ ಮತ್ತು ಅಧಿಕಾರಿಗಳ ಸೇವಾ ವಿಷಯಗಳು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಅಧಿನಿಯಮ, 1966 ಹಾಗೂ ನಿಯಮಾವಳಿ 1968 ಕ್ಕೆ ಸಂಬಂಧಿಸಿದ ವಿಷಯಗಳು.

ಇಲಾಖೆಯ ಸಂಘಟನಾ ಮತ್ತು ವ್ಯವಸ್ಥಾಪನಾ ವಿಷಯಗಳು:-

ಸಹಕಾರ ಸಂಘಗಳ ನಿಬಂಧಕರ ಇಲಾಖೆಗೆ ಸಂಬಂಧಪಟ್ಟ ಸಿಬ್ಬಂದಿ ಮತ್ತು ಅಧಿಕಾರಿಗಳ ಸೇವಾ ವಿಷಯಗಳು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಸಿಬ್ಬಂದಿ ಮತ್ತು ಅಧಿಕಾರಿಗಳ ಸೇವಾ ವಿಷಯಗಳು. ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಕ್ಕೆ ಸಂಬಂಧಿಸಿದ ವಿಷಯಗಳು. ಕರ್ನಾಟಕ ರಾಜ್ಯ ಉಗ್ರಾಣ ನಿಗಮಕ್ಕೆ ಸಂಬಂಧಿಸಿದ ವಿಷಯಗಳು. ಮಹಿಳಾ ವಿವಿದ್ದೋದ್ದೇಶ ಸಹಕಾರ ಸಂಘಗಳಿಗೆ ಮತ್ತು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ವಿಷಯಗಳು. ಕರ್ನಾಟಕ ಸಹಕಾರಿ ಗ್ರಾಹಕರ ಮಹಾ ಮಂಡಳಕ್ಕೆ ಸಂಬಂಧಿಸಿದ ವಿಷಯಗಳು. ರಾಜ್ಯಮಟ್ಟದ ಸಹಕಾರ ಮಹಾ ಮಂಡಳಗಳಿಗೆ ಸಂಬಂಧಪಟ್ಟ ವಿಷಯಗಳು. ಸಂಬಂಧಪಟ್ಟ ವಿಷಯಗಳಿಗೆ ಸಂಬಂಧಿಸಿದಂತೆ ಎಲ್ಲಾ ಪ್ರಕರಣಗಳ ವಿಲೇವಾರಿಗಳಿಗೆ ಕ್ರಮ ಜರುಗಿಸುವುದು ಹಾಗೂ ಪ್ರಮುಖ ವಿಷಯಗಳ ಮೇಲಿನ ಕ್ರಮದ ಬಗ್ಗೆ ಕಾರ್ಯದರ್ಶಿಗಳಿಗೆ ಪ್ರಸ್ತಾವನೆಯನ್ನು ಮಂಡಿಸುವುದು. ಹಾಗೂ ಇಲಾಖೆಯಲ್ಲಿ ಸಂಘಟನೆ ಮತ್ತು ವಿಧಾನಗಳ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಾರೆ.

ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು:-

ಇವರು ಜಂಟಿ ಕಾರ್ಯದರ್ಶಿಯವರ ನಿರ್ದೇಶನಗಳಿಗೆ ಒಳಪಟ್ಟು ಕಾರ್ಯನಿರ್ವಹಿಸುತ್ತಾರೆ. ದೂರವಾಣಿ ಕರೆಗಳನ್ನು ಹಾಗೂ ಸಂದರ್ಶಕರನ್ನು ಜಾಣ್ಮೆಯಿಂದ ನಿರ್ವಹಿಸುವುದು. ಅಧಿಕಾರಿಯ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ಅಧಿಕಾರಿಗೆ ಸಕಾಲದಲ್ಲಿ ನೆನಪು ಮಾಡಿಕೊಡುವುದು. ಅಧಿಕಾರಿ ನೀಡಿದ ಉಕ್ತ ಲೇಖನಗಳ ಚೊಕ್ಕ ಪ್ರತಿಗಳನ್ನು ತಯಾರಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಗ್ರೂಪ್ -ಡಿ:-

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗು ಸಚಿವಾಲಯದೊಳಗಿನ ಇಲಾಖೆಗೆ / ಶಾಖೆಗೆ ಕಡತಗಳನ್ನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಆಂತರಿಕ ಆರ್ಥಿಕ ಸಲಹೆಗಾರರು:-

ಇವರು ಈ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಇಲಾಖೆಗಳಿಗೆ ಹಾಗೂ ಕಂದಾಯ ಇಲಾಖೆಗೆ ಸಂಬಂಧಿಸಿದ ಆಯವ್ಯಯ ವಿಷಯಗಳು, ಅಭಿಪ್ರಾಯಕ್ಕೆ ಸಂಬಂಧಿಸಿದ ವಿಷಯಗಳು, ಆಡಿಟ್ ವರದಿಗಳಿಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸಿರುತ್ತಾರೆ.

ಶೀಘ್ರಲಿಪಿಗಾರರು:-

ಇವರು ಆಂತರಿಕ ಆರ್ಥಿಕ ಸಲಹೆಗಾರರು ನೀಡುವ ಉಕ್ತಲೇಖನ ಹಾಗೂ ಅದರ ಬೆರಳಚ್ಚು, ಅಧಿಕಾರಿಗೆ ಬರುವ ದೂರವಾಣಿ ಕರೆಗಳನ್ನು ಸ್ವೀಕರಿಸುವುದು ಮತ್ತು ಅಧಿಕಾರಿಗಳು ಆದೇಶಿಸುವ ಇತರ ಕೆಲಸಗಳನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಗ್ರೂಪ್ -ಡಿ:-

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ/ ಶಾಖೆಗೆ ಕಡತಗಳನ್ನು/ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ:-

ಇವರು ಸಹಕಾರ ಇಲಾಖೆಯ ವ್ಯಾಪ್ತಿಯಲ್ಲಿ ಬರುವ-

1. ಕೇಂದ್ರ ಪುರಸ್ಕೃತ ಯೋಜನೆಗಳು ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟೀಸ್/ಬ್ಯಾಂಕ್ಸ್
2. ಕೋ ಆಪರೇಟಿವ್ ರೂರಲ್ ಕ್ರೆಡಿಟ್ ಸೊಸೈಟೀಸ್/ಬ್ಯಾಂಕ್ಸ್
3. ಕಾಸ್ಕಾರ್ಡ್ ಬ್ಯಾಂಕ್/ ಅಪೆಕ್ಸ್ ಬ್ಯಾಂಕ್/ ಡಿ ಸಿ ಸಿ ಬ್ಯಾಂಕ್ಸ್‌ಗಳ ವಿಷಯಗಳು
4. ವ್ಯವಸಾಯ ಸೇವಾ ಸಹಕಾರ ಸಂಘಗಳು/ಕ್ರೆಡಿಟ್ ಸಹಕಾರ ಸಂಘಗಳ ವಿಷಯಗಳು/ಹಾಲು ಉತ್ಪನ್ನಗಳ ಸಹಕಾರ ಸಂಘಗಳು.
5. ಕೆಎಮ್‌ಎಫ್/ ಎನ್‌ಡಿಡಿಬಿ ವಿಷಯಗಳು, ನಬಾರ್ಡ್ ವಿಷಯಗಳು.
6. ಸಹಕಾರ ಇಲಾಖೆಯ ಮುಂದುವರಿದ ಯೋಜನೆಗಳ ವಿಷಯಗಳು
7. ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿ ಮತ್ತು ಪುನರ್ ಪರಿಶೀಲನಾ ಅರ್ಜಿಗಳು
8. ಚಿಟ್ ಫಂಡ್ ಆಕ್ಟ್/ಮನಿಲೆಂಡರ್ ಆಕ್ಟ್/ಪಾನ್‌ಬ್ರೋಕರ್ ಆಕ್ಟ್/ರೂಲ್ಸ್
9. ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
10. ಕರ್ನಾಟಕ ಸಹಕಾರ ಸಂಘಗಳ ಕಾಯಿದೆ/ನಿಯಮಗಳು/ತಿದ್ದುಪಡಿ ವಿಷಯಗಳು
11. ಸಹಕಾರ ಸಂಘಗಳ ನಾಮ ನಿರ್ದೇಶನಗಳು
12. ಗೃಹನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
13. ಪಟ್ಟಣ ಬ್ಯಾಂಕ್‌ಗಳ ಮಹಾ ಮಂಡಳ / ಪಟ್ಟಣ ಬ್ಯಾಂಕುಗಳ ವಿಷಯಗಳು
14. ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ನಿಯಮಿತ ವಿಷಯಗಳು
15. ವಸತಿ ಮಹಾ ಮಂಡಳ
16. ಸಹಕಾರ ಕುರಿ ಉತ್ಪಾದನೆ ಮಂಡಳಿ
17. ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿಗಳು ಮತ್ತು ಪುನರ್ ಪರಿಶೀಲನಾ ಅರ್ಜಿಗಳು
18. ಪಾನ್‌ಬ್ರೋಕರ್ ಆಕ್ಟ್/ರೂಲ್ಸ್ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳಿಗೆ ಸಂಬಂಧಪಟ್ಟಂತೆ ಹಾಗೂ ಪ್ರಮುಖ ವಿಷಯಗಳ ಮೇಲಿನ ಕ್ರಮದ ಬಗ್ಗೆ ಪ್ರಧಾನ ಕಾರ್ಯದರ್ಶಿಗಳ ಪ್ರಸ್ತಾವನೆಯನ್ನು ಮಂಡಿಸುವುದು ಮತ್ತು ತಮ್ಮ ಅಧೀನ ಸಿಬ್ಬಂದಿಯು ಅವರಿಗೆ ವಹಿಸಿದ ಕೆಲಸವನ್ನು ಸಮರ್ಥವಾಗಿ ಹಾಗೂ ತ್ವರಿತವಾಗಿ ನಿರ್ವಹಿಸುವಂತೆ ನೋಡಿಕೊಳ್ಳುತ್ತಾರೆ.

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ ಇವರ ಆಪ್ತ ಸಹಾಯಕರು:-

ಇವರು ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿಯವರ ನಿರ್ದೇಶನಗಳಿಗೆ ಒಳಪಟ್ಟು ಕಾರ್ಯನಿರ್ವಹಿಸುತ್ತಾರೆ. ದೂರವಾಣಿ ಕರೆಗಳನ್ನು, ಹಾಗೂ ಸಂದರ್ಶಕರನ್ನು, ಜಾಣ್ಮೆಯಿಂದ ನಿರ್ವಹಿಸುವುದು. ಅಧಿಕಾರಿಯ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ಅಧಿಕಾರಿಗೆ ಸಕಾಲದಲ್ಲಿ ನೆನಪು ಮಾಡಿಕೊಡುವುದು. ಅಧಿಕಾರಿ ನೀಡಿದ ಉಕ್ತ ಲೇಖನಗಳ ಚೊಕ್ಕ ಪ್ರತಿಗಳನ್ನು, ತಯಾರಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು, ನಿರ್ವಹಿಸುವುದು. ವಿಷಯದ ಕಡತಗಳನ್ನು, ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಗ್ರೂಪ್ –ಡಿ: –

ಶಾಖೆಯನ್ನು, ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ/ಶಾಖೆಗೆ ಕಡತಗಳನ್ನು/ಟಪಾಲುಗಳನ್ನು, ತೆಗೆದುಕೊಂಡು ಹೋಗುತ್ತಾರೆ.

ಅಧೀನ ಕಾರ್ಯದರ್ಶಿ–1 :-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸ್ವೀಕರಿಸಿದ ಪ್ರಸ್ತಾವನೆಗಳನ್ನು, ಸಹಕಾರಿ ಶಾಖೆ–ಬಿ ಮತ್ತು ಸಹಕಾರ ಶಾಖೆ–ಸಿ ಗಳ ಶಾಖಾಧಿಕಾರಿಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳ ಬಗ್ಗೆ ಮಂಡಿಸಿದ ಪ್ರಸ್ತಾವನೆಗಳ ಕಡತಗಳನ್ನು, ಪರಿಶೀಲಿಸಿ. ಜಂಟಿ ಕಾರ್ಯದರ್ಶಿಯವರು ಮಂಡಿಸುತ್ತಾರೆ.

1. ಕೃಷಿ ಮಾರಾಟ ಇಲಾಖೆಯ ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದ ವಿಷಯಗಳು
2. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
3. ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ 1968 ಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು
4. ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ/ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು
5. ಕೃಷಿ ಮಾರಾಟ ಇಲಾಖೆಯ/ಮಂಡಳಿಯ ಸೇವಾ ವಿಷಯಗಳು
6. ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ/ಹೊಣೆಗಾರಿಕೆ ಪಟ್ಟಿ ವಿಷಯಗಳು.
7. ಸ್ವೀಕೃತಿ ಮತ್ತು ರವಾನೆಗೆ ಸಂಬಂಧಿಸಿದ ಎಲ್ಲ ವಿಷಯಗಳು
8. ಸಚಿವಾಲಯ ಕೈಪಿಡಿಯಲ್ಲಿ ನಿಗದಿಪಡಿಸಿದ ಕ್ರೋಢೀಕರಣ ವಿಷಯಗಳು
9. ಸಚಿವಾಲಯದ ಮಟ್ಟದ ಅಂತರ್ ಶಾಖೆ ಕ್ರೋಢೀಕರಣಕ್ಕೆ ಸಂಬಂಧಿಸಿದ ವಿಷಯಗಳು
10. ಸಮನ್ವಯ ವಿಷಯಗಳು ಸಂಘಟನೆ ಮತ್ತು ವ್ಯವಸ್ಥಾಪನಾ (O&M) ವಿಷಯಗಳು

ಶೀಘ್ರಲಿಪಿಗಾರರು:-

ಇವರು ಅಧೀನ ಕಾರ್ಯದರ್ಶಿ–1 ನೀಡುವ ಉಕ್ತಲೇಖನ ಹಾಗೂ ಅದರ ಬೆರಳಚ್ಚು, ಅಧಿಕಾರಿಗೆ ಬರುವ ದೂರವಾಣಿ ಕರೆಗಳನ್ನು ಸ್ವೀಕರಿಸುವುದು ಮತ್ತು ಅಧಿಕಾರಿಗಳು ಆದೇಶಿಸುವ ಇತರ ಕೆಲಸಗಳನ್ನು ನಿರ್ವಹಿಸುತ್ತಾರೆ.

ಅಧೀನ ಕಾರ್ಯದರ್ಶಿ--2 :-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸ್ವೀಕರಿಸಿದ ಪ್ರಸ್ತಾವನೆಗಳನ್ನು **ಸಹಕಾರಿ ಶಾಖೆ–ಎ** ಮತ್ತು **ಸಹಕಾರ ಶಾಖೆ–ಡಿ** ಗಳ ಶಾಖಾಧಿಕಾರಿಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳ ಬಗ್ಗೆ ಮಂಡಿಸಿದ ಪ್ರಸ್ತಾವನೆಗಳ ಕಡತಗಳನ್ನು, ಪರಿಶೀಲಿಸಿ, ಜಂಟಿ ಕಾರ್ಯದರ್ಶಿಯವರು ಮಂಡಿಸುತ್ತಾರೆ.

1. ಸಹಕಾರ ಸಂಘಗಳ ನಿಬಂಧಕರ ಇಲಾಖೆಗೆ ಸಂಬಂಧಪಟ್ಟ ಸಿಬ್ಬಂದಿ / ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು
2. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳ ಎಲ್ಲಾ ಸೇವಾ ವಿಷಯಗಳು
3. ಬಳಕೆದಾರರ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
4. ಕರ್ನಾಟಕ ಸಹಕಾರಿ ಗ್ರಾಹಕರ ಮಹಾಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು
5. ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್) ಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
6. ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು

7. ಎನ್.ಸಿ.ಡಿ.ಸಿ. 3ನೇ ಯೋಜನೆಗೆ ಸಂಬಂಧಿಸಿದ ವಿಷಯಗಳು

8. ಗ್ರಾಮೀಣ ಗೋದಾಮು. ಮಾರುಕಟ್ಟೆ ಗೋದಾಮುಗಳನ್ನು ನಿರ್ಮಿಸಲು ಸಹಕಾರ ಸಂಘಗಳಿಗೆ ಆರ್ಥಿಕ ಸಹಾಯ

9. ಸಂಸ್ಕರಣ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು

10. ಕರ್ನಾಟಕ ರಾಜ್ಯ ಉಗ್ರಾಣ ನಿಗಮಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು

11. ಮಹಿಳಾ ವಿವಿಧೋದ್ದೇಶ ಸಹಕಾರ ಸಂಘಗಳಿಗೆ ಮತ್ತು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು

12. ಇತರೆ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲ ವಿಷಯಗಳು.

13. ಗ್ರಾಮೀಣ ವಿದ್ಯುತ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ವಿಷಯಗಳು.

ಶೀಘ್ರಲಿಪಿಗಾರರು:-

ಇವರು ಅಧೀನ ಕಾರ್ಯದರ್ಶಿ-2 ನೀಡುವ ಉಕ್ತಲೇಖನ ಹಾಗೂ ಅದರ ಬೆರಳಚ್ಚು, ಅಧಿಕಾರಿಗೆ ಬರುವ ದೂರವಾಣಿ ಕರೆಗಳನ್ನು ಸ್ವೀಕರಿಸುವುದು ಮತ್ತು ಅಧಿಕಾರಿಗಳು ಆದೇಶಿಸುವ ಇತರ ಕೆಲಸಗಳನ್ನು ನಿರ್ವಹಿಸುತ್ತಾರೆ.

ಶಾಖಾಧಿಕಾರಿ- ಸಹಕಾರ-ಎ ಶಾಖೆ :-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸಹಾಯಕರು/ಹಿರಿಯ ಸಹಾಯಕರುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು/ ಕಡತಗಳನ್ನು ಪರಿಶೀಲಿಸಿ. ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುವುದು ಹಾಗೂ ಶಾಖೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುತ್ತಾ ಕಿರಿಯ ಸಹಾಯಕರು ಶಾಖೆಯ ವಿಷಯದ ಕಡತಗಳನ್ನು ದಾಖಲಿಸುವ ಮತ್ತು ರವಾನಿಸುವ ಕಾರ್ಯದ ಮೇಲ್ವಿಚಾರಣೆ ಕೈಗೊಳ್ಳುತ್ತಾರೆ.

1. ಸಹಕಾರ ಸಂಘಗಳ ನಿಬಂಧಕರ ಇಲಾಖೆಗೆ ಸಂಬಂಧಪಟ್ಟ ಸಿಬ್ಬಂದಿ/ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು
2. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ಎಲ್ಲಾ ಸೇವಾ ವಿಷಯಗಳು.

ಹಿರಿಯ ಸಹಾಯಕರು / ಸಹಾಯಕರು :-

ಇವರು ಸಹಕಾರಿ ಸಂಘಗಳ ನಿಬಂಧಕರು ಇಲಾಖೆಗೆ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ಸೇವಾ ವಿಷಯಗಳು ಮತ್ತು ಸಹಕಾರ ಸಂಘಗಳ ಪರಿಶೋಧನಾ ಇಲಾಖೆ ಅಧಿಕಾರಿ/ಸಿಬ್ಬಂದಿಗಳ ಸೇವಾ ವಿಷಯಗಳಿಗೆ ಸಂಬಂಧಪಟ್ಟ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಬೆರಳಚ್ಚುಗಾರರು: -

ಬೆರಳಚ್ಚು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

ಗ್ರೂಪ್ -ಡಿ: -

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ/ಶಾಖೆಗೆ ಕಡತಗಳನ್ನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಶಾಖಾಧಿಕಾರಿ ಸಹಕಾರ--ಬಿ ಶಾಖೆ:-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸಹಾಯಕರು/ಹಿರಿಯ ಸಹಾಯಕರುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು/ ಕಡತಗಳನ್ನು ಪರಿಶೀಲಿಸಿ, ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುವುದು ಹಾಗೂ ಶಾಖೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುತ್ತಾ ಕಿರಿಯ ಸಹಾಯಕರು ಶಾಖೆಯ ವಿಷಯದ ಕಡತಗಳನ್ನು ದಾಖಲಿಸುವ ಮತ್ತು ರವಾನಿಸುವ ಕಾರ್ಯದ ಮೇಲ್ವಿಚಾರಣೆ ಕೈಗೊಳ್ಳುತ್ತಾರೆ.

1. ಕೃಷಿ ಮಾರಾಟ ಇಲಾಖೆಯ ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದ ವಿಷಯಗಳು
2. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
3. ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ. 1966 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ 1968 ಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು

4. ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ/ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು
5. ಕೃಷಿ ಮಾರಾಟ ಇಲಾಖೆಯ/ಮಂಡಳಿಯ ಸೇವಾ ವಿಷಯಗಳು
6. ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ/ಹೊಣೆಗಾರಿಕೆ ಪಟ್ಟಿ ವಿಷಯಗಳು.

ಹಿರಿಯ ಸಹಾಯಕರು/ಸಹಾಯಕರು:-

ಇವರು ಕೃಷಿ ಮಾರಾಟ ಇಲಾಖೆಯ ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದ. ವಿಷಯಗಳು. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು. ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ 1968 ಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು. ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ/ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು. ಕೃಷಿ ಮಾರಾಟ ಇಲಾಖೆಯ/ಮಂಡಳಿಯ ಸೇವಾ ವಿಷಯಗಳು. ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ/ಹೊಣೆಗಾರಿಕೆ ಪಟ್ಟಿ ವಿಷಯಗಳಿಗೆ ಸಂಬಂಧಪಟ್ಟ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಬೆರಳಚ್ಚುಗಾರರು: ಬೆರಳಚ್ಚು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

ಗ್ರೂಪ್ -ಡಿ:-

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ / ಶಾಖೆಗೆ ಕಡತಗಳನ್ನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಶಾಖಾಧಿಕಾರಿ ಸಹಕಾರ-ಸಿ ಶಾಖೆ:-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸಹಾಯಕರು / ಹಿರಿಯ ಸಹಾಯಕರುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು / ಕಡತಗಳನ್ನು ಪರಿಶೀಲಿಸಿ, ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುವುದು ಹಾಗೂ ಶಾಖೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುತ್ತಾ ಕಿರಿಯ ಸಹಾಯಕರು ಶಾಖೆಯ ವಿಷಯದ ಕಡತಗಳನ್ನು ದಾಖಲಿಸುವ ಮತ್ತು ರವಾನಿಸುವ ಕಾರ್ಯದ ಮೇಲ್ವಿಚಾರಣೆ ಕೈಗೊಳ್ಳುತ್ತಾರೆ.

1. ಸ್ವೀಕೃತಿ ಮತ್ತು ರವಾನೆಗೆ ಸಂಬಂಧಿಸಿದ ಎಲ್ಲ ವಿಷಯಗಳು
2. ಸಚಿವಾಲಯ ಕೈಪಿಡಿಯಲ್ಲಿ ನಿಗದಿಪಡಿಸಿದ ಕ್ರೋಢೀಕರಣ ವಿಷಯಗಳು
3. ಸಚಿವಾಲಯದ ಮಟ್ಟದ ಅಂತರ್ ಶಾಖೆ ಕ್ರೋಢೀಕರಣಕ್ಕೆ ಸಂಬಂಧಿಸಿದ ವಿಷಯಗಳು
4. ಸಮನ್ವಯ ವಿಷಯಗಳು
5. ಸಂಘಟನೆ ಮತ್ತು ವ್ಯವಸ್ಥಾಪನಾ (O&M) ವಿಷಯಗಳು

ಹಿರಿಯ ಸಹಾಯಕರು/ಸಹಾಯಕರು:-

ಇವರು ಸ್ವೀಕೃತಿ ಮತ್ತು ರವಾನೆಗೆ ಸಂಬಂಧಿಸಿದ ಎಲ್ಲ ವಿಷಯಗಳು, ಸಚಿವಾಲಯ ಕೈಪಿಡಿಯಲ್ಲಿ ನಿಗದಿಪಡಿಸಿದ ಕ್ರೋಢೀಕರಣ ವಿಷಯಗಳು, ಸಚಿವಾಲಯದ ಮಟ್ಟದ ಅಂತರ್

ಶಾಖೆ ಕ್ರೋಢೀಕರಣಕ್ಕೆ ಸಂಬಂಧಿಸಿದ ವಿಷಯಗಳು, ಸಮನ್ವಯ ವಿಷಯಗಳು, ಸಂಘಟನೆ ಮತ್ತು ವ್ಯವಸ್ಥಾಪನಾ (O&M) ವಿಷಯಗಳಿಗೆ ಸಂಬಂಧಪಟ್ಟ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಬೆರಳಚ್ಚುಗಾರರು:-

ಬೆರಳಚ್ಚು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

ಗ್ರೂಪ್ –ಡಿ:-

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ ಶಾಖೆಗೆ ಕಡತಗಳನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಶಾಖಾಧಿಕಾರಿ ಸಹಕಾರ – ಡಿ ಶಾಖೆ :-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸಹಾಯಕರು / ಹಿರಿಯ ಸಹಾಯಕರುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು / ಕಡತಗಳನ್ನು ಪರಿಶೀಲಿಸಿ, ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುವುದು ಹಾಗೂ ಶಾಖೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುತ್ತಾ ಕಿರಿಯ ಸಹಾಯಕರು ಶಾಖೆಯ ವಿಷಯದ ಕಡತಗಳನ್ನು ದಾಖಲಿಸುವ ಮತ್ತು ರವಾನಿಸುವ ಕಾರ್ಯದ ಮೇಲ್ವಿಚಾರಣೆ ಕೈಗೊಳ್ಳುತ್ತಾರೆ.

1. ಬಳಕೆದಾರರ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
2. ಕರ್ನಾಟಕ ಸಹಕಾರ ಗ್ರಾಹಕರ ಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
3. ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್) ಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
4. ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
5. ಎನ್.ಸಿ.ಡಿ.ಸಿ 3ನೇ ಯೋಜನೆಗೆ ಸಂಬಂಧಿಸಿದ ವಿಷಯಗಳು.
6. ಗ್ರಾಮೀಣ ಗೋದಾಮು, ಮಾರುಕಟ್ಟೆ ಗೋದಾಮುಗಳನ್ನು ನಿರ್ಮಿಸಲು ಸಹಕಾರ ಸಂಘಗಳಿಗೆ ಆರ್ಥಿಕ ಸಹಾಯ.
7. ಸಂಸ್ಕರಣ ಸಹಕಾರ ಸಂಘಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
8. ಕರ್ನಾಟಕ ರಾಜ್ಯ ಉಗ್ರಾಣ ನಿಗಮಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
9. ಮಹಿಳಾ ವಿವಿಧೋದ್ದೇಶ ಸಹಕಾರ ಸಂಘಗಳಿಗೆ ಮತ್ತು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.
10. ಗ್ರಾಮೀಣ ವಿದ್ಯುತ್ ಹಾಗೂ ಇತರೆ ಸಹಕಾರ ಸಂಘಗಳು.

ಹಿರಿಯ ಸಹಾಯಕರು/ಸಹಾಯಕರು:-

ಇವರು ಬಳಕೆದಾರರ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು, ಕರ್ನಾಟಕ ಸಹಕಾರ ಗ್ರಾಹಕರ ಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು, ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್)ಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು, ಎನ್.ಸಿ.ಡಿ.ಸಿ 3ನೇ ಯೋಜನೆಗೆ ಸಂಬಂಧಿಸಿದ ವಿಷಯಗಳು, ಗ್ರಾಮೀಣ ಗೋದಾಮು, ಮಾರುಕಟ್ಟೆ ಗೋದಾಮುಗಳನ್ನು ನಿರ್ಮಿಸಲು ಸಹಕಾರ ಸಂಘಗಳಿಗೆ ಆರ್ಥಿಕ ಸಹಾಯ, ಸಂಸ್ಕರಣ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು, ಕರ್ನಾಟಕ ರಾಜ್ಯ ಉಗ್ರಾಣ ನಿಗಮಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು, ಮಹಿಳಾ ವಿವಿಧೋದ್ದೇಶ ಸಹಕಾರ ಸಂಘಗಳಿಗೆ ಮತ್ತು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:-

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಬೆರಳಚ್ಚುಗಾರರು:-

ಬೆರಳಚ್ಚು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

ಗ್ರೂಪ್ –ಡಿ:-

ಶಾಖೆಯನ್ನು ಚೊಕ್ಕಟವಾಗಿಡುವುದು, ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ/ಶಾಖೆಗೆ ಕಡತಗಳನ್ನು/ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಶಾಖಾಧಿಕಾರಿ, ಸಹಕಾರ–ಎಫ್ ಶಾಖೆ:-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸಹಾಯಕರು/ಹಿರಿಯ ಸಹಾಯಕರುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು/ಕಡತಗಳನ್ನು ಪರಿಶೀಲಿಸಿ, ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುವುದು ಹಾಗೂ ಶಾಖೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುತ್ತಾ ಕಿರಿಯ ಸಹಾಯಕರು ಶಾಖೆಯ ವಿಷಯದ ಕಡತಗಳನ್ನು ದಾಖಲಿಸುವ ಮತ್ತು ರವಾನಿಸುವ ಕಾರ್ಯದ ಮೇಲ್ವಿಚಾರಣೆ ಕೈಗೊಳ್ಳುತ್ತಾರೆ.

1. ಕೇಂದ್ರ ಪುರಸ್ಕೃತ ಯೋಜನೆಗಳು ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟೀಸ್ /ಬ್ಯಾಂಕ್ಸ್
2. ಕೋ ಆಪರೇಟಿವ್ ರೂರಲ್ ಕ್ರೆಡಿಟ್ ಸೋಸೈಟೀಸ್ / ಬ್ಯಾಂಕ್ಸ್
3. ಕಾಸ್ಕಾರ್ಡ್ ಬ್ಯಾಂಕ್/ಅಪೆಕ್ಸ್ ಬ್ಯಾಂಕ್/ಡಿಸಿಸಿ ಬ್ಯಾಂಕ್‌ಗಳ ವಿಷಯಗಳು
4. ವ್ಯವಸಾಯ ಸೇವಾ ಸಹಕಾರ ಸಂಘಗಳು/ಕ್ರೆಡಿಟ್ ಸಹಕಾರ ಸಂಘಗಳ ವಿಷಯಗಳು/ಹಾಲು ಉತ್ಪನ್ನಗಳ ಸಹಕಾರ ಸಂಘಗಳು.
5. ಕೆಎಮ್‌ಎಫ್ /ಎನ್‌ಡಿಡಿಬಿ ವಿಷಯಗಳು, ನಬಾರ್ಡ್ ವಿಷಯಗಳು
6. ಸಹಕಾರ ಇಲಾಖೆಯ ಮುಂದುವರಿದ ಯೋಜನೆಗಳ ವಿಷಯಗಳು
7. ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿ ಮತ್ತು ಪುನರ್ ಪರಿಶೀಲನಾ ಅರ್ಜಿಗಳು

ಹಿರಿಯ ಸಹಾಯಕರು / ಸಹಾಯಕರು:-

ಇವರು ಕೇಂದ್ರ ಪುರಸ್ಕೃತ ಯೋಜನೆಗಳು ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟೀಸ್ / ಬ್ಯಾಂಕ್ಸ್, ಕೋಆಪರೇಟಿವ್ ರೂರಲ್ ಕ್ರೆಡಿಟ್ ಸೋಸೈಟೀಸ್ / ಬ್ಯಾಂಕ್ಸ್, ಕಾಸ್ಕಾರ್ಡ್ ಬ್ಯಾಂಕ್ / ಅಪೆಕ್ಸ್ ಬ್ಯಾಂಕ್ / ಡಿಸಿಸಿ ಬ್ಯಾಂಕ್‌ಗಳ ವಿಷಯಗಳು, ವ್ಯವಸಾಯ ಸೇವಾ ಸಹಕಾರ ಸಂಘಗಳು/ಕ್ರೆಡಿಟ್ ಸಹಕಾರ ಸಂಘಗಳ ವಿಷಯಗಳು / ಹಾಲು ಉತ್ಪನ್ನಗಳ ಸಹಕಾರ ಸಂಘಗಳು, ಕೆಎಂಎಫ್ / ಎನ್ ಡಿಡಿಬಿ ವಿಷಯಗಳು, ನಬಾರ್ಡ್ ವಿಷಯಗಳು, ಸಹಕಾರ ಇಲಾಖೆಯ ಮುಂದುವರಿದ ಯೋಜನೆಗಳ ವಿಷಯಗಳು, ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿ ಮತ್ತು ಪುನರ್ ಪರಿಶೀಲನಾ ಅರ್ಜಿಗಳ ವಿಷಯಗಳಿಗೆ ಸಂಬಂಧಪಟ್ಟ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:-

ನಿಗದಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಬೆರಳಚ್ಚುಗಾರರು:-

ಬೆರಳಚ್ಚು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

ಗ್ರೂಪ್-ಡಿ: -

ಶಾಖೆಯನ್ನು ಚೊಕ್ಕಟವಾಗಿಡುವುದು, ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ / ಶಾಖೆಗೆ ಕಡತಗಳನ್ನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

ಶಾಖಾಧಿಕಾರಿ, ಸಹಕಾರ-ಬಿ ಶಾಖೆ:-

ಇವರು ಈ ಕೆಳಕಂಡ ವಿಷಯಗಳ ಬಗ್ಗೆ ಸಹಾಯಕರು / ಹಿರಿಯ ಸಹಾಯಕರುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು / ಕಡತಗಳನ್ನು ಪರಿಶೀಲಿಸಿ. ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುವುದು ಹಾಗೂ ಶಾಖೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುತ್ತಾ ಕಿರಿಯ ಸಹಾಯಕರು ಶಾಖೆಯ ವಿಷಯದ ಕಡತಗಳನ್ನು ದಾಖಲಿಸುವ ಮತ್ತು ರವಾನಿಸುವ ಕಾರ್ಯದ ಮೇಲ್ವಿಚಾರಣೆ ಕೈಗೊಳ್ಳುತ್ತಾರೆ.

1. ಚಿಟ್ ಫಂಡ್ ಆಕ್ಟ್ / ಮನಿಲೆಂಡರ್ ಆಕ್ಟ್ / ಪಾನ್‌ಬ್ರೋಕರ್ ಆಕ್ಟ್ / ರೂಲ್ಸ್
2. ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
3. ಕರ್ನಾಟಕ ಸಹಕಾರ ಸಂಘಗಳ ಕಾಯಿದೆ / ನಿಯಮಗಳು / ತಿದ್ದುಪಡಿ ವಿಷಯಗಳು
4. ಸಹಕಾರ ಸಂಘಗಳ ನಾಮ ನಿರ್ದೇಶನಗಳು
5. ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
6. ಪಟ್ಟಣ ಬ್ಯಾಂಕಗಳ ಮಹಾ ಮಂಡಳ / ಪಟ್ಟಣ ಬ್ಯಾಂಕುಗಳ ವಿಷಯಗಳು
7. ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ನಿಯಮಿತ ವಿಷಯಗಳು
8. ವಸತಿ ಮಹಾ ಮಂಡಳ
9. ಸಹಕಾರ ಕುರಿ ಉತ್ಪಾದನೆ ಮಂಡಳಿ
10. ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿಗಳು ಮತ್ತು ಪುನರ್ ಪರಿಶೀಲನಾ ಅರ್ಜಿಗಳು
11. ಪಾನ್‌ಬ್ರೋಕರ್ ಆಕ್ಟ್ / ರೂಲ್ಸ್ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು

ಹಿರಿಯ ಸಹಾಯಕರು / ಸಹಾಯಕರು:–

ಇವರು ಚಿಟ್ ಫಂಡ್ ಆಕ್ಟ್ / ಮನಿಲೆಂಡರ್ ಆಕ್ಟ್ / ಪಾನ್‌ಬ್ರೋಕರ್ ಆಕ್ಟ್ / ರೂಲ್ಸ್, ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು, ಕರ್ನಾಟಕ ಸಹಕಾರ ಸಂಘಗಳ ಕಾಯಿದೆ / ನಿಯಮಗಳು/ ತಿದ್ದುಪಡಿ ವಿಷಯಗಳು, ಸಹಕಾರ ಸಂಘಗಳ ನಾಮ ನಿರ್ದೇಶನಗಳು, ಗೃಹನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು, ಪಟ್ಟಣ ಬ್ಯಾಂಕಗಳ ಮಹಾ ಮಂಡಳ / ಪಟ್ಟಣ ಬ್ಯಾಂಕುಗಳ ವಿಷಯಗಳು, ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ನಿಯಮಿತ ವಿಷಯಗಳು, ವಸತಿ ಮಹಾ ಮಂಡಳ, ಸಹಕಾರ ಕುರಿ ಉತ್ಪಾದನೆ ಮಂಡಳಿ, ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಸಲ್ಲಿಸುವ ಮೇಲ್ಮನವಿಗಳು ಮತ್ತು ಪುನರ್ ಪರಿಶೀಲನಾ ಅರ್ಜಿಗಳು, ಪಾನ್‌ಬ್ರೋಕರ್ ಆಕ್ಟ್/ರೂಲ್ಸ್ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳಿಗೆ ಸಂಬಂಧಪಟ್ಟ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಿರಿಯ ಸಹಾಯಕರು:–

ನಿಗಧಿಪಡಿಸಿದ ರಿಜಿಸ್ಟರ್‌ಗಳನ್ನು ನಿರ್ವಹಿಸುವುದು. ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುತ್ತಾರೆ.

ಬೆರಳಚ್ಚುಗಾರರು:–

ಬೆರಳಚ್ಚು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ.

ಗ್ರೂಪ್ –ಡಿ:–

ಶಾಖೆಯನ್ನು ಚೊಕ್ಕಟವಾಗಿಡುವುದು. ಮಾನ್ಯ ಸಚಿವರುಗಳಿಗೆ ಹಾಗೂ ಸಚಿವಾಲಯದೊಳಗಿನ ಇಲಾಖೆಗೆ/ಶಾಖೆಗೆ ಕಡತಗಳನ್ನು / ಟಪಾಲುಗಳನ್ನು ತೆಗೆದುಕೊಂಡು ಹೋಗುತ್ತಾರೆ.

4(ಬಿ)iii– ತೀರ್ಮಾನ ತೆಗೆದುಕೊಳ್ಳುವಲ್ಲಿ ಅನುಸರಿಸಲಾಗುವ ಕ್ರಮಗಳು:–

ಇಲಾಖಾ ಮುಖ್ಯಸ್ಥರುಗಳಿಂದ ಪ್ರಸ್ತಾವನಾ ಸ್ವೀಕೃತವಾದೊಡನೆ ಸಹಾಯಕರು / ಹಿರಿಯ ಸಹಾಯಕರು ಹೊಸ ಕಡತಗಳನ್ನು ತೆರೆದು ಅಥವಾ ವಿಷಯದ ಬಗ್ಗೆ ಲಭ್ಯವಿದ್ದ ಹಿಂದಿನ ಕಡತದಲ್ಲಿ ಅವುಗಳ ಪ್ರಾಮುಖ್ಯತೆಗೆ ತಕ್ಕಂತೆ ಸಂಬಂಧಪಟ್ಟ ನಿಯಮಗಳ ಅಡಿಯಲ್ಲಿ ಟಿಪ್ಪಣಿಯನ್ನು ಪ್ರಾರಂಭಿಸುತ್ತಾರೆ. ಸಹಾಯಕರು / ಹಿರಿಯ ಸಹಾಯಕರು ಸಲ್ಲಿಸಿದ ಟಿಪ್ಪಣಿಗಳನ್ನು ಶಾಖಾಧಿಕಾರಿಯವರು ಪರಿಶೀಲಿಸಿ, ಅಧೀನ ಕಾರ್ಯದರ್ಶಿಯವರಿಗೆ ಮಂಡಿಸುತ್ತಾರೆ. ಅಧೀನ ಕಾರ್ಯದರ್ಶಿಯವರು ವಿಷಯಗಳ ಪ್ರಾಮುಖ್ಯತೆಗೆ ತಕ್ಕಂತೆ ಸಂಬಂಧಪಟ್ಟ ನಿಯಮಗಳಡಿಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಮುಂದಿನ ಕ್ರಮ ಜರುಗಿಸಲು ಸಾಧ್ಯವಿದ್ದಲ್ಲಿ ತಮ್ಮ ಹಂತದಲ್ಲಿಯೇ ಜರುಗಿಸುತ್ತಾರೆ. ಅಥವಾ ಮುಂದಿನ ಆದೇಶಕ್ಕಾಗಿ ಜಂಟಿ ಕಾರ್ಯದರ್ಶಿಯವರಿಗೆ ಕಡತವನ್ನು ಮಂಡಿಸುತ್ತಾರೆ. ಜಂಟಿ ಕಾರ್ಯದರ್ಶಿಯವರು ಅಧೀನ ಕಾರ್ಯದರ್ಶಿಯವರಿಂದ ಸಲ್ಲಿಸಲ್ಪಟ್ಟ ಕಡತಗಳನ್ನು ಸಮಗ್ರವಾಗಿ ಪರಿಶೀಲಿಸಿ, ಮುಂದಿನ ಆದೇಶಕ್ಕಾಗಿ ಕಾರ್ಯದರ್ಶಿಯವರಿಗೆ ಕಡತವನ್ನು ಮಂಡಿಸುತ್ತಾರೆ. ಅಥವಾ ತಮ್ಮ ಹಂತದಲ್ಲಿಯೇ ಕ್ರಮ ಜರುಗಿಸಲು ಸಾಧ್ಯವಿದ್ದಲ್ಲಿ ಕ್ರಮ ಜರುಗಿಸುತ್ತಾರೆ. ಕಾರ್ಯದರ್ಶಿಯವರು ಕೆಲವು ಪ್ರಸ್ತಾವಗಳಿಗೆ ಸಂಬಂಧಿಸಿದಂತೆ ಅವುಗಳ ವಿಶಿಷ್ಟತೆಯನ್ವಯ ಕಾರ್ಯನೀತಿ ನಿರ್ಣಯ ಕೈಗೊಳ್ಳುತ್ತಾರೆ ಅಥವಾ ಅಗತ್ಯವಿದ್ದಲ್ಲಿ ಕಡತವನ್ನು ಸಂಬಂಧಪಟ್ಟ ಮಾನ್ಯ ಸಚಿವರುಗಳಿಗೆ ಸಲ್ಲಿಸುತ್ತಾರೆ.

4(ಬಿ)(iv)

ಸರ್ಕಾರದ ಕಾರ್ಯದರ್ಶಿಗಳು : ಪ್ರಕರಣಗಳ ಬಗ್ಗೆ ಆದ್ಯತೆಯ ಮೇಲೆ ಹಾಗೂ ತುರ್ತಾಗಿ ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಸರ್ಕಾರದ ಜಂಟಿ ಕಾರ್ಯದರ್ಶಿಗಳು /ವಿಶೇಷ ಕರ್ತವ್ಯಾಧಿಕಾರಿಗಳು ಮತ್ತು ಪದ ನಿಮಿತ್ತ ಜಂಟಿ ಕಾರ್ಯದರ್ಶಿಗಳು	:
ಸರ್ಕಾರದ ಅಧೀನ ಕಾರ್ಯದರ್ಶಿಗಳು	:
ಶಾಖಾಧಿಕಾರಿಗಳು	:
ಸಹಾಯಕರು / ಹಿರಿಯ ಸಹಾಯಕರು	: ಕಡತಗಳನ್ನು / ಸ್ವೀಕೃತಿಗಳನ್ನು 5 ದಿನದೊಳಗಾಗಿ ನಿರ್ವಹಿಸಬೇಕಾಗಿರುತ್ತದೆ.
ಶೀಘ್ರಲಿಪಿಗಾರರು / ಬೆರಳಚ್ಚುಗಾರರು/ ಕಿರಿಯ ಸಹಾಯಕರು	: ಇವರು ತಮಗೆ ವಹಿಸಿದ ಎಲ್ಲಾ ಕರ್ತವ್ಯಗಳನ್ನು ಆಯಾಯ ದಿನವೇ ಮುಗಿಸಬೇಕಾಗಿರುತ್ತದೆ.
ವಾಹನ ಚಾಲಕರು	: ವಾಹನವನ್ನು ಸಿದ್ಧತೆಯಲ್ಲಿಡಬೇಕಾಗಿರುತ್ತದೆ.
ದಲಾಯತ್	: ಶಾಖೆಯಲ್ಲಿ ಅವರಿಗೆ ವಹಿಸಿದ ಕೆಲಸಗಳನ್ನು ಆಯಾಯ ದಿನವೇ ಮುಗಿಸಬೇಕಾಗಿರುತ್ತದೆ

4(ಎ)(v)

1. ಕರ್ನಾಟಕ ನಾಗರೀಕ ಸೇವಾ ನಿಯಮಗಳು.
2. ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು.
3. ಕರ್ನಾಟಕ ಆರ್ಥಿಕ ಸಂಹಿತೆ.
4. ಕರ್ನಾಟಕ ಖಜಾನೆ ಸಂಹಿತೆ.
5. ಸಚಿವಾಲಯ ಕೈಪಿಡಿ.
6. ಕರ್ನಾಟಕ ಸಹಕಾರ ಸಂಘಗಳ ಕಾಯಿದೆ 1959 ಹಾಗೂ ಸಂಬಂಧಪಟ್ಟ ನಿಯಮಗಳು
7. ಕರ್ನಾಟಕ ಸೌಹಾರ್ದ ಸಹಕಾರಿ ಕಾಯಿದೆ 1997 ಹಾಗೂ ಸಂಬಂಧಪಟ್ಟ ನಿಯಮಗಳು
8. ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಅಧಿನಿಯಮ, 1966 ಹಾಗೂ ಸಂಬಂಧಪಟ್ಟ ನಿಯಮಗಳು
9. ಕನಾಟಕ ರಾಜ್ಯ ಉಗ್ರಾಣ ನಿಗಮ ಕಾಯಿದೆ 1961 ಹಾಗೂ ಸಂಬಂಧಪಟ್ಟ ನಿಯಮಗಳು
10. ಚಿಟ್ ಫಂಡ್ ಕಾಯಿದೆ 1982 ಹಾಗೂ ಸಂಬಂಧಪಟ್ಟ ನಿಯಮಗಳು
11. ಕರ್ನಾಟಕ ಲೇವಾದೇವಿ ಕಾಯಿದೆ 1961. ಹಾಗೂ ಸಂಬಂಧಪಟ್ಟ ನಿಯಮಗಳು
12. The Government (Allocation of Business Rules 1977
13. Karnataka Transaction of Business Rules, 1977
14. Karnataka Government Servants (Medical Attendance) Rules, 1963
15. The Karnataka Public Service Commission (Consultation) Regulation, 2000.
16. Appointment to the dependents of Government Servants who die while in service on compassionate grounds.

ಸಹಕಾರ ಇಲಾಖೆ "ಎ" ಶಾಖೆ – A

ಎ A	ಎಸಸೇ	**Asase**	➢ ಸಹಕಾರ ಇಲಾಖೆಯ ಸೇವಾ ವಿಷಯಗಳು
	ಎಲೆಸೇ	**Alese**	➢ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಸೇವಾ ವಿಷಯಗಳು
	ಸನಿಸೇ	**Sanise**	➢ ಸಹಕಾರ ಇಲಾಖೆಯ (ಪತ್ರಾಂಕಿತವಲ್ಲದ) ಸೇವಾ ವಿಷಯಗಳು
	ಇಸಿಎ	**ECA**	➢ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಸೇವಾ ವಿಷಯಗಳು
	ಸಿಇಎಂ	**CEM**	➢ ಸಹಕಾರ ಇಲಾಖೆಯ (ಪತ್ರಾಂಕಿತ) ಸೇವಾ ವಿವರಗಳು

ಸಹಕಾರ ಇಲಾಖೆ "ಬಿ" ಶಾಖೆ –B

ಬಿ B	ಎಂಆರ್ಇ	**MRE**	➢ ಕೃಷಿ ಮಾರಾಟ ಇಲಾಖೆಯ ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದ ವಿಷಯಗಳು
			➢ ಕೃಷಿ ಉತ್ಪನ್ನ ಮಾರಾಟ ನಿಯಂತ್ರಣ ಅಧಿನಿಯಮ/ನಿಯಮಗಳಿಗೆ ಸಂಬಂಧಿಸಿದ ವಿಷಯಗಳು
			➢ ವಿಧಾನಸಭೆ/ವಿಧಾನಪರಿಷತ್ತು ಪ್ರಶ್ನೆಗಳು
			➢ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
			➢ *ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ 1968 ಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು*
	ಮಾಇಸೇ	**EMD**	➢ *ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ / ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು*

	ಎಂಎಲ್‌ಡಬ್ಲ್ಯೂ	MLW	➢ ಕೃಷಿ ಮಾರಾಟ ಇಲಾಖೆಯ/ಮಂಡಳಿಯ ಎಲ್ಲಾ ನ್ಯಾಯಾಲಯ ಪ್ರಕರಣಗಳು
	ಸರವ	MDS	➢ ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ ಹೊಣೆಗಾರಿಕೆ ಪ್ರಕರಣಗಳು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು ➢ ಇತರೆ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
		LAQ	➢ ವಿಧಾನಸಭೆಗೆ ಸಂಬಂಧಿಸಿದ ಎಲ್ಲಾ ವಿಷಯಗಳು
		LCQ	➢ ವಿಧಾನ ಪರಿಷತ್‌ಗೆ ಸಂಬಂಧಿಸಿದ ಎಲ್ಲಾ ವಿಷಯಗಳು
ಬಿ B	ಎಂಆರ್‌ಇ	MRE	➢ ಕೃಷಿ ಮಾರಾಟ ಇಲಾಖೆಯ ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದ ವಿಷಯಗಳು
			➢ ಕೃಷಿ ಉತ್ಪನ್ನ ಮಾರಾಟ ನಿಯಂತ್ರಣ ಅಧಿನಿಯಮ/ನಿಯಮಗಳಿಗೆ ಸಂಬಂಧಿಸಿದ ವಿಷಯಗಳು
			➢ ವಿಧಾನಸಭೆ/ವಿಧಾನಪರಿಷತ್ತು ಪ್ರಶ್ನೆಗಳು
			➢ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
			➢ *ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ 1968 ಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು*
	ಮಾಇಸೇ	EMD	➢ *ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿ / ಅಧಿಕಾರಿಗಳ ಎಲ್ಲಾ ಸೇವಾ ವಿಷಯಗಳು*
	ಎಂಎಲ್‌ಡಬ್ಲ್ಯೂ	MLW	➢ ಕೃಷಿ ಮಾರಾಟ ಇಲಾಖೆಯ/ಮಂಡಳಿಯ ಎಲ್ಲಾ ನ್ಯಾಯಾಲಯ ಪ್ರಕರಣಗಳು
	ಸರವ	MDS	➢ ಕೃಷಿ ಮಾರಾಟ ಇಲಾಖೆಯ ಅಧಿಕಾರಿಗಳ ಆಸ್ತಿ ಹೊಣೆಗಾರಿಕೆ ಪ್ರಕರಣಗಳು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು ➢ ಇತರೆ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು
		LAQ	➢ ವಿಧಾನಸಭೆಗೆ ಸಂಬಂಧಿಸಿದ ಎಲ್ಲಾ ವಿಷಯಗಳು
		LCQ	➢ ವಿಧಾನ ಪರಿಷತ್‌ಗೆ ಸಂಬಂಧಿಸಿದ ಎಲ್ಲಾ ವಿಷಯಗಳು

ಸಹಕಾರ ಇಲಾಖೆ "ಸಿ" ಶಾಖೆ C

ಸಿ C	ರರವಿ		➢ ಸ್ವೀಕೃತಿ ಮತ್ತು ರವಾನೆಗೆ ಸಂಬಂಧಿಸಿದ ಎಲ್ಲ ವಿಷಯಗಳು
			➢ ಸಚಿವಾಲಯ ಕೈಪಿಡಿಯಲ್ಲಿ ನಿಗದಿಪಡಿಸಿದ ಕ್ರೋಢಿಕರಣ ವಿಷಯಗಳು
			➢ ಸಚಿವಾಲಯದ ಮಟ್ಟದ ಅಂತರ್ ಶಾಖೆ ಕ್ರೋಢಿಕರಣಕ್ಕೆ ಸಂಬಂಧಿಸಿದ ವಿಷಯಗಳು
			➢ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಪ್ರಶ್ನೆಗಳಿಗೆ ಸಂಬಂಧಿಸಿದ ವಿಷಯಗಳು ಮತ್ತು ಸಮನ್ವಯ ಪ್ರಕರಣಗಳು
			➢ ಸಂಘಟನೆ ಮತ್ತು ವ್ಯವಸ್ಥಾಪನಾ (O&M) ವಿಷಯಗಳು

ಸಹಕಾರ ಇಲಾಖೆ "ಡಿ" ಶಾಖೆ – D

ಡಿ D		CES	➢ ಬಳಕೆದಾರರ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು. ➢ ಕರ್ನಾಟಕ ಸಹಕಾರ ಗ್ರಾಹಕರ ಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
		PMC	➢ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್)ಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು. ➢ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು. ➢ ಎನ್.ಸಿ.ಡಿ.ಸಿ 3ನೇ ಯೋಜನೆಗೆ ಸಂಬಂಧಿಸಿದ ವಿಷಯಗಳು. ➢ ಗ್ರಾಮೀಣ ಗೋದಾಮು, ಮಾರುಕಟ್ಟೆ ಗೋದಾಮುಗಳನ್ನು ನಿರ್ಮಿಸಲು ಸಹಕಾರ ಸಂಘಗಳಿಗೆ ಆರ್ಥಿಕ ಸಹಾಯ. ➢ ಸಂಸ್ಕರಣ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು. ➢ ಗ್ರಾಮೀಣ ವಿದ್ಯುತ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ವಿಷಯಗಳು.
		WHC	➢ ಕರ್ನಾಟಕ ರಾಜ್ಯ ಉಗ್ರಾಣ ನಿಗಮಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.
		CWP	➢ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದ ರಿಟ್ ಅರ್ಜಿಗಳು
		MCS	➢ ಮಹಿಳಾ ವಿವಿದೋದ್ದೇಶ ಸಹಕಾರ ಸಂಘಗಳಿಗೆ ಮತ್ತು ಲ್ಯಾಂಪ್ಸ್ ಸಹಕಾರ ಸಂಘಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು.

ಸಹಕಾರ ಇಲಾಖೆ "ಎಫ್" ಶಾಖೆ – F

ಎಫ್ F		CLS	➢ ಸೆಂಟ್ರಲ್ ಸ್ಕೀಮ್ಸ್
		CCB	➢ ಕೋ–ಆಪರೇಟಿವ್ ಕ್ರೆಡಿಟ್ ಸೋಸೈಟೀಸ್ / ಬ್ಯಾಂಕ್ಸ್
		CRC	➢ ಕೋಆಪರೇಟಿವ್ ರೂರಲ್ ಕ್ರೆಡಿಟ್ ಸೋಸೈಟೀಸ್/ಬ್ಯಾಂಕ್ಸ್

ಸಹಕಾರ ಇಲಾಖೆ "ಜಿ" ಶಾಖೆ – G

ಜಿ G		CML	➢ ಚಿಟ್ ಫಂಡ್ ಆಕ್ಟ್ / ಮನಿಲೆಂಡರ್ ಆಕ್ಟ್ / ಪಾನ್‌ಬ್ರೋಕರ್ ಆಕ್ಟ್ / ರೂಲ್ಸ್
		CLM	➢ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು ಕೆ.ಸಿ.ಎಸ್. ಆಕ್ಟ್ / ನಿಯಮಗಳು
		CNS	➢ ನಾಮನಿರ್ದೇಶನಗಳು
		CHS	➢ ಗೃಹನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಪಟ್ಟ ವಿಷಯಗಳು
		CWP	➢ ರಿಟ್ ಪಿಟಿಷನ್‌ಗಳು
		CAP	➢ ಸರ್ಕಾರದ ಮುಂದೆ ಸಲ್ಲಿಸುವ ಮೇಲ್ಮನವಿ ಮತ್ತು ಪುನರ್ ಪರಿಶೀಲನಾ ಅರ್ಜಿಗಳು
		CGM	➢ ಕಳೆದ 2 ವರ್ಷಗಳಿಂದ ಈ ಕಡತ ಶೀರ್ಷಿಕೆಯನ್ನು ನಿರ್ವಹಿಸುತ್ತಿಲ್ಲ

4(ಬಿ)(viii)

ಈ ಇಲಾಖೆಯ ವ್ಯಾಪ್ತಿಯಲ್ಲಿ ಈ ಕೆಳಕಂಡ ನಿಗಮ / ಮಂಡಳಿಗಳು ಬರುತ್ತವೆ.

1. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ
2. ಕರ್ನಾಟಕ ರಾಜ್ಯ ಉಗ್ರಾಣ ನಿಗಮ
3. ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿಯಮಿತ

4. ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿಯಮಿತ
5. ಕರ್ನಾಟಕ ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ, ಬೆಂಗಳೂರು
6. ರಬ್ಬರ್ ಮಾರಾಟ ಮತ್ತು ಸಂಸ್ಕರಣ ಸಹಕಾರ ಸಂಘ ನಿ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ.
7. ಕೇಂದ್ರ ಅಡಿಕೆ ಮತ್ತು ಕೋಕೋ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘ ನಿ, ಮಂಗಳೂರು(ಕ್ಯಾಂಪ್ಕೋ)
8. ಮಲೆನಾಡು ಅಡಿಕೆ ಮಾರಾಟ ಸಹಕಾರ ನಿ, ಶಿವಮೊಗ್ಗ (ಮ್ಯಾಮ್ಕೋಸ್)
9. ಅಡಿಕೆ ಸಂಸ್ಕರಣ ಮತ್ತು ಮಾರಾಟ ಸಹಕಾರ ಸಂಘ ನಿ, ಸಾಗರ (ಆಫ್ ಕೋಸ್)
10. ಕರ್ನಾಟಕ ರಾಜ್ಯ ಸಹಕಾರಿ ತೋಟಗಾರಿಕೆ ಮಾರಾಟ ಮಹಾಮಂಡಳ ನಿ, ಬೆಂಗಳೂರು
11. ತೋಟದ ಬೆಳೆಗಾರರ ಸಹಕಾರಿ ಮಾರಾಟ ಮತ್ತು ಸಂಸ್ಕರಣ ಸಂಘ ನಿ, ಬೆಂಗಳೂರು (ಹಾಪ್‌ಕಾಮ್ಸ್)
12. ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳ ನಿ,
13. ಕರ್ನಾಟಕ ರಾಜ್ಯ ಸಹಕಾರಿ ಗ್ರಾಹಕರ ಮಹಾ ಮಂಡಳ
14. ಕರ್ನಾಟಕ ರಾಜ್ಯ ವಸತಿ ಮಹಾಮಂಡಳ ನಿ, ಬೆಂಗಳೂರು.
15. ದೊಡ್ಡ ಪ್ರಮಾಣದ ಆದಿವಾಸಿ ವಿವಿಧೋದ್ದೇಶ ಸಹಕಾರ ಸಂಘಗಳು (ಲ್ಯಾಂಪ್ಸ್) ಮತ್ತು ಲ್ಯಾಂಪ್ಸ್ ಮಹಾಮಂಡಳ
16. ಕರ್ನಾಟಕ ರಾಜ್ಯ ಮಹಿಳಾ ಸಹಕಾರ ಮಹಾಮಂಡಳ ನಿ, ಬೆಂಗಳೂರು
17. ವಿವಿಧೋದ್ದೇಶ ಸಹಕಾರ ಸಂಘಗಳು
18. ಸಹಕಾರಿ ಆಸ್ಪತ್ರೆಗಳು
19. ಗ್ರಾಮೀಣ ವಿದ್ಯುಚ್ಛಕ್ತಿ ಸಹಕಾರ ಸಂಘ
20. ಸಾರಿಗೆ ಸಹಕಾರ ಸಂಘಗಳು
21. ಕರ್ನಾಟಕ ರಾಜ್ಯ ಸಹಕಾರಿ ಮೀನುಗಾರಿಕೆ ಮಹಾಮಂಡಳಿ, ಮೈಸೂರು
22. ಮರ ಬೆಳೆಯುವವರ ಸಹಕಾರ ಸಂಘಗಳು
23. ಕಾರ್ಮಿಕ ಸಹಕಾರ ಸಂಘಗಳು
24. ಕ್ರೀಡಾ ಉತ್ತೇಜನ ಮತ್ತು ಅಭಿವೃದ್ಧಿ ಸಹಕಾರ ಸಂಘ, ಚಂದರಗಿ.
25. ಕರ್ನಾಟಕ ರಾಜ್ಯ ಸಹಕಾರಿ ನೂಲಿನ ಗಿರಣಿಗಳ ಮಹಾಮಂಡಳ ನಿ, ಬೆಂಗಳೂರು.
26. ಯಶಸ್ವಿನಿ ಸಹಕಾರಿ ರೈತರ ಆರೋಗ್ಯ ರಕ್ಷಣಾ ಯೋಜನೆ
27. ಕರ್ನಾಟಕ ರಾಜ್ಯ ಸಹಕಾರ ಸಕ್ಕರೆ ಕಾರ್ಖಾನೆಗಳ ಮಹಾಮಂಡಳ
28. ಕರ್ನಾಟಕ ರಾಜ್ಯ ಸಹಕಾರಿ ಪಟ್ಟಣ ಬ್ಯಾಂಕುಗಳ ಮಹಾಮಂಡಳ ನಿ, ಬೆಂಗಳೂರು
29. ಮಹಿಳಾ ಪಟ್ಟಣ ಸಹಕಾರಿ ಬ್ಯಾಂಕುಗಳು.

ಕಲಂ 4(1) ಬಿ ರಡಿ (IX) ಮತ್ತು (X) ಅಡಿ ಸಹಕಾರ ಇಲಾಖೆಯ ಅಧಿಕಾರಿ/ನೌಕರರ ವಿವರಗಳು ಈ ಕೆಳಕಂಡಂತೆ ಇರುತ್ತದೆ.

ಕ್ರ ಸಂ.	ಅಧಿಕಾರಿ/ನೌಕರರ ಹೆಸರು ಶ್ರೀ/ಶ್ರೀಮತಿ	ಪದನಾಮ	ವೇತನ ರೂ.ಗಳಲ್ಲಿ
1	ಎನ್.ಸಿ.ಮುನಿಯಪ್ಪ	ಸರ್ಕಾರದ ಕಾರ್ಯದರ್ಶಿ	71,522–00
2	ಫೈರೋಜಾ ಖಾನಂ	ಸರ್ಕಾರದ ಸಹ ಕಾರ್ಯದರ್ಶಿ	28,275–00
3	ಆರ್.ಎಸ್.ಹುಚ್ಚಾಚಾರಿ	ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ	48,327–00
4	ಸಿ.ಕೆ.ವಾಸುದೇವಮೂರ್ತಿ	ಅಧೀನ ಕಾರ್ಯದರ್ಶಿ–1	23,578–00
5	ನಂಜುಂಡಪ್ಪ	ಅಧೀನ ಕಾರ್ಯದರ್ಶಿ–2	23,193–00
	ಎ–ಶಾಖೆ		
6	ಸರಸ	ಶಾಖಾಧಿಕಾರಿ	25,614–00
7	ಸುಜಾತ.ಟಿ.ವಿ.	ಹಿರಿಯ ಸಹಾಯಕಿ	18,911–00
8	ಸಿದ್ದಪ್ಪ ಚಂದ್ರಶೇಖರ ವಠಾರ	ಸಹಾಯಕ	13,306–00

9	ವಿ.ವೆಂಕಟೇಶ್	ಸಹಾಯಕ	17,484-00
10	ಕೆ.ಎಸ್.ಚಿನ್ನೂಬಾಯಿ. **ಅ.ಕಾ-2**	ಶೀಘ್ರಲಿಪಿಗಾರ್ತಿ	15,520-00
11	ಸರಸ್ವತಮ್ಮ.ಟಿ.	ಕಿರಿಯ ಸಹಾಯಕಿ	11,031-00
12	ಖಾಲಿ	ಬೆರಳಚ್ಚುಗಾರ್ತಿ	–
13	ತಿಮ್ಮಮ್ಮ	ಜಮೇದಾರ್	12,971-00
	ಬಿ ಶಾಖೆ		
14	ವೆಂಕಟೇಶ್ವರ ಪ್ರಸಾದ್.ಸಿ	ಶಾಖಾಧಿಕಾರಿ	23,784-00
15	ಕೆ.ವೆಂಕಟೇಶ್	ಹಿರಿಯ ಸಹಾಯಕ	18,911-00
16	ಎಂ.ಎಂ.ನಂಜಮ್ಮ, **ಅ.ಕಾ-1**	ಹಿರಿಯ ಶೀಘ್ರಲಿಪಿಗಾರ್ತಿ	20,358-00
17	ನರಸಿಂಹಮೂರ್ತಿ	ಸಹಾಯಕ	12,752-00
18	ಜಯಣ್ಣ	ಸಹಾಯಕ	13,046-00
19	ಖಾಲಿ	ಕಿರಿಯ ಸಹಾಯಕ	–
20	ಹೇಮಾವತಿ.ಸಿ	ಬೆರಳಚ್ಚುಗಾರ್ತಿ	9,968-00
21	ಮಕ್‌ಬುಲ್ ಜಾನ್	ಜಮೇದಾರ್	12,990-00
	ಸಿ-ಶಾಖೆ (ಸಮನ್ವಯ)		
22	ಖಾಲಿ	ಶಾಖಾಧಿಕಾರಿ	–
23	ಖಾಲಿ	ಸಹಾಯಕ	–
24	ಕೆ.ಟಿ.ಮುನಿಯಪ್ಪ	ಸಹಾಯಕ	13,021-00
25	ಟಿ.ಜಯಲಕ್ಷ್ಮಮ್ಮ	ಕಿರಿಯ ಸಹಾಯಕಿ	11,313-00
26	ಖಾಲಿ	ಬೆರಳಚ್ಚುಗಾರರು	–
27	ಜಿ.ಶ್ರೀನಿವಾಸ್	ಕಿರಿಯ ಸಹಾಯಕ	14,391-00
28	ಖಾಲಿ	ದಲಾಯತ್	–
	ಡಿ-ಶಾಖೆ		
29	ಎಚ್.ಎನ್.ನಾಗರಾಜ್	ಶಾಖಾಧಿಕಾರಿ	21,000-00
30	ಎಸ್.ಜಗದೀಶ್	ಹಿರಿಯ ಸಹಾಯಕ	24,998-00
31	ಕೆ.ವೈ.ರಮೇಶ್	ಸಹಾಯಕ	13,700-00
32	ರಾಘವನ್.ಆರ್.ವಿ	ಸಹಾಯಕ	13,938-00
33	ಅನುರಾಧ.ಎಂ.ಆರ್.	ಕಿರಿಯ ಸಹಾಯಕಿ	9,969-00
34	ಯುಸುಫ್ ಕುಡಚಿ	ಬೆರಳಚ್ಚುಗಾರ	–
35	ಯಶವಂತರಾವ್	ಜಮೇದಾರ್	13,300-00
	ಎಫ್- ಶಾಖೆ		
36	ನಾಗರತ್ನಮ್ಮ	ಪೀಠಾಧಿಕಾರಿ-2	23,684-00
37	ಸೆಲ್ವಮಣಿ	ಹಿರಿಯ ಸಹಾಯಕಿ	18,911-00
38	ಖಾಲಿ	ಸಹಾಯಕ	–
39	ಎಂ.ಜೀರಪ್ಪ	ಸಹಾಯಕ	14,129-00
40	ವೇದಾವತಿ.ಜೆ.ಜಿ.	ಕಿರಿಯ ಸಹಾಯಕಿ	9.968-00
41	ಉಷಾ ಗಣೇಶ ಭಟ್	ಬೆರಳಚ್ಚುಗಾರ್ತಿ	9,968-00
	ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿಗಳ ಆಪ್ತ ಶಾಖೆ		
42	ಜೆ.ವಿಜಯಲಕ್ಷ್ಮಿ . (ಓ.ಎಸ್.ಡಿ)	ಶೀಘ್ರಲಿಪಿಗಾರ್ತಿ	19,149-00
43	ಖಾಲಿ	ಜಮೇದಾರ್	–
	ಜಿ-ಶಾಖೆ		
44	ಹೆಚ್.ಲಲಿತಮ್ಮ	ಶಾಖಾಧಿಕಾರಿ	26,028-00
45	ಸಂತಮಾರ್ಕ್ .ಆರ್.	ಹಿರಿಯ ಸಹಾಯಕಿ	17,414-00
46	ಆನಂದ	ಸಹಾಯಕರು	15,493-00

47	ವಿ.ಟಿ.ತಿಪ್ಪಯ್ಯ	ಕಿರಿಯ ಸಹಾಯಕ	9012-00
48	ಖಾಲಿ	ಬೆರಳಚ್ಚುಗಾರ್ತಿ	–
49	ಎಡ್ವಿನ್ ಗುಣರಾಜ್	ಜಮೇದಾರ್	–
	ಕಾರ್ಯದರ್ಶಿಯವರ ಆಪ್ತ ಶಾಖೆ		
50	ಹುನಗುಂದ	ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ	28,024-00
51	ಭಾಗ್ಯ .ಎಸ್.ಜೆ.	ಭಾಷಾಂತರಕಾರರು	23,054-00
52	ಡಿ.ವಿ.ಅರುಣಕುಮಾರಿ	ಶೀಘ್ರಲಿಪಿಗಾರ್ತಿ	23,638-00
53	ಬಸವರಾಜು	ಸಹಾಯಕ	14,354-00
54	ಐ.ಶಂಕರ್	ಜಮೇದಾರ್	13,938-00
ಸಹ ಕಾರ್ಯದರ್ಶಿಗವರ ಆಪ್ತಶಾಖೆ			
55	ಹೆಚ್.ಲಕ್ಷ್ಮೀನಾರಾಯಣ	ಶೀಘ್ರಲಿಪಿಗಾರರು	19,388-00
56	ಖಾಲಿ	ಕಿರಿಯ ಸಹಾಯಕ	–
57	ಖಾಲಿ	ಜಮೇದಾರ್	–

ಸಹಕಾರ ಇಲಾಖೆ

2009-10 ನೇ ಸಾಲಿನ ಆಯವ್ಯಯ ವಿವರ

ರೂ. ಲಕ್ಷಗಳಲ್ಲಿ

	ಲೆಕ್ಕಶೀರ್ಷಿಕೆ-2425	ಯೋಜನೆ	ಯೋಜನೇತರ
001	**ನಿರ್ದೇಶನ ಮತ್ತು ಆಡಳಿತ**	250.00	2405.16
003	**ತರಬೇತಿ**	--	23.36
101	ಸಹಕಾರಿ ಸಂಸ್ಥೆಗಳ ಲೆಕ್ಕ ಪರಿಶೋಧನೆ	49.32	2673.87
105	ಮಾಹಿತಿ ಮತ್ತು ಪ್ರಚಾರ	--	---
107	ಸಾಲ ನೀಡಿಕೆ ಸಹಕಾರಿ ಸಂಸ್ಥೆಗಳಿಗೆ ಸಹಾಯ	9435.73	5083.25
108	ಇತರೆ ಸಹಕಾರಿ ಸಂಸ್ಥೆಗಳಿಗೆ ಸಹಾಯ	P+NP	197.15
196	ಜಿಲ್ಲಾ ಪಂಚಾಯತ್ ಗಳಿಗೆ ಸಹಾಯ	302.73	--
197	ತಾಲ್ಲೂಕು ಪಂಚಾಯತ್‌ಗಳಿಗೆ ಸಹಾಯ	132.60	--
	ಜುಮ್ಲಾ	10170.38	10382.79
	ಜುಮ್ಲಾ	P+NP	

ಲೆಕ್ಕ ಶೀರ್ಷಿಕೆ : 4425 ಸಹಕಾರದ ಮೇಲಣ ಬಂಡವಾಳದ ವೆಚ್ಚ

ರೂ. ಲಕ್ಷಗಳಲ್ಲಿ

	ಲೆಕ್ಕಶೀರ್ಷಿಕೆ-2425	ಯೋಜನೆ	ಯೋಜನೇತರ
108	**ಇತರೆ ಸಹಕಾರ ಸಂಸ್ಥೆಗಳಲ್ಲಿ ಬಂಡವಾಳ ಹೂಡಿಕೆ**	197.15	–
	ಜುಮ್ಲಾ Voted	197.15	–
		(Plan + Nonplan)	197.15
211	ಬಂಡವಾಳ	197.15	–
	ಜುಮ್ಲಾ – 53 **Voted**	197.15	–
211	ಬಂಡವಾಳ	197.15	–
	ಜುಮ್ಲಾ – 54 **Voted**	197.15	–
	ಜುಮ್ಲಾ – 108	197.15	–

ಲೆಕ್ಕ ಶೀರ್ಷಿಕೆ : 6425 ಸಹಕಾರಿ ಸಂಸ್ಥೆಗಳಿಗೆ ಸಾಲಗಳು :

ರೂ. ಲಕ್ಷಗಳಲ್ಲಿ

	ಲೆಕ್ಕಶೀರ್ಷಿಕೆ–190	ಯೋಜನೆ	ಯೋಜನೇತರ
108	ಇತರೆ ಸಹಕಾರಿ ಸಂಸ್ಥೆಗಳಿಗೆ ಸಾಲ	623.25	–
	ಜುಮ್ಲಾ – 6425 Voted	623.25	–
	ಒಟ್ಟು ಮೊತ್ತ	(Plan + Nonplan)	623.25

4(ಬಿ)(xii)

ಈ ಇಲಾಖೆಯಲ್ಲಿ 01/04/2004 ನೇ ಸಾಲಿನಿಂದ ರೈತರಿಗೆ ಶೇಕಡ 6 ರ ಬಡ್ಡಿದರವನ್ನು ಕೃಷಿ ಸಾಲ ಸೌಲಭ್ಯ ಒದಗಿಸುವ ಯೋಜನೆಯನ್ನು ಜಾರಿಗೆ ತಂದಿದೆ. ಅದರನ್ವಯ ರಾಜ್ಯದಲ್ಲಿ ಸಹಕಾರ ಸಂಘಗಳು ಈ ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಸರ್ಕಾರವು ಸರಾಸರಿ 5.5 ರಷ್ಟು ವ್ಯತ್ಯಾಸ ಬಡ್ಡಿಯನ್ನು ಸಹಕಾರ ಸಂಘಗಳಿಗೆ ಭರಿಸುತ್ತಿದೆ.

4(ಬಿ)(xiii)

ಈ ಇಲಾಖೆಯಲ್ಲಿ ನೇರವಾಗಿ concession permits or authorization ಗಳನ್ನು ವಿಸ್ತರಿಸಿರುವುದಿಲ್ಲ.

4(ಬಿ)(xiv)

ಈ ಬಗ್ಗೆ ಮಾಹಿತಿಯನ್ನು ಗಣಕಯಂತ್ರದಲ್ಲಿ ಅಳವಡಿಸಲು ಕ್ರಮ ಜರುಗಿಸಲಾಗುವುದು.

4(ಬಿ)(xv)

ಈ ಬಗ್ಗೆ ಸಚಿವಾಲಯದಲ್ಲಿ ಸಿಬ್ಬಂದಿಯ ಅಧ್ಯಯನ ಹಾಗೂ ಸಾಮಾನ್ಯ ಅಭ್ಯಾಸಕ್ಕೆ ಅವಶ್ಯವಿರುವ ಪುಸ್ತಕ ಹಾಗೂ ನಿಯತಕಾಲಿಕವಿರುವ ಒಂದು ಗ್ರಂಥ ಬಂಡಾರವಿದೆ. ಈ ಇಲಾಖೆಯಲ್ಲಿ ಪ್ರತ್ಯೇಕವಾದ ಯಾವುದೇ ಗ್ರಂಥ ಬಂಡಾರವಿರುವುದಿಲ್ಲ.

4(ಬಿ)(xvi)

1	**ಶ್ರೀ ಎನ್.ಸಿ.ಮುನಿಯಪ್ಪ**	ದೂರವಾಣಿ ಸಂಖ್ಯೆ ಕಛೇರಿ:	22251297
	ಸರ್ಕಾರದ ಕಾರ್ಯದರ್ಶಿ		22032512
	ಸಹಕಾರ ಇಲಾಖೆ		
	ಬಹುಮಹಡಿಗಳ ಕಟ್ಟಡ, ಬೆಂಗಳೂರು	ಮನೆ:	25727200
2	ಶ್ರೀಮತಿ ಫೈರೋಜಾ ಖಾನಂ	ದೂರವಾಣಿ ಸಂಖ್ಯೆ ಕಛೇರಿ:	22353951
	ಸರ್ಕಾರದ ಜಂಟಿ ಕಾರ್ಯದರ್ಶಿ		22032521
	ಸಹಕಾರ ಇಲಾಖೆ,	ಮನೆ:	23330293
	ಬಹುಮಹಡಿಗಳ ಕಟ್ಟಡ, ಬೆಂಗಳೂರು.		
3	ಶ್ರೀ ಆರ್.ಎಸ್.ಹುಚ್ಚಾಚಾರಿ	ದೂರವಾಣಿ ಸಂಖ್ಯೆ ಕಛೇರಿ	22353950
	ವಿಶೇಷಾಧಿಕಾರಿ ಹಾಗೂ ಪದನಿಮಿತ್ತ		22032368
	ಜಂಟಿ ಕಾರ್ಯದರ್ಶಿ, ಸಹಕಾರ ಇಲಾಖೆ	ಮನೆ :	23640404
	ಬಹುಮಹಡಿಗಳ ಕಟ್ಟಡ, ಬೆಂಗಳೂರು.		
4	ಶ್ರೀ ಸಿ.ಕೆ.ವಾಸುದೇವ ಮೂರ್ತಿ	ದೂರವಾಣಿ ಸಂಖ್ಯೆ ಕಛೇರಿ:	22032431
	ಸರ್ಕಾರದ ಅಧೀನ ಕಾರ್ಯದರ್ಶಿ–1,	ಮನೆ :	23333214
	ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ		
	ಬೆಂಗಳೂರು–1.		
5	ಶ್ರೀ ನಂಜುಂಡಪ್ಪ	ದೂರವಾಣಿ ಸಂಖ್ಯೆ ಕಛೇರಿ	22032396
	ಸರ್ಕಾರದ ಅಧೀನ ಕಾರ್ಯದರ್ಶಿ–2,	ಮನೆ:	
	ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ		
	ಬೆಂಗಳೂರು–1		

ಕಲಂ 4(1)ಬಿ (XVII) ರತಿ ನಿಯಮಿಸಬಹುದಾದಂತಹ ಇತರ ಮಾಹಿತಿಗಳನ್ನು ಪ್ರಕಟಿಸತಕ್ಕದ್ದು ಮತ್ತು ಆ ತರುವಾಯ ಪ್ರತಿ ವರ್ಷ ಈ ಪ್ರಕಟಣೆಗಳನ್ನು ಅಂದಿನ ವರೆಗೆ ಪರಿಷ್ಕರಿಸತಕ್ಕದ್ದು;

ಯಾವುದೇ ಇತರ ಮಾಹಿತಿಗಳನ್ನು ಪ್ರಕಟಿಸಲು ಇರುವುದಿಲ್ಲ ಮತ್ತು ಮೇ 2009 ರ ವರೆಗೆ ಪರಿಷ್ಕೃತಗೊಂಡಿದೆ.

ಸಿ.ಕೆ.ವಾಸುದೇವ ಮೂರ್ತಿ
ಸರ್ಕಾರದ ಅಧೀನ ಕಾರ್ಯದರ್ಶಿ
ಸಹಕಾರ ಇಲಾಖೆ

ಪಿ.ಆರ್. 180

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಏಪ್ರಿಲ್ ೧, ೨೦೧೦ (ಚೈತ್ರ ೧೧, ಶಕ ವರ್ಷ ೧೯೩೨)	ಸಂಚಿಕೆ ೧೩

ಭಾಗ – ೫

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

ಜಿಲ್ಲಾಧಿಕಾರಿಗಳ ಕಾರ್ಯಾಲಯ ಮೈಸೂರು ಜಿಲ್ಲೆ, ಮೈಸೂರು

ದೂರವಾಣಿ ಸಂಖ್ಯೆ – ಕಛೇರಿ: 0821–2422302, ಫ್ಯಾಕ್ಸ್ : 0821–2429012, EPBX: 0821-2424079

ಅಧಿಕೃತಜ್ಞಾಪನ

ಸಂ:ಗ್ರಾಲೆಸಿ/101/2008–09, ಮೈಸೂರು, ದಿನಾಂಕ: 1ನೇ ಮಾರ್ಚ್ 2010

ವಿಷಯ: ಮೈಸೂರು ಜಿಲ್ಲೆಯ, ಕಂದಾಯ ಘಟಕದ, ಭೂಮಿ ಕೇಂದ್ರಗಳಲ್ಲಿ ಖಾಲಿಯಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂ: ಆರ್.ಡಿ.130 ಬಿ.ಎಸ್.ಸಿ. 2007 ದಿನಾಂಕ 19–2–2009
2. ಸರ್ಕಾರದ ಅಧಿಸೂಚನೆ ಸಂ: ಕಂ.ಇ.299 ಬಿಎಸ್‌ಸಿ.2009 ದಿನಾಂಕ 24–7–2009 ಹಾಗೂ 8–9–2009
3. ಈ ಕಾರ್ಯಾಲಯದ ಅಧಿಸೂಚನೆ ಸಮಸಂಖ್ಯೆಯ ದಿನಾಂಕ 26–9–2009 ಹಾಗೂ 29–9–2009
4. ಈ ಕಾರ್ಯಾಲಯದಿಂದ ಪ್ರಕಟಿಸಲಾದ ಪರಿಶೀಲನಾ ಪಟ್ಟಿ ದಿನಾಂಕ 30–11–2009
5. ಈ ಕಾರ್ಯಾಲಯದ ಸಮಸಂಖ್ಯೆಯ ಅಧಿಕೃತಜ್ಞಾಪನ ದಿನಾಂಕ 16–12–2009
6. ಈ ಕಾರ್ಯಾಲಯದ ಸಮಸಂಖ್ಯೆಯ ಅಧಿಕೃತಜ್ಞಾಪನ ದಿನಾಂಕ 19–2–2009 ಹಾಗೂ 5–1–2010

ಸರ್ಕಾರದ ಉಲ್ಲೇಖ (2)ರ ಅಧಿಸೂಚನೆಯನ್ವಯ ಕಂದಾಯ ಇಲಾಖೆಯಲ್ಲಿ ಖಾಲಿಯಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರನೇಮಕಾತಿ ಮೂಲಕ 1977ರ ಗ್ರಾಮಲೆಕ್ಕಿಗರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಿ ದಿನಾಂಕ 24–7–2009 ರಂದು ಪ್ರಕಟಿಸಿರುವಂತೆ ಖಾಲಿಯಿರುವ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಿರುತ್ತಾರೆ.

ಆ ಪ್ರಕಾರ ಕರ್ನಾಟಕ ಸಾಮಾನ್ಯ ಸೇವೆ (Revenue Subordinate branch) (cadre and recruitment) (amendment) ನಿಯಮ 2009 ರಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯನ್ವಯ ಮೇಲ್ಕಂಡ ಆದೇಶದಂತೆ ಮೈಸೂರು ಜಿಲ್ಲೆಯ ಭೂಮಿ ಕೇಂದ್ರದಲ್ಲಿ ಖಾಲಿಯಿರುವ 35 ಹುದ್ದೆಗಳಿಗೆ ಭರ್ತಿ ಮಾಡಲು ಈ ಕಾರ್ಯಾಲಯದ ಉಲ್ಲೇಖ (3)ರ ಅಧಿಸೂಚನೆಯ ಮೂಲಕ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ / ಮುದ್ದಾಂ / ಅಂಚೆ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಸ್ವೀಕೃತಿಯಾದ ಅರ್ಜಿಗಳನ್ನು ಅರ್ಹತೆ ಮತ್ತು ಮೀಸಲಾತಿಯನ್ವಯ ವಿಂಗಡಿಸಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ 30–11–2009 ರಂದು ಪ್ರಕಟಿಸಿ ಈ ಪಟ್ಟಿಗೆ ಆಕ್ಷೇಪಣೆ / ತಕರಾರು ಇದ್ದಲ್ಲಿ ದಿನಾಂಕ 14–12–2009 ರೊಳಗಾಗಿ ಸಲ್ಲಿಸುವಂತೆ ಸೂಚನೆ ನೀಡಲಾಗಿತ್ತು.

ಆ ಪ್ರಕಾರ ಎಂಟು ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಸಲ್ಲಿಸಿದ್ದು, ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ, ಉಲ್ಲೇಖ (5)ರ ಅಧಿಕೃತಜ್ಞಾಪನದಂತೆ ಆದೇಶ ಹೊರಡಿಸಲಾಗಿದೆ. ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು

ಪರಿಶೀಲಿಸಲು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಹಾಜರಾಗುವಂತೆ ಸೂಚನೆ ನೀಡಲಾಗಿದ್ದು, ಆ ಪ್ರಕಾರ ದಿನಾಂಕ 15–12–2009 ರಂದು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾದ ಅಭ್ಯರ್ಥಿಗಳ ದಾಖಲಾತಿಗಳನ್ನು ಪರಿಶೀಲಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಪರಿಶೀಲಿಸಿ ಮರಿಟ್ ಆಧಾರದಲ್ಲಿ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ಆಡಳಿತ ನ್ಯಾಯಾಧೀಕರಣದಲ್ಲಿ ದಾಖಲಾಗಿರುವ ಅರ್ಜಿ ಸಂಖ್ಯೆ: 5887–5898/2009ರ ಅಂತಿಮ ಆದೇಶಕ್ಕನುಗುಣವಾಗಿ ಮಾರ್ಪಾಡು ಮಾಡುವ ಷರತ್ತಿಗೊಳಪಟ್ಟು, ಈ ಕಾರ್ಯಾಲಯದ ಉಲ್ಲೇಖ (6)ರಲ್ಲಿ ಪ್ರಕಟಿಸಲಾಯಿತು. ಅಂತಿಮ ಆಯ್ಕೆ ಪಟ್ಟಿಯನ್ನು 32 ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಂಗವಿಕಲರ ಮೀಸಲಾತಿಯ 03 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ನಂತರ ಪ್ರತ್ಯೇಕವಾಗಿ ಪ್ರಕಟಿಸುವುದಾಗಿ ಆದೇಶಿಸಲಾಗಿದೆ. ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ಪೂರ್ವಚರಿತ್ರೆ ಹಾಗೂ ಮೀಸಲಾತಿ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ ಸಲ್ಲಿಸುವಂತೆ ಸಂಬಂಧಿಸಿದೆ ಅಧಿಕಾರಿಗಳಿಗೆ ಈಗಾಗಲೇ ಪತ್ರ ಬರೆಯಲಾಗಿದೆ.

ಮೇಲೆ ವಿವರಿಸಿರುವ ಅಂಶಗಳನುಸಾರ ಅಂತಿಮ ಪಟ್ಟಿಯಲ್ಲಿರುವ ಕೆಳಕಂಡ 32 ಅಭ್ಯರ್ಥಿಗಳಿಗೆ ಪೂರ್ವಚರಿತ್ರೆ ವರದಿ ಹಾಗೂ ಸಿಂಧುತ್ವ ಪ್ರಮಾಣ ಪತ್ರ ಪಡೆಯುವ ಷರತ್ತಿಗೊಳಪಡಿಸಿ, ಗ್ರಾಮಲೆಕ್ಕಿಗರ ಹುದ್ದೆಯ ವೇತನ ಶ್ರೇಣಿ ರೂ:5800–10500 ರಲ್ಲಿ ನೇಮಕಾತಿ ಮಾಡಿ ಅವರ ಹೆಸರಿನ ಮುಂದೆ ನಮೂದಿಸಲ್ಪಟ್ಟಿರುವ ಸ್ಥಳಕ್ಕೆ ಈ ಕೆಳಕಂಡ ನಿಬಂಧನೆಗಳಿಗನುಸಾರ ನೇಮಕಗೊಳಿಸಿ ಆದೇಶಿಸಿದೆ.

ಕ್ರ ಸಂ	ಅಭ್ಯರ್ಥಿಯ ಹೆಸರು ಮತ್ತು ವಿಳಾಸ	ನೇಮಕಗೊಳಿಸಿ ಹುದ್ದೆ ಮತ್ತು ಸ್ಥಳ	ಕರ್ತವ್ಯಕ್ಕೆ ಹಾಜರಾಗಬೇಕಾದ ಕಛೇರಿ
1	ನಿರಂಜನ ಮೇರಿದ್ರಗುತ್ತಿ ಬಿನ್ ಈರಪ್ಪ, ಅಗಸನಹಳ್ಳಿ ಗ್ರಾಮ, ಬಸವನಕೋಟೆ ಅಂಚೆ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಪಿರಿಯಾಪಟ್ಟಣ	ತಹಸೀಲ್ದಾರ್‌ರವರ ಕಛೇರಿ, ಪಿರಿಯಾ ಪಟ್ಟಣ ತಾಲ್ಲೂಕು
2	ಶೋಭಾ ಆರ್. ಕೋಂ ಮಹೇಶ ಆರ್. ನಂ.131, ವೆಂಕಟೇಶ್ವರ ನಿಲಯ, ಕುವೆಂಪುನಗರ, ಮಂಡ್ಯ ಜಿಲ್ಲೆ–1	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಮೈಸೂರು	ತಹಸೀಲ್ದಾರ್‌ರವರ ಕಛೇರಿ, ಮೈಸೂರು ತಾಲ್ಲೂಕು
3	ಮುಖೇಶ್ ಕೆ.ಎಂ. ಬಿನ್ ಮಲ್ಲು, ಕಲ್ಕುಣಿ ಗ್ರಾಮ ಮತ್ತು ಅಂಚೆ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಟಿ.ನರಸೀಪುರ	ತಹಸೀಲ್ದಾರ್‌ರವರ ಕಛೇರಿ, ಟಿ.ನರಸೀಪುರ ತಾಲ್ಲೂಕು
4	ನಿಸರ್ಗ ಕೆ.ಜಿ. ಬಿನ್ ಗುರುಪ್ರಸಾದ್ ಕೆ.ಎನ್. 1ನೇ ಬ್ಲಾಕ್, ಕೆರಗೂಡು, ಮಂಡ್ಯ ತಾಲ್ಲೂಕು, ಮಂಡ್ಯ ಜಿಲ್ಲೆ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಮೈಸೂರು	ತಹಸೀಲ್ದಾರ್‌ರವರ ಕಛೇರಿ, ಮೈಸೂರು ತಾಲ್ಲೂಕು
5	ಚಂದ್ರಶೇಖರ ಬಿ. ಬಿನ್ ಬೈರಯ್ಯ, ಬಿಡಿಗಲು ಗ್ರಾಮ, ಸರಗೂರು ಪೋಸ್ಟ್, ಹೆಚ್.ಡಿ. ಕೋಟೆ ತಾಲ್ಲೂಕು	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹುಣಸೂರು	ತಹಸೀಲ್ದಾರ್‌ರವರ ಕಛೇರಿ, ಹುಣಸೂರು ತಾಲ್ಲೂಕು
6	ನವೀನ್‌ನಾಯಕ್ ಎಂ. ಬಿನ್ ಮಹದೇವಯ್ಯ ಎಂ., ಮನೆ ನಂ.494/ಎ, ಶ್ರೀರಾಂಪುರ್ ಸ್ಟ್ರೀಟ್, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ನಂಜನಗೂಡು	ತಹಸೀಲ್ದಾರ್‌ರವರ ಕಛೇರಿ, ನಂಜನಗೂಡು ತಾಲ್ಲೂಕು
7	ಅನಿತಾ ರಾಜೇಶ್ವರಿ, ಎಂ.ಕೆ. ಬಿನ್ ಮಹದೇವಯ್ಯ ಉಪ್ಪಾರದೊಡ್ಡಿ, ಎಂ.ಜಿ. ಹಳ್ಳಿ ಅಂಚೆ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಟಿ.ನರಸೀಪುರ	ತಹಸೀಲ್ದಾರ್‌ರವರ ಕಛೇರಿ, ಟಿ.ನರಸೀಪುರ ತಾಲ್ಲೂಕು
8	ನಂದಿನಿ ಪಿ.. ಬಿನ್ ಕಮಲಮ್ಮ ಹೆಚ್.ಪಿ., 6ನೇ ಕ್ರಾಸ್, ನಂ.621, ಅರ್ಕೇಶ್ವರ ನಗರ, ಗುತ್ತಲ್ ರೋಡ್, ಮಂಡ್ಯ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಮೈಸೂರು	ತಹಸೀಲ್ದಾರ್‌ರವರ ಕಛೇರಿ, ಮೈಸೂರು ತಾಲ್ಲೂಕು
9	ಶಂಕರ್ ಬಿ.ಕೆ. ಬಿನ್ ನಿಂಗಪ್ಪ, ಎಚಲಬೊಮ್ಮನಹಳ್ಳಿ ಗ್ರಾಮ, ಕುಪ್ಪಿನಕೆರೆ ಅಂಚೆ, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹೆಚ್.ಡಿ.ಕೋಟೆ	ತಹಸೀಲ್ದಾರ್‌ರವರ ಕಛೇರಿ, ಹೆಚ್.ಡಿ.ಕೋಟೆ ತಾಲ್ಲೂಕು
10	ಯಮುನಾಬಾಯಿ ಎಂ.ಜಿ. ಬಿನ್ ಜಯಪಾಲ್‌ಸಿಂಗ್ ಎಂ.ಜಿ. ಮನೆ ನಂ.1842, ರತನ್‌ಸಿಂಗ್ ಸ್ಟ್ರೀಟ್, 3ನೇ ಮೇನ್ ರೋಡ್, ಮಂಡಿ ಮೊಹಲ್ಲಾ, ಮೈಸೂರು ನಗರ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹುಣಸೂರು	ತಹಸೀಲ್ದಾರ್‌ರವರ ಕಛೇರಿ, ಹುಣಸೂರು ತಾಲ್ಲೂಕು

ಕ್ರ ಸಂ	ಅಭ್ಯರ್ಥಿಯ ಹೆಸರು ಮತ್ತು ವಿಳಾಸ	ನೇಮಕಗೊಳಿಸಿ ಹುದ್ದೆ ಮತ್ತು ಸ್ಥಳ	ಕರ್ತವ್ಯಕ್ಕೆ ಹಾಜರಾಗಬೇಕಾದ ಕಛೇರಿ
11	ಚೈತ್ರ ಎಸ್.ಎ. ಬಿನ್ ಆನಂದ ಎಸ್. ಎ.. ಶ್ರೀರಂಗಾಲ ಗ್ರಾಮ ಮತ್ತು ಅಂಚೆ, ವಯಾ ಕೂಡಿಗಿ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ–571232	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಪಿರಿಯಾಪಟ್ಟಣ	ತಹಸೀಲ್ದಾರ್‌ರವರ ಕಛೇರಿ, ಪಿರಿಯಾಪಟ್ಟಣ ತಾಲ್ಲೂಕು
12	ಶ್ವೇತಾ ಡಿ.ಎಸ್. ಬಿನ್ ಸಿದ್ದರಾಜು, ಹೌಸಿಂಗ್ ಬೋರ್ಡ್ ಕಾಲೊನಿ, ಹೆಚ್.ಡಿ. ಕೋಟೆ ಟೌನ್, ಹೆಚ್.ಡಿ. ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ – ಹುಣಸೂರು	ತಹಸೀಲ್ದಾರ್‌ರವರ ಕಛೇರಿ, ಹುಣಸೂರು ತಾಲ್ಲೂಕು
13	ಗೌಸ್ ಮೊಹಿದಿನ್ ಬಿನ್ ಸೂಫಿಸಾಬ್, ಕೇರಾಫ್: ಖಾಜಾ ಹುಸೇನ್, ಹೌಸ್ ನಂ.7/15, ಹಟ್ಟಿಲೈನ್, ಹಟ್ಟಿ ಗೋಲ್ಡ್ ಮೈನ್ಸ್, ಹಟ್ಟಿ, ಲಿಂಗಸೂರು ತಾಲ್ಲೂಕು, ರಾಯಚೂರು ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹೆಚ್.ಡಿ. ಕೋಟೆ	ತಹಸೀಲ್ದಾರ್‌ರವರ ಕಛೇರಿ, ಹೆಚ್.ಡಿ. ಕೋಟೆ ತಾಲ್ಲೂಕು
14	ಪರ್ವೀನ್ ತಾಜ್ ಜಿ. ಬಿನ್ ಬಾಷಾ ಸಾಹೇಬ್, ವಡೆಯರ್‌ಪಾಳ್ಯ ಗ್ರಾಮ ಮತ್ತು ಅಂಚೆ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ನಂಜನಗೂಡು	ತಹಸೀಲ್ದಾರ್‌ರವರ ಕಛೇರಿ, ನಂಜನಗೂಡು ತಾಲ್ಲೂಕು
15	ಕೀರ್ತಿ ಜಿ ಬಿನ್ ಬಸವರಾಜೇಗೌಡ ಮನೆ ನಂ.58, ಅಣ್ಣೂರು ಗ್ರಾಮ ಮತ್ತು ಅಂಚೆ, ಹೆಚ್.ಡಿ. ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ನಂಜನಗೂಡು	ತಹಸೀಲ್ದಾರ್‌ರವರ ಕಛೇರಿ, ನಂಜನಗೂಡು ತಾಲ್ಲೂಕು
16	ರೂಪ ಎನ್.ಎಸ್. ಬಿನ್ ಶೇಖರಪ್ಪ, ಎನ್.ಎಸ್., ನಿಡಘಟ್ಟ ಅಂಚೆ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ–577135	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಕೆ.ಆರ್.ನಗರ	ತಹಸೀಲ್ದಾರ್‌ರವರ ಕಛೇರಿ, ಕೆ.ಆರ್.ನಗರ ತಾಲ್ಲೂಕು
17	ಎಸ್. ವಿ. ಶ್ರೀನಿವಾಸ ಬಿನ್ ಎಂ.ವೆಂಕಟಾಚಲಂ, 2ನೇ ಕ್ರಾಸ್, ಹನುಮಂತನಗರ, ಬೇತಮಂಗಲ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ–563116	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಕೆ.ಆರ್.ನಗರ	ತಹಸೀಲ್ದಾರ್‌ರವರ ಕಛೇರಿ, ಕೆ.ಆರ್.ನಗರ ತಾಲ್ಲೂಕು
18	ಶೃತಿರಾಣಿ ಪಿ.ಎ. ಬಿನ್ ಅಶೋಕ ಪಿ.ಟಿ. ಮನೆ ನಂ.918, ಸಾಹುಕಾರ್ ಚನ್ನಯ್ಯ ರಸ್ತೆ, ಟಿ.ಕೆ. ಲೇಔಟ್, ಮೈಸೂರು ನಗರ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಟಿ.ನರಸೀಪುರ	ತಹಸೀಲ್ದಾರ್‌ರವರ ಕಛೇರಿ, ಟಿ.ನರಸೀಪುರ ತಾಲ್ಲೂಕು
19	ಪವಿತ್ರ ಎನ್. ಬಿನ್ ನಂಜುಂಡಸ್ವಾಮಿ, ದೂರ ಗ್ರಾಮ ಮತ್ತು ಅಂಚೆ, ಜಯಪುರ ಹೋಬಳಿ, ಮೈಸೂರು ತಾಲ್ಲೂಕು	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಟಿ.ನರಸೀಪುರ	ತಹಸೀಲ್ದಾರ್‌ರವರ ಕಛೇರಿ, ಟಿ.ನರಸೀಪುರ ತಾಲ್ಲೂಕು
20	ಶೃತಿ ಎಸ್. ಬಿನ್ ಸುಬ್ಬಣ್ಣ ಸಿ., ಮನೆ ನಂ.40, 4ನೇ ಅಡ್ಡ ರಸ್ತೆ, ಮುದ್ದುಲಿಂಗೇಶ್ವರ ಮಠ ರಸ್ತೆ, ರಾಘವೇಂದ್ರ ನಗರ, ಮೈಸೂರು ನಗರ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ನಂಜನಗೂಡು	ತಹಸೀಲ್ದಾರ್‌ರವರ ಕಛೇರಿ, ನಂಜನಗೂಡು ತಾಲ್ಲೂಕು
21	ಗಿರೀಶ ಕೆ.ಎಂ. ಬಿನ್ ಮಾದೇಗೌಡ, ಕಣೇನೂರು ಅಂಚೆ, ಹುಲ್ಲಹಳ್ಳಿ ಹೋಬಳಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಟಿ.ನರಸೀಪುರ	ತಹಸೀಲ್ದಾರ್‌ರವರ ಕಛೇರಿ, ಟಿ.ನರಸೀಪುರ ತಾಲ್ಲೂಕು
22	ಪುನೀತ ಕೆ.ಎಂ. ಬಿನ್ ಮೊಗಣ್ಣೇಗೌಡ ಕೆ.ಎಂ. ಮನೆ ನಂ.44, ಕನಕಗಿರಿ, ವಿದ್ಯಾರಣ್ಯಪುರಂ, ಮೈಸೂರು ನಗರ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಕೆ.ಆರ್.ನಗರ	ತಹಸೀಲ್ದಾರ್‌ರವರ ಕಛೇರಿ, ಕೆ.ಆರ್.ನಗರ ತಾಲ್ಲೂಕು
23	ಕವಿತ ಐ. ಬಿನ್ ಕೆ.ಎಸ್. ಐಡ್ವಿನ್, ನಂ.140, ಚಿಕ್ಕ ಹರದನಹಳ್ಳಿ, 2ನೇ ಸ್ಟೇಜ್, ನಿಯರ್ ಅಶೋಕಪುರಂ ರೈಲ್ವೆ ಸ್ಟೇಷನ್, ಮೈಸೂರು–23	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಕೆ.ಆರ್.ನಗರ	ತಹಸೀಲ್ದಾರ್‌ರವರ ಕಛೇರಿ, ಕೆ.ಆರ್.ನಗರ ತಾಲ್ಲೂಕು

ಕ್ರ ಸಂ	ಅಭ್ಯರ್ಥಿಯ ಹೆಸರು ಮತ್ತು ವಿಳಾಸ	ನೇಮಕಗೊಳಿಸಿ ಹುದ್ದೆ ಮತ್ತು ಸ್ಥಳ	ಕರ್ತವ್ಯಕ್ಕೆ ಹಾಜರಾಗಬೇಕಾದ ಕಛೇರಿ
24	ರಮೇಶ .ಜಿ. ಬಿನ್ ಜಯರಾಮೇಗೌಡ, ತರಿಕಲ್‌ಕಾವಲ್ ದೊಡ್ಡಕೊಪ್ಪಲು ಗ್ರಾಮ, ಹುಂಡಿಮಾಳ ಅಂಚೆ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಪಿರಿಯಾಪಟ್ಟಣ	ತಹಸೀಲ್ದಾರ್‌ರವರ ಕಛೇರಿ, ಪಿರಿಯಾ ಪಟ್ಟಣ ತಾಲ್ಲೂಕು
25	ನಟರಾಜ್ ಕೆ.ಎಸ್. ಬಿನ್ ಕೆ.ವಿ. ಶ್ರೀನಿವಾಸರಾವ್, ಮನೆ ನಂ.182, ಕೃಷ್ಣಾರೆಡ್ಡಿ ಬಿಲ್ಡಿಂಗ್, 2ನೇ ಕ್ರಾಸ್, ಆರ್.ಕೆ. ಸ್ಟ್ರೀಟ್, ಶೇಷಾದ್ರಿ ಪುರಂ, ಬೆಂಗಳೂರು ನಗರ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹೆಚ್.ಡಿ. ಕೋಟೆ	ತಹಸೀಲ್ದಾರ್‌ರವರ ಕಛೇರಿ, ಹೆಚ್.ಡಿ. ಕೋಟೆ ತಾಲ್ಲೂಕು
26	ಅನಗ ಎಂ.ಟಿ. ಬಿನ್ ತಿಪ್ಪಣ್ಣ ಎಂ.ಎಸ್., ಬಿ ಹೈಂಡ್ ಓಲ್ಡ್ ಮೆಟರ್ನಿಟಿ ಹಾಸ್ಪಿಟಲ್, ಲಿಂಕ್ ರಸ್ತೆ ಟಿ.ನರಸೀಪುರ, ಮೈಸೂರು ಜಿಲ್ಲೆ	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಮೈಸೂರು	ತಹಸೀಲ್ದಾರ್‌ರವರ ಕಛೇರಿ, ಮೈಸೂರುತಾಲ್ಲೂಕು
27	ರೇಖಾ ವೈ ಬಿನ್ ಯಲ್ಲಪ್ಪ ಜಿ., ಕೊಂಡಾಪುರ ಗ್ರಾಮ, ಜಂತಿಕೊಳಲು ಅಂಚೆ, ಹೊಸದುರ್ಗ ತಾಲ್ಲೂಕು ಚಿತ್ರದುರ್ಗ ಜಿಲ್ಲೆ –577527	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹುಣಸೂರು	ತಹಸೀಲ್ದಾರ್‌ರವರ ಕಛೇರಿ, ಹುಣಸೂರು ತಾಲ್ಲೂಕು
28	ವಿಠಲ್ ಕೂಗಾಟಿ ಬಿನ್ ಪಡೆಯಪ್ಪ, ಸಿದ್ಧಾಪುರ ತಾಲ್ಲೂಕು, ಬಿಳಿಗಿ, ಬಾಗಲಕೋಟೆ–587117	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹೆಚ್.ಡಿ. ಕೋಟೆ	ತಹಸೀಲ್ದಾರ್‌ರವರ ಕಛೇರಿ, ಹೆಚ್.ಡಿ. ಕೋಟೆ ತಾಲ್ಲೂಕು
29	ಸೌಮ್ಯ ಎಂ. ಬಿನ್ ಮನೋಹರ, ಮನೆ ನಂ.ಇಡಬ್ಲ್ಯೂಎಸ್. 150, ಕೆ.ಹೆಚ್.ಬಿ. ಕಾಲೋನಿ, 2ನೇ ಸ್ಟೇಜ್, ಕಲ್ಕುಣಿಕೆ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಪಿರಿಯಾಪಟ್ಟಣ	ತಹಸೀಲ್ದಾರ್‌ರವರ ಕಛೇರಿ, ಪಿರಿಯಾಪಟ್ಟಣ ತಾಲ್ಲೂಕು
30	ತೀರ್ಥಗಿರಿಗೌಡ ಜೆ.ಆರ್. ಬಿನ್ ರಾಮೇಗೌಡ, ಗೊಂಡೇನಹಳ್ಳಿ ಗ್ರಾಮ ಮತ್ತು ಅಂಚೆ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ.	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಕೆ.ಆರ್.ನಗರ	ತಹಸೀಲ್ದಾರ್‌ರವರ ಕಛೇರಿ, ಕೆ.ಆರ್.ನಗರ ತಾಲ್ಲೂಕು
31	ಮಯ ಜೆ.ಜೆ. ಬಿನ್ ಜಯರಾಮು, ನಂ.255, 1ನೇ ಕ್ರಾಸ್, ಹೊಸಹಳ್ಳಿ, ಮಂಡ್ಯ ಜಿಲ್ಲೆ–1	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ಹೆಚ್.ಡಿ. ಕೋಟೆ	ತಹಸೀಲ್ದಾರ್‌ರವರ ಕಛೇರಿ, ಹೆಚ್.ಡಿ. ಕೋಟೆ ತಾಲ್ಲೂಕು
32	ಕೆ.ಸಿದ್ಧಾರ್ಥನ್ ಬಿನ್ ಎಲ್.ಕೆ. ಸ್ವಾಮಿ, ಎಸ್ ನಾಯುಡು ಸ್ಟ್ರೀಟ್, ಮನೆ ನಂ.1952/1, ಇಂದಿರಾನಗರ, ಮೈಸೂರು–10	ಗ್ರಾಮಲೆಕ್ಕಿಗರು ಭೂಮಿ ಕೇಂದ್ರ ತಾಲ್ಲೂಕು ಕಛೇರಿ ನಂಜನಗೂಡು	ತಹಸೀಲ್ದಾರ್‌ರವರ ಕಛೇರಿ, ನಂಜನಗೂಡು ತಾಲ್ಲೂಕು

ನಿಬಂಧನೆಗಳು

1 ಈ ನೇಮಕಾತಿಯು ಘನ ಕರ್ನಾಟಕ ಆಡಳಿತ ನ್ಯಾಯಾಧೀಕರಣದಲ್ಲಿ ದಾಖಲಾಗಿರುವ ಅರ್ಜಿ ಸಂಖ್ಯೆ: 5898/2009ರ ಪ್ರಕರಣದ ಅಂತಿಮ ತೀರ್ಪಿನನ್ವಯ ಮಾರ್ಪಡಿಸುವ ಷರತ್ತಿಗೊಳಪಟ್ಟಿದೆ

2 ಅಭ್ಯರ್ಥಿಯು ಈ ಆದೇಶದ ದಿನಾಂಕದಿಂದ 15 ದಿನದೊಳಗಾಗಿ ಸಂಬಂಧಿಸಿದ ತಹಸೀಲ್ದಾರ್‌ರವರ ಸಮಕ್ಷಮ ಕರ್ತವ್ಯಕ್ಕೆ ಹಾಜರಾಗತಕ್ಕದ್ದು.

3 ಅಭ್ಯರ್ಥಿಯು ಹುಟ್ಟಿದ ದಿನಾಂಕ ಶೈಕ್ಷಣಿಕ ಅರ್ಹತೆಗಳ ಪ್ರಮಾಣ ಪತ್ರ ಹಾಗೂ ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರಗಳ ಮೂಲ ದಾಖಲೆಗಳನ್ನು ಕರ್ತವ್ಯಕ್ಕೆ ಹಾಜರಾಗುವ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.

4 ಅಭ್ಯರ್ಥಿಯು ತನ್ನ ವಾಸಸ್ಥಳ ಕ್ಷೇತ್ರಕ್ಕೆ ಸಂಬಂಧಿಸಿದ ಕನಿಷ್ಠ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ನಡತೆ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಕರ್ತವ್ಯಕ್ಕೆ ಹಾಜರಾಗುವ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.

5 ಮೀಸಲಾತಿಯಡಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡುವ ಸಿಂಧುತ್ವ ಪ್ರಮಾಣ ಪತ್ರ ಪಡೆಯುವ ಷರತ್ತಿಗೊಳಪಟ್ಟು ನೇಮಕಾತಿ ಆದೇಶ ನೀಡಲಾಗಿದ್ದು, ಸಂಬಂಧಪಟ್ಟ ಪ್ರಾಧಿಕಾರದಿಂದ ವ್ಯತಿರಿಕ್ತ ವರದಿ ಬಂದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿ ಆದೇಶವು ರದ್ದುಪಡಿಸುವ ಷರತ್ತಿಗೊಳಪಟ್ಟಿರುತ್ತದೆ.

6 ಅಭ್ಯರ್ಥಿಗಳು ವಾಸವಾಗಿರುವ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಅಭ್ಯರ್ಥಿಯ ಪೂರ್ವಚರಿತ್ರೆ / ನಡತೆ ಬಗ್ಗೆ ಪರಿಶೀಲಿಸಿ ವರದಿ ನೀಡಲು ಕೋರಲಾಗಿದ್ದು, ಸಂಬಂಧಪಟ್ಟ ಪ್ರಾಧಿಕಾರದಿಂದ ವ್ಯತಿರಿಕ್ತ ಬಂದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿ ಆದೇಶವು ರದ್ದುಪಡಿಸುವ ಷರತ್ತಿಗೊಳಪಟ್ಟಿರುತ್ತದೆ.

7 ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಅವಧಿ ಪರಿವೀಕ್ಷಣಾ ಅವಧಿಗೆ ಒಳಪಟ್ಟಿದ್ದು, ಈ ಅವಧಿಯಲ್ಲಿ ಅಕೌಂಟ್ಸ್ ಲೋಯರ್ / ರೆವಿನ್ಯೂ ಲೋಯರ್ ಮತ್ತು ಕನ್ನಡ ಭಾಷಾ ಪರೀಕ್ಷೆ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದತಕ್ಕದ್ದು.

8 ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಭಾರತ ಸಂವಿಧಾನದ ರೀತ್ಯಾ ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸತಕ್ಕದ್ದು.

9 ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಸರ್ಕಾರಿ ವೈದ್ಯಾಧಿಕಾರಿಗಳಿಂದ ಸರ್ಕಾರಿ ಸೇವೆ ಸಲ್ಲಿಸಲು ದೈಹಿಕವಾಗಿ ಅರ್ಹರಾಗಿರುವ ಪಡೆದ ವೈದ್ಯಕೀಯ ಅರ್ಹತಾ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು.

10 ಅಭ್ಯರ್ಥಿಗಳು ಸರ್ಕಾರದ ಆದೇಶ ಸಂ: FD (Spl). 04.PET2005 dated 31-3-2006 ರಲ್ಲಿ ಜಾರಿಗೊಳಿಸಿದಂತೆ ಹೊಸ ನಿವೃತ್ತಿ ವೇತನ ನಿಯಮಕ್ಕೆ ಒಳಪಟ್ಟಿರುತ್ತಾರೆ.

11 ಸರ್ಕಾರದ ಸುತ್ತೋಲೆ ಸಂ: ಕಂ.ಇ.54. ಜಿ.ಎಸ್.ಸಿ.2007 ದಿನಾಂಕ 27-3-2007ರನ್ವಯ ಅಂತರಜಿಲ್ಲಾ ವರ್ಗಾವಣೆಗೆ ಕನಿಷ್ಠ ಐದು ವರ್ಷಗಳ ಸೇವೆಯನ್ನು ಈ ಜಿಲ್ಲೆಯಲ್ಲಿ ಕಡ್ಡಾಯವಾಗಿ ಪೂರ್ಣಗೊಳಿಸಿದಲ್ಲಿ ಮಾತ್ರ ಅರ್ಹರಾಗಿರುತ್ತಾರೆ.

12 ಅಭ್ಯರ್ಥಿಗಳು ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೊಂದಾಯಿಸಿದ ಗುರುತಿನ ಚೀಟಿಯನ್ನು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಹಾಜರುಪಡಿಸತಕ್ಕದ್ದು.

13 ಅಭ್ಯರ್ಥಿಗಳು ಸೇವೆಗೆ ಸೇರಿದ ದಿನಾಂಕದಿಂದ ಮಾತ್ರ ಹುದ್ದೆಯಲ್ಲಿ ಜೇಷ್ಠತೆಯನ್ನು ಹೊಂದಲು ಅರ್ಹರಾಗಿರುತ್ತಾರೆ.

14 ಅಭ್ಯರ್ಥಿಗಳು ತಾಲ್ಲೂಕು ಕಛೇರಿಯ ಭೂಮಿ ಕೇಂದ್ರಕ್ಕೆ ನೇಮಕಾತಿ ಹೊಂದಿರುವುದರಿಂದ ಗ್ರಾಮಲೆಕ್ಕಿಗರ ಹುದ್ದೆಯಿಂದ ಪದೋನ್ನತಿ ಹೊಂದುವವರೆಗೂ ಜಿಲ್ಲೆಗಳ ಭೂಮಿ ಕೇಂದ್ರದಲ್ಲಿಯೇ ಕಾರ್ಯ ನಿರ್ವಹಿಸಬೇಕಾಗಿದ್ದು, ಯಾವುದೇ ಕಾರಣಕ್ಕೂ ವೃತ್ತಕ್ಕೆ ವರ್ಗಾವಣೆ ಹೊಂದಲು ಅವಕಾಶವಿರುವುದಿಲ್ಲ.

15 ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಇಲಾಖಾ ಮುಖ್ಯಸ್ಥರ ಮೂಲಕ ಅರ್ಜಿ ಸಲ್ಲಿಸಿದ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು ಹಾಗೂ ಇಲಾಖಾಧಿಕಾರಿಗಳು ನೀಡಿರುವ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸತಕ್ಕದ್ದು. ಅಂತಹ ಅಭ್ಯರ್ಥಿಗಳು ಇಲಾಖೆಯಿಂದ ಬಿಡುಗಡೆಯಾಗಿರುವ ಬಗ್ಗೆ ದೃಢೀಕರಣ ಪತ್ರವನ್ನು ಹಾಜರುಪಡಿಸತಕ್ಕದ್ದು.

16 ನೇಮಕಾತಿಗೊಳಿಸಲಾದ ಸ್ಥಳ / ಕಛೇರಿಯನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲಾಗುವುದಿಲ್ಲ. ಸ್ಥಳ ಬದಲಾವಣೆ ಮಾಡುವಂತೆ ಒತ್ತಡ ತಂದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿ ಆದೇಶವನ್ನು ರದ್ದುಗೊಳಿಸಲಾಗುತ್ತದೆ.

17 ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರಿಯವರಾದ, ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು ರವರು, ಸದರಿ ಆದೇಶವನ್ನು ಮಾರ್ಪಡಿಸುವ ಹಾಗೂ ರದ್ದುಪಡಿಸುವ ಸಂಪೂರ್ಣ ಅಧಿಕಾರವನ್ನು ಹೊಂದಿರುತ್ತಾರೆ.

ಅಧ್ಯಕ್ಷರು,
ಆಯ್ಕೆ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ
ಮತ್ತು ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್. 187

ಜಿಲ್ಲಾಧಿಕಾರಿಗಳ ಕಾರ್ಯಾಲಯ, ದಾವಣಗೆರೆ ಜಿಲ್ಲೆ

ರೈತ ಭವನ, ದಾವಣಗೆರೆ ದೂರವಾಣಿ ಸಂಖ್ಯೆ 272954, 257778 ಫ್ಯಾಕ್ಸ್(08192) 272957

ಅಧಿಕೃತ ಜ್ಞಾಪನಾ ಪತ್ರ

ಸಂ.ಗ್ರಾಲೆ/ಸಿಬ್ಬಂದಿ/ವಿವ/37/09-10, ದಾವಣಗೆರೆ, ದಿನಾಂಕ: 6ನೇ ಮಾರ್ಚ್ 2010

ವಿಷಯ: ದಾವಣಗೆರೆ ಜಿಲ್ಲೆ ಕಂದಾಯ ಇಲಾಖೆಯ ಗ್ರಾಮ ಲೆಕ್ಕಾಧಿಕಾರಿ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ. ಆರ್‌ಡಿ 299 ಜಿಎಸ್‌ಸಿ 2006 ದಿ:3.2.2009.
2) ಸರ್ಕಾರದ ಅಧಿಸೂಚನೆ ಸಂ. ಕಂಇ 299 ಜಿಎಸ್‌ಸಿ 2006 ದಿ:24.7.2009, 8.9.2009.
3) ಈ ಕಾರ್ಯಾಲಯದ ಸಮಸಂಖ್ಯೆಯ ಅಧಿಸೂಚನೆ ದಿನಾಂಕ: 26.9.2009 ಮತ್ತು ಪತ್ರಿಕಾ ಪ್ರಕಟಣೆ ದಿನಾಂಕ: 30.9.2009
4) ಸರ್ಕಾರದ ಆದೇಶ ಸಂ. ಆರ್‌ಡಿ 130 ಜಿಎಸ್‌ಸಿ 2007 ದಿನಾಂಕ: 19.2.2009
5) ಈ ಕಚೇರಿಯ ಸಮಸಂಖ್ಯೆಯ .ಅಂತಿಮ ಆಯ್ಕೆ ಪಟ್ಟಿ ದಿನಾಂಕ: 30.12.2009.

ಸರ್ಕಾರದ ಉಲ್ಲೇಖ (1)ರ ಅಧಿಸೂಚನೆಯನ್ವಯ ದಾವಣಗೆರೆ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ 24 ಹುದ್ದೆಗಳಿಗೆ ಹಾಗೂ ಉಲ್ಲೇಖ (4)ರಲ್ಲಿ ದಾವಣಗೆರೆ ಜಿಲ್ಲೆಗೆ ಪ್ರತಿ ತಾಲ್ಲೂಕು ಕಚೇರಿಯ ಭೂಮಿ ಕೇಂದ್ರಗಳಿಗೆ ತಲಾ 3 ರಂತೆ 6 ತಾಲ್ಲೂಕು ಕೇಂದ್ರಗಳಿಗೆ ಮಂಜೂರಾತಿ ನೀಡಿರುವ 18 ಹುದ್ದೆಗಳಿಗೆ ಒಟ್ಟು 42 ಹುದ್ದೆಗಳಿಗೆ ನೇರ ನೇಮಕಾತಿಯ ಮೂಲಕ ಭರ್ತಿಗೊಳಿಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಅದರಂತೆ, ಕರ್ನಾಟಕ ನಾಗರೀಕ ಸೇವೆ (Revenue Sub Ordinate Branch) (Cadre & Recruitment) (Amendment) ನಿಯಮಗಳು, 2009ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆ ಅನ್ವಯ ಮೇಲ್ಕಂಡ ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಉಲ್ಲೇಖಿ (3)ರ ಅಧಿಸೂಚನೆಯ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಸ್ವೀಕೃತಿಯಾದ ಅರ್ಜಿಗಳನ್ನು ಅರ್ಹತೆ ಮತ್ತು ಮೀಸಲಾತಿ ಅನ್ವಯ ವಿಂಗಡಿಸಿ, ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 30.11.2009ರಂದು ಪ್ರಕಟಿಸಲಾಯಿತು ಹಾಗೂ ಈ ಪಟ್ಟಿಯ ಬಗ್ಗೆ ಆಕ್ಷೇಪಣೆ / ತಕರಾರು ಅರ್ಜಿಗಳನ್ನು ಸಲ್ಲಿಸಲು ದಿನಾಂಕ: 14.12.2009ರವರೆಗೆ ಕಾಲಾವಕಾಶವನ್ನು ನೀಡಲಾಯಿತು.

ಪರಿಶೀಲನಾ ಪಟ್ಟಿಯಲ್ಲಿದ್ದ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ದಿನಾಂಕ: 15.12.2009 ರಂದು ಪರಿಶೀಲಿಸಿ, ಮಾನ್ಯ ಕರ್ನಾಟಕ ಆಡಳಿತಾತ್ಮಕ ನ್ಯಾಯಮಂಡಳಿಯಲ್ಲಿ ದಾಖಲಿಸಿರುವ ಅರ್ಜಿ ಸಂ. 5887-5898/ 2009 ಪ್ರಕರಣಗಳ ಅಂತಿಮ ತೀರ್ಮಾನಕ್ಕೊಳಪಡುವ ಷರತ್ತಿನ ಮೇರೆಗೆ ಅಂತಿಮ ಆಯ್ಕೆ ಪಟ್ಟಿಯನ್ನು ದಿನಾಂಕ: 30.12.2009ರಂದು ಪ್ರಕಟಿಸಲಾಯಿತು.

ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಂದ ದಿನಾಂಕ: 11.1.2010 ರಂದು ಮೂಲ ದಾಖಲಾತಿಗಳನ್ನು ಪಡೆಯಲಾಯಿತು. ಮೂಲ ದಾಖಲಾತಿಗಳನ್ನು ಹಾಜರುಪಡಿಸದೇ ಇರುವ 4 ಸಾಮಾನ್ಯ (General) ಅಭ್ಯರ್ಥಿಗಳ ಬದಲಾಗಿ ಕಾಯ್ದಿರಿಸಿದ ಪಟ್ಟಿಯಲ್ಲಿನ ಅಭ್ಯರ್ಥಿಗಳಿಂದ ದಿನಾಂಕ: 8.2.2010ರಂದು ಮೂಲ ದಾಖಲಾತಿಗಳನ್ನು ಪಡೆಯಲಾಯಿತು.

ಮೇಲ್ಕಂಡ ಅಂಶಗಳ ಅವಲೋಕನೆಯಿಂದ, ಪೋಲೀಸ್ ಪರಿಶೀಲನಾ ವರದಿ ಮತ್ತು ಮೀಸಲಾತಿ ಸಿಂಧುತ್ವ ಪ್ರಮಾಣ ಪತ್ರ ಬಂದಂತಹ ಈ ಕೆಳಕಂಡ ಅಭ್ಯರ್ಥಿಗಳನ್ನು ಗ್ರಾಮ ಲೆಕ್ಕಾಧಿಕಾರಿಯ ಹುದ್ದೆಯ ರೂ.5800-100-6000-125-6500-150-7100-175-7800-200-8600-225-9500-250-10500 ವೇತನ ಶ್ರೇಣಿಯಲ್ಲಿ, ಅವರ ಹೆಸರಿನ ಎದುರು ನಮೂದಿಸಲ್ಪಟ್ಟ ಕಾರ್ಯಸ್ಥಳಕ್ಕೆ ಈ ಕೆಳಕಂಡ ನಿಬಂಧನೆಗಳಿಗನುಸಾರವಾಗಿ ನೇಮಕಾತಿಗೊಳಿಸಿ ಆದೇಶ ಹೊರಡಿಸಿದೆ. ಆಯ್ಕೆಯಾಗಿರುವ ಎಲ್ಲಾ ಅಭ್ಯರ್ಥಿಗಳಿಗೆ ಹಾರ್ದಿಕ ಅಭಿನಂದನೆಗಳು ಹಾಗೂ ಜಿಲ್ಲಾಡಳಿತದ ಪರವಾಗಿ ಸೇವೆಗೆ ಆತ್ಮೀಯ ಸ್ವಾಗತ.

ಕ್ರ. ಸಂ.	ಅಭ್ಯರ್ಥಿಯ ಹೆಸರು ಮತ್ತು ವಿಳಾಸ	ನೇಮಕಗೊಳಿಸಿದ ಹುದ್ದೆ ಮತ್ತು ಕಾರ್ಯಸ್ಥಳ	ಯಾರಲ್ಲಿ ಹಾಜರಾಗತಕ್ಕದ್ದು
	ಸಾಮಾನ್ಯ ವರ್ಗ		
1	ಮಹಾಂತೇಶ ಕೊಳ್ಳಾಳ ಬಿನ್ ಚನ್ನಬಸಪ್ಪ ಹಿಕ್ಕಂಗೇರಿ, ನಿಚ್ಚವ್ವನಹಳ್ಳಿ ಪೋಸ್ಟ್ ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಕುಳಗಟ್ಟ ಫಿರ್ಕಾ, ಹೊನ್ನಾಳಿ ತಾಲ್ಲೂಕು	ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು
2	ಸಂಗೀತಾ ಜೋಷಿ ಬಿನ್ ಕೃಷ್ಣಮೂರ್ತಿ ಜೋಷಿ. ಕೆಪಿಟಿಸಿಎಲ್ ಕುಮಾರ ಪಟ್ಟಂ, ರಾಣೇಬೆನ್ನೂರು ತಾ: ಹಾವೇರಿ ಜಿಲ್ಲೆ	ಗ್ರಾಮ ಲೆಕ್ಕಿಗ, ಹರಳಹಳ್ಳಿ ಫಿರ್ಕಾ, ಹರಿಹರ ತಾಲ್ಲೂಕು	ತಹಶೀಲ್ದಾರ್, ಹರಿಹರ ತಾಲ್ಲೂಕು
3	ಮುಬೀನ ಡಿ. ಬಿನ್ ಸೈಯದ್ ಅಲಿ ಸಾಹೇಬ್ ಡಿ. 11ನೇ ವಾರ್ಡ, ಸಂಡೂರಗೇರಿ, ಹರಪನಹಳ್ಳಿ ತಾ:, ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಚಿರಸ್ತಹಳ್ಳಿ ಫಿರ್ಕಾ, ಹರಪನಹಳ್ಳಿ ತಾಲ್ಲೂಕು	ತಹಶೀಲ್ದಾರ್, ಹರಪನಹಳ್ಳಿ ತಾಲ್ಲೂಕು
4	ನಾಗರಾಜ ಕಬ್ಬಳ್ಳಿ ಬಿನ್ ಲೇಟ್ ಕೆ.ಓಬಪ್ಪ, ನೀಲಗುಂದ ಪೋಸ್ಟ್, ಹರಪನಹಳ್ಳಿ ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಚಿಗಟೇರಿ ಫಿರ್ಕಾ, ಹರಪನಹಳ್ಳಿ ತಾಲ್ಲೂಕು	ತಹಶೀಲ್ದಾರ್, ಹರಪನಹಳ್ಳಿ ತಾಲ್ಲೂಕು
5	ಸೌಮ್ಯ ವಿ.ಅಗಡಿ ಬಿನ್ ವೀರಣ್ಣ ಜಿ.ಅಗಡಿ 2ನೇ ಮುಖ್ಯ ರಸ್ತೆ, 1ನೇ ಕ್ರಾಸ್, ವಿಜಯನಗರ ಬಡಾವಣೆ, ಹರಿಹರ ದಾವಣಗೆರೆ ಜಿಲ್ಲೆ.	ಗ್ರಾಮ ಲೆಕ್ಕಿಗ, ನಂದಿಗಾವಿ ಫಿರ್ಕಾ, ಹರಿಹರ ತಾಲ್ಲೂಕು	ತಹಶೀಲ್ದಾರ್, ಹರಿಹರ ತಾಲ್ಲೂಕು
6	ಮಂಜುನಾಥ ಕೆ. ಬಿನ್ ಉಮ್ಮಣ್ಣ ಕೆ ಹಿಕ್ಕಂಗೇರಿ, ನಿಚ್ಚವ್ವನಹಳ್ಳಿ ಅಂಚೆ ಹರಪನಹಳ್ಳಿ ತಾ:, ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ತೋಪೇನಹಳ್ಳಿ ಫಿರ್ಕಾ, ಚನ್ನಗಿರಿ ತಾಲ್ಲೂಕು	ತಹಶೀಲ್ದಾರ್, ಚನ್ನಗಿರಿ ತಾಲ್ಲೂಕು
7	ಮಹಾದೇವಪ್ಪ ಹಿಕ್ಕಂಗೇರಿ ಬಿನ್ ಕೊಟ್ರೇಶಪ್ಪ ಹೆಚ್. ಕಡಬಗೇರಿ ಅಂಚೆ ಹರಪನಹಳ್ಳಿ ತಾ:, ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ನೀತಿಗೆರೆ ಫಿರ್ಕಾ, ಚನ್ನಗಿರಿ ತಾಲ್ಲೂಕು	ತಹಶೀಲ್ದಾರ್, ಚನ್ನಗಿರಿ ತಾಲ್ಲೂಕು

ಕ್ರ. ಸಂ.	ಅಭ್ಯರ್ಥಿಯ ಹೆಸರು ಮತ್ತು ವಿಳಾಸ	ನೇಮಕಗೊಳಿಸಿದ ಹುದ್ದೆ ಮತ್ತು ಕಾರ್ಯಸ್ಥಳ	ಯಾರಲ್ಲಿ ಹಾಜರಾಗತಕ್ಕದ್ದು
8	ಶ್ವೇತಾ ಎಂ. ಬಿನ್ ಮಂಜುನಾಥ ಎಂ. 5ನೇ ಕ್ರಾಸ್, 5ನೇ ಮುಖ್ಯ ರಸ್ತೆ, ಜಿ ಬ್ಲಾಕ್ ವಿದ್ಯಾನಗರ, ಹರಿಹರ, ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಮಾಸಡಿ ಫಿರ್ಕಾ, ಹೊನ್ನಾಳಿ ತಾಲ್ಲೂಕು	ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು
9	ರವಿ ಎಂ.ಎಸ್. ಬಿನ್ ಸಣ್ಣಹನುಮಪ್ಪ ರಾಗಿಮುಸಲವಾಡ ಅಂಚೆ, ಹರಪನಹಳ್ಳಿ ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಬಸವಾಪಟ್ಟಣ ಫಿರ್ಕಾ, ಚನ್ನಗಿರಿ ತಾಲ್ಲೂಕು	ತಹಶೀಲ್ದಾರ್, ಚನ್ನಗಿರಿ ತಾಲ್ಲೂಕು
10	ಹೊಸಳ್ಳಪ್ಪರ ವೀರೇಶ ಬಿನ್ ಹೊಸಳ್ಳಪ್ಪರ ಈಶಪ್ಪ, ಗುಂಡಗತ್ತಿ ಅಂಚೆ ಹರಪನಹಳ್ಳಿ ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಅರಕೆರೆ ಫಿರ್ಕಾ, ಹೊನ್ನಾಳಿ ತಾಲ್ಲೂಕು	ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು
11	ಅನಿತಾ ಒಬಳಾಪುರ ಕಣಿವೇಹಳ್ಳಿ ಅಂಚೆ, ಹರಪನಹಳ್ಳಿ ತಾ: ದಾವಣಗೆರೆ ಜಿಲ್ಲೆ.	ಗ್ರಾಮ ಲೆಕ್ಕಿಗ, ರಾಗಿಮುಸಲವಾಡ–1 ಫಿರ್ಕಾ, ಹರಪನಹಳ್ಳಿ ತಾಲ್ಲೂಕು	ತಹಶೀಲ್ದಾರ್, ಹರಪನಹಳ್ಳಿ ತಾಲ್ಲೂಕು
12	ಮಲ್ಲಿಕಾರ್ಜುನ ಹೊಸಳ್ಳಪ್ಪಳ ಬಿನ್ ಶೇಖರಪ್ಪ ಹೆಚ್. ಗುಂಡಗತ್ತಿ ಅಂಚೆ ಹರಪನಹಳ್ಳಿ ತಾ:, ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಚಿರಡೋಣಿ ಫಿರ್ಕಾ, ಚನ್ನಗಿರಿ ತಾಲ್ಲೂಕು	ತಹಶೀಲ್ದಾರ್, ಚನ್ನಗಿರಿ ತಾಲ್ಲೂಕು
13	ದೇವರಾಜ ಎಸ್.ಹೆಚ್. ಬಿನ್ ಹನುಮನಗೌಡ ಎಸ್. ಚಿಕ್ಕಬಿದರಿ, ಸಾರಥಿ ಅಂಚೆ, ಹರಿಹರ ತಾ: ದಾವಣಗೆರೆ ಜಿಲ್ಲೆ.	ಗ್ರಾಮ ಲೆಕ್ಕಿಗ, ಹೊಳೆಹರಳಹಳ್ಳಿ ಫಿರ್ಕಾ, ಹೊನ್ನಾಳಿ ತಾಲ್ಲೂಕು	ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು
14	ಗೌರೀಹಳ್ಳಿ ಬಾರ್ಕಿ ಬಸವರಾಜ ಬಿನ್ ಗೌರಿಹಳ್ಳಿ ಬಾರ್ಕಿ ಹಾಲಪ್ಪ, ಕಂಚಿಕೆರೆ ಅಂಚೆ, ಹರಪನಹಳ್ಳಿ ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಹಲಗಿಲವಾಡ ಫಿರ್ಕಾ, ಹರಪನಹಳ್ಳಿ ತಾಲ್ಲೂಕು	ತಹಶೀಲ್ದಾರ್, ಹರಪನಹಳ್ಳಿ ತಾಲ್ಲೂಕು
15	ಸುರೇಶ ಹೆಚ್. ಬಿನ್ ಬಸಪ್ಪ ಹೆಚ್. ಮ.ನಂ.1819/15, ಎಲ್.ಐ.ಸಿ. ಕಾಲೋನಿ, ದಾವಣಗೆರೆ.	ಗ್ರಾಮ ಲೆಕ್ಕಿಗ, ಕಮ್ಮಾರಘಟ್ಟೆ ಫಿರ್ಕಾ, ಹೊನ್ನಾಳಿ ತಾಲ್ಲೂಕು	ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು
	ಪ್ರವರ್ಗ–1		
16	ರೇಖವ್ವ ಗಡ್ಡೇರ ಬಿನ್ ನಾಗಪ್ಪ ಗಡ್ಡೇರ ಗುರುಶಾಂತನಹಳ್ಳಿ, ಮಾಚೀಹಳ್ಳಿ ಅಂಚೆ ಹರಪನಹಳ್ಳಿ ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಹುಲಿಕಟ್ಟೆ ಫಿರ್ಕಾ, ಹರಪನಹಳ್ಳಿ ತಾಲ್ಲೂಕು	ತಹಶೀಲ್ದಾರ್, ಹರಪನಹಳ್ಳಿ ತಾಲ್ಲೂಕು
	ಪ್ರವರ್ಗ–2 ಬಿ		
17	ಪರ್ವೀನ್ ಬಿನ್ ಜಮಾಲ್ ಸಾಬ್ ರಾಜನಹಳ್ಳಿ ಅಂಚೆ, ಹರಿಹರ ತಾಲ್ಲೂಕು ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಕೆ.ಕಲ್ಲಹಳ್ಳಿ ಫಿರ್ಕಾ, ಹರಪನಹಳ್ಳಿ ತಾಲ್ಲೂಕು	ತಹಶೀಲ್ದಾರ್, ಹರಪನಹಳ್ಳಿ ತಾಲ್ಲೂಕು
	ಪ್ರವರ್ಗ–2 ಎ		
18	ಶಿವಕುಮಾರ ಎಲ್.ಜಿ. ಬಿನ್ ಗವಿಸಿದ್ದಪ್ಪ ಲಕ್ಕಿ, ಬಸವನಹಳ್ಳಿ ಅಂಚೆ ಹೊನ್ನಾಳಿ ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಅರುಂಡಿ ಫಿರ್ಕಾ ಹೊನ್ನಾಳಿ ತಾಲ್ಲೂಕು	ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು
	ಪ್ರವರ್ಗ–3 ಎ		
19	ಶಾಂತಾ ಟಿ. ಬಿನ್ ತಿಪ್ಪೇಸ್ವಾಮಿರೆಡ್ಡಿ ಜೆ.ಡಿ. ಚಿಕ್ಕಮಲ್ಲನಹೊಳೆ ಅಂಚೆ, ಜಗಳೂರು ತಾ: ದಾವಣಗೆರೆ ಜಿಲ್ಲೆ	ಗ್ರಾಮ ಲೆಕ್ಕಿಗ, ಭೂಮಿ ಕೇಂದ್ರ ದಾವಣಗೆರೆ ತಾಲ್ಲೂಕು	ತಹಶೀಲ್ದಾರ್, ದಾವಣಗೆರೆ ತಾಲ್ಲೂಕು

ಎಲ್ಲಾ ಅಭ್ಯರ್ಥಿಗಳು ಗ್ರಾಮೀಣ ಜನರ ಸೇವೆಗೆ ಕಂಕಣಬದ್ಧರಾಗಿ, ನಿಷ್ಠೆ, ಪ್ರಾಮಾಣಿಕತೆ ಹಾಗೂ ನಿಸ್ಪೃಹತೆಯಿಂದ ಕರ್ತವ್ಯ ನಿರ್ವಹಿಸಲು ಕೋರಿದೆ.

ಷರತ್ತುಗಳು:

1) ಈ ನೇಮಕಾತಿಯು ಮಾನ್ಯ ಕರ್ನಾಟಕ ಆಡಳಿತಾತ್ಮಕ ನ್ಯಾಯಮಂಡಳಿಯಲ್ಲಿ ದಾಖಲಿಸಿರುವ ಅರ್ಜಿ ಸಂ. 5887–5898/2009 ಪ್ರಕರಣಗಳ ಅಂತಿಮ ತೀರ್ಮಾನಕ್ಕೊಳಪಡುವ ಷರತ್ತಿಗೊಳಪಟ್ಟಿದೆ.

2) ಮೇಲ್ಕಂಡ ಅಭ್ಯರ್ಥಿಗಳು ಈ ಆದೇಶ ದಿನಾಂಕದಿಂದ 15 ದಿನಗಳೊಳಗಾಗಿ ಸಂಬಂಧಿಸಿದ ತಹಶೀಲ್ದಾರರ ಸಮಕ್ಷಮದಲ್ಲಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಈ ನೇಮಕವನ್ನು ಒಂದು ವೇಳೆ ತಿರಸ್ಕರಿಸಿದ್ದಲ್ಲಿ, ಆದೇಶ ಸ್ವೀಕರಿಸಿದ 7 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು.

3) ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗುವ ವೇಳೆಯಲ್ಲಿ ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲನೆಗಾಗಿ ಹಾಜರ್ ಪಡಿಸಬೇಕು 1) ಪಿಯುಸಿ ಅಂಕಪಟ್ಟಿ 2) ಎಸ್‌ಎಸ್‌ಎಲ್‌ಸಿ / ಹುಟ್ಟಿದ ದಿನಾಂಕದ ದೃಢೀಕರಣ 3) ನಡತೆ ಪ್ರಮಾಣ ಪತ್ರ 4) ವೈದ್ಯಕೀಯ ಪ್ರಮಾಣ ಪತ್ರ 5) ಸಕ್ಷಮ ಪ್ರಾಧಿಕಾರದಿಂದ ನೀಡಲ್ಪಟ್ಟ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ)

4) ಅಭ್ಯರ್ಥಿಗಳು ಕೆಲಸಕ್ಕೆ ಹಾಜರಾದ ದಿನಾಂಕದಿಂದ 2 ವರ್ಷಗಳ ಅವಧಿಗೆ ಪರಿವೀಕ್ಷಣಾ ಅವಧಿಯಲ್ಲಿದ್ದು (ಪ್ರೊಬೇಷನರಿ) ಅವರು ಈ ಅವಧಿಯಲ್ಲಿ ಕೆಳಗೆ ನಮೂದಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆಯಾಗತಕ್ಕದ್ದು 1) ಅಕೌಂಟ್ಸ್ ಲೋಯರ್ 2) ರೆವಿನ್ಯೂ ಲೋಯರ್ 3) ಕನ್ನಡ ಭಾಷಾ ಪರೀಕ್ಷೆ (ಎಸ್‌ಎಸ್‌ಎಲ್‌ಸಿ ಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಳ್ಳದಿದ್ದಲ್ಲಿ ಕನ್ನಡ ಭಾಷಾ ಪರೀಕ್ಷೆಯನ್ನು ಪಾಸು ಮಾಡತಕ್ಕದ್ದು) ಈ ಅವಧಿಯಲ್ಲಿ ನಿಗಧಿತ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆಯಾಗದಿದ್ದಲ್ಲಿ ಅಥವಾ ಕೆಲಸಕಾರ್ಯಗಳು ತೃಪ್ತಿಕರವಾಗಿರದಿದ್ದಲ್ಲಿ ಅವರನ್ನು ಸೇವೆಯಿಂದ ತೆಗೆದುಹಾಕಲಾಗುವುದು.

5) ಈ ನೇಮಕಾತಿಯು ಸಂಪೂರ್ಣ ತಾತ್ಕಾಲಿಕವಾಗಿದ್ದು, ಸರ್ಕಾರವು ಇಚ್ಛಿಸಿದಲ್ಲಿ ಅಥವಾ ಹುದ್ದೆಗಳು ರದ್ದಾದಲ್ಲಿ ಅಥವಾ ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆದಿರುವುದು ಕಂಡುಬಂದಲ್ಲಿ ಅವರನ್ನು ಯಾವುದೇ ಸಮಯದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೇ ಸೇವೆಯಿಂದ ತೆಗೆದುಹಾಕಲಾಗುವುದು.

6) ಅಭ್ಯರ್ಥಿಗಳು ಸೇವೆಗೆ ಹಾಜರಾಗುವ ಸಂದರ್ಭದಲ್ಲಿ ಭಾರತದ ಸಂವಿಧಾನಾತ್ಮಕವಾಗಿ ಗೊತ್ತುಪಡಿಸಿದ ನಮೂನೆಯಲ್ಲಿ "ವಚನ" ಸ್ವೀಕಾರ ಮಾಡತಕ್ಕದ್ದು.

7) ಅಭ್ಯರ್ಥಿಗಳು ಸರ್ಕಾರದ ಆದೇಶ ಸಂ. ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005 ದಿನಾಂಕ:31.3.2006 ರಲ್ಲಿ ಜಾರಿಗೆ ನೀಡಿದ ಹೊಸ ನಿವೃತ್ತಿ ವೇತನ ನೀತಿಗೆ ಒಳಪಟ್ಟಿರುತ್ತಾರೆ.

8) ಸರ್ಕಾರದ ಸುತ್ತೋಲೆ ಸಂ.ಕಂಇ 54 ಬಿಎಸ್‌ಸಿ 2007 ದಿನಾಂಕ: 27.3.2007ರನ್ವಯ ಅಂತರ ಜಿಲ್ಲಾ ವರ್ಗಾವಣೆಗೆ ದಾವಣಗೆರೆ ಜಿಲ್ಲೆಯಲ್ಲಿ ಕನಿಷ್ಠ ಪಕ್ಷ 5 ವರ್ಷಗಳ ಸೇವೆಯನ್ನು ಕಡ್ಡಾಯ ಪೂರೈಸತಕ್ಕದ್ದು.

9) ಅಭ್ಯರ್ಥಿಗಳು ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿಸಿದ ಗುರುತಿನ ಚೀಟಿಯನ್ನು ತಹಶೀಲ್ದಾರರಲ್ಲಿ ಹಾಜರುಪಡಿಸತಕ್ಕದ್ದು. ತಹಶೀಲ್ದಾರರು ಅದನ್ನು ಉದ್ಯೋಗ ವಿನಿಮಯ ಕೇಂದ್ರಕ್ಕೆ ಸರೆಂಡರ್ ಮಾಡುವುದು.

10) ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958 : ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿ 1957 : ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ಹಾಗೂ ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಇತರೆ ನಿಯಮಾವಳಿಗಳಿಗೆ ಬದ್ಧರಾಗಿರುತ್ತಾರೆ.

11) ಇದು ನೇರನೇಮಕಾತಿ ಹುದ್ದೆ ಆದ ಕಾರಣ ಅಭ್ಯರ್ಥಿಯು ಸೇವೆಗೆ ಸೇರಿದ ದಿನಾಂಕದಿಂದ ಜೇಷ್ಠತೆಯನ್ನು ಪರಿಗಣಿಸಲಾಗುವುದು.

12) ಗ್ರಾಮ ಲೆಕ್ಕಿಗ ಹುದ್ದೆಗೆ ನೇಮಕಾತಿ ಹೊಂದಿರುವುದರಿಂದ, ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವಾಗ ರೂ.1000/– (ರೂಪಾಯಿ ಒಂದು ಸಾವಿರ ಮಾತ್ರ) ಭದ್ರತಾ ಠೇವಣಿಯನ್ನು ನಗದು ರೂಪದಲ್ಲಾಗಲೀ ಅಥವಾ ರಾಷ್ಟ್ರೀಯ ಉಳಿತಾಯ ಪತ್ರದ ಮೂಲಕವಾಗಲೀ ಸಂಬಂಧಪಟ್ಟ ತಹಶೀಲ್ದಾರರಲ್ಲಿ ಹಾಜರುಪಡಿಸತಕ್ಕದ್ದು ಅಥವಾ ಈ ಮೊತ್ತಕ್ಕೆ ಭದ್ರತಾ ಮುಚ್ಚಳಿಕೆ ಪತ್ರವನ್ನು ಛಾಪಾ ಕಾಗದದಲ್ಲಿ ಬರೆಯಿಸಿ ಒಬ್ಬರ ಜಾಮೀನು ಕೊಡತಕ್ಕದ್ದು. ತಹಶೀಲ್ದಾರರು ಈ ಮೊತ್ತದ ರಾಷ್ಟ್ರೀಯ ಉಳಿತಾಯ ಪತ್ರದ ಮೂಲಕ ಸರ್ಕಾರಕ್ಕೆ ಪ್ಲೆಡ್ಜ್ ಮಾಡಿಕೊಳ್ಳತಕ್ಕದ್ದು.

13) ಅಭ್ಯರ್ಥಿಯು ಇಲಾಖೆಯಿಂದ ಕಾಲಕಾಲಕ್ಕೆ ನಿಗಧಿಪಡಿಸಿದ ಹಾಗೂ ನಿಗಧಿಪಡಿಸಲಾಗುವ ವಿವಿಧ ಪರೀಕ್ಷೆ / ತರಬೇತಿಗಳನ್ನು ಯಶಸ್ವಿಯಾಗಿ ಮುಗಿಸತಕ್ಕದ್ದು.

14) ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಹಾಗೂ ಇಲಾಖಾ ಮುಖ್ಯಸ್ಥರ ಮೂಲಕ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ನಿಯಮಾವಳಿಗಳನ್ನು ಉಲ್ಲಂಘಿಸಿ ಅರ್ಜಿ ಸಲ್ಲಿಸಿರುವುದಿಲ್ಲವೆಂಬ ಬಗ್ಗೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು ಹಾಗೂ ಮೇಲೆ ಸೂಚಿಸಿದ ಕಾರ್ಯಸ್ಥಳಗಳಲ್ಲಿ ವರದಿ ಮಾಡಿಕೊಳ್ಳುವ ಮೊದಲು ಮುಂಚಿನ ಸೇವೆಯಿಂದ ಬಿಡುಗಡೆ ಆದೇಶ ಪಡೆದಿರಬೇಕು.

15) ಅಭ್ಯರ್ಥಿಗೆ ಕೆಲಸಕ್ಕೆ ಹಾಜರಾಗುವ ಸಂದರ್ಭದಲ್ಲಿ ಪ್ರಯಾಣ ಭತ್ಯೆ ಅಥವಾ ಇತರೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

16) ಆಯ್ಕೆಯಾಗಿರುವ ಅಭ್ಯರ್ಥಿಗಳು ಅವರನ್ನು ನೇಮಿಸಿರುವ ಸ್ಥಳದಲ್ಲಿ ಕಡ್ಡಾಯವಾಗಿ ವಾಸ ಮಾಡಬೇಕು.ಈ ಬಗ್ಗೆ ಒಂದು ಪ್ರಮಾಣಪತ್ರವನ್ನು (ನಮೂನೆಯಂತೆ) ನೋಟರಿಯವರಿಂದ ಪ್ರಮಾಣೀಕರಿಸಿ ಹಾಜರುಪಡಿಸಬೇಕು.

ಕೆ. ಅಮರನಾರಾಯಣ

ಪಿ.ಆರ್. 188

ಅಧ್ಯಕ್ಷರು, ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಆಯ್ಕೆ
ಪ್ರಾಧಿಕಾರ ಮತ್ತು ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆ.

ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001

ಅಧಿಸೂಚನೆ

ಸಂಖ್ಯೆ, ಇಪ(1)3692/2009–10/ಪಿಎಸ್‌ಸಿ, ಬೆಂಗಳೂರು, ದಿನಾಂಕ: 23ನೇ ಮಾರ್ಚ್ 2010

ವಿಷಯ: 2010ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಆಯೋಗದಿಂದ ನಡೆಸಲಾಗುವ **2010**ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಕರ್ನಾಟಕ ನಾಗರಿಕ ಸೇವಾ ನಿಯಮಗಳಡಿಯಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಬಗ್ಗೆ ಸೂಚನೆಗಳನ್ನು ಆಯೋಗದ ವೆಬ್‌ಸೈಟ್ **"http://kpsc.kar.nic.in"** ನಲ್ಲಿ ಬಿತ್ತರಿಸಲಾಗಿದೆ. ಈ ಪರೀಕ್ಷೆಗಳನ್ನು ಜೂನ್ 2010ರ ಮಾಹೆಯಲ್ಲಿ ನಡೆಸಲಾಗುವುದು. ಪರೀಕ್ಷೆಗಳ ವೇಳಾ ಪಟ್ಟಿಯನ್ನು ಈ ಅಧಿಸೂಚನೆಯ ಅನುಬಂಧ "ಎ" ನಲ್ಲಿ ಎಲ್ಲಾ ಕೇಂದ್ರಗಳಲ್ಲಿ ನಡೆಯುವ ಪರೀಕ್ಷೆಗಳ ಬಗ್ಗೆ ಹಾಗೂ ಅನುಬಂಧ "ಬಿ" ನಲ್ಲಿ ಬೆಂಗಳೂರು ಕೇಂದ್ರದಲ್ಲಿ ಮಾತ್ರ ನಡೆಯುವ ಪರೀಕ್ಷೆಗಳ ಬಗ್ಗೆ ವಿವರವಾಗಿ ನೀಡಲಾಗಿದೆ. ಪರೀಕ್ಷೆಗೆ ಹಾಜರಾಗಬಯಸುವ ಅಭ್ಯರ್ಥಿಗಳು ಒಂದು ಅರ್ಜಿಯಲ್ಲಿ ಗರಿಷ್ಠ ಆರು ವಿಷಯಗಳನ್ನು ಆಯ್ಕೆಮಾಡಿಕೊಳ್ಳಬಹುದು. ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿಮಾಡುವಾಗ ವಿಷಯ ಮತ್ತು ವಿಷಯ ಸಂಕೇತಗಳನ್ನು ಎಚ್ಚರಿಕೆಯಿಂದ ಭರ್ತಿ ಮಾಡಲು ಸೂಚಿಸಿದೆ.

1. ಅರ್ಜಿ ಸಲ್ಲಿಸುವ ವಿಧಾನ/ಶುಲ್ಕ ಪಾವತಿಸುವ ವಿಧಾನ:

(ಎ) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳು ಭರ್ತಿಮಾಡಬೇಕು ಆಯೋಗದ ವೆಬ್‌ಸೈಟ್ **"http://kpsc.kar.nic.in/ HOME PAGE "** ನಲ್ಲಿ **ON LINE** ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ: ಅಭ್ಯರ್ಥಿಯು ಆಯೋಗದ ಅಧಿಕೃತ ವೆಬ್‌ಸೈಟ್ **"http://kpsc.kar.nic.in"** ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಬಲಭಾಗದಲ್ಲಿ **"ON LINE APPLICATION "** ಎಂಬುದು **"BLINK"** ಅಗುತ್ತಲಿದ್ದು, ಅದರ ಮೇಲೆ ಕ್ಲಿಕ್ ಮಾಡಿದ ಕೂಡಲೇ ವಿವಿಧ ಅಧಿಸೂಚನೆಗಳ ವಿವರ ಲಭ್ಯವಾಗುತ್ತದೆ. ಅದರಲ್ಲಿ ಅಭ್ಯರ್ಥಿಗಳಿಗೆ ಅನ್ವಯವಾಗುವ ಅಧಿಸೂಚನೆಯನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು, ಅದರಲ್ಲಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅನುಸರಿಸಬೇಕಾದ ಸೂಚನೆಗಳನ್ನು ನೀಡಲಾಗಿದ್ದು ಅವುಗಳನ್ನು ಪೂರ್ಣವಾಗಿ ತಿಳಿದುಕೊಂಡು ನಂತರ **"Apply "** ಎಂಬುದರ ಮೇಲೆ ಕ್ಲಿಕ್ ಮಾಡಿ ನಿಗದಿಪಡಿಸಿದ ಎಲ್ಲಾ ವಿವರಗಳನ್ನು ಸ್ಪಷ್ಟವಾಗಿ ನಮೂದಿಸಿ ಅರ್ಜಿ **Submit** ಮಾಡಬೇಕು.

(ಬಿ) ಅಭ್ಯರ್ಥಿಯು ಇತ್ತೀಚೆಗಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಬಿಳಿ ಹಾಳೆಯ ಮೇಲೆ ಅಂಟಿಸಿ ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ನಲ್ಲಿ ಸಹಿಯನ್ನು ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅರ್ಜಿಗೆ **Upload** ಮಾಡಬೇಕು. ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಭರ್ತಿ ಮಾಡಿದ ಆನ್‌ಲೈನ್ ಅರ್ಜಿಯ ಪ್ರತಿಯು ಎರಡು ಭಾಗಗಳಲ್ಲಿ ಇರುತ್ತದೆ. (ಭಾಗ–1 ಮತ್ತು ಭಾಗ–2) ಅವೆರಡನ್ನು **Down load** ಮಾಡಿಕೊಂಡು ಭಾಗ–1ನ್ನು ಅಭ್ಯರ್ಥಿಗಳು ತಮ್ಮಲ್ಲಿ ಇರಿಸಿಕೊಳ್ಳತಕ್ಕದ್ದು ಹಾಗೂ ಆಯೋಗವು ಕೇಳಿದಾಗ ಅದನ್ನು ಹಾಜರುಪಡಿಸತಕ್ಕದ್ದು.

(ಸಿ) ಅರ್ಜಿಯಲ್ಲಿರುವ ಮೇಲಧಿಕಾರಿಯ ಪ್ರಮಾಣಪತ್ರದ ಅರ್ಜಿಯ ಭಾಗ–2ರ ಪ್ರತಿಯನ್ನು **Down load** ಮಾಡಿಕೊಂಡು ನಿಗದಿಪಡಿಸಿದ ಅಂಕಣದಲ್ಲಿ ಶುಲ್ಕ ಪಾವತಿಸಿದ ವಿವರಗಳನ್ನು ಭರ್ತಿಮಾಡಿ ಮೇಲಾಧಿಕಾರಿಯವರಿಂದ ದೃಢೀಕರಿಸತಕ್ಕದ್ದು. ಮತ್ತು ನಿಗದಿತ ಶುಲ್ಕವನ್ನು "ಕಾರ್ಯದರ್ಶಿ ಹಾಗೂ ನಿಯಂತ್ರಕರು, ಇಲಾಖಾ ಪರೀಕ್ಷೆಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001" ಇವರ ಹೆಸರಿಗೆ ಡಿ.ಡಿ/ಐ.ಪಿ.ಓ.ಗಳನ್ನು ಪಡೆದು ಅವುಗಳ ಹಿಂಬದಿಯಲ್ಲಿ ಅಭ್ಯರ್ಥಿಯ ಹೆಸರು, ಮತ್ತು ಆನ್‌ಲೈನ್ ಅರ್ಜಿ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು. ಮೇಲಾಧಿಕಾರಿಗಳಿಂದ ದೃಢೀಕರಿಸಿದ ಪ್ರಮಾಣಪತ್ರ ಮತ್ತು ನಿಗದಿತ ಶುಲ್ಕದೊಡನೆ (ಡಿ.ಡಿ./ಐ.ಪಿ.ಓ. ಮೂಲಕ) ದಿನಾಂಕ: 30–04–2010ರ ಒಳಗೆ ತಮ್ಮ ಮೇಲಾಧಿಕಾರಿಗಳ ಮೂಲಕ "ಕಾರ್ಯದರ್ಶಿ ಹಾಗೂ ನಿಯಂತ್ರಕರು, ಇಲಾಖಾ ಪರೀಕ್ಷೆಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001" ಇವರಿಗೆ ರವಾನಿಸುವುದು. ನಿಗದಿತ ದಿನಾಂಕದ ನಂತರ ಬರುವ ಹಾಗೂ ಮೇಲಾಧಿಕಾರಿಗಳ ಪ್ರಮಾಣಪತ್ರವಿಲ್ಲದ ಮತ್ತು ಡಿ.ಡಿ./ಐ.ಪಿ.ಓ. ಲಗತ್ತಿಸಿಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅರ್ಜಿಗಳನ್ನು ಸಲ್ಲಿಸುವ ದಿನಾಂಕ:

ಅರ್ಜಿಗಳನ್ನು **01–04–2010** ರಿಂದ **30–04–2010**ರ ಒಳಗಾಗಿ ಸಲ್ಲಿಸತಕ್ಕದ್ದು. ಈ ದಿನಾಂಕದ ನಂತರ ON LINE ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ರಜೆ ದಿನವಾಗಿದ್ದಲ್ಲಿ ಮುಂದಿನ ಕಛೇರಿ ದಿನವನ್ನು ಕೊನೆಯ ದಿನಾಂಕ ಎಂದು ಪರಿಗಣಿಸಲಾಗುವುದು.

ಸೂಚನೆಗಳು:

(1) ಅಭ್ಯರ್ಥಿಗಳು ತಮ್ಮ ಹೆಸರನ್ನು ಸೇವಾ ಪುಸ್ತಕದಲ್ಲಿರುವಂತೆ ನಮೂದಿಸುವುದು.

(2) ಎಸ್.ಎ.ಎಸ್, ಟ್ರೆಜರಿ ಅಕೌಂಟ್ಸ್ ಮತ್ತು ಎಲೆಕ್ಟ್ರಿಸಿಟಿಯೂ ಸೇರಿದಂತೆ ಇಲಾಖಾ ಪರೀಕ್ಷೆಯ ಎಲ್ಲಾ ವಿಷಯಗಳಿಗೂ ಒಂದೇ ರೀತಿಯ ಅರ್ಜಿ ನಮೂನೆಯನ್ನು ನಿಗದಿಪಡಿಸಿದೆ.

(3) ಇಲಾಖಾ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು [illegible] ಕಡ್ಡಾಯವಾಗಿ ನಿಗದಿಪಡಿಸಿರುವ ಪರೀಕ್ಷಾ ಶುಲ್ಕವನ್ನು ಪಾವತಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(4) ಶುಲ್ಕ ಪಾವತಿಸದ ಹಾಗೂ ಅಪೂರ್ಣ ಅರ್ಜಿಗಳನ್ನು ಮತ್ತು ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವ ಸೂಚನೆಯನ್ನು ನೀಡದೇ ತಿರಸ್ಕರಿಸಲಾಗುವುದು.

ವಿಶೇಷ ಸೂಚನೆ: (1) ON LINE ಮೂಲಕ [illegible] ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) No. 9740977411 ಮತ್ತು 080–30574944/30574945 ಗಳನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

(2) ON LINE ಮೂಲಕ ಸಲ್ಲಿಸಿದ ಅರ್ಜಿಯ ಸ್ಥಾನವನ್ನು ತಿಳಿಯಲು ಅಭ್ಯರ್ಥಿಗಳು ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಿಂದ 15 ದಿನಗಳ ನಂತರ "welcome to on-line application" ಪರದೆಯ ಮೇಲೆ ಮೂಡಿದ ನಂತರ ಅದರಲ್ಲಿ "Check Status" ಎಂಬುದರ ಮೇಲೆ "click" ಮಾಡಿದರೆ, ಅರ್ಜಿಯು ಸ್ವೀಕೃತವಾಗಿರುವ ಬಗ್ಗೆ ಮಾಹಿತಿ ದೊರೆಯುವುದು, ಅಭ್ಯರ್ಥಿಗಳು ಇದನ್ನು [illegible]

3. ವಿಷಯ, ಸಂಕೇತಗಳು ಮತ್ತು ನಿಗದಿಪಡಿಸಿದ ಶುಲ್ಕ: (ಎ) ಇಲಾಖಾ ಪರೀಕ್ಷೆಯ ವಿವಿಧ ವಿಷಯಗಳು, ಅವುಗಳ ಸಂಕೇತಗಳು ಹಾಗೂ ನಿಗದಿಪಡಿಸಿದ ಶುಲ್ಕ ಈ ಕೆಳಗಿನ ಪಟ್ಟಿಯಂತಿದೆ:–

ವಿಷಯ	ವಿಷಯ ಸಂಕೇತ	ನಿಗದಿಪಡಿಸಲಾದ ಶುಲ್ಕ ರೂ.
ಅಕೌಂಟ್ಸ್ ಲೋಯರ್	1.	25–00
ಕಮ್ಯುನಿಟಿ ಡೆವಲಪ್‌ಮೆಂಟ್ ಭಾಗ–1	2.	25–00
ಕಮ್ಯುನಿಟಿ ಡೆವಲಪ್‌ಮೆಂಟ್ ಭಾಗ–2	3.	25–00
ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಹೈಯರ್	4.	25–00
ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಲೋಯರ್	5.	25–00
ಫಾರೆಸ್ಟ್ ಪತ್ರಿಕೆ–1 (ಫಾರೆಸ್ಟ್‌ಗಾರ್ಡ್‌ಗಳಿಗೆ ಮಾತ್ರ)	6.	25–00
ಫಾರೆಸ್ಟ್ ಪತ್ರಿಕೆ–2 (ಫಾರೆಸ್ಟ್‌ಗಾರ್ಡ್‌ಗಳಿಗೆ ಮಾತ್ರ)	7.	25–00
ಜನರಲ್ ಲಾ ಭಾಗ–2	8.	25–00
ಹೋಮ್ ಗಾರ್ಡ್ಸ್ ಮ್ಯಾನ್ಯುಯಲ್	9.	25–00
ಆಕ್ಟ್ ಅಂಡ್ ರೂಲ್ಸ್ ರಿಲೇಟಿಂಗ್ ಟು ವಿಮೆನ್ ಆಂಡ್ ಚೈಲ್ಡ್ ಡೆವಲಪ್‌ಮೆಂಟ್	10.	25–00
ಮೋಟಾರ್ ವೆಹಿಕಲ್ಸ್	11.	25–00
ಮೈನಿಂಗ್ ಭಾಗ–1	12.	25–00
ಮೈನಿಂಗ್ ಭಾಗ–2	13.	25–00
ಪ್ರಿಸನ್ಸ್	14.	25–00
ಪೋರ್ಟ್ಸ್ ಹೈಯರ್	15.	25–00
ಪೋರ್ಟ್ಸ್ ಲೋಯರ್	16.	25–00
ಸೋಷಿಯಲ್ ವೆಲ್‌ಫೇರ್ ಆಂಡ್ ಬ್ಯಾಕ್‌ವರ್ಡ್ ಕ್ಲಾಸಸ್ ಮ್ಯಾನ್ಯುಯಲ್ ಭಾಗ–1	17.	25–00
ಸೋಷಿಯಲ್ ವೆಲ್‌ಫೇರ್ ಆಂಡ್ ಬ್ಯಾಕ್‌ವರ್ಡ್ ಕ್ಲಾಸಸ್ ಮ್ಯಾನ್ಯುಯಲ್ ಭಾಗ–2	18.	25–00
ಯೂಥ್ ಸರ್ವೀಸ್ ಮ್ಯಾನುಯಲ್	19.	25–00
ಎಕ್ಸೈಸ್	20.	25–00
ಪೋಲೀಸ್ ಮ್ಯಾನ್ಯುಯಲ್	21.	25–00
ಅಕೌಂಟ್ಸ್ ಹೈಯರ್	22.	50–00
ಕಮರ್ಷಿಯಲ್ ಟ್ಯಾಕ್ಸ್ ಭಾಗ–1 ([illegible])	23.	50–00
ಫಾರೆಸ್ಟ್	24.	50–00
ಫ್ಯಾಕ್ಟರೀಸ್ ಆಂಡ್ ಬಾಯ್ಲರ್ಸ್ ಲಾಸ್	25.	50–00
ಲೇಬರ್	26.	50–00
ಲೋಕಲ್ ಲಾಸ್ ಆಂಡ್ ಕಮರ್ಷಿಯಲ್ ಬುಕ್ ಕೀಪಿಂಗ್	27.	50–00

ವಿಷಯ	ವಿಷಯ ಸಂಕೇತ	ನಿಗದಿಪಡಿಸಲಾದ ಶುಲ್ಕ ರೂ.
ಪ್ರೆಸ್ ಆಂಡ್ ಅಲೈಡ್ ಆಫೀಸಸ್ ಮ್ಯಾನ್ಯುಯಲ್ ಹೈಯರ್	28.	50–00
ಪ್ರೆಸ್ ಆಂಡ್ ಅಲೈಡ್ ಆಫೀಸಸ್ ಮ್ಯಾನ್ಯುಯಲ್ ಲೋಯರ್	29.	50–00
ಪಿ.ಡಬ್ಲ್ಯೂ.ಡಿ ಹೈಯರ್ ಭಾಗ–1	30.	50–00
ಪಿ.ಡಬ್ಲ್ಯೂ.ಡಿ ಹೈಯರ್ ಭಾಗ–2	31.	50–00
ಪಿ.ಡಬ್ಲ್ಯೂ.ಡಿ ಲೋಯರ್	32.	50–00
ರಿಜಿಸ್ಟ್ರೇಷನ್	33.	50–00
ಸಿರಿಕಲ್ಚರ್	34.	50–00
ಕೋ–ಆಪರೇಷನ್	35.	50–00
ಜನರಲ್ ಲಾ ಭಾಗ–1	36.	50–00
ಮುನಿಸಿಪಲ್ ಆಂಡ್ ಲೋಕಲ್ ಬೋರ್ಡ್ಸ್	37.	50–00
ಮಾರ್ಕೆಟಿಂಗ್	38.	50–00
ರೆವಿನ್ಯೂ ಹೈಯರ್ ಭಾಗ–1	39.	50–00
ರೆವಿನ್ಯೂ ಹೈಯರ್ ಭಾಗ–2	40.	50–00
ರೆವಿನ್ಯೂ ಲೋಯರ್	41.	50–00
ಕಮರ್ಷಿಯಲ್ ಟ್ಯಾಕ್ಸಸ್ ಭಾಗ–1 ಹೈಯರ್	42.	50–00
ಕೋ–ಆಪರೇಟಿವ್ ಆಡಿಟ್	43.	50–00
ಇನ್ಸೂರೆನ್ಸ್ ಅಡ್ವಾನ್ಸಡ್	44.	50–00
ಇನ್ಸೂರೆನ್ಸ್ ಹೈಯರ್	45.	50–00
ಇನ್ಸೂರೆನ್ಸ್ ಲೋಯರ್	46.	50–00
ಕನ್ನಡ	47.	50–00
ಫುಡ್ ಆಂಡ್ ಸಿವಿಲ್ ಸಪ್ಲೈಸ್ ಎಕ್ಸಾಮಿನೇಷನ್	48.	50–00
ಕರ್ನಾಟಕ ಕನ್ಸ್ಯೂಮರ್ ಪ್ರೋಟೆಕ್ಷನ್ಸ್ ಸ್ಟೇಟ್ ಕಮಿಷನ್ ಅಂಡ್ ಡಿಸ್ಟ್ರಿಕ್ ಫೋರಮ್ ಸರ್ವಿಸ್ ಎಕ್ಸಾಮಿನೇಶನ್	49.	50–00
ಇಂಡಿಯನ್ ಕಾಂಟ್ರಕ್ಟ್ ಆಕ್ಟ್	51.	25–00
ಕೆ.ಪಿ.ಎಸ್.ಸಿ. ಮ್ಯಾನ್ಯುಯಲ್	52.	25–00
ಕೆ.ಪಿ.ಎಸ್.ಸಿ. ರಿಕ್ರೂಟ್‌ಮೆಂಟ್ ರೂಲ್ಸ್	53.	25–00
ಸೆಕ್ರೆಟರಿಯಟ್ ಮ್ಯಾನ್ಯುಯಲ್ ಭಾಗ–1	54.	50–00
ಸೆಕ್ರೆಟರಿಯಟ್ ಮ್ಯಾನ್ಯುಯಲ್ ಭಾಗ–2	55.	25–00
ಸ್ಪೆಷಲ್ ಲಾಸ್ ಆಂಡ್ ಸರ್ವೀಸ್ ರೂಲ್ಸ್	56.	25–00
ಟ್ರಾನ್ಸಲೇಷನ್ ಟೆಸ್ಟ್	58.	25–00
ಎಸ್.ಎ.ಎಸ್ ಭಾಗ–1	61.	50–00
ಎಸ್.ಎ.ಎಸ್ ಭಾಗ–2	62.	50–00
ಎಸ್.ಎ.ಎಸ್ ಭಾಗ–3	63.	50–00
ಟ್ರೆಜರಿ ಅಕೌಂಟ್ಸ್ ಭಾಗ–1	64.	50–00
ಟ್ರೆಜರಿ ಅಕೌಂಟ್ಸ್ ಭಾಗ–2	65.	50–00
ಎಲೆಕ್ಟ್ರಿಸಿಟಿ ಲಾಸ್ ಎಕ್ಸಾಮಿನೇಷನ್	66.	50–00
ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್) ಲಾಸ್ (ಹೈಯರ್) ಎಕ್ಸಾಮಿನೇಷನ್ ಭಾಗ–1	67.	25–00
ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್) ಲಾಸ್ (ಹೈಯರ್) ಭಾಗ–2	68.	25–00
ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್) ಲಾಸ್ (ಲೋಯರ್) ಎಕ್ಸಾಮಿನೇಷನ್	70.	25–00
ಕರ್ನಾಟಕ ಅಡ್ಮಿನಿಸ್ಟ್ರೇಟಿವ್ ಟ್ರಿಬ್ಯೂನಲ್ ಎಕ್ಸಾಮಿನೇಷನ್	71.	25–00
ಕನ್ನಡಭಾಷೆ (ಐ.ಎ.ಎಸ್, ಐ.ಪಿ.ಎಸ್ ಮತ್ತು ಐ.ಎಫ್.ಎಸ್ ಅಧಿಕಾರಿಗಳಿಗೆ)	72.	50–00
ಕನ್ನಡ ಭಾಷಾ ಮೌಖಿಕ ಪರೀಕ್ಷೆ	73.	––

4. ಇಲಾಖಾ ಪರೀಕ್ಷೆಗಳಲ್ಲಿ ಕೆಳಕಂಡ ವಿಷಯಗಳಿಗೆ ವಸ್ತುನಿಷ್ಠ ಬಹುಆಯ್ಕೆ ಮಾದರಿಯ (OBJECTIVE TYPE MULTIPLE CHOICE) ಪ್ರಶ್ನೆಪತ್ರಿಕೆಗಳನ್ನು ನೀಡಲಾಗುವುದು.

1. ಅಕೌಂಟ್ಸ್ ಲೋಯರ್
2. ಕಮ್ಯುನಿಟಿ ಡೆವಲಪ್‌ಮೆಂಟ್ ಭಾಗ–1
3. ಕಮ್ಯುನಿಟಿ ಡೆವಲಪ್‌ಮೆಂಟ್ ಭಾಗ–2
4. ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಹೈಯರ್
5. ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಲೋಯರ್
6. ಫಾರೆಸ್ಟ್ ಪತ್ರಿಕೆ–1
7. ಫಾರೆಸ್ಟ್ ಪತ್ರಿಕೆ–2
8. ಜನರಲ್ ಲಾ ಭಾಗ–2
9. ಹೋಮ್ ಗಾರ್ಡ್ಸ್ ಮ್ಯಾನ್ಯುಯಲ್
10. ಆಕ್ಟ್ ಅಂಡ್ ರೂಲ್ಸ್ ರಿಲೇಟಿಂಗ್ ಟು ವಿಮೆನ್ ಆಂಡ್ ಚೈಲ್ಡ್ ಡೆವೆಲಪ್‌ಮೆಂಟ್
11. ಮೋಟಾರ್ ವೆಹಿಕಲ್ಸ್
12. ಮೈನಿಂಗ್ ಭಾಗ–1
13. ಮೈನಿಂಗ್ ಭಾಗ–2
14. ಪ್ರಿಸನ್ಸ್
15. ಪೋರ್ಟ್ಸ್ ಹೈಯರ್
16. ಪೋರ್ಟ್ಸ್ ಲೋಯರ್
17. ಸೋಷಿಯಲ್ ವೆಲ್‌ಫೇರ್ ಆಂಡ್ ಬ್ಯಾಕ್‌ವರ್ಡ್ ಕ್ಲಾಸಸ್ ಮ್ಯಾನುಯಲ್ ಭಾಗ–1
18. ಸೋಷಿಯಲ್ ವೆಲ್‌ಫೇರ್ ಆಂಡ್ ಬ್ಯಾಕ್‌ವರ್ಡ್ ಕ್ಲಾಸಸ್ ಮ್ಯಾನುಯಲ್ ಭಾಗ–2
19. ಯೂಥ್ ಸರ್ವೀಸ್ ಮ್ಯಾನ್ಯುಯಲ್
20. ಎಕ್ಸೈಸ್
21. ಪೊಲೀಸ್ ಮ್ಯಾನ್ಯುಯಲ್
22. ಅಕೌಂಟ್ಸ್ ಹೈಯರ್
23. ಕಮರ್ಷಿಯಲ್ ಟ್ಯಾಕ್ಸ್ ಭಾಗ–2 (ಲೋಯರ್)
24. ಫಾರೆಸ್ಟ್
25. ಫ್ಯಾಕ್ಟರೀಸ್ ಆಂಡ್ ಬಾಯ್ಲರ್ಸ್ ಲಾಸ್
26. ಲೇಬರ್
27. ಲೋಕಲ್ ಲಾಸ್ ಆಂಡ್ ಕಮರ್ಷಿಯಲ್ ಬುಕ್ ಕೀಪಿಂಗ್
28. ಪ್ರೆಸ್ ಆಂಡ್ ಅಲೈಡ್ ಆಫೀಸಸ್ ಮ್ಯಾನ್ಯುಯಲ್ ಹೈಯರ್, ಪತ್ರಿಕೆ–1
29. ಪ್ರೆಸ್ ಆಂಡ್ ಅಲೈಡ್ ಆಫೀಸಸ್ ಮ್ಯಾನ್ಯುಯಲ್ ಲೋಯರ್
30. ಪಿ.ಡಬ್ಲ್ಯೂ.ಡಿ ಹೈಯರ್ ಭಾಗ–1, ಪತ್ರಿಕೆ–2
31. ಪಿ.ಡಬ್ಲ್ಯೂ.ಡಿ ಹೈಯರ್ ಭಾಗ–2
32. ಪಿ.ಡಬ್ಲ್ಯೂ.ಡಿ ಲೋಯರ್
33. ರಿಜಿಸ್ಟ್ರೇಷನ್
34. ಸಿರಿಕಲ್ಚರ್
35. ಕೋ–ಆಪರೇಷನ್
36. ಜನರಲ್ ಲಾ ಭಾಗ–1
37. ಮುನಿಸಿಪಲ್ ಆಂಡ್ ಲೋಕಲ್ ಬೋರ್ಡ್ಸ್
38. ಮಾರ್ಕೆಟಿಂಗ್
39. ರೆವಿನ್ಯೂ ಹೈಯರ್ ಭಾಗ–1
40. ರೆವಿನ್ಯೂ ಹೈಯರ್ ಭಾಗ–2
41. ರೆವಿನ್ಯೂ ಲೋಯರ್
42. ಕಮರ್ಷಿಯಲ್ ಟ್ಯಾಕ್ಸಸ್ ಭಾಗ–1 ಹೈಯರ್
43. ಕೋ–ಆಪರೇಟಿವ್ ಆಡಿಟ್
44. ಇನ್ಶೂರೆನ್ಸ್ ಅಡ್ವಾನ್ಸಡ್
45. ಇನ್ಶೂರೆನ್ಸ್ ಹೈಯರ್, ಪತ್ರಿಕೆ–1 ಮತ್ತು 3

46. ಇನ್ಸೂರೆನ್ಸ್ ಲೋಯರ್, ಪತ್ರಿಕೆ-1 ಮತ್ತು 3
47. ಫುಡ್ ಆಂಡ್ ಸಿವಿಲ್ ಸಪ್ಲೈಸ್ ಎಕ್ಸಾಮಿನೇಷನ್
48. ಕರ್ನಾಟಕ ಕನ್ಸ್ಯೂಮರ್ ಪ್ರೋಟೆಕ್ಷನ್ಸ್ ಸ್ಟೇಟ್ ಕಮಿಷನ್ ಅಂಡ್ ಡಿಸ್ಟ್ರಿಕ್ ಫೋರಮ್ ಸರ್ವಿಸ್ ಎಕ್ಸಾಮಿನೇಶನ್
49. ಇಂಡಿಯನ್ ಕಾಂಟ್ರಕ್ಟ್ ಆಕ್ಟ್
50. ಕೆ.ಪಿ.ಎಸ್.ಸಿ. ಮ್ಯಾನ್ಯುಯಲ್
51. ಕೆ.ಪಿ.ಎಸ್.ಸಿ. ರಿಕ್ರೂಟ್‌ಮೆಂಟ್ ರೂಲ್ಸ್
52. ಸೆಕ್ರೆಟರಿಯಟ್ ಮ್ಯಾನ್ಯುಯಲ್ ಭಾಗ-1
53. ಸ್ಪೆಷಲ್ ಲಾಸ್ ಆಂಡ್ ಸರ್ವೀಸ್ ರೂಲ್ಸ್
54. ಎಸ್.ಎ.ಎಸ್ ಭಾಗ-1, ಪತ್ರಿಕೆ-2 ಮತ್ತು 3
55. ಎಸ್.ಎ.ಎಸ್ ಭಾಗ-2,
56. ಎಸ್.ಎ.ಎಸ್ ಭಾಗ-3
57. ಟ್ರೆಜರಿ ಅಕೌಂಟ್ಸ್ ಭಾಗ-1, ಪತ್ರಿಕೆ-2 ಮತ್ತು 3
58. ಟ್ರೆಜರಿ ಅಕೌಂಟ್ಸ್ ಭಾಗ-2
59. ಎಲೆಕ್ಟ್ರಿಸಿಟಿ ಲಾಸ್
60. ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್)ಲಾಸ್ (ಹೈಯರ್)ಎಕ್ಸಾಮಿನೇಷನ್ ಭಾಗ-1
61. ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್) ಲಾಸ್ (ಲೋಯರ್)ಎಕ್ಸಾಮಿನೇಷನ್
62. ಕರ್ನಾಟಕ ಅಡ್ಮಿನಿಸ್ಟ್ರೇಟಿವ್ ಟ್ರಿಬ್ಯೂನಲ್ ಎಕ್ಸಾಮಿನೇಷನ್.

ಪ್ರತಿ ವಿಷಯಗಳಲ್ಲಿನ ಪಠ್ಯಕ್ರಮದಲ್ಲಿರುವ **(Syllabus)** ಯಾವುದಾದರೂ ನಿಯಮಗಳು/ ಅಧಿನಿಯಮಗಳು ನಿರಸನಗೊಂಡಿದ್ದಲ್ಲಿ **(Repealed)** ಅವುಗಳನ್ನು ಕೈಬಿಟ್ಟು ಹೊಸದಾಗಿ ಸೇರ್ಪಡೆಯಾಗಿರುವ ಹಾಗೂ ಪ್ರಸಕ್ತ ಇಲಾಖೆಗಳಲ್ಲಿ ಚಾಲ್ತಿಯಲ್ಲಿರುವ ನಿಯಮ/ ಅಧಿನಿಯಮಗಳನ್ವಯ ಪ್ರಶ್ನೆಪತ್ರಿಕೆಗಳನ್ನು ಸಿದ್ದಪಡಿಸಿ ಪರೀಕ್ಷೆಗಳನ್ನು ನಡೆಸಲಾಗುವುದೆಂದು ಅಭ್ಯರ್ಥಿಗಳ ಗಮನಕ್ಕೆ ತರಲಾಗಿದೆ.

ಈ ವಿಷಯಗಳಲ್ಲಿನ ಪ್ರಶ್ನೆಪತ್ರಿಕೆಗಳಲ್ಲಿ ಪ್ರತಿ ಪ್ರಶ್ನೆಗೂ ನಾಲ್ಕು ಸಂಭವನೀಯ ಉತ್ತರಗಳಿರುತ್ತವೆ. ಪ್ರತಿ ಪ್ರಶ್ನೆಗೆ ನೀಡಲಾದ ನಾಲ್ಕು ಉತ್ತರಗಳ ಪೈಕಿ ಒಂದು ಸರಿ ಉತ್ತರವನ್ನು ಆಯ್ಕೆ ಮಾಡಿ ಉತ್ತರಿಸಬೇಕಿರುತ್ತದೆ. ಪ್ರತಿ ಪ್ರಶ್ನೆಗೂ ಆಯ್ಕೆ ಮಾಡಲಾದ ಉತ್ತರವು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿರುತ್ತದೆಯೆಂದು ಅರಿತು, ತೃಪ್ತಿಹೊಂದಿದ ನಂತರವೇ ಅಭ್ಯರ್ಥಿಗಳು ನೀಲಿ ಅಥವಾ ಕಪ್ಪು ಬಣ್ಣದ ಬಾಲ್‌ಪೆನ್ನಿನಿಂದ ಎನ್‌ಕೋಡ್ (ಸಂಕೇತ ಗುರುತು) ಮಾಡಬೇಕು, ತರುವಾಯ ತಪ್ಪು ಉತ್ತರಗಳನ್ನು ಯಾವುದೇ ಸಂದರ್ಭದಲ್ಲಿ ಅಳಿಸಲು ಸಾಧ್ಯವಿರುವುದಿಲ್ಲ.

ಮೇಲ್ಕಂಡ ವಿಷಯಗಳ ಪರೀಕ್ಷೆಯಲ್ಲಿ ನಿಯಮದಂತೆ ಪಠ್ಯಪುಸ್ತಕಗಳನ್ನು ಉಪಯೋಗಿಸಬಹುದು. ವಸ್ತುನಿಷ್ಠ ಬಹುಆಯ್ಕೆ ಮಾದರಿಯ ಪರೀಕ್ಷೆಗೆ ನೀಡಲಾಗುವ ಉತ್ತರಪತ್ರಿಕೆಯ (OMR SHEET) ಮಾದರಿ ಪ್ರತಿಯನ್ನು ಹಾಗೂ ಅಭ್ಯರ್ಥಿಗಳಿಗೆ ನೀಡಲಾದ ಸೂಚನೆಗಳನ್ನು ಆಯೋಗದ ವೆಬ್‌ಸೈಟ್‌ನಲ್ಲಿ ನೋಡಬಹುದು.

5. ಈ ಕೆಳಕಂಡ ವಿಷಯಗಳಿಗೆ ಎಂದಿನಂತೆ ವಿವರಣಾತ್ಮಕ ಮಾದರಿಯಲ್ಲಿ

(Descriptive Type) ಪರೀಕ್ಷೆ ನಡೆಸಲಾಗುವುದು.

1. ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್) ಲಾಸ್ (ಹೈಯರ್)ಎಕ್ಸಾಮಿನೇಷನ್ ಭಾಗ-2,ಪತ್ರಿಕೆ-1
2. ಎಸ್.ಎ. ಎಸ್. ಭಾಗ-1, ಪತ್ರಿಕೆ-1
3. ಟ್ರೆಜರಿ ಅಕೌಂಟ್ಸ್ ಭಾಗ-1, ಪತ್ರಿಕೆ-1
4. ಇನ್ಸೂರೆನ್ಸ್ ಹೈಯರ್, ಪತ್ರಿಕೆ-2
5. ಇನ್ಸೂರೆನ್ಸ್ ಲೋಯರ್, ಪತ್ರಿಕೆ-2
6. ಪಿ.ಡಬ್ಲ್ಯೂ.ಡಿ. ಹೈಯರ್ ಭಾಗ-1, ಪತ್ರಿಕೆ-1
7. ಸೆಕ್ರೆಟರಿಯಟ್ ಮ್ಯಾನ್ಯುಯಲ್ ಭಾಗ-2
8. ಕನ್ನಡಭಾಷೆ, ಪತ್ರಿಕೆ-1 ಮತ್ತು 2
9. ಕನ್ನಡಭಾಷೆ (ಐ.ಎ.ಎಸ್, ಐ.ಪಿ.ಎಸ್ ಮತ್ತು ಐ.ಎಫ್.ಎಸ್ ಅಧಿಕಾರಿಗಳಿಗೆ)ಪತ್ರಿಕೆ-1 ಮತ್ತು2.
10. ಟ್ರಾನ್ಸಲೇಷನ್ ಟೆಸ್ಟ್
11. ಪ್ರೆಸ್ ಆಂಡ್ ಅಲೈಡ್ ಆಫೀಸಸ್ ಮ್ಯಾನ್ಯುಯಲ್ ಹೈಯರ್, ಪತ್ರಿಕೆ-2

6. ವಿನಾಯಿತಿ ಪಡೆದ ಬಗ್ಗೆ ನಮೂದಿಸುವುದು:

ಅಭ್ಯರ್ಥಿಗಳು ಪ್ರಸ್ತುತ ಅರ್ಜಿಸಲ್ಲಿಸಿರುವ ವಿಷಯಗಳಲ್ಲಿ ಹಿಂದಿನ ಎರಡು ವರ್ಷಗಳ ಅವಧಿಯೊಳಗಿನ ಅಧಿವೇಶನಗಳಲ್ಲಿ ಯಾವುದಾದರೂ ಪತ್ರಿಕೆಯಲ್ಲಿ ವಿನಾಯಿತಿ ಹೊಂದಿದ್ದಲ್ಲಿ ಅದರ ವಿವರಗಳನ್ನು ಅಂದರೆ ವಿನಾಯಿತಿ ಪಡೆದ ಪತ್ರಿಕೆ, ನೋಂದಣಿ ಸಂಖ್ಯೆ, ಅಧಿವೇಶನ ಮತ್ತು ಪರೀಕ್ಷಾಕೇಂದ್ರ ಇತ್ಯಾದಿಗಳನ್ನು ಆನ್‌ಲೈನ್ ಅರ್ಜಿಯಲ್ಲಿ ನಿಗದಿಪಡಿಸಿದ ಅಂಕಣದಲ್ಲಿ ನಿರ್ದಿಷ್ಟವಾಗಿ ನಮೂದಿಸಬೇಕು. ಇಲ್ಲವಾದಲ್ಲಿ ಫಲಿತಾಂಶವನ್ನು ಸಿದ್ಧಪಡಿಸುವಾಗ ಹಿಂದೆ ಪಡೆದ

ವಿನಾಯಿತಿಯನ್ನು ಪರಿಗಣಿಸಲಾಗುವುದಿಲ್ಲ. ಕನ್ನಡಭಾಷಾ ಪರೀಕ್ಷೆ ಪತ್ರಿಕೆ-1 ಮತ್ತು ಪತ್ರಿಕೆ-2 ರಲ್ಲಿ ವಿನಾಯಿತಿ ಪಡೆದಿದ್ದಲ್ಲಿ ಮೌಖಿಕ ಸಂದರ್ಶನಕ್ಕೆ ಹಾಜರಾಗಲು, ವಿನಾಯಿತಿ ಪಡೆದ ಬಗ್ಗೆ ವಿವರಗಳನ್ನು ಆನ್‌ಲೈನ್ ಅರ್ಜಿಯ ಸಂಬಂಧಿಸಿದ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸಬೇಕು. ಹಾಗೂ ನಿಗದಿತ **ಪರೀಕ್ಷಾ ಶುಲ್ಕ ರೂ. 50/-**ಗಳನ್ನು ಪಾವತಿಸಬೇಕು ಇಲ್ಲದಿದ್ದಲ್ಲಿ ವಿನಾಯಿತಿಯನ್ನು ಪರಿಗಣಿಸುವುದಿಲ್ಲ.

ಸೂಚನೆಗಳು:

(ಎ) ಯಾವುದೇ ಸ್ಥಳೀಯ ಪ್ರಾಧಿಕಾರದ ಅಥವಾ ಕಾನೂನು ಮೇರೆಗೆ ರಚಿಸಲಾದ ನಿಗಮಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನಿಗದಿತ ಶುಲ್ಕಗಳನ್ನು ಸಂದಾಯ ಮಾಡಿದಲ್ಲಿ ಮಾತ್ರ ಅವರಿಗೆ ಅನ್ವಯವಾಗುವ ಸೇವೆಯ ನೇಮಕಾತಿ ಷರತ್ತುಗಳನ್ನೊಳಗೊಂಡಂತೆ ಅವರು ತೇರ್ಗಡೆಯಾಗಬೇಕಾಗಿರುವಂತಹ ಸೇವಾ ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗುತ್ತಾರೆ.

(ಬಿ) ಕೇಂದ್ರ ಪರಿಹಾರ ಸಮಿತಿಯು ಸರ್ಕಾರದ ಸ್ವಾಮ್ಯಕ್ಕೊಳಪಟ್ಟಿರುವ ಸಂಸ್ಥೆಯಾಗಿರುವ ಕಾರಣ ಅಲ್ಲಿಯ ಸಿಬ್ಬಂದಿಗೆ ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್, ಅಕೌಂಟ್ಸ್ ಲೋಯರ್, ಜನರಲ್ ಲಾ ವಿಷಯಗಳು ಅಲ್ಲದೆ ಅವರುಗಳೂ ನಿಗದಿಪಡಿಸಿರುವ ವಿಷಯಗಳಲ್ಲಿ ತೇರ್ಗಡೆಯಾಗಬೇಕಿರುವಂತಹ ಸೇವಾ ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗುತ್ತಾರೆ.

(ಸಿ) ಸ್ಥಳೀಯ ಅಭ್ಯರ್ಥಿಗಳು, ಸ್ಟೈಪೆಂಡರಿ ಪದವೀಧರರು, ದೈನಿಕ ಮುಜರಾಯಿ ಮಾಸಿಕ ವೇತನದ ಮೇಲೆ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಕರಾರು ಆಧಾರದಲ್ಲಿ ಹಾಗೂ ಅನುದಾನಿತ ಮತ್ತು ಖಾಸಗಿ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು ಈ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಾಗುವುದಿಲ್ಲ.

(ಡಿ) ಸೇವಾ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಪ್ರತಿಯೊಬ್ಬ ಅಭ್ಯರ್ಥಿಯ ಆನ್‌ಲೈನ್ ಅರ್ಜಿಯಲ್ಲಿ ಮೇಲಧಿಕಾರಿಯ ಪ್ರಮಾಣಪತ್ರವನ್ನು ದೃಢೀಕರಿಸುವ ಮೊದಲು ಅಭ್ಯರ್ಥಿಯು ಸೇವೆಸಲ್ಲಿಸುತ್ತಿರುವ ಕಛೇರಿ ಮುಖ್ಯಸ್ಥರು ಅಭ್ಯರ್ಥಿಯು ಭರ್ತಿ ಮಾಡಿ **Down load** ಮಾಡಿಟ್ಟುಕೊಂಡ ಆನ್‌ಲೈನ್ ಅರ್ಜಿಯ ಪ್ರತಿಯನ್ನು ಕೂಲಂಕಷವಾಗಿ ಪರಿಶೀಲಿಸಿ ವಾಸ್ತವತೆಯನ್ನು ಖಚಿತಪಡಿಸಿಕೊಂಡು ಸತ್ಯಾಪನೆ ಮಾಡಿ ನಂತರ ದೃಢೀಕರಿಸತಕ್ಕದ್ದು.

(ಇ) ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಹೈಯರ್ ಮತ್ತು ಲೋಯರ್ ವಿಷಯಗಳ ಪರೀಕ್ಷೆಯಲ್ಲಿ "ಉದ್ಯೋಗ ಮತ್ತು ತರಬೇತಿ ಮಹಾ ನಿರ್ದೇಶನಾಲಯ ನವದೆಹಲಿ ಇವರು ಪ್ರಕಟಿಸಿರುವ **ಎಂಪ್ಲಾಯ್‌ಮೆಂಟ್ ಸರ್ವೀಸ್ ಮ್ಯಾನ್ಯುಯಲ್"** ಪುಸ್ತಕವನ್ನು ಉಪಯೋಗಿಸಲು ಅನುಮತಿ ನೀಡಲಾಗಿದೆ.

ಎಫ್) ಸರ್ಕಾರವು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 4 ಎಸ್‌ಎಸ್‌ಆರ್ 2007 ದಿನಾಂಕ: 26-04-2008ರಲ್ಲಿ ಕರ್ನಾಟಕ ನಾಗರೀಕ ಸೇವಾ (ಸೇವೆಗಳು ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, 1974ರ ಅನುಸೂಚಿ-I ಮತ್ತು IIರಲ್ಲಿ ನಿಗದಿಪಡಿಸಿರುವ ವಿವಿಧ ವಿಷಯಗಳ ಪಠ್ಯ ಕ್ರಮಕ್ಕೆ ತಿದ್ದುಪಡಿ ಮಾಡಿರುವ ವಿವರಗಳನ್ನು ಈ ಕೆಳಗೆ ನೀಡಿದೆ.

1. Title and commencement:- (1) These rules may be called the Karnataka Civil Services (Service and Kannada Language Examinations) (First Amendment) Rules, 2008.

2. They shall come into force from the date of their publication in the Official Gazette.

2. Amendment of SCHEDULE- I.- In the Karnataka Civil Services (Service and Kannada Language Examinations) Rules, 1974, (hereinafter referred to as the said rules) in **SCHEDULE-I**, under the heading " II service examination ", in the " Note" specifying syllabi for various examinations",-

(1) Under the heading,-" 3. Revenue (Higher) Examination-Part-I" under the sub-heading Paper-II, under " Minor Acts and Rules" items (vii), and (ix) and (x) and entries relating thereto shall be omitted.

(2) Under the heading " 4. Revenue (Lower)" under sub-heading ' Paper-II' , under " Minor Acts and Rules" items (vii), (ix) and (x) and entries relating thereto shall be omitted.

(3) Under the heading "5. General Law Part-I" under sub-heading "Paper-II" ,-

(a) for serial number 3 and entries relating thereto, the foilowing shall be substituted, namely:-

"3. Motor Vehicles Act, 1988 (Central Act 59 of 1988)."

(b) for serial number 6 and entries relating thereto, the following shall be substituted, namely:-

"6. Prevention of corruption Act, 1988 (Central Act 49 of 1988)"

(c) after serial number 8 and entries relating thereto, the following shall be inserted, namely:-

"9. The Right to Information Act, 2005 (Central Act 22 of 2005) and the rules made thereunder."

(4) Under the heading "Community Development Examination Part-II", Note (1) and (2) shall be Omitted.

(5) for the entries under the heading " 19, Marketing Examination" Under the sub-heading " Paper-II', the following shall be substituted namely:-

"The Weights and Measures (Enforcement) Act,1985 and Rules".

(6) Under the heading "22. Motor Vehicles Examination", for Serial number 1 and the entries relating thereto the following shall be substituted, namely:-

" 1. Motor Vehicles Act, 1988 (Central Act 59 of 1988) and the Rules made thereunder".

(7) Under the heading "23. Karnataka Police Manual Examination" in chapter XLVIII,-

(a) for item (i) and entries relating thereto the following shall be substituted, namely:-

"(i) Karnataka State Police including Ministerial Services (Recruitment) Rules, 2004"

(b) item (iii) and entries relating thereto shall be omitted;

(8) The heading " 24. Stores Purchase Department Manual Examination" and the entries relating thereto shall be omitted.

(9) Under the heading "26. Departmental Examination in Mining" under sub-heading "Part-II," for item (e) and entries relating thereto, the following shall be substituted, namely:-

"(e) Karnataka Minor Mineral Concession Rules, 1994".

(10) Under the heading "36. Public Works Departmental (Higher) Examination Part-I", under the sub-heading " Paper-II" for the words, figures and brackets "Karnataka Irrigation Act, 1959 (Edition) as amended form time to time" the words figures and brackets " Karnataka Irrigation Act, 1965 (16 of 1965)" shall be substituted.

(11) Uner the heading " 44. Examination in Recruitment Rules" for item (d) an the entries relating thereto the following shall be substituted, namely:

"(d) The Karnataka Civil Services (Direct Recruitment by Competitive Examinations and Selection) (General) Rules, 2006."

(12) Under the heading "49 Food and Civil Supplies Examinations" under the sub-heading " Paper-II'. for Serial number 2 and the entries relating thereto the following shall be substituted namely:-

"The Weights and Measures (Enforcement) Act, 1985 and Rules".

3. Amendment of Schedule II.- In schedule II to the said rules, in the **TABLE**, Serial number 33 and the entries relating thereto shall be omitted.

7. **ಪರೀಕ್ಷಾ ಕೇಂದ್ರಗಳು:** ಪ್ರತಿಯೊಬ್ಬ ಅಭ್ಯರ್ಥಿಯು ಪ್ರಸ್ತುತ ಅವನು ಕೆಲಸ ಮಾಡುತ್ತಿರುವ ಜಿಲ್ಲಾ ಕೇಂದ್ರದಲ್ಲಿಯೇ ಪರೀಕ್ಷೆಗೆ ಕುಳಿತುಕೊಳ್ಳತಕ್ಕದ್ದು. ಆದರೆ, ಯಾವುದೇ ಒಬ್ಬ ಅಭ್ಯರ್ಥಿಯು ತದನಂತರ ಇತರ ಕೇಂದ್ರಕ್ಕೆ ವರ್ಗಾವಣೆಯಾದಲ್ಲಿ ಅಥವಾ ಅವನು ತನ್ನ ಕೇಂದ್ರ ಕಾರ್ಯಸ್ಥಾನದ ಹೊರಗೆ ಗಳಿಕೆ ರಜೆಯ ಮೇಲಿರುವುದು ಮುಂತಾದ ನಿರ್ದಿಷ್ಟ ವಿಶೇಷ ಕಾರಣಗಳಿದ್ದಲ್ಲಿ ಆಯೋಗವು ಅಂತಹ ಅಭ್ಯರ್ಥಿಗಳಿಗೆ ಬೇರೆ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗುವುದಕ್ಕೆ ಕ್ರಮತೆಗೆದುಕೊಳ್ಳಲಾಗುವುದು. ಆಯೋಗದ ನಿರ್ದಿಷ್ಟ ಅನುಮತಿ ಇಲ್ಲದೆ ಅಭ್ಯರ್ಥಿಗಳು ಬೇರೆ ಕೇಂದ್ರದಲ್ಲಿ ಪರೀಕ್ಷೆಗಳನ್ನು ತೆಗೆದುಕೊಳ್ಳುವಂತಿಲ್ಲ. ಆ ರೀತಿ ಮಾಡಿದ ಅಭ್ಯರ್ಥಿಗಳು ಆಯೋಗ ತೆಗೆದುಕೊಳ್ಳುವ ಕ್ರಮಕ್ಕೆ ಹೊಣೆಯಾಗುವರು. ಅಂತಹ ಅಭ್ಯರ್ಥಿಗಳು ಈ ಬಗ್ಗೆ ಲಿಖಿತ ರೂಪದಲ್ಲಿ ಆಯೋಗದ ಗಮನಕ್ಕೆ ತರತಕ್ಕದ್ದು.

ಎ(1) ಖಜಾನೆ ಅಕೌಂಟ್ಸ್, ಸಬಾರ್ಡಿನೇಟ್ ಅಕೌಂಟ್ಸ್ ಸರ್ವೀಸ್, ಎಲೆಕ್ಟ್ರಿಸಿಟಿ ಮತ್ತು ಅಖಿಲ ಭಾರತಸೇವಾ ಐಎಎಸ್, ಐಪಿಎಸ್ ಮತ್ತು ಐಎಫ್ಎಸ್) ಅಧಿಕಾರಿಗಳಿಗೆ ಕನ್ನಡ ಭಾಷಾ ಪರೀಕ್ಷೆಗಳನ್ನು ಬೆಂಗಳೂರು **ಕೇಂದ್ರದಲ್ಲಿ ಮಾತ್ರ ನಡೆಸಲಾಗುವುದು.**

(2) ಸಬಾರ್ಡಿನೇಟ್ ಅಕೌಂಟ್ಸ್ ಸೇವಾ(ಎಸ್.ಎ.ಎಸ್) ಪರೀಕ್ಷೆಗಳನ್ನು ತೆಗೆದುಕೊಳ್ಳುವ ನೌಕರರು ಅವರು ಸೇವೆಗೆ ನೇಮಕಗೊಂಡ ದಿನಾಂಕದಿಂದ ಪ್ರಥಮ ದರ್ಜೆ ಸಹಾಯಕರಾಗಿ ಮೂರು ವರ್ಷಗಳಿಗಿಂತ ಕಡಿಮೆ ಇರದ ಅಥವಾ ದ್ವಿತೀಯ ದರ್ಜೆ ಸಹಾಯಕರಾಗಿ ಆರು ವರ್ಷಗಳಿಗಿಂತ ಕಡಿಮೆ ಇರದ ಅವಧಿಯ ಸೇವೆ ಸಲ್ಲಿಸಿದ್ದು ಅಕೌಂಟ್ಸ್ ಹೈಯರ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕಡ್ಡಾಯವಾಗಿ ತೇರ್ಗಡೆಯಾಗಿದ್ದಲ್ಲಿ ಮಾತ್ರ ಸದರಿ ಪರೀಕ್ಷೆಗೆ ಕುಳಿತುಕೊಳ್ಳಲು ಅರ್ಹರಾಗಿರುತ್ತಾರೆ. ಅಂತಹ ಅಭ್ಯರ್ಥಿಗಳು ಅವರ ಸೇವಾ ಅವಧಿಯನ್ನು ಮತ್ತು ಅಕೌಂಟ್ಸ್ ಹೈಯರ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾದ ಬಗ್ಗೆ ವಿವರಗಳನ್ನು ಆನ್‌ಲೈನ್ ಅರ್ಜಿಯ ಸಂಬಂಧಿಸಿದ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು.

ಬಿ) **ಸಚಿವಾಲಯದ ಕೈಪಿಡಿ ಪರೀಕ್ಷೆ, ಭಾಷಾಂತರ ಇಲಾಖೆಯ ಭಾಷಾಂತರ ಪರೀಕ್ಷೆ** ಭಾರತದ ಕರಾರು ಅಧಿನಿಯಮ, ವಿಶೇಷ ಕಾನೂನು ಮತ್ತು ಸೇವಾ ಪರೀಕ್ಷೆಗಳು, ಕರ್ನಾಟಕ ಲೋಕಸೇವಾ ಆಯೋಗದ ಕೈಪಿಡಿ, ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ನಿಯಮಗಳ ಪರೀಕ್ಷೆಗಳು ಮತ್ತು ಕರ್ನಾಟಕ ಅಡ್ಮಿನಿಸ್ಟ್ರೇಟಿವ್ ಟ್ರಿಬ್ಯೂನಲ್ ಪರೀಕ್ಷೆಗಳನ್ನು ಬೆಂಗಳೂರು ಕೇಂದ್ರದಲ್ಲಿ ಮಾತ್ರ ನಡೆಸಲಾಗುವುದು.

ಸಿ) ಮುದ್ರಣಾಲಯ ಕೈಪಿಡಿಯ ಹೈಯರ್ ಮತ್ತು ಲೋಯರ್ ಪರೀಕ್ಷೆಗಳನ್ನು ಬೆಂಗಳೂರು, ಮೈಸೂರು, ಧಾರವಾಡ, ಮಡಿಕೇರಿ ಮತ್ತು ಗುಲ್ಬರ್ಗಾ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು.

ಡಿ) ಬಂದರುಗಳ ಇಲಾಖೆಯ ಹೈಯರ್ ಮತ್ತು ಲೋಯರ್ ಪರೀಕ್ಷೆಗಳನ್ನು ಮಂಗಳೂರು ಮತ್ತು ಕಾರವಾರ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು.

ಇ) ಉಳಿದಂತೆ ಇತರೆ ಪರೀಕ್ಷೆಗಳು ಈ ಕೆಳಕಂಡ ಜಿಲ್ಲಾ ಕೇಂದ್ರಗಳಲ್ಲಿ ನಡೆಯಲಿದ್ದು, ಜಿಲ್ಲಾ ಸಂಕೇತ ಸಂಖ್ಯೆಗಳನ್ನು ಅವುಗಳ ಎದುರಿಗೆ ನೀಡಿದೆ. ಈ ಸಂಕೇತ ಸಂಖ್ಯೆಗಳನ್ನು ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು:-

ಜಿಲ್ಲೆ	ಸಂಕೇತ	ಜಿಲ್ಲೆ	ಸಂಕೇತ
ಬೆಂಗಳೂರು	01	ಕಾರವಾರ	17
ಬೆಳಗಾವಿ	02	ಕೋಲಾರ	18
ಬಳ್ಳಾರಿ	03	ಕೊಪ್ಪಳ	19
ಬೀದರ್	04	ಮಂಡ್ಯ	20
ಬಿಜಾಪುರ	05	ಮಂಗಳೂರು	21
ಬಾಗಲಕೋಟೆ	06	ಮಡಿಕೇರಿ	22
ಚಾಮರಾಜನಗರ	07	ಮೈಸೂರು	23
ಚಿಕ್ಕಬಳ್ಳಾಪುರ	08	ರಾಮನಗರ	24
ಚಿಕ್ಕಮಗಳೂರು	09	ರಾಯಚೂರು	25
ಚಿತ್ರದುರ್ಗ	10	ಶಿವಮೊಗ್ಗ	26
ಧಾರವಾಡ	11	ತುಮಕೂರು	27
ದಾವಣಗೆರೆ	12	ಉಡುಪಿ	28
ಗುಲ್ಬರ್ಗಾ	13	ನವದೆಹಲಿ	29
ಗದಗ್	14	ಮುಸ್ಸೂರಿ	30
ಹಾಸನ	15	ಯಾದಗಿರಿ	31
ಹಾವೇರಿ	16		

8. ಪರೀಕ್ಷಾ ಕೇಂದ್ರದ ಬದಲಾವಣೆ:

ಪರೀಕ್ಷಾ ಕೇಂದ್ರದ ಬದಲಾವಣೆಗೆ ಸಲ್ಲಿಸುವ ಕೋರಿಕೆಗಳನ್ನು ಪರೀಕ್ಷೆ ಪ್ರಾರಂಭವಾಗುವ ಕನಿಷ್ಠ 15 ದಿನಗಳ ಮೊದಲು ಸಲ್ಲಿಸತಕ್ಕದ್ದು. ಆ ದಿನಾಂಕದ ತರುವಾಯ ಸಲ್ಲಿಸಲ್ಪಡುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಧಿಕೃತ ಕಾರಣಗಳ ಮೇಲೆ ಕೇಂದ್ರ ಬದಲಾವಣೆಗೆ ಅರ್ಜಿ ಸಲ್ಲಿಸುವ ನೌಕರರು ವರ್ಗಾವಣೆಯ ಅಥವಾ ಸ್ಥಳ ನಿಯುಕ್ತಿಯ ಆದೇಶಗಳ ದೃಢೀಕೃತ ನಕಲನ್ನು ಅಥವಾ ಸಂದರ್ಭಾನುಸಾರ ಗಳಿಕೆರಜೆ ಮಂಜೂರು ಮಾಡಲಾದ ಅಧಿಕೃತ ಜ್ಞಾಪನಪತ್ರದ ದೃಢೀಕೃತ ನಕಲಿನೊಂದಿಗೆ ಆ ಬಗ್ಗೆ ಪಡೆದ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು. ಸ್ವವಿಳಾಸ ಬರೆದ ಹಾಗೂ ಅವಶ್ಯಕ ಅಂಚೆಚೀಟಿ ಹಚ್ಚಲಾದ ಲಕೋಟೆಯನ್ನು ಪತ್ರ ವ್ಯವಹಾರಕ್ಕಾಗಿ ಲಗತ್ತಿಸತಕ್ಕದ್ದು. (ರಿಜಿಸ್ಟರ್ಡ್ ಅಂಚೆಯಲ್ಲಿ ಕಳುಹಿಸಬೇಕಾದರೆ ಅದಕ್ಕೆ ತಗಲುವ ಸಾಕಷ್ಟು ಅಂಚೆಚೀಟಿ ಹಚ್ಚಿರಬೇಕು).

ಎ) ವಿವರಣಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಸೇವಾ ಪರೀಕ್ಷೆಗಳನ್ನು ಆಂಗ್ಲಭಾಷೆಯಲ್ಲಿ ಅಥವಾ ಕನ್ನಡದಲ್ಲಿ ಉತ್ತರಿಸಲು ಅನುಮತಿಸಲಾಗುವುದು.

ಬಿ) ಅಭ್ಯರ್ಥಿಯು ಉತ್ತರಗಳನ್ನು ಬರೆಯಲು ಆಂಗ್ಲ ಅಥವಾ ಕನ್ನಡದ ಯಾವುದೇ ಒಂದು ಮಾಧ್ಯಮವನ್ನು ಮಾತ್ರ ಆಯ್ಕೆ ಮಾಡಿಕೊಳ್ಳತಕ್ಕದ್ದು. ಅರ್ಧ ಆಂಗ್ಲಭಾಷೆಯಲ್ಲಿ ಮತ್ತು ಅರ್ಧ ಕನ್ನಡದಲ್ಲಿ ಉತ್ತರಿಸಿದಲ್ಲಿ ಅಂತಹ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

ಸಿ) ಓಎಂಆರ್ ಉತ್ತರ ಹಾಳೆಯಲ್ಲಿ ನಿಗದಿತ ಸ್ಥಳದಲ್ಲಿ ಅಭ್ಯರ್ಥಿ ನೋಂದಣಿ ಸಂಖ್ಯೆ ಮತ್ತು ವರ್ಷನ್ ಕೋಡನ್ನು ಸರಿಯಾಗಿ ನಮೂದಿಸಿ ಗುರುತಿಸಬೇಕು. ಇಲ್ಲವಾದಲ್ಲಿ ಅಂತಹ ಓ.ಎಂ.ಆರ್. ಉತ್ತರಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

9. ವಿನಾಯಿತಿ:

ಎ) ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾಲಯದ ಎಲ್.ಎಲ್.ಬಿ., ಅಥವಾ ಬಿ.ಎಲ್ ಪದವಿ ಪಡೆದಂತಹ ಕಾನೂನು ಪದವೀಧರರಿಗೆ ಜನರಲ್ ಲಾ ಭಾಗ–1ರ ಪತ್ರಿಕೆ–(1) ಕ್ಕೂ ಮತ್ತು ಜನರಲ್ ಲಾ ಭಾಗ–2 ಕ್ಕೂ ಹಾಗೂ ಬಿ.ಕಾಂ. ಅಥವಾ ಐ.ಕಾಂ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅಡ್ವಾನ್ಸ್‌ಡ್ ಅಕೌಂಟೆನ್ಸಿ ಅಥವಾ ಫೈನಾನ್ಸಿಷಿಯಲ್ ಅಕೌಂಟೆನ್ಸಿ ವಿಷಯದಲ್ಲಿ ತೇರ್ಗಡೆಯಾದವರಿಗೆ ಕಮರ್ಷಿಯಲ್ ಟ್ಯಾಕ್ಸ್ ಹೈಯರ್ ವಿಷಯದ ಪತ್ರಿಕೆ–3ಕ್ಕೂ, ಕೋ–ಆಪರೇಷನ್ ವಿಷಯದ ಪತ್ರಿಕೆ–2ಕ್ಕೂ ಹಾಗೂ ಅಡ್ವಾನ್ಸ್‌ಡ್ ಅಕೌಂಟೆನ್ಸಿ ಅಥವಾ ಫೈನಾನ್ಸಿಷಿಯಲ್ ಅಕೌಂಟೆನ್ಸಿ ಓದಿ ಬಿ.ಕಾಂ., ಬಿ.ಬಿ.ಎಂ. ಅಥವಾ ತತ್ಸಮಾನ ಪದವಿ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳಿಗೆ ಕೋ–ಆಪರೇಟಿವ್ ಆಡಿಟ್ ಪರೀಕ್ಷೆಯ 2ನೇ ಪತ್ರಿಕೆಗೆ ವಿನಾಯಿತಿ ಇದೆ. ಹಾಗೆಯೇ ಅಡ್ವಾನ್ಸ್‌ಡ್ ಅಕೌಂಟೆನ್ಸಿ ಅಥವಾ ಫೈನಾನ್ಸಿಷಿಯಲ್ ಅಕೌಂಟೆನ್ಸಿ ವಿಷಯವನ್ನು ಓದಿರುವ ಬಿ.ಕಾಂ. ಪದವೀಧರರಿಗೆ ಎಸ್.ಎ.ಎಸ್. ಭಾಗ–3ರ ಪತ್ರಿಕೆ–1 ಕ್ಕೂ ಹಾಗೂ ಟ್ರೆಜರಿ ಅಕೌಂಟ್ಸ್ ಭಾಗ–2ರ ಪತ್ರಿಕೆ–1ಕ್ಕೂ ವಿನಾಯಿತಿ ಇರುತ್ತದೆ. ವಿನಾಯಿತಿ ಕೋರುವ ಅಭ್ಯರ್ಥಿಗಳು ಈ ತತ್ಸಂಬಂಧ ವಿಷಯಗಳನ್ನು ಅಭ್ಯಸಿಸಿದ್ದ ಬಗ್ಗೆ ಬಿ.ಕಾಂ., ಎಲ್.ಎಲ್.ಬಿ. ಅಥವಾ ತತ್ಸಮಾನ ಪದವಿಯ ದೃಢೀಕೃತ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರಗಳನ್ನು ಮೇಲಧಿಕಾರಿಯವರಿಂದ ದೃಢೀಕರಿಸಿದ ಪ್ರಮಾಣಪತ್ರ, ಹಾಗೂ ಡಿ.ಡಿ/ಐ.ಪಿ.ಓ.ಗಳೊಂದಿಗೆ ಲಗತ್ತಿಸಿ ರವಾನಿಸತಕ್ಕದ್ದು. ಮತ್ತು ಆನ್‌ಲೈನ್ ಅರ್ಜಿಯ

ಸಂಬಂಧಿಸಿದ ಅಂಕಣದಲ್ಲಿ ಅಭ್ಯರ್ಥಿಯು ಪಡೆದಿರುವ ಪದವಿಯ ಬಗ್ಗೆ ಕಡ್ಡಾಯವಾಗಿ ನಮೂದಿಸತಕ್ಕದ್ದು. ತಪ್ಪಿದಲ್ಲಿ ಅಂತಹ ವಿನಾಯಿತಿಗಳನ್ನು ಪರಿಗಣಿಸಲಾಗುವುದಿಲ್ಲ.

(ಬಿ) ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 76, ದಿನಾಂಕ 10ನೇ ಜನವರಿ 1987ರ ಅನುಸಾರವಾಗಿ ಸರ್ಕಾರಿ ಆದೇಶ ಸಂಖ್ಯೆ 649 ಇಎನ್ ಟಿ 57, ದಿನಾಂಕ 23ನೇ/25ನೇ ಫೆಬ್ರವರಿ 1959ರ ಅನುಸಾರವಾಗಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯಿಂದ ನಡೆಸಲಾದ ಅರಣ್ಯ ಇಲಾಖಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳಿಗೆ ಅರಣ್ಯ ಪರೀಕ್ಷೆಯ ಪತ್ರಿಕೆ–2 ರಲ್ಲಿ ತೇರ್ಗಡೆಯಾಗುವುದರಿಂದ ವಿನಾಯಿತಿ ನೀಡಲಾಗಿದೆ.

10. ಪ್ರವೇಶ ಪತ್ರ:

ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸುತ್ತಿರುವುದರಿಂದ ಪ್ರವೇಶಪತ್ರಗಳನ್ನು ಅಂಚೆ ಮೂಲಕ ಕಳುಹಿಸಲಾಗುವುದಿಲ್ಲ.

ವೇಳಾ ಪಟ್ಟಿಯನ್ನೊಳಗೊಂಡ ಪ್ರವೇಶ ಪತ್ರವನ್ನು ಪರೀಕ್ಷೆಗೆ ಮೊದಲು ಆಯೋಗದ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗುತ್ತದೆ. ಅಭ್ಯರ್ಥಿಗಳು ಪ್ರವೇಶಪತ್ರಗಳನ್ನು Down load ಮಾಡಿಕೊಂಡು ನಿಗದಿತ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ವೇಳೆಯಲ್ಲಿ ಪ್ರವೇಶಪತ್ರವನ್ನು ಹಾಜರುಪಡಿಸತಕ್ಕದ್ದು. ಸದರಿ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳು ಜೋಪಾನವಾಗಿಟ್ಟಿರಬೇಕು ಮತ್ತು ಅವುಗಳನ್ನು ತಮ್ಮ ಸೇವಾ ದಾಖಲೆಗಳಲ್ಲಿ ನಮೂದು ಮಾಡುವುದಕ್ಕಾಗಿ ಆಯೋಗದಿಂದ ನೀಡಲಾದ ತೇರ್ಗಡೆ ಪ್ರಮಾಣ ಪತ್ರದೊಂದಿಗೆ ಸಕ್ಷಮ ಪ್ರಾಧಿಕಾರಿಯ ಮುಂದೆ ಹಾಜರುಪಡಿಸತಕ್ಕದ್ದು. ಯಾವುದೇ ಸಂದರ್ಭದಲ್ಲಿ ಪರೀಕ್ಷೆಗಳು ಮುಗಿದ ನಂತರ ಪ್ರವೇಶ ಪತ್ರದ ನಕಲನ್ನು ನೀಡಲಾಗುವುದಿಲ್ಲ.

11. ಪಠ್ಯಪುಸ್ತಕಗಳು:

ಪಠ್ಯಪುಸ್ತಕಗಳನ್ನು ಉಪಯೋಗಿಸಬಹುದಾದ ಪತ್ರಿಕೆಗಳಿಗೆ ಅಭ್ಯರ್ಥಿಗಳು ಸರ್ಕಾರದಿಂದ ಪ್ರಕಾಶಿಸಲ್ಪಟ್ಟ ಪಠ್ಯಪುಸ್ತಕಗಳನ್ನು ಮತ್ತು ಖಾಸಗಿ ಪ್ರಕಾಶಕರಿಂದ ಪ್ರಕಾಶಿಸಲ್ಪಟ್ಟ ಪುಸ್ತಕಗಳನ್ನು ಸರ್ಕಾರಿ ಪ್ರಕಾಶಿತ ಪುಸ್ತಕಗಳ ಮಾದರಿಗೆ ಯಾವುದೇ ರೀತಿಯ ತದ್ವಿರುದ್ಧವಾಗಿಲ್ಲದಿದ್ದರೆ ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯದ ದಿನಾಂಕ 3ನೇ ಡಿಸೆಂಬರ್ 1991ರ ಆದೇಶಕ್ಕೆ ಅನುಗುಣವಾಗಿದ್ದರೆ ಅಂತಹ ಪಠ್ಯಪುಸ್ತಕಗಳನ್ನು ಮಾತ್ರ ಪರೀಕ್ಷಾ ಕೇಂದ್ರಗಳಲ್ಲಿ ಉಪಯೋಗಿಸಬಹುದಾಗಿರುತ್ತದೆ. ಇತರೆ ಯಾವುದೇ ಖಾಸಗಿ ಪ್ರಕಾಶಕರ ಪಠ್ಯ ಪುಸ್ತಕಗಳನ್ನು ನಿಷೇಧಿಸಲಾಗಿದೆ.

12. ತೇರ್ಗಡೆಗೆ ಗಳಿಸಬೇಕಾದ ಅಂಕಗಳು:

ಎ) ಯಾವುದೇ ಸೇವಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಲು ಒಂದು ಪತ್ರಿಕೆಯ ಪರೀಕ್ಷೆಗೆ ಕನಿಷ್ಠ ಶೇಕಡ 40 ಅಂಕಗಳನ್ನು ಪಡೆದಿರಬೇಕು. ಒಂದಕ್ಕಿಂತ ಹೆಚ್ಚು ಪತ್ರಿಕೆಗಳಿದ್ದಲ್ಲಿ ಪ್ರತಿ ಪತ್ರಿಕೆಯಲ್ಲಿ ಕನಿಷ್ಠ ಶೇಕಡಾ 35 ಮತ್ತು ಒಟ್ಟು ಎಲ್ಲಾ ಪತ್ರಿಕೆಗಳಿಂದ ಕನಿಷ್ಠ ಶೇಕಡಾ 40 ಅಂಕಗಳನ್ನು ಪಡೆದಿರಬೇಕು. ವಿನಾಯಿತಿ ಕೋರಿದ ಬಿ.ಕಾಂ. ಹಾಗೂ ಕಾನೂನು ಪದವೀಧರರು, ಹಾಗೂ ಲೋಕಸೇವಾ ಆಯೋಗವು ನಡೆಸುವ ವಿಷಯದ ಪತ್ರಿಕೆಗಳಲ್ಲಿ ಕನಿಷ್ಠ ಶೇಕಡ 40 ಅಂಕಗಳನ್ನು ಪಡೆದಿರಬೇಕು.

ಬಿ) ಯಾವುದೇ ಪರೀಕ್ಷೆಯಲ್ಲಿ ನಿಗದಿಪಡಿಸಿದ ಗರಿಷ್ಠ ಅಂಕಗಳಲ್ಲಿ ಶೇಕಡ 60ಕ್ಕಿಂತ ಕಡಿಮೆ ಇರದಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾದಂತಹ ಅಭ್ಯರ್ಥಿಗಳನ್ನು ಪ್ರಥಮ ದರ್ಜೆ ಯಲ್ಲಿ ಉತ್ತೀರ್ಣರಾಗಿರುವುದಾಗಿ ಫಲಿತಾಂಶ ಘೋಷಿಸಲಾಗುವುದು.

ಸಿ) ಯಾವುದೇ ಪರೀಕ್ಷೆಯು ಒಂದಕ್ಕಿಂತ ಹೆಚ್ಚು ಪತ್ರಿಕೆಗಳನ್ನೊಳಗೊಂಡಿದ್ದು ಅಭ್ಯರ್ಥಿಯು ಆ ಪರೀಕ್ಷೆಯಲ್ಲಿ ಅನುತ್ತೀರ್ಣನಾದರೂ ಅದೇ ವಿಷಯದ ಇತರ ಪತ್ರಿಕೆಗಳಲ್ಲಿ ಆ ಪತ್ರಿಕೆಗೆ ನಿರ್ದಿಷ್ಟಪಡಿಸಲಾದ ಗರಿಷ್ಟ ಅಂಕಗಳಲ್ಲಿ ಶೇಕಡಾ 60ಕ್ಕಿಂತ ಕಡಿಮೆ ಇರದಷ್ಟು ಅಂಕಗಳನ್ನು ಪಡೆದಿದ್ದಲ್ಲಿ ಅಂತಹವರನ್ನು ಆ ಪತ್ರಿಕೆಯಲ್ಲಿ ವಿನಾಯಿತಿ ಹೊಂದಿರುವವರೆಂದು ಪರಿಗಣಿಸಲಾಗುವುದು. ಅಂತಹವರು ಪರೀಕ್ಷೆಗಳ ಫಲಿತಾಂಶ ಘೋಷಿಸಿದ ನಿಯಾಮಾನುಸಾರ ದಿನಾಂಕದಿಂದ ಎರಡು ವರ್ಷಗಳೊಳಗೆ ಆ ಪರೀಕ್ಷೆಯ ಉಳಿದ ಪತ್ರಿಕೆಗಳಲ್ಲಿ ತೇರ್ಗಡೆಯಾಗಲು ಅವಶ್ಯವಿರುವಷ್ಟು ಅಂಕಗಳನ್ನು ಪಡೆದು ತೇರ್ಗಡೆಯಾಗತಕ್ಕದು. ಇಲ್ಲದಿದ್ದಲ್ಲಿ ಅಂತಹ ವಿನಾಯ್ತಿಯು ರದ್ದಾಗುವುದು.

13. ಹಾಜರಿ ಪ್ರಮಾಣ ಪತ್ರಗಳು:

ಪರೀಕ್ಷೆಗೆ ಹಾಜರಾದ ಬಗ್ಗೆ ಹಾಜರಾತಿ ಪ್ರಮಾಣಪತ್ರ ಪಡೆಯಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಪರೀಕ್ಷಾಕೇಂದ್ರದ ಮೇಲ್ವಿಚಾರಕರಿಂದ ಅದನ್ನು ಪರೀಕ್ಷಾ ದಿನದಂದೇ ಪಡೆಯತಕ್ಕದ್ದು. ಹಾಜರಿ ಪ್ರಮಾಣಪತ್ರವನ್ನು ಆಯೋಗದ ಕಛೇರಿಯಿಂದ ಯಾವುದೇ ಸಂದರ್ಭದಲ್ಲೂ ನೀಡಲಾಗುವುದಿಲ್ಲ.

14. ಕನ್ನಡಭಾಷಾ ಲಿಖಿತ ಪರೀಕ್ಷೆಗೆ ಮೌಖಿಕ ಪರೀಕ್ಷೆ:

(1) ಕನ್ನಡ ಭಾಷಾ ವಿಷಯದ ಲಿಖಿತ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳಿಗೆ ಮೌಖಿಕ ಪರೀಕ್ಷೆಯನ್ನು ಆಯೋಗದ ಕೇಂದ್ರಕಛೇರಿ, ಪಾರ್ಕ್‌ಹೌಸ್, ಬೆಂಗಳೂರು–560001 ಇಲ್ಲಿ ಹಾಗೂ ಆಯೋಗದ ಪ್ರಾಂತೀಯ ಕಛೇರಿಗಳಾದ ಬೆಳಗಾಂ, ಗುಲ್ಬರ್ಗಾ, ಮೈಸೂರು ಹಾಗೂ ಶಿವಮೊಗ್ಗ ಕೇಂದ್ರಗಳಲ್ಲಿ ನಡೆಸಲಾಗುವುದು.

ಸೂಚನೆ: (1) ಯಾವುದೇ ಸರ್ಕಾರಿ ನೌಕರನು/ನೌಕರಳು ಕನ್ನಡಭಾಷಾ ಲಿಖಿತ ಪರೀಕ್ಷೆಯಲ್ಲಿ ತೇರ್ಗಡೆಯಾಗದ ಹೊರತು ಕನ್ನಡ ಮೌಖಿಕ ಪರೀಕ್ಷೆಗೆ ಅರ್ಹರಾಗುವುದಿಲ್ಲ.

(2) ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 81 ಎಸ್‌ಎಸ್‌ಆರ್ 81, ದಿನಾಂಕ 6ನೇ ಜೂನ್ 1981ರ ಮೇರೆಗೆ ಗೃಹರಕ್ಷಕ ಸಂಸ್ಥೆಯ ಸೈನಿಕರು ಕನ್ನಡ ಭಾಷಾ, ಮೌಖಿಕ ಪರೀಕ್ಷೆಯಲ್ಲಿ ಮಾತ್ರ

ತೇರ್ಗಡೆಯಾಗತಕ್ಕದ್ದು. ವೇತನ ಮುಂಬಡ್ತಿ ಪಡೆಯುವ ಮತ್ತು ಸೇವಾ ಸ್ಥಿರೀಕರಣದ ಉದ್ದೇಶಗಳಿಗೆ ಕನ್ನಡ ಭಾಷಾ ಲಿಖಿತ ಪರೀಕ್ಷೆಯ ಬದಲಾಗಿ ಗರಿಷ್ಠ 50 ಅಂಕಗಳನ್ನು ನಿಗದಿಪಡಿಸಿರುವ ಕನ್ನಡ ಮೌಖಿಕ ಪರೀಕ್ಷೆಯಲ್ಲಿ ಮಾತ್ರ ಅವರು ತೇರ್ಗಡೆ ಹೊಂದಬೇಕಾಗಿರುತ್ತದೆ.

(3) ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 3 ಎಸ್‌ಎಸ್‌ಆರ್ 82, ದಿನಾಂಕ 30ನೇ ಆಗಸ್ಟ್ 1982ರ ಮೇರೆಗೆ ಅಂಧರಾಗಿರುವ ಮತ್ತು ಕೆಲಸಕ್ಕೆ ಓದುವುದು ಮತ್ತು ಬರೆಯುವುದು ಅವಶ್ಯವಿಲ್ಲದ ಸರ್ಕಾರಿ ನೌಕರರಿಗೆ ಸ್ಥಿರೀಕರಣದ ಮತ್ತು ವಾರ್ಷಿಕ ವೇತನ ಮುಂಬಡ್ತಿಗಳನ್ನು ಪಡೆಯುವ ಉದ್ದೇಶಗಳಿಗಾಗಿ ಕನ್ನಡ ಭಾಷಾ ಲಿಖಿತ ಸೇವಾ ಪರೀಕ್ಷೆಯಲ್ಲಿ ತೇರ್ಗಡೆಯಾಗುವುದರಿಂದ ವಿನಾಯಿತಿಸಲಾಗಿದೆ. ಆದರೆ ಅವರು ಕನ್ನಡ ಭಾಷಾ ಮೌಖಿಕ ಪರೀಕ್ಷೆಯಲ್ಲಿ ತೇರ್ಗಡೆಯಾಗತಕ್ಕದ್ದು.

15. (ಅ) ಆಯೋಗದ ಆದೇಶ ಸಂಖ್ಯೆ ಇ.ಪ(2)3774/94-95/ಪಿಎಸ್‌ಸಿ ದಿನಾಂಕ 18ನೇ,ಫೆಬ್ರವರಿ 1995ರ ಮೇರೆಗೆ ಬ್ಯಾಟರಿ ಚಾಲಿತ ಪ್ರೋಗ್ರಾಮ್ ಮಾಡದೆ ಇರುವಂತಹ ಕ್ಯಾಲುಕ್ಯುಲೇಟರ್‌ಗಳನ್ನು ಎಸ್.ಎ.ಎಸ್ ಪರೀಕ್ಷೆಗಳಲ್ಲಿ ಉಪಯೋಗಿಸಲು ಅಭ್ಯರ್ಥಿಗಳಿಗೆ ಅನುಮತಿ ನೀಡಲಾಗಿದೆ.

(ಆ) ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಪೋನ್‌ಗಳನ್ನು ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇದಿಸಲಾಗಿದೆ.

16. ತೇರ್ಗಡೆ ಪ್ರಮಾಣ ಪತ್ರಗಳು:

ಪ್ರತಿಯೊಂದು ವಿಷಯಕ್ಕೆ ತೇರ್ಗಡೆ ಪ್ರಮಾಣಪತ್ರವನ್ನು ಆಯೋಗದಿಂದ ಫಲಿತಾಂಶವು ಅಧಿಕೃತವಾಗಿ ರಾಜ್ಯಪತ್ರದಲ್ಲಿ ಪ್ರಕಟವಾದ ನಂತರ ಅಂಚೆಯ ಪ್ರಮಾಣಪತ್ರ (Certificate of Posting) ದ ಮೂಲಕ ಕಳುಹಿಸಲಾಗುವುದು. ಪ್ರಮಾಣ ಪತ್ರದಲ್ಲಿ ಮುದ್ರಿತವಾದ ಹೆಸರು ಅಥವಾ ಇನ್ನಾವುದೇ ರೀತಿಯ ತಪ್ಪುಗಳು ಕಂಡುಬಂದಲ್ಲಿ ಅಭ್ಯರ್ಥಿಗಳು ಕೂಡಲೇ ತಿದ್ದುಪಡಿಗಾಗಿ ಸೂಕ್ತ ದಾಖಲೆಗಳೊಂದಿಗೆ ಆಯೋಗದ ಕಛೇರಿಯನ್ನು ಸಂಪರ್ಕಿಸುವುದು.

(ಸೂಚನೆ: ಪರೀಕ್ಷೆಯ ಪ್ರತಿಭಾಗವನ್ನು ಈ ಉದ್ದೇಶಕ್ಕೆ ಒಂದು ಪ್ರತ್ಯೇಕ ಪರೀಕ್ಷೆ ಎಂದು ಪರಿಗಣಿಸಲಾಗುವುದು)

ಅಂಕಪಟ್ಟಿಗಳು: ಇಲಾಖಾ ಪರೀಕ್ಷೆಯ ಎಲ್ಲಾ ಅಭ್ಯರ್ಥಿಗಳ ಅಂಕಗಳನ್ನು ಆಯೋಗದ ವೆಬ್ ಸೈಟ್ **http://kpsc.kar.nic.in** ನಲ್ಲಿ ಫಲಿತಾಂಶ ಪ್ರಕಟವಾದ ದಿನಾಂಕದಂದೇ ಪ್ರಕಟಿಸಲಾಗುವುದು ಪ್ರತ್ಯೇಕವಾಗಿ ಅಂಕಪಟ್ಟಿಗಳನ್ನು ನೀಡಲಾಗುವುದಿಲ್ಲ.

17. ಅಂಕಗಳ ಮರು ಎಣಿಕೆ:

ಎ) ಯಾವುದೇ ಪರೀಕ್ಷೆಯಲ್ಲಿ ಅನುತ್ತೀರ್ಣನಾದ ಅಭ್ಯರ್ಥಿಯು ಫಲಿತಾಂಶ ಪ್ರಕಟವಾದ ದಿನಾಂಕದಿಂದ 30 ದಿನಗಳೊಳಗಾಗಿ ಸದರಿ ಪರೀಕ್ಷೆಯ ಎಲ್ಲಾ ಪತ್ರಿಕೆಗಳ ಅಥವಾ ಯಾವುದೇ ಪತ್ರಿಕೆಯ ಅಂಕಗಳ ಮರು ಎಣಿಕೆಗಾಗಿ ಆಯೋಗಕ್ಕೆ ಅರ್ಜಿ ಸಲ್ಲಿಸಬಹುದು, ಅಂತಹ ಅರ್ಜಿ ಸಲ್ಲಿಸುವ ಪ್ರತಿಯೊಬ್ಬ ಅಭ್ಯರ್ಥಿಯು ಶೇವಣಿಯಾಗಿ ಪ್ರತಿ ಪತ್ರಿಕೆಗೆ 50-00 ರೂ.ಗಳನ್ನು ಕಾರ್ಯದರ್ಶಿ ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಇವರಿಗೆ ಸಂದಾಯವಾಗುವಂತೆ ಪಡೆದ ಡಿಡಿ ಮೂಲಕ ಸಂದಾಯ ಮಾಡತಕ್ಕದ್ದು ಮತ್ತು ಅಂತಹ ಮೊತ್ತವನ್ನು ಸಂದಾಯ ಮಾಡಿದ ಪುರಾವೆಯನ್ನು ತನ್ನ ಹೆಸರು, ನೋಂದಣಿ ಸಂಖ್ಯೆ ಮತ್ತು ಮರು ಎಣಿಕೆ ಮಾಡಬೇಕಾದ ವಿಷಯದ ವಿವರಗಳನ್ನು ಅರ್ಜಿಯೊಂದಿಗೆ ಒದಗಿಸತಕ್ಕದ್ದು.

ಬಿ) ಅಭ್ಯರ್ಥಿಯು ಪಡೆದ ಅಂಕಗಳ ಮರು ಎಣಿಕೆಯ ಸಂಬಂಧದಲ್ಲಿ ಆಯೋಗದ ನಿರ್ಣಯವೇ ಅಂತಿಮವಾಗಿರುತ್ತದೆ.

18. ದುರ್ವರ್ತನೆ:

ಯಾವುದೇ ಒಬ್ಬ ಅಭ್ಯರ್ಥಿಯು ಸೇವಾ ಪರೀಕ್ಷೆಗಳಿಗೆ ಸಂಬಂಧಪಟ್ಟಂತೆ ಕೃತ್ರಿಮ ದಸ್ತಾವೇಜನ್ನು ಅಥವಾ ಅಕ್ರಮವಾಗಿ ತಿದ್ದಿದ ದಸ್ತಾವೇಜುಗಳನ್ನು ಸಲ್ಲಿಸಿದ ಅಥವಾ ಸರಿಯಲ್ಲದ ಅಥವಾ ಸುಳ್ಳು ವಿವರಣೆಯನ್ನು ನೀಡಿದ ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿದ ಅಥವಾ ಪರೀಕ್ಷೆಯಲ್ಲಿ ಅಕ್ರಮ ವಿಧಾನವನ್ನು ಅನುಸರಿಸಲು ಪ್ರಯತ್ನಿಸಿದ ಅಥವಾ ಬೇರೆ ರೀತಿಯಲ್ಲಿ ಇತರೆ ಯಾವುದೇ ಅಕ್ರಮ ಅನುಚಿತ ಮಾರ್ಗವನ್ನನುಸರಿಸಿದ ಅಪರಾಧವನ್ನು ಮಾಡಿರುವುದಾಗಿ ಆಯೋಗಕ್ಕೆ ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗೆ ಗುರಿಪಡಿಸುವುದಲ್ಲದೆ (ಎ) ಅಭ್ಯರ್ಥಿಯ ಆಯ್ಕೆಗಾಗಿ ಆಯೋಗದಿಂದ ನಡೆಸಲಾಗುವ ಯಾವುದೇ ಪರೀಕ್ಷೆಗೆ ಪ್ರವೇಶ ನೀಡುವುದಕ್ಕೆ ಅಥವಾ ಯಾವುದೇ ಸಂದರ್ಶನಕ್ಕೆ ಹಾಜರಾಗುವುದಕ್ಕೆ ಖಾಯಂ ಆಗಿ ಅಥವಾ ಒಂದು ನಿರ್ದಿಷ್ಟ ಅವಧಿಗೆ ಅನರ್ಹಗೊಳಿಸಲಾಗುವುದು ಮತ್ತು (ಬಿ) ಶಿಸ್ತಿನ ಕ್ರಮಕ್ಕೆ ಒಳಪಡಿಸಲಾಗುವುದು.

ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ಸಂವೀಕ್ಷಕರು/ಮೇಲ್ವಿಚಾರಕರು ನೀಡುವ ಸೂಚನೆಗಳನ್ನು ತಪ್ಪದೇ ಪಾಲಿಸುವುದು ತಪ್ಪಿದಲ್ಲಿ ಅದನ್ನು ದುರ್ವರ್ತನೆಯನ್ನಾಗಿ ಪರಿಗಣಿಸಲಾಗುವುದು ಮತ್ತು ಈ ಬಗ್ಗೆ ಶಿಸ್ತಿನ ಕಾರ್ಯವಿಧಾನಗಳಿಗೆ ಒಳಪಡಿಸಲಾಗುವುದು.

19. ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 69 ಎಸ್‌ಎಸ್‌ಆರ್ 76, ದಿನಾಂಕ 16ನೇ ಜುಲೈ 1977ರ ಅನುಸಾರವಾಗಿ ನವದೆಹಲಿಯ ಕರ್ನಾಟಕ ಭವನದಲ್ಲಿ ಕೆಲಸ ಮಾಡುತ್ತಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಇಲಾಖಾ ಪರೀಕ್ಷೆಗಳನ್ನು ಆಯೋಗದಿಂದ ಉಪನಿವಾಸ ಆಯುಕ್ತರು, ಕರ್ನಾಟಕ ಭವನದ ನಿವಾಸ ಆಯುಕ್ತರ ಕಛೇರಿ, ನವದೆಹಲಿ ಇವರ ನಿಯಂತ್ರಣದಲ್ಲಿ ನಡೆಸಲಾಗುವುದು.

20. ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 3 ಎಸ್ಎಸ್ಇ 83, ದಿನಾಂಕ 12ನೇ ಅಕ್ಟೋಬರ್ 1983 ಇದರ ಅನುಸಾರವಾಗಿ ಮುಸ್ಸೂರಿಯಲ್ಲಿ ತರಬೇತಿ ಪಡೆಯುತ್ತಿರುವ ಕರ್ನಾಟಕ ರಾಜ್ಯದ ಐ.ಎ.ಎಸ್, ಐ.ಪಿ.ಎಸ್, ಮತ್ತು ಐ.ಎಫ್.ಎಸ್ ಪ್ರೊಬೇಷನರುಗಳಿಗೆ ಇಲಾಖಾ ಪರೀಕ್ಷೆ ಗಳನ್ನು ಆಯೋಗವು ಪರೀಕ್ಷೆಗಳ ನಿಯಂತ್ರಣಾಧಿಕಾರಿ, ಲಾಲ್‌ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಪ್ರಶಾಸನ ಅಕಾಡೆಮಿ, ಮುಸ್ಸೂರಿ, ಇವರ ನಿಯಂತ್ರಣದಲ್ಲಿ ನಡೆಸಲಾಗುವುದು.

21. ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 19 ಎಸ್ಎಸ್ಇ 75, ದಿನಾಂಕ 5ನೇ ಜುಲೈ 1978ರ ಅನುಸಾರವಾಗಿ ಅಂಧರಾಗಿರುವ ಅಥವಾ ತನ್ನ ಸ್ವಂತ ಕೈಯಿಂದ ಬರೆಯಲು ಅಸಮರ್ಥರಾದ ಅಭ್ಯರ್ಥಿಗಳಿಗೆ ಈ ಮುಂದಿನ ಷರತ್ತುಗಳಿಗೊಳಪಟ್ಟು ಒಬ್ಬ ಅನುಲೇಖಕನ ಸಹಾಯವನ್ನು ಪಡೆಯುವುದಕ್ಕೆ ಅನುಮತಿಸಲಾಗಿದೆ:

1. ಅನುಲೇಖಕನ ಸಹಾಯವನ್ನು ಬಯಸುವ ಅಭ್ಯರ್ಥಿಯು ಅವನು ಅರ್ಜಿಯನ್ನು **ಸರ್ಕಾರಿ ಆಸ್ಪತ್ರೆಯ** ವೈದ್ಯರಿಂದ ನೀಡಲಾದ ಒಂದು ಪ್ರಮಾಣ ಪತ್ರದೊಂದಿಗೆ ಅವನ ಮೇಲಾಧಿಕಾರಿಯ ಮೂಲಕ ಕಳುಹಿಸತಕ್ಕದ್ದು.
2. ಮೇಲಧಿಕಾರಿಯು ಅರ್ಜಿಯನ್ನು ಆಯೋಗಕ್ಕೆ ಕಳುಹಿಸುವ ಮೊದಲು ಅಭ್ಯರ್ಥಿಯು ನಿಜವಾಗಿ ಅಸಮರ್ಥನಾಗಿರುವನೆ ಮತ್ತು ಅವನಿಗೆ ಅನುಲೇಖಕನ ಸಹಾಯ ಅವಶ್ಯವಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.
3. ಒಬ್ಬ ಅನುಲೇಖಕನ ಸಹಾಯಕ್ಕೆ ಮಂಜೂರಾತಿ ನೀಡಿದಾಗ ಸಂಬಂಧಪಟ್ಟ ಕೇಂದ್ರದ ಮೇಲ್ವಿಚಾರಕರು ಅಭ್ಯರ್ಥಿಗೆ ಒಬ್ಬ ಅನುಲೇಖಕನನ್ನು ನೇಮಕ ಮಾಡತಕ್ಕದ್ದು ಮತ್ತು ಅದನ್ನು ಕಾರ್ಯದರ್ಶಿ ಮತ್ತು ಇಲಾಖಾ ಪರೀಕ್ಷೆಯ ನಿಯಂತ್ರಣಾಧಿಕಾರಿಗೆ ತಿಳಿಸತಕ್ಕದ್ದು.
4. ಹಾಗೆ ನೇಮಕ ಮಾಡಲಾದ ಅನುಲೇಖಕನು ಅಭ್ಯರ್ಥಿಗಿಂತ ಕೆಳಗಿನ ದರ್ಜೆಯವನು ಅಥವಾ ಕಡಿಮೆ ಶಿಕ್ಷಣ ಪಡೆದವನು ಆಗಿರತಕ್ಕದ್ದು ಮತ್ತು ಅವನು ಅಭ್ಯರ್ಥಿಯ ಸಂಬಂಧಿಕನಾಗಿರಬಾರದು.
5. ಅಭ್ಯರ್ಥಿಗಳು ಪರೀಕ್ಷೆಯ ಪ್ರತಿಯೊಂದು ಪತ್ರಿಕೆಗೆ **ರೂ. 5/–**(ಐದು ರೂಪಾಯಿಗಳು) ಮೊತ್ತವನ್ನು ಮುಂಗಡವಾಗಿ ಸಂದಾಯ ಮಾಡತಕ್ಕದ್ದು ಮತ್ತು ಸದರಿ ಮೊತ್ತವನ್ನು ಪರೀಕ್ಷೆಯ ಪತ್ರಿಕೆ ಮುಗಿದ ಕೂಡಲೇ ಅನುಲೇಖಕನಿಗೆ ಸಂದಾಯ ಮಾಡತಕ್ಕದ್ದು.
6. ಒಬ್ಬ ಅನುಲೇಖಕನನ್ನು ನೇಮಕ ಮಾಡಲಾಗಿದ್ದರೆ ಅಭ್ಯರ್ಥಿಗೆ ಹದಿನೈದು ನಿಮಿಷಗಳ ಹೆಚ್ಚಿನ ಕಾಲಾವಕಾಶವನ್ನು ನೀಡಲಾಗುವುದು.
7. ಅನುಲೇಖಕನ ಸಹಾಯ ಬಯಸುವ ಅಭ್ಯರ್ಥಿಗಳು ಅವಶ್ಯಕ ವೈದ್ಯಕೀಯ ಪ್ರಮಾಣ ಪತ್ರ ಮತ್ತು ಮೇಲಧಿಕಾರಿಗಳ ದೃಢೀಕರಣವನ್ನು ತಮ್ಮ ಅರ್ಜಿಯ ಜೊತೆಯಲ್ಲಿಯೇ ಲಗತ್ತಿಸಿ ಕಳುಹಿಸತಕ್ಕದ್ದು. ಅರ್ಜಿಯೊಂದಿಗೆ ಸಲ್ಲಿಸದಂತಹ ಕೋರಿಕೆಯನ್ನು ಅನಿವಾರ್ಯ ಹಾಗೂ ಸಕಾರಣವಿಲ್ಲದ ಹೊರತು ಇತರ ಯಾವುದೇ ಸಂದರ್ಭಗಳಲ್ಲೂ ನಿಗದಿಪಡಿಸಲಾದ ಕಡೆಯ ದಿನಾಂಕದ ನಂತರ ಪರಿಗಣಿಸಲಾಗುವುದಿಲ್ಲ.
8. ಅಭ್ಯರ್ಥಿಗಳು ಅನುಲೇಖಕನ ಸಹಾಯ ಕೋರಿ ಸಲ್ಲಿಸುವ ವೈದ್ಯಕೀಯ ಪ್ರಮಾಣ ಪತ್ರವನ್ನು ಅನುಮಾನಸ್ಪದ ಸಂದರ್ಭದಲ್ಲಿ ಮಾತ್ರ ವೈದ್ಯಕೀಯ ಮಂಡಳಿಗೆ ಪರಿಶೀಲನೆಗಾಗಿ ಕಳುಹಿಸಲಾಗುವುದು. ಹಾಗೂ ಕೆಲವೊಂದು ಸಂದರ್ಭಗಳಲ್ಲಿ ಅವಶ್ಯಕವೆನಿಸಿದರೆ ಅಂತಹವರನ್ನು ವೈದ್ಯಕೀಯ ಪರಿಶೀಲನೆಗೂ ಗುರಿಪಡಿಸಲಾಗುವುದು. ಸುಳ್ಳು ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದು ಸಾಬೀತಾದ ಸಂದರ್ಭಗಳಲ್ಲಿ ಅಂತಹ ಅಭ್ಯರ್ಥಿಗಳ ಮೇಲೆ ನಿಯಮಾನುಸಾರ ಶಿಸ್ತಿನ ಕ್ರಮ ಜರುಗಿಸಲಾಗುವುದಲ್ಲದೆ ಅಂತಹವರ ಇಲಾಖಾ ಪರೀಕ್ಷೆಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

22. ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 24 ಎಸ್ಎಸ್ಆರ್ 2006, ದಿನಾಂಕ:15–11–2006 ರಲ್ಲಿ "ಸೆಕ್ರೆಟೇರಿಯಟ್ ಮ್ಯಾನ್ಯುಯಲ್ ಭಾಗ–I ಮತ್ತು ಭಾಗ– II" ರ ವಿಷಯದ ಪಠ್ಯ ಕ್ರಮಕ್ಕೆ ಮಾಡಲಾದ ತಿದ್ದುಪಡಿ ಈ ಕೆಳಕಂಡಂತಿದೆ:–

PAPER – 1

MARKS: 100
TIME: 2 HOURS

(1) In the heading `` Secretariat Manual Examination Part-I``, at serial number 32,
(a) for the entries under the sub-heading ``Paper-1``, the following shall be substituted namely:-
"Karnataka Government Secretariat Manual of Office Procedure (Revised) 2005 and connected orders."

PAPER –II

MARKS: 100
TIME: 2 HOURS

(b) in the entries under the sub-heading "Paper-II", for item 4 and 5 and entries relating thereto, the following shall be substituted, namely:-
"(4) Karnataka Civil Services (General Recruitment) Rules, 1977;)
(5) Karnataka Public Service Commission (Consultation) Regulations, 2000"

SECRETARIAT MANUAL PART-II

MARKS: 100
TIME: 2 HOURS

(2) under the heading "Secretariat Manual Examination Part-II", for item (ii) and the entries relating thereto, the following items shall be substituted, namely:-

"(ii) The Karnataka Government (Transaction of Business) Rules, 1977

(iii) The Karnataka Government (Allocation of Business) Rules, 1977"

23. ಸರ್ಕಾರಿ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 35 ಎಸ್‌ಎಸ್‌ಆರ್ 2004 ದಿನಾಂಕ:28–08–2006 ರ ಆದೇಶದಲ್ಲಿ "ಎಲೆಕ್ಟ್ರಿಸಿಟಿ (ಆಡಿಟ್ ಆಂಡ್ ಅಕೌಂಟ್ಸ್) ಲಾಸ್ (ಹೈಯರ್) ಎಕ್ಸಾಮಿನೇಷನ್ ಭಾಗ– I" ರಲ್ಲಿ ಕೆಳಕಂಡ ಪಠ್ಯ ಕ್ರಮವನ್ನು ಬದಲಾಯಿಸಿದೆ.

ELECTRICITY (AUDIT AND ACCOUNTS) LAWS (HIGHER) EXAMINATION
PART-I

MARKS: 100
TIME: 2 HOURS

(1) In the sub-heading "Electricity Laws Examination Paper-1",at Sl.No.50,-

(a) for item (1) and the entries relating thereto, the following shall be substituted, namely:-

(b) for item (3)and the entries relating thereto, the following shall be substituted, namely:-

"(3) The Karnataka Electricity Reforms Act, 1999 and the rules framed thereunder",

(2) In the entries under the sub-heading "Electricity (Audit and Accounts) Laws (Higher) Examination, Part I" at Sl.No. 51,for item (1) and the entries relating thereto, the following shall be substituted, namely:-

"(1) The Electricity Act, 2003 (Central Act 36 of 2003) and the rules made thereunder".

ಪ್ರಶ್ನೆ ಪತ್ರಿಕೆಯು 2 ಗಂಟೆಗಳ ಅವಧಿಯಾಗಿದ್ದು 100 ಅಂಕಗಳನ್ನು ಒಳಗೊಂಡಿರುತ್ತದೆ.

24. ಐಎಎಸ್, ಐಪಿಎಸ್ ಮತ್ತು ಐಎಫ್‌ಎಸ್ ಪ್ರೊಬೇಷನರ್ಸ್‌ಗಳಿಗೆ/ಅಧಿಕಾರಿಗಳಿಗೆ ಕನ್ನಡಭಾಷಾ ವಿಷಯದ ಇಲಾಖಾ ಪರೀಕ್ಷೆ ಅಭ್ಯರ್ಥಿಗಳಿಗೆ ಸರ್ಕಾರವು ತನ್ನ ಆದೇಶ ಸಂಖ್ಯೆ:ಡಿಪಿಎಆರ್ 168 ಎಸ್‌ಎಂಇ 94, ದಿನಾಂಕ: 12–07–1995ರಲ್ಲಿ ನಿಗದಿಪಡಿಸಲಾಗಿದ್ದ ಕನ್ನಡ ಪತ್ರಿಕೆ–1ರಲ್ಲಿ 10ನೇ ತರಗತಿಯ ಪಠ್ಯಪುಸ್ತಕ **"ಸಾಹಿತ್ಯ ಮಂಜರಿ–3"** ಪುಸ್ತಕದ ಬದಲಾಗಿ 10ನೇ ತರಗತಿಯ ಕನ್ನಡ ದ್ವಿತೀಯ ಹಾಗೂ ತೃತೀಯ ಭಾಷಾಪುಸ್ತಕ **"ತಿಳಿಗನ್ನಡ–6"** ಎಂಬ ಪುಸ್ತಕವನ್ನು ನಿಗದಿಪಡಿಸಲಾಗಿದೆ.

25. ಮೇಲಿನ ಅಧಿಸೂಚನೆಗೆ ಅನುಗುಣವಾಗಿಲ್ಲದ, ಹಾಗೂ ಆನ್‌ಲೈನ್ ಅರ್ಜಿಯಲ್ಲಿ ನಿಗದಿತ ಸ್ಥಳದಲ್ಲಿ ಅಭ್ಯರ್ಥಿಯ ಸಹಿ ಇಲ್ಲದಂತಹ, ಸಂಬಂಧಿತ ಮೇಲಾಧಿಕಾರಿಗಳಿಂದ ಅಭ್ಯರ್ಥಿಯ ಭಾವಚಿತ್ರಗಳನ್ನು ದೃಢೀಕರಿಸದಂತಹ ಹಾಗೂ ಮೇಲಧಿಕಾರಿಯ ಸಹಿ ಹಾಗೂ ಮೊಹರುಗಳನ್ನೊಳಗೊಂಡಿಲ್ಲದಂತಹ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು.

26. ನಕಲು ಪ್ರಮಾಣಪತ್ರ ಪಡೆಯಬಯಸುವ ಅಭ್ಯರ್ಥಿಗಳು ತಮ್ಮ ಅರ್ಜಿಯೊಂದಿಗೆ ಪ್ರಮಾಣಪತ್ರವು ಲಭ್ಯವಿಲ್ಲದ ಬಗ್ಗೆ ರೂ. 20/–ಗಳ ಛಾಪಾ ಕಾಗದದ ಮೇಲೆ ನೋಟರಿಯವರ ಮುಂದೆ ಪ್ರಮಾಣಮಾಡಿರುವ "ಅಫಿಡೆವಿಟ್" ಹಾಗೂ ಪ್ರವೇಶಪತ್ರ ನೆರಳಚ್ಚು (ಜೆರಾಕ್ಸ್) ಪ್ರತಿಯನ್ನು ಅಥವಾ ನೋಂದಣಿ ಸಂಖ್ಯೆ. ಅಧಿವೇಶನ. ಪರೀಕ್ಷಾಕೇಂದ್ರ, ಇತ್ಯಾದಿ ವಿವರಗಳನ್ನೊಳಗೊಂಡ ಸೇವಾ ಪುಸ್ತಕದ ಭಾಗ–1ರ ಉದ್ಧೃತಭಾಗವನ್ನು ದೃಢಿಕರಿಸಿ ಲಗತ್ತಿಸಬೇಕು ಹಾಗೂ ಯಾವುದೆ ಅವಧಿಯ ಇಲಾಖೆ ಪರೀಕ್ಷೆಯ ಪ್ರತಿಯೊಂದು ವಿಷಯದ ಪ್ರತ್ಯೇಕ ಪ್ರಮಾಣಪತ್ರಕ್ಕೆ ರೂ. 50/–ಗಳ ಶುಲ್ಕವನ್ನು ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಇವರಿಗೆ ಸಂದಾಯವಾಗುವಂತೆ ಪಡೆದ **ಬ್ಯಾಂಕ್ ಡಿ.ಡಿ**/ಐ.ಪಿ.ಓ.ಅನ್ನು ಸಲ್ಲಿಸತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

ಶಾಖೆಗಳು	ದೂರವಾಣಿ ಸಂಖ್ಯೆಗಳು
ಮಾಹಿತಿ ಕೇಂದ್ರ	080–30574957
ಇಲಾಖಾ ಪರೀಕ್ಷಾ ಶಾಖೆ–1	080–30574944
ಇಲಾಖಾ ಪರೀಕ್ಷಾ ಶಾಖೆ–2	080–30574945
ಪ್ರಾಂತೀಯ ಕಛೇರಿ ಮೈಸೂರು	0821–2445956
ಪ್ರಾಂತೀಯ ಕಛೇರಿ ಬೆಳಗಾವಿ	0831–2475345
ಪ್ರಾಂತೀಯ ಕಛೇರಿ ಗುಲ್ಬರ್ಗಾ	08472–227944
ಪ್ರಾಂತೀಯ ಕಛೇರಿ ಶಿವಮೊಗ್ಗ	08182–228099
ಸಹಾಯವಾಣಿ	9740977411

ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು:–

1. ಸೇವಾ ಪರೀಕ್ಷೆಗಳಿಗೆ ಸಂಬಂಧಪಟ್ಟ ಎಲ್ಲಾ ಪತ್ರ ವ್ಯವಹಾರವನ್ನು ಕಾರ್ಯದರ್ಶಿ ಹಾಗೂ ನಿಯಂತ್ರಕರು, ಇಲಾಖಾ ಪರೀಕ್ಷೆಗಳು ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001 ಈ ವಿಳಾಸಕ್ಕೆ ಮಾಡತಕ್ಕದ್ದು.
2. ಪರೀಕ್ಷೆಗಳ ಸಂಬಂಧದಲ್ಲಿ ಯಾವುದೇ ಮಾಹಿತಿ ಕೋರುವ ಅಭ್ಯರ್ಥಿಗಳು ಮನವಿಯಲ್ಲಿ ಎಲ್ಲಾ ಮಾಹಿತಿ ನೀಡಿ ಅದರೊಂದಿಗೆ ಸಾಕಷ್ಟು ಅಂಚೆ ಚೀಟಿಗಳನ್ನು ಹಚ್ಚಿದ ಸ್ವವಿಳಾಸ ಬರೆದ ಒಂದು ಲಕೋಟೆಯನ್ನು ಲಗತ್ತಿಸಿದರೆ ಆಯೋಗದ ಉತ್ತರವು ಅಡಚಣೆ ಆಗದೇ ಬೇಗ ತಲುಪುವುದು.
3. ಮಾಹಿತಿಗಾಗಿ ಅಭ್ಯರ್ಥಿಗಳು ಆಯೋಗಕ್ಕೆ ಸಲ್ಲಿಸುವ ಮನವಿಗಳಲ್ಲಿ ನೋಂದಣಿ ಸಂಖ್ಯೆ, ಅಧಿವೇಶನ, ವಿಷಯ ಮತ್ತು ಪರೀಕ್ಷಾಕೇಂದ್ರ ಮುಂತಾದ ಸ್ಪಷ್ಟ ವಿವರಗಳನ್ನು ಸೂಚಿಸದಿದ್ದಲ್ಲಿ ಅಂತಹವುಗಳನ್ನು ಪುರಸ್ಕರಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಪೊಲೀಸ್ ಸಮವಸ್ತ್ರವನ್ನು ಧರಿಸಿ ಪರೀಕ್ಷೆ ಬರೆಯುವುದನ್ನು ನಿಷೇಧಿಸಲಾಗಿದೆ.
5. ಅಭ್ಯರ್ಥಿಗಳು ತಮ್ಮ ಸಹ ನೌಕರರನ್ನು/ಇತರರನ್ನು ಕರೆತರುವುದನ್ನು ಮತ್ತು ಪರೀಕ್ಷೆ ನಡೆಯುತ್ತಿರುವಾಗ ಅವರನ್ನು ಭೇಟಿ ಮಾಡಲು ಕೋರುವುದನ್ನು ನಿಷೇಧಿಸಲಾಗಿದೆ.
6. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಮೊಬೈಲ್ ಪೋನ್ ತರುವುದನ್ನು ನಿಷೇಧಿಸಲಾಗಿದೆ.

ವಿ.ಬಿ. ಪಾಟೀಲ್
ಕಾರ್ಯದರ್ಶಿ ಹಾಗೂ ನಿಯಂತ್ರಕರು,
ಇಲಾಖಾ ಪರೀಕ್ಷೆಗಳು, ಕರ್ನಾಟಕ ಲೋಕಸೇವಾ ಆಯೋಗ.

ಕರ್ನಾಟಕ ಲೋಕಸೇವಾ ಆಯೋಗ,"ಉದ್ಯೋಗ ಸೌಧ", ಬೆಂಗಳೂರು–560001.

ಅಧಿಸೂಚನೆ ಸಂಖ್ಯೆ ಇ.ಪ.(1)3692/2009–2010/ಪಿಎಸ್‌ಸಿ ದಿನಾಂಕ:23–03–2010ಕ್ಕೆ

ಅನುಬಂಧ "ಎ"

2010ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳು

ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಯಲಿರುವ ಪರೀಕ್ಷೆಗಳ ವೇಳಾಪಟ್ಟಿ

ಕ್ರ. ಸಂ.	ವಾರ	ದಿನಾಂಕ	ವೇಳೆ	ವಿಷಯ
1.	ಶುಕ್ರವಾರ	11–06–2010	ಬೆಳಿಗ್ಗೆ 10.00 ರಿಂದ 12–00 ಗಂಟೆ ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಅಕೌಂಟ್ಸ್ ಲೋಯರ್ ಜನರಲ್ ಲಾ ಭಾಗ–II
2	ಶನಿವಾರ	12–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಜನರಲ್ ಲಾ ಭಾಗ– I ಪತ್ರಿಕೆ– 1 ಜನರಲ್ ಲಾ ಭಾಗ– I ಪತ್ರಿಕೆ– 2
3.	ಭಾನುವಾರ	13–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಅಕೌಂಟ್ಸ್ ಹೈಯರ್ ಪತ್ರಿಕೆ–1 ಅಕೌಂಟ್ಸ್ ಹೈಯರ್ ಪತ್ರಿಕೆ–2
4.	ಸೋಮವಾರ	14–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ ಮಧ್ಯಾಹ್ನ 2.00 ರಿಂದ ಸಂಜೆ 3.00 ಗಂಟೆ	ಕನ್ನಡ ಪತ್ರಿಕೆ–1 (ಪುಸ್ತಕಗಳಿಲ್ಲದೆ) ಕನ್ನಡ ಪತ್ರಿಕೆ–2 (ಪುಸ್ತಕಗಳಿಲ್ಲದೆ)
5.	ಮಂಗಳವಾರ	15–06–2010	ಬೆಳಿಗ್ಗೆ 10.00 ರಿಂದ 1.00 ಗಂಟೆ ಮೇಲಿನಂತೆ ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆ ಮೇಲಿನಂತೆ	ಇನ್ಸೂರೆನ್ಸ್ ಹೈಯರ್ ಪತ್ರಿಕೆ–2 (ಪುಸ್ತಕಗಳಿಲ್ಲದೆ) ಪಿ.ಡಬ್ಲ್ಯೂಡಿ ಹೈಯರ್ ಭಾಗ– I ಪತ್ರಿಕೆ–1, (ಪುಸ್ತಕಗಳಿಲ್ಲದೆ) ಇನ್ಸೂರೆನ್ಸ್ ಲೋಯರ್ ಪತ್ರಿಕೆ–2 {ಪುಸ್ತಕಗಳಿಲ್ಲದೆ} ಪ್ರೆಸ್ ಮ್ಯಾನ್ಯುಯಲ್ ಹೈಯರ್ ಪತ್ರಿಕೆ–2,
6	ಬುಧವಾರ	16–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ ಮೇಲಿನಂತೆ ಮೇಲಿನಂತೆ ಮೇಲಿನಂತೆ ಮೇಲಿನಂತೆ ಮೇಲಿನಂತೆ ಮಧ್ಯಾಹ್ನ 2.00 ರಿಂದ ಸಂಜೆ 4.00ಗಂಟೆ ಮೇಲಿನಂತೆ ಮೇಲಿನಂತೆ	ಲೇಬರ್ ಪತ್ರಿಕೆ–1 ಪ್ರಿಸನ್ಸ್ ಎಕ್ಸೈಸ್ ಮೋಟಾರ್ ವೆಹಿಕಲ್ಸ್ ರೆವಿನ್ಯೂ ಹೈಯರ್ ಭಾಗ– I ಪತ್ರಿಕೆ–1 ಇನ್ಸೂರೆನ್ಸ್ ಅಡ್ವಾನ್ಸಡ್ ಪತ್ರಿಕೆ–1 ಲೇಬರ್ ಪತ್ರಿಕೆ–2 ಇನ್ಸೂರೆನ್ಸ್ ಅಡ್ವಾನ್ಸಡ್ ಪತ್ರಿಕೆ–2 ರೆವಿನ್ಯೂ ಹೈಯರ್ ಭಾಗ– I ಪತ್ರಿಕೆ–2

ಕ್ರ ಸಂ.	ವಾರ	ದಿನಾಂಕ	ವೇಳೆ	ವಿಷಯ
7.	ಗುರುವಾರ	17–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ರೆವಿನ್ಯೂ ಹೈಯರ್ ಭಾಗ– II ಪತ್ರಿಕೆ–1
			ಮೇಲಿನಂತೆ	ರಿಜಿಸ್ಟ್ರೇಷನ್ ಪತ್ರಿಕೆ–1
			ಮೇಲಿನಂತೆ	ಕಮರ್ಷಿಯಲ್‌ಟ್ಯಾಕ್ಸ್ ಭಾಗ– I ಪತ್ರಿಕೆ–1
			ಮೇಲಿನಂತೆ	ಇನ್ಸೂರೆನ್ಸ್ ಅಡ್ವಾನ್ಸಡ್ ಪತ್ರಿಕೆ–3
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ರೆವಿನ್ಯೂ ಹೈಯರ್ ಭಾಗ– II ಪತ್ರಿಕೆ–2
			ಮೇಲಿನಂತೆ	ರಿಜಿಸ್ಟ್ರೇಷನ್ ಪತ್ರಿಕೆ–2
			ಮೇಲಿನಂತೆ	ಕಮರ್ಷಿಯಲ್‌ಟ್ಯಾಕ್ಸ್ ಭಾಗ– I, ಪತ್ರಿಕೆ–2
			ಮೇಲಿನಂತೆ	ಇನ್ಸೂರೆನ್ಸ್ ಹೈಯರ್ ಪತ್ರಿಕೆ–1
8.	ಶುಕ್ರವಾರ	18–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಪೊಲೀಸ್ ಮ್ಯಾನ್ಯುಯಲ್
			ಮೇಲಿನಂತೆ	ಕೋ–ಆಪರೇಷನ್ ಪತ್ರಿಕೆ–1
			ಮೇಲಿನಂತೆ	ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಹೈಯರ್
			ಮೇಲಿನಂತೆ	ಮಾರ್ಕೆಟಿಂಗ್ ಪತ್ರಿಕೆ–1
			ಮೇಲಿನಂತೆ	ಮೈನಿಂಗ್ ಭಾಗ– I
			ಮೇಲಿನಂತೆ	ರೆವಿನ್ಯೂ ಲೋಯರ್ ಪತ್ರಿಕೆ–1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಕಮರ್ಷಿಯಲ್ ಟ್ಯಾಕ್ಸ್ ಭಾಗ– I ಪತ್ರಿಕೆ–3 ಮತ್ತು ಕೋ–ಆಪರೇಷನ್ ಪತ್ರಿಕೆ–2 (ಎರಡಕ್ಕೂ ಒಂದೇ ಪ್ರಶ್ನೆ ಪತ್ರಿಕೆ)
			ಮೇಲಿನಂತೆ	ಇನ್ಸೂರೆನ್ಸ್ ಹೈಯರ್ ಪತ್ರಿಕೆ–3
			ಮೇಲಿನಂತೆ	ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಲೋಯರ್
			ಮೇಲಿನಂತೆ	ಮಾರ್ಕೆಟಿಂಗ್ ಪತ್ರಿಕೆ–2
			ಮೇಲಿನಂತೆ	ಮೈನಿಂಗ್ ಭಾಗ– II
			ಮೇಲಿನಂತೆ	ರೆವಿನ್ಯೂ ಲೋಯರ್ ಪತ್ರಿಕೆ–2
9.	ಶನಿವಾರ	19–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಸಿರಿಕಲ್ಚರ್ ಪತ್ರಿಕೆ–1
			ಮೇಲಿನಂತೆ	ಕಮ್ಯೂನಿಟಿ ಡೆವಲಪ್‌ಮೆಂಟ್ ಭಾಗ– I
			ಮೇಲಿನಂತೆ	ರೆವಿನ್ಯೂ ಲೋಯರ್ ಪತ್ರಿಕೆ–3
			ಮೇಲಿನಂತೆ	ಕಮರ್ಷಿಯಲ್ ಟ್ಯಾಕ್ಸ್ ಭಾಗ– II ಪತ್ರಿಕೆ–1
			ಮೇಲಿನಂತೆ	ಪ್ರೆಸ್ ಮ್ಯಾನ್ಯುಯಲ್ ಹೈಯರ್ ಪತ್ರಿಕೆ–1
			ಮೇಲಿನಂತೆ	ಲೋಕಲ್ ಲಾಸ್ ಅಂಡ್ ಕಮರ್ಷಿಯಲ್ ಬುಕ್ ಕೀಪಿಂಗ್ ಪತ್ರಿಕೆ–1
			ಮೇಲಿನಂತೆ	ಪೋರ್ಟ್ಸ್ ಹೈಯರ್
			ಮೇಲಿನಂತೆ	ಇನ್ಸೂರೆನ್ಸ್ ಲೋಯರ್ ಪತ್ರಿಕೆ–1
			ಮೇಲಿನಂತೆ	ಯೂಥ್ ಸರ್ವೀಸಸ್ ಮ್ಯಾನ್ಯುಯಲ್
			ಮಧ್ಯಾಹ್ನ 2.00ರ ರಿಂದ ಸಂಜೆ 4.00 ಗಂಟೆ	ಸಿರಿಕಲ್ಚರ್ ಪತ್ರಿಕೆ–2
			ಮೇಲಿನಂತೆ	ಪಿ.ಡಬ್ಲ್ಯೂಡಿ ಹೈಯರ್ ಭಾಗ– I, ಪತ್ರಿಕೆ–2
			ಮೇಲಿನಂತೆ	ಲೋಕಲ್ ಲಾಸ್ ಅಂಡ್ ಕಮರ್ಷಿಯಲ್ ಬುಕ್ ಕೀಪಿಂಗ್ ಪತ್ರಿಕೆ–2
			ಮೇಲಿನಂತೆ	ಕಮ್ಯುನಿಟಿ ಡೆವಲಪ್‌ಮೆಂಟ್ ಭಾಗ– II
			ಮೇಲಿನಂತೆ	ಕಮರ್ಷಿಯಲ್ ಟ್ಯಾಕ್ಸ್ ಭಾಗ– II ಪತ್ರಿಕೆ–2
			ಮೇಲಿನಂತೆ	ಪೋರ್ಟ್ಸ್ ಲೋಯರ್
10	ಭಾನುವಾರ	20–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಫ್ಯಾಕ್ಟರೀಸ್ ಅಂಡ್ ಬಾಯ್ಲರ್ಸ್‌ಲಾಸ್ ಪತ್ರಿಕೆ–1
			ಮೇಲಿನಂತೆ	ಇನ್ಸೂರೆನ್ಸ್ ಲೋಯರ್ ಪತ್ರಿಕೆ–3
			ಮೇಲಿನಂತೆ	ಪಿ.ಡಬ್ಲ್ಯೂಡಿ ಹೈಯರ್ ಭಾಗ– II ಪತ್ರಿಕೆ–1
			ಮೇಲಿನಂತೆ	ಪ್ರೆಸ್ ಮ್ಯಾನ್ಯುಯಲ್ ಲೋಯರ್ ಪತ್ರಿಕೆ–1
			ಮೇಲಿನಂತೆ	ಆಕ್ಟ್ಸ್ ಅಂಡ್ ರೂಲ್ಸ್ ರಿಲೇಟಿಂಗ್ ಟು ವಿಮೆನ್ ಅಂಡ್ ಚೈಲ್ಡ್ ಡೆವೆಲಪ್‌ಮೆಂಟ್
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಫ್ಯಾಕ್ಟರೀಸ್ ಅಂಡ್ ಬಾಯ್ಲರ್ಸ್‌ಲಾಸ್ ಪತ್ರಿಕೆ–2
			ಮೇಲಿನಂತೆ	ಪಿ.ಡಬ್ಲ್ಯೂಡಿ ಹೈಯರ್ ಭಾಗ– II, ಪತ್ರಿಕೆ–2
			ಮೇಲಿನಂತೆ	ಪ್ರೆಸ್‌ಮ್ಯಾನ್ಯುಯಲ್ ಲೋಯರ್ ಪತ್ರಿಕೆ–2
			ಮೇಲಿನಂತೆ	ಕೋ–ಆಪರೇಟಿವ್ ಆಡಿಟ್ ಎಕ್ಸಾಮಿನೇಶನ್ ಪತ್ರಿಕೆ–1

ಕ್ರ. ಸಂ.	ವಾರ	ದಿನಾಂಕ	ವೇಳೆ	ವಿಷಯ
11	ಸೋಮವಾರ	21-06-2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಪಿ.ಡಬ್ಲ್ಯೂ.ಡಿ. ಲೋಯರ್ ಪತ್ರಿಕೆ-1
			ಮೇಲಿನಂತೆ	ಸೋಶಿಯಲ್ ವೆಲ್‌ಫೇರ್ ಅಂಡ್ ಬ್ಯಾಕ್ ವರ್ಡ್‌ಕ್ಲಾಸಸ್ ಮ್ಯಾನ್ಯುಯಲ್ ಅಂಡ್ ಕ್ಲಾಸಿಫಿಕೇಶನ್ ರಿಜರ್‌ವೇಶನ್ ಫಾರ್ ಬ್ಯಾಕ್‌ವರ್ಡ್ ಕ್ಲಾಸಸ್ ಭಾಗ- I
			ಮೇಲಿನಂತೆ	ಫಾರೆಸ್ಟ್ ಪತ್ರಿಕೆ-1
			ಮೇಲಿನಂತೆ	ಕೋ-ಆಪರೇಟಿವ್ ಆಡಿಟ್ ಎಕ್ಸಾಮಿನೇಶನ್ ಪತ್ರಿಕೆ-2
			ಮೇಲಿನಂತೆ	ಫುಡ್ ಅಂಡ್ ಸಿವಿಲ್ ಸಪ್ಲೈಸ್ ಪತ್ರಿಕೆ-1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಹೋಂ ಗಾರ್ಡ್ಸ್ ಮ್ಯಾನ್ಯುಯಲ್
			ಮೇಲಿನಂತೆ	ಸೋಶಿಯಲ್ ವೆಲ್‌ಫೇರ್ ಅಂಡ್ ಬ್ಯಾಕ್ ವರ್ಡ್‌ಕ್ಲಾಸಸ್ ಮ್ಯಾನ್ಯುಯಲ್ ಅಂಡ್ ಕ್ಲಾಸಿಫಿಕೇಶನ್ ರಿಜರ್‌ವೇಶನ್ ಫಾರ್ ಬ್ಯಾಕ್‌ವರ್ಡ್ ಕ್ಲಾಸಸ್ ಭಾಗ- II
			ಮೇಲಿನಂತೆ	ಪಿ.ಡಬ್ಲ್ಯೂ.ಡಿ. ಲೋಯರ್ ಪತ್ರಿಕೆ-2
			ಮೇಲಿನಂತೆ	ಫಾರೆಸ್ಟ್ ಪತ್ರಿಕೆ-2
			ಮೇಲಿನಂತೆ	ಕೋ-ಆಪರೇಟಿವ್ ಆಡಿಟ್ ಎಕ್ಸಾಮಿನೇಶನ್ ಪತ್ರಿಕೆ-3
			ಮೇಲಿನಂತೆ	ಫುಡ್ ಅಂಡ್ ಸಿವಿಲ್ ಸಪ್ಲೈಸ್ ಪತ್ರಿಕೆ-2
12	ಮಂಗಳವಾರ	22-06-2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್ ಪತ್ರಿಕೆ-1
			ಮೇಲಿನಂತೆ	ಕರ್ನಾಟಕ ಕನ್ಸ್ಯೂಮರ್ ಪ್ರೋಟಕ್ಷನ್ಸ್ ಸ್ಟೇಟ್ ಕಮಿಷನ್ ಅಂಡ್ ಡಿಸ್ಟ್ರಿಕ್ ಫೋರಮ್ ಸರ್ವಿಸ್ ಎಕ್ಸಾಮಿನೇಶನ್- ಪತ್ರಿಕೆ-1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್ ಪತ್ರಿಕೆ-2
			ಮೇಲಿನಂತೆ	ಕರ್ನಾಟಕ ಕನ್ಸ್ಯೂಮರ್ ಪ್ರೋಟಕ್ಷನ್ಸ್ ಸ್ಟೇಟ್ ಕಮಿಷನ್ ಅಂಡ್ ಡಿಸ್ಟ್ರಿಕ್ ಫೋರಮ್ ಸರ್ವಿಸ್ ಎಕ್ಸಾಮಿನೇಶನ್- ಪತ್ರಿಕೆ-2

ವಿ.ಬಿ. ಪಾಟೀಲ್
ಕಾರ್ಯದರ್ಶಿ ಹಾಗೂ ನಿಯಂತ್ರಕರು,
ಇಲಾಖಾ ಪರೀಕ್ಷೆಗಳು, ಕರ್ನಾಟಕ ಲೋಕಸೇವಾ ಆಯೋಗ ಬೆಂಗಳೂರು.

ಕರ್ನಾಟಕ ಲೋಕಸೇವಾ ಆಯೋಗ,"ಉದ್ಯೋಗ ಸೌಧ", ಬೆಂಗಳೂರು-560001.

ಅಧಿಸೂಚನೆ ಸಂಖ್ಯೆ ಇ.ಪ.(1)3692/2009-2010/ಪಿಎಸ್‌ಸಿ ದಿನಾಂಕ: 23-03-2010ಕ್ಕೆ

ಅನುಬಂಧ-"ಬಿ"

2010ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳು

ಬೆಂಗಳೂರು, ಕೇಂದ್ರದಲ್ಲಿ ಮಾತ್ರ ನಡೆಯಲಿರುವ ಪರೀಕ್ಷೆಗಳ ವೇಳಾಪಟ್ಟಿ.

ಕ್ರ. ಸಂ.	ವಾರ	ದಿನಾಂಕ	ವೇಳೆ	ವಿಷಯ
1.	ಶುಕ್ರವಾರ	25-06-2010	ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 1.00 ಗಂಟೆ	ಎಸ್.ಎ.ಎಸ್.ಭಾಗ- I, ಪತ್ರಿಕೆ-1 ಮತ್ತು ಎಲೆಕ್ಟ್ರಿಸಿಟಿ ಆಡಿಟ್ ಅಂಡ್ ಅಕೌಂಟ್ಸ್‌ಲಾಸ್ (ಹೈಯರ್) ಭಾಗ- II (ಎರಡಕ್ಕೂ ಒಂದೇ ಪ್ರಶ್ನೆ ಪತ್ರಿಕೆ) (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಟ್ರೆಜರಿ ಅಕೌಂಟ್ಸ್ ಭಾಗ- I ಪತ್ರಿಕೆ-1 (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಕನ್ನಡ ಪತ್ರಿಕೆ-1 (ಐಎಎಸ್, ಐಪಿಎಸ್ ಮತ್ತು ಐಎಫ್‌ಎಸ್ ಅಧಿಕಾರಿಗಳಿಗೆ ಮಾತ್ರ) (ಪುಸ್ತಕಗಳಿಲ್ಲದೆ)
			ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 12.00 ಗಂಟೆ	ಸ್ಪೆಷಲ್ ಲಾಸ್ ಅಂಡ್ ಸರ್ವೀಸ್ ರೂಲ್ಸ್
			ಮೇಲಿನಂತೆ	ಕರ್ನಾಟಕ ಅಡ್ಮಿನಿಸ್ಟ್ರೇಟಿವ್ ಟ್ರಿಬ್ಯುನಲ್ ಎಕ್ಸಾಮಿನೇಶನ್

ಕ್ರ. ಸಂ.	ವಾರ	ದಿನಾಂಕ	ವೇಳೆ	ವಿಷಯ
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಎಸ್.ಎ.ಎಸ್.ಭಾಗ– I ಪತ್ರಿಕೆ–2 (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಟ್ರೆಜರಿ ಅಕೌಂಟ್ಸ್ ಭಾಗ– I ಪತ್ರಿಕೆ–2 (ಪುಸ್ತಕಗಳಿಲ್ಲದೆ)
			ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆ	ಸೆಕ್ರೇಟೇರಿಯಟ್ ಮ್ಯಾನುಯಲ್ ಭಾಗ– II
			ಮೇಲಿನಂತೆ	ಟ್ರಾನ್ಸ್‌ಲೇಶನ್ ಟೆಸ್ಟ್ (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಕನ್ನಡ ಪತ್ರಿಕೆ–2 (ಐಎಎಸ್, ಐಪಿಎಸ್ ಮತ್ತು ಐಎಫ್ಎಸ್ ಅಧಿಕಾರಿಗಳಿಗೆ ಮಾತ್ರ) (ಪುಸ್ತಕಗಳಿಲ್ಲದೆ)
2.	ಶನಿವಾರ	26–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಎಸ್.ಎ.ಎಸ್. ಭಾಗ– I ಪತ್ರಿಕೆ–3
			ಮೇಲಿನಂತೆ	ಟ್ರೆಜರಿ ಅಕೌಂಟ್ಸ್ ಭಾಗ– I ಪತ್ರಿಕೆ–3
			ಮಧ್ಯಾಹ್ನ 2–00 ರಿಂದ ಸಂಜೆ 4–00 ಗಂಟೆ	ಎಸ್.ಎ.ಎಸ್. ಭಾಗ– II ಪತ್ರಿಕೆ–1 (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಟ್ರೆಜರಿ ಅಕೌಂಟ್ಸ್ ಭಾಗ– II ಪತ್ರಿಕೆ–1 (ಎಲಿಮೆಂಟರಿ ಬುಕ್ ಕೀಪಿಂಗ್)
3	ಭಾನುವಾರ	27–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಎಸ್.ಎ.ಎಸ್. ಭಾಗ– II ಪತ್ರಿಕೆ–2
			ಮೇಲಿನಂತೆ	ಎಲೆಕ್ಟ್ರಿಸಿಟಿ ಲಾಸ್ ಪರೀಕ್ಷೆ ಪತ್ರಿಕೆ–1
			ಮೇಲಿನಂತೆ	ಟ್ರೆಜರಿ ಅಕೌಂಟ್ಸ್ ಭಾಗ– II ಪತ್ರಿಕೆ–2 (ಪುಸ್ತಕಗಳಿಲ್ಲದೆ)
			ಮಧ್ಯಾಹ್ನ 2–00 ರಿಂದ ಸಂಜೆ 4–00 ಗಂಟೆ	ಎಲೆಕ್ಟ್ರಿಸಿಟಿ ಲಾಸ್ ಪರೀಕ್ಷೆ ಪತ್ರಿಕೆ–2
			ಮೇಲಿನಂತೆ	ಎಸ್.ಎ.ಎಸ್ ಭಾಗ– II ಪತ್ರಿಕೆ–3
			ಮೇಲಿನಂತೆ	ಟ್ರೆಜರಿ ಅಕೌಂಟ್ಸ್ ಭಾಗ– II ಪತ್ರಿಕೆ–3
4.	ಸೋಮವಾರ	28–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಎಸ್.ಎ.ಎಸ್. ಭಾಗ– III ಪತ್ರಿಕೆ–1
			ಮಧ್ಯಾಹ್ನ 2–00 ರಿಂದ ಸಂಜೆ 4–00 ಗಂಟೆ	ಎಸ್.ಎ.ಎಸ್. ಭಾಗ– III ಪತ್ರಿಕೆ–2 (ಪುಸ್ತಕಗಳಿಲ್ಲದೆ)
5.	ಮಂಗಳವಾರ	29–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಎಸ್.ಎ.ಎಸ್. ಭಾಗ– III ಪತ್ರಿಕೆ–3
			ಮಧ್ಯಾಹ್ನ 2–00 ರಿಂದ ಸಂಜೆ 4–00 ಗಂಟೆ	ಎಸ್.ಎ.ಎಸ್. ಭಾಗ– III ಪತ್ರಿಕೆ–4 (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಎಲೆಕ್ಟ್ರಿಸಿಟಿ(ಆಡಿಟ್ ಅಂಡ್ ಅಕೌಂಟ್ಸ್) ಲಾಸ್ ಲೋಯರ್ ಪರೀಕ್ಷೆ
6.	ಬುಧವಾರ	30–06–2010	ಬೆಳಿಗ್ಗೆ 10.00 ರಿಂದ 12.00 ಗಂಟೆ	ಎಲೆಕ್ಟ್ರಿಸಿಟಿ (ಆಡಿಟ್ ಅಂಡ್ ಅಕೌಂಟ್ಸ್) ಲಾಸ್ ಹೈಯರ್ ಪರೀಕ್ಷೆ ಭಾಗ– I
			ಮೇಲಿನಂತೆ	ಎಸ್.ಎ.ಎಸ್ ಭಾಗ– III ಪತ್ರಿಕೆ–5
			ಮೇಲಿನಂತೆ	ಸೆಕ್ರೇಟೇರಿಯೆಟ್ ಮ್ಯಾನುಯಲ್ ಭಾಗ– I ಪತ್ರಿಕೆ–1
			ಮೇಲಿನಂತೆ	ಇಂಡಿಯನ್ ಕಾಂಟ್ರಾಕ್ಟ್ ಆಕ್ಟ್
			ಮೇಲಿನಂತೆ	ಕರ್ನಾಟಕ ಲೋಕಸೇವಾ ಆಯೋಗ ಮ್ಯಾನುಯಲ್
			ಮಧ್ಯಾಹ್ನ 2–00 ರಿಂದ ಸಂಜೆ 4–00 ಗಂಟೆ	ಸೆಕ್ರೇಟೇರಿಯೆಟ್ ಮ್ಯಾನುಯಲ್ ಭಾಗ– I ಪತ್ರಿಕೆ–2
			ಮೇಲಿನಂತೆ	ಕರ್ನಾಟಕ ಲೋಕಸೇವಾ ಆಯೋಗ ರಿಕ್ರೂಟ್‌ಮೆಂಟ್ ರೂಲ್ಸ್

ವಿ.ಬಿ. ಪಾಟೀಲ್
ಕಾರ್ಯದರ್ಶಿ ಹಾಗೂ ನಿಯಂತ್ರಕರು,
ಇಲಾಖಾ ಪರೀಕ್ಷೆಗಳು
ಕರ್ನಾಟಕ ಲೋಕಸೇವಾ ಆಯೋಗ.

ಪಿ.ಆರ್. 208

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ,
ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-2

ಅಧಿಸೂಚನೆ

ಸಂಖ್ಯೆ: ಕಸನಿ:74:ಸಿಬ್ಬಂದಿ1:2008-09, ದಿನಾಂಕ: 17ನೇ ಮಾರ್ಚ್ 2010

ವಿಷಯ: ಕಾರವಾರ ಜಿಲ್ಲಾ ರಂಗಮಂದಿರದ ಹಿರಿಯ ಎಲೆಕ್ಟ್ರಿಷಿಯನ್ ಕಂ ಸೌಂಡ್ ಸೂಪರ್‌ವೈಜರ್, ಬ್ಯಾಕ್‌ಲಾಗ್ ಹುದ್ದೆಯನ್ನು ತುಂಬುವ ಕುರಿತು.

ಈ ಇಲಾಖೆಯ ಉ.ಕ.ಜಿಲ್ಲೆ, ಕಾರವಾರ ಇಲ್ಲಿ ಖಾಲಿ ಇರುವ ಹಿರಿಯ ಎಲೆಕ್ಟ್ರಿಷಿಯನ್ ಕಂ ಸೌಂಡ್ ಸೂಪರ್ ವೈಜರ್ ಒಂದು ಹುದ್ದೆಯನ್ನು ಪರಿಶಿಷ್ಟ ಪಂಗಡದ ಬ್ಯಾಕ್‌ಲಾಗ್‌ಯಡಿ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್.ಬಿಸಿ 2001, ದಿನಾಂಕ: 21.11.2001 ಮತ್ತು 01.06.2002 ರ ಅನ್ವಯ ಭರ್ತಿ ಮಾಡಲು ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಅರ್ಹ ಅಭ್ಯರ್ಥಿಗಳಿಂದ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಈ ಅಧಿಸೂಚನೆಯೊಡನೆ ಪ್ರಕಟಿಸಿರುವ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:30.4.2010 ಸಾಯಂಕಾಲ 5 ಗಂಟೆಯೊಳಗೆ ನಿರ್ದೇಶಕರು. ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು-2 ಇಲ್ಲಿಗೆ ತಲುಪಿಸತಕ್ಕದ್ದು.

1. ಖಾಲಿ ಹುದ್ದೆಗಳ ಸಂಖ್ಯೆ : 01 (ಒಂದು)
2. ಹಿರಿಯ ಎಲೆಕ್ಟ್ರೀಷಿಯನ್ ಕಂ ಸೌಂಡ್ ಸೂಪರ್‌ವೈಸರ್ ಹುದ್ದೆಯ ಮೀಸಲಾತಿ ವರ್ಗೀಕರಣ : ಪರಿಶಿಷ್ಟ ಪಂಗಡ – ಮಹಿಳಾ ಅಭ್ಯರ್ಥಿ
3. ವಯೋಮಿತಿ ವಿದ್ಯಾರ್ಹತೆ ಮತ್ತು ವೇತನ ಶ್ರೇಣಿ
   - **ವಯೋಮಿತಿ:** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ ದಿನಾಂಕ:30.04.2010ಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಮತ್ತು ಗರಿಷ್ಠ 40 ವರ್ಷ ಮೀರಿರಬಾರದು.
   - **ವಿದ್ಯಾರ್ಹತೆ:** ಕನ್ನಡವನ್ನು ಒಂದು ವಿಷಯವನ್ನಾಗಿ ತೆಗೆದುಕೊಂಡು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ತೇರ್ಗಡೆಯಾಗಿರಬೇಕು ಇದರೊಂದಿಗೆ ಟೆಲಿಕಮ್ಯೂನಿಕೇಷನ್ (ಸೌಂಡ್ ಹಾಗೂ ಟಿ.ವಿ) ನಲ್ಲಿ ಡಿಪ್ಲೋಮೋ
   - **ವೇತನ ಶ್ರೇಣಿ:** ರೂ. 8825-16000

4. ಆಯ್ಕೆ ವಿಧಾನ: ಅಭ್ಯರ್ಥಿಗಳಿಂದ ಅರ್ಜಿಗಳಲ್ಲಿ ಹುದ್ದೆಗೆ ನಿಗದಿಪಡಿಸಿರುವ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಅರ್ಹತಾ ಪಟ್ಟಿಯನ್ನು ತಯಾರಿಸುವಾಗ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಬಿಸಿ 2001 ದಿನಾಂಕ:21.11.01ರನ್ವಯ ಕನಿಷ್ಠ 29 ವಯಸ್ಸಾಗಿರುವ ಹಾಗೂ ಗರಿಷ್ಠ 40 ವರ್ಷ ಮೀರಿರದ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು. 29 ವರ್ಷದಿಂದ 40 ವರ್ಷಗೊಳಗಿನ ಅರ್ಹ ಅಭ್ಯರ್ಥಿಯು ದೊರಕದಿದ್ದಲ್ಲಿ, 18 ವರ್ಷದಿಂದ 29 ವರ್ಷ ವಯಸ್ಸಿನೊಳಗಿನ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.

5. ಲಗತ್ತುಗಳು:

1. ಅರ್ಹತಾ (ಡಿಪ್ಲೋಮ) ಪರೀಕ್ಷೆಯ ಅಂಕಪಟ್ಟಿಯ ನಕಲು ಲಗತ್ತಿಸಿರಬೇಕು.
2. ಜನ್ಮ ದಿನಾಂಕದ ಪ್ರಮಾಣ ಪತ್ರ/ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ ವರ್ಗಾವಣೆ ಪ್ರಮಾಣ ಪತ್ರದ ನಕಲು ಲಗತ್ತಿಸಬೇಕು.
3. ಪರಿಶಿಷ್ಟ ಪಂಗಡಕ್ಕೆ ಸಂಬಂಧಪಟ್ಟಂತೆ ತಹಶೀಲ್ದಾರ್‌ರವರಿಂದ ಪಡೆದ (ನಿಗದಿತ ನಮೂನೆಯಲ್ಲಿ) ಜಾತಿ ಪ್ರಮಾಣ ಪತ್ರದ ದೃಢೀಕೃತ ನಕಲು ಸಲ್ಲಿಸುವುದು.
4. ಅರ್ಜಿಯಲ್ಲಿ ಫೋಟೋ ಅಂಟಿಸಲು ನಿಗದಿಪಡಿಸಿರುವ ಸ್ಥಳದಲ್ಲಿ ನಿಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಿ ಅದರ ಮೇಲೆ ಪೂರ್ಣ ಸಹಿ ಮಾಡುವುದು.

- ಈ ಮೇಲೆ ಹೇಳಿದ ಎಲ್ಲಾ ದಾಖಲೆಗಳ ದೃಢೀಕೃತ ಪ್ರತಿ ನೀಡಬೇಕು.

ಸೂಚನೆಗಳು:

1. ಅರ್ಜಿಯಲ್ಲಿ ಭರ್ತಿ ಮಾಡಿರುವ ಮಾಹಿತಿ ಮತ್ತು ಅದರೊಂದಿಗೆ ಲಗತ್ತಿಸಿರುವ ಪ್ರಮಾಣ ಪತ್ರಗಳು ಸುಳ್ಳು ಮಾಹಿತಿ ನೀಡಿದ್ದಾಗಿ ನೇಮಕಾತಿಯ ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ ಅಂತಹ ಅರ್ಜಿಗಳನ್ನು ಪತ್ರ ವ್ಯವಹಾರವಿಲ್ಲದೇ ತಿರಸ್ಕರಿಸಲಾಗುವುದು ಮತ್ತು ಅಂತಹ ಅಭ್ಯರ್ಥಿಗಳ ವಿರುದ್ಧ ಕಾನೂನು ರೀತ್ಯಾ ಕ್ರಮಕೈಗೊಳ್ಳಲು ಉಪಕ್ರಮಿಸಲಾಗುವುದು.

2. ಅಭ್ಯರ್ಥಿಯು ಯಾವುದೇ ಅಪರಾಧ ಮೊಕದ್ದಮೆಯಲ್ಲಿ ಬಂಧನಕ್ಕೆ ಒಳಪಟ್ಟಿರಬಾರದು. ಅಲ್ಲದೆ ಅಪರಾಧ ಮೊಕದ್ದಮೆಯ ತನಿಖೆಗೆ ಒಳಗಾಗಿರಬಾರದು. ಅಪರಾಧ ಪ್ರಕರಣಗಳಲ್ಲಿ ದೋಷಿಯಾಗಿರಬಾರದು. ಒಂದು ವೇಳೆ ಇಂತಹ ಪ್ರಕರಣಗಳಿಗೆ ಒಳಗಾಗಿದ್ದಲ್ಲಿ ಅಂತಹ ಅಭ್ಯರ್ಥಿಯು ನೇಮಕಾತಿಗೆ ಅನರ್ಹರಾಗುತ್ತಾರೆ.
3. ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ/ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ ಯಾವುದೇ ಮುನ್ಸೂಚನೆ ನೀಡದೇ ನೌಕರಿಯಿಂದ ವಜಾ ಮಾಡುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತ್ಯಾ ಕ್ರಮ ತೆಗೆದುಕೊಳ್ಳಲಾಗುವುದು.
5. ಈ ಅಧಿಸೂಚನೆಯೊಂದಿಗೆ ಪ್ರಕಟಿಸಿರುವ ಅರ್ಜಿ ನಮೂನೆಯಂತೆ ಅರ್ಜಿಯನ್ನು ಸಿದ್ಧಪಡಿಸಿ ಸಲ್ಲಿಸಬೇಕಾಗಿರುತ್ತದೆ. ಕಚೇರಿವತಿಯಿಂದ ಅರ್ಜಿ ನಮೂನೆಗಳನ್ನು ನೀಡಲಾಗುವುದಿಲ್ಲ.
6. ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ನೊಂದಾಯಿತ ಅಂಚೆ/ ಕೋರಿಯರ್ ಮುಖಾಂತರ ಅಥವಾ ಸ್ವತಃ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರುರವರ ಕಚೇರಿಗೆ ನಿಗದಿತ ದಿನಾಂಕ ಮತ್ತು ಸಮಯದೊಳಗೆ ತಲುಪಿಸಬೇಕು. ತಡವಾಗಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಲಕೋಟೆಯ ಮೇಲೆ ಹಿರಿಯ ಎಲೆಕ್ಟ್ರೀಷಿಯನ್ ಕಂ ಸೌಂಡ್ ಸೂಪರ್‌ವೈಸರ್ ಬ್ಯಾಕ್‌ಲಾಗ್ ಹುದ್ದೆಗೆ ಅರ್ಜಿ ಎಂದು ಸ್ಪಷ್ಟವಾಗಿ ನಮೂದಿಸಬೇಕು. ಅರ್ಜಿ ಸ್ವೀಕರಿಸಿದ್ದಕ್ಕೆ ಸಂಬಂಧಪಟ್ಟವರಿಂದ ದಿನಾಂಕ: ಮತ್ತು ಸಹಿ ಪಡೆದುಕೊಳ್ಳಬಹುದಾಗಿದೆ.
7. ಸಲ್ಲಿಸಲಾಗುವ ಯಾವುದೇ ದಾಖಲೆಗಳನ್ನು ಹಿಂದಿರುಗಿಸಲಾಗುವುದಿಲ್ಲ. ಈ ಕುರಿತು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ.

ನಿರ್ದೇಶಕರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ

